# ಮಂಕುತಿಮ್ಮನ ಕಗ್ಗ

- ಡಾ॥ ದೇವನಹಳ್ಳಿ ವೆಂಕಟರಮಣಯ್ಯ ಗುಂಡಪ್ಪ (DVG)

ಶ್ರೀ ವಿಷ್ಣು ವಿಶ್ವಾದಿ ಮೂಲ ಮಾಯಾಲೋಲ ।
ದೇವ ಸರ್ವೇಶ ಪರಬೊಮ್ಮನೆಂದು ಜನಂ ॥
ಆವುದನು ಕಾಣದೊಡಮಳ್ತಿಯಿಂ ನಂಬಿಹುದೊ ।
ಆ ವಿಚಿತ್ರಕೆ ನಮಿಸೊ - ಮಂಕುತಿಮ್ಮ ॥ ೧ ॥

ಜೀವ ಜಡರೂಪ ಪ್ರಪಂಚವನದಾವುದೋ।
ಆವರಿಸಿಕೊಂಡುಮೊಳನೆರೆದುಮಿಹುದಂತೆ॥
ಭಾವಕೊಳಪಡದಂತೆ ಅಳತೆಗಳವಡದಂತೆ।
ಆ ವಿಶೇಷಕೆ ನಮಿಸೊ - ಮಂಕುತಿಮ್ಮ ॥ ೨ ॥

ಇಹುದೊ ಇಲ್ಲವೊ ತಿಳಿಯಗೊಡದೊಂದು ವಸ್ತು ನಿಜ।
ಮಹಿಮೆಯಿಂ ಜಗವಾಗಿ ಜೀವವೇಷದಲಿ ॥
ವಿಹರಿಪುದದೊಳ್ಳಿತೆಂಬುದು ನಿಸದವಾದೊಡಾ ।
ಗಹನ ತತ್ತ್ವಕೆ ಶರಣೊ - ಮಂಕುತಿಮ್ಮ ॥ ೩ ॥

ಏನು ಜೀವನದರ್ಥ? ಏನು ಪ್ರಪಂಚಾರ್ಥ? ।
ಏನು ಜೀವಪ್ರಪಂಚಗಳ ಸಂಬಂಧ? ॥
ಕಾಣದಿಲ್ಲಿರ್ಪುದೇನಾನುಮುಂಟೆ? ಅದೇನು? ।
ಜ್ಞಾನಪ್ರಮಾಣವೇಂ? - ಮಂಕುತಿಮ್ಮ ॥ ೪ ॥

ದೇವರೆಂಬುದದೇನು ಕಗ್ಗತ್ತಲೆಯ ಗವಿಯೆ? ।
ನಾವರಿಯಲಾರದೆಲ್ಲದರೊಟ್ಟು ಹೆಸರೆ? ॥
ಕಾವನೊರ್ವನಿರಲ್ಕೆ ಜಗದ ಕಥೆಯೇಕಿಂತು? ।
ಸಾವು ಹುಟ್ಟುಗಳೇನು? - ಮಂಕುತಿಮ್ಮ ॥ ೫ ॥

ಒಗಟೆಯೇನೀ ಸೃಷ್ಟಿ? ಬಾಳಿನರ್ಥವದೇನು? ।
ಬಗೆದು ಬಿಡಿಸುವರಾರು ಸೋಜಿಗವನಿದನು? ॥
ಜಗವ ನಿರವಿಸಿದ ಕೈಯೊದಾದೊಡೇಕಿಂತು ।
ಬಗೆಬಗೆಯ ಜೀವಗತಿ? - ಮಂಕುತಿಮ್ಮ ॥ ೬ ॥

ಬದುಕಿಗಾರ್ ನಾಯಕರು, ಏಕನೊ ಅನೇಕರೋ? ।
ವಿಧಿಯೊ ಪೌರುಷವೊ ಧರುಮವೊ ಅಂಧಬಲವೋ? ॥
ಕುದುರುವುದೆಂತು ಈಯವ್ಯವಸ್ಥೆಯ ಪಾಡು? ।
ಅದಿಗುದಿಯೆ ಗತಿಯೇನೋ? - ಮಂಕುತಿಮ್ಮ ॥ ೭ ॥

ಕ್ರಮವೊಂದು ಲಕ್ಷ್ಯವೊಂದುಂಟೇನು ಸೃಷ್ಟಿಯಲಿ? ।
ಭ್ರಮಿಪುದೇನಾಗಾಗ ಕರ್ತೃವಿನ ಮನಸು? ॥
ಮಮತೆಯುಳ್ಳವನಾತನಾದೊಡೀ ಜೀವಗಳು ।
ಶ್ರಮಪಡುವುವೇಕಿಂತು? - ಮಂಕುತಿಮ್ಮ ॥ ೮ ॥

ಏನು ಭೈರವಲೀಲೆಯೀ ವಿಶ್ವವಿಭ್ರಮಣೆ ।
ಏನು ಭೂತಗ್ರಾಮನರ್ತನೋನ್ಮಾದ ॥
ಏನಗ್ನಿ ಗೋಳಗಳು। !ಏನಂತರಾಳಗಳು !
ಏನು ವಿಸ್ಮಯ ಸೃಷ್ಟಿ !- ಮಂಕುತಿಮ್ಮ ॥ ೯ ॥

ಏನು ಪ್ರಪಂಚವಿದು।!ಏನು ಧಾಳಾಧಾಳಿ !
ಏನದ್ಭುತಾಪಾರಶಕ್ತಿನಿರ್ಘಾತ॥ !
ಮಾನವನ ಗುರಿಯೇನು? ಬೆಲೆಯೇನು? ಮುಗಿವೇನು?।
ಏನರ್ಥವಿದಕೆಲ್ಲ?- ಮಂಕುತಿಮ್ಮ ॥ ೧೦ ॥

ಮುತ್ತಿರುವುದಿಂದು ಭೂಮಿಯನೊಂದು ದುರ್ದೈವ ।
ಮೃತ್ಯು ಕುಣಿಯುತಲಿಹನು ಕೇಕೆಹಾಕುತಲಿ ॥
ಸುತ್ತಿಪುದು ತಲೆಯನನುದಿನದ ಲೋಕದ ವಾರ್ತೆ ।
ಎತ್ತಲಿದಕೆಲ್ಲ ಕಡೆ? - ಮಂಕುತಿಮ್ಮ ॥ ೧೧ ॥

ಮಾನವರೋ ದಾನವರೋ ಭೂಮಾತೆಯ ತಣಿಸೆ ।
ಶೋಣಿತವನೆರೆಯುವರು ಬಾಷ್ಪ ಸಲುವುದಿರೆ? ॥
ಏನು ಹಗೆಯೀ ಧರಣಿ !ಏನು ಹೊಗೆ !ಏನು ಧಗೆ ! ।
ಸೌನಿಕನ ಕಟ್ಟೆಯೇಂ? - ಮಂಕುತಿಮ್ಮ ॥ ೧೨ ॥

ಪುರುಷಸ್ವತಂತ್ರೆಯ ಪರಮಸಿದ್ಧಿಯದೇನು? ।
ಧರಣಿಗನುದಿನದ ರಕ್ತಾಭಿಷೇಚನೆಯೆ? ॥
ಕರವಾಲವನು ಪುಷ್ಪಸರವೆಂದು ಸೆಳೆದಾಡೆ ।
ಪರಿಮಳವ ಸೂಸುವುದೆ? - ಮಂಕುತಿಮ್ಮ ॥ ೧೩ ॥

ಒಂದೆ ಗಗನವ ಕಾಣುತೊಂದೆ ನೆಲವನು ತುಳಿಯು ।
ತೊಂದೆ ಧಾನ್ಯವನುಣ್ಣುತೊಂದೆ ನೀರ್ಗುಡಿದು ॥
ಒಂದೆ ಗಾಳಿಯನುಸಿರ್ವ ನರಜಾತಿಯೊಳಗೆಂತು ।
ಬಂದುದೀ ವೈಷಮ್ಯ? - ಮಂಕುತಿಮ್ಮ ॥ ೧೪ ||

ಹಳೆಯ ಭಕ್ತಿಶ್ರದ್ಧೆಯಳಿಸಿಹೋಗಿವೆ ಮಾಸಿ ।
ಸುಳಿದಿಲ್ಲವಾವ ಹೊಸ ದರ್ಶನದ ಹೊಳಪುಂ ॥
ಪಳಗಿದ್ದ ಮನೆ ಬಿದ್ದ ಕುಂಟ ಕುರುಡನ ತೆರದಿ ।
ತಳಮಳಿಸುತಿದೆ ಲೋಕ - ಮಂಕುತಿಮ್ಮ ॥ ೧೫ ||

ಇಳೆಯ ಬಿಟ್ಟಿನ್ನು ಮೆತ್ತಲುಮ್ಮೈದದ ಪ್ರೇತ ।
ವಲೆವಂತೆ ಲೋಕ ತಲ್ಲಣಿಸುತಿಹುದಿಂದು ॥
ಹಳೆಧರ್ಮ ಸತ್ತಿಹುದು ಹೊಸಧರ್ಮ ಹುಟ್ಟಿಲ್ಲ
ತಳಮಳಕೆ ಕಡೆಯೆಂದೊ? - ಮಂಕುತಿಮ್ಮ ॥ ೧೬ ||

ತಳಮವಿದೇನಿಳೆಗೆ? ದೇವದನುಜರ್ಮಥಿಸೆ ।
ಜಳನಿಧಿಯೊಳಾದಂತೆ ಸುಧೆಗೆ ಪೀಠಿಕೆಯೇಂ? ||
ಹಾಳಾಹಳಾವ ಕುಡಿವ ಗಿರಿಶನಿದ್ದಿರ್ದೊಡೀ ।
ಕಳವಳವದೇತಕೆಲೋ? - ಮಂಕುತಿಮ್ಮ ॥ ೧೭ ||

ನದಿಯ ತೆರೆಯವೊಲುರುಳಿ ಹೊರಳುತಿರುವುದು  ಜೀವ।
ಮೊದಲಿಲ್ಲ ಮುಗಿವಿಲ್ಲ ನಿಲುವಿಲ್ಲವದಕೆ  ॥
ಬದುಕೇನು ಸಾವೇನು ಸೊದೆಯೇನು ವಿಷವೇನು? |
ಉದಕಬುದ್ಬುದವೆಲ್ಲ !- ಮಂಕುತಿಮ್ಮ ॥ ೧೮ ||

ಗಾಳಿ ಮಣ್ಣುಂಡೆಯೊಳಹೊಕ್ಕು ಹೊರಹೊರಳದು ।
ಆಳೆನಿಪುದಂತಾಗದಿರೆ ಬರಿಯ ಹೆಂಟೆ ॥
ಬಾಳೇನು ಧೂಳು ಸುಳಿ, ಮರ ತಿಕ್ಕಿದುರಿಯ ಹೊಗೆ ।
ಕ್ಷೇಳವೇನಮೃತವೇಂ - ಮಂಕುತಿಮ್ಮ ॥ ೧೯ ||

ಕಂಡ ದೈವಕ್ಕೆಲ್ಲ ಕೈಯ ಮುಗಿದೇನಹುದು? |
ಚಂಡಚತುರೋಪಾಯದಿಂದಲೇನಹುದು? ||
ತಂಡುಲದ ಹಿಡಿಯೊಂದು ತುಂಡು ಬಟ್ಟೆಯದೊಂದು ।
ಅಂಡಲೆತವಿದಕೇನೊ? - ಮಂಕುತಿಮ್ಮ ॥ ೨೦ ||

ಹೊನ್ನೆಂದು ಜಗದಿ ನೀಂ ಕೈಗೆ ಕೊಂಡುದನು ವಿಧಿ ।
ಮಣ್ಣೆನುವನ್; ಅವನ ವರ ಮಣ್ಣೆನುವೆ ನೀನು ॥
ಭಿನ್ನಮಿಂತಿರೆ ವಸ್ತುಮೌಲ್ಯಹಳ ಗಣನೆಯೀ ।
ಪಣ್ಯಕ್ಕೆ ಗತಿಯೆಂತೊ? - ಮಂಕುತಿಮ್ಮ ॥ ೨೧ ||

ಕೃತ್ರಿಮವೊ ಜಗವೆಲ್ಲಸತ್ಯತೆಯದೆಲ್ಲಿಹುದೊ !? |
ಕರ್ತೃವೆನಿಸಿದನೆ ತಾಂ ಗುಪ್ತನಾಗಿಹನು ॥
ಚತ್ರವೀ ಜಗವಿದರೊಳಾರ ಗುಣವೆಂತಹುದೊ| !
ಯಾತ್ರಿಕನೆ, ಜಾಗರಿರೊ - ಮಂಕುತಿಮ್ಮ ॥ ೨೨ ||

ತಿರುತಿರುಗಿ ತೊಳಲುವುದು ತಿರಿದನ್ನವುಣ್ಣುವುದು ।
ಮೆರೆದು ಮೈಮರೆಯುವುದು ಹಲ್ಲ ಕಿರಿಯುವುದು ॥
ಮರಳಿ ಕೊರಗಾಡುವುದು ಕೆರಳುವುದು ನರಳುವುದು ।
ಇರವಿದೇನೊಣರಗಳೆ? - ಮಂಕುತಿಮ್ಮ ॥ ೨೩ ||

ನರರ ಭಯಬಯಕೆಗಳೆ ಸುರರ ತಾಯ್ತಂದೆಗಳೊ? |
ಸುರರಟ್ಟಹಾಸದಿನೆ ನರಭಕ್ತಿಯೊರಲೋ? ||
ಪರಿಕಿಸುವರೇನವರ್ಗಳನ್ಯೋನ್ಯಶಕ್ತಿಗಳ? |
ಧರುಮವೆಲ್ಲಿದರಲ್ಲಿ? - ಮಂಕುತಿಮ್ಮ ॥ ೨೪ ||

ಜೀವಗತಿಗೊಂದು ರೇಖಾಲೇಖವಿರಬೇಕು ।
ನಾವಿಕನಿಗಿರುವಂತೆ ದಿಕ್ಕು ದಿನವೆಣಿಸೆ ॥
ಭಾವಿಸುವುದೆಂತದನು ಮೊದಲು ಕೊನೆ ತೋರದಿರೆ? |
ಆವುದೀ ಜಗಕಾದಿ? - ಮಂಕುತಿಮ್ಮ ॥ ೨೫ ||

ಸೃಷ್ಟಿಯಾಶಯವದೇನಸ್ಪಷ್ಟ ಸಂಶ್ಲಿಷ್ಟ ।
ಇಷ್ಟ ಮೊಹಕ ದಿವ್ಯಗುಣಗಳೊಂದು ಕಡೆ ॥
ಕಷ್ಟ ಭೀಭತ್ಸ ಘೋರಂಗಳಿನ್ನೊಂದು ಕಡೆ ।
ಕ್ಲಿಷ್ಟವೀ ಬ್ರಹ್ಮಕೃತಿ - ಮಂಕುತಿಮ್ಮ ॥ ೨೬ ||

ಧರೆಯ ಬದುಕೇನದರ ಗುರಿಯೇನು ಫಲವೇನು? |
ಬರಿ ಬಳಸು ಬಡಿದಾಟ ಬರಿ ಪರಿಭ್ರಮಣೆ  ||
ತಿರುತಿರುಗಿ ಹೊಟ್ಟೆ ಹೊರಕೊಳುವ ಮೃಗಖಗಕಿಂತ ।
ನರನು ಸಾಧಿಪುದೇನು? - ಮಂಕುತಿಮ್ಮ ॥ ೨೭ ||

ಕಾರುಣ್ಯ ಸರಸ ಸೌಂದರ್ಯ ರುಚಿಗಳೆ ಸೃಷ್ಟಿ। -
ಕಾರಣಮೆನಿಪ್ಪವೊಲು ತೋರ್ಪುದೊಂದು ಚಣ ॥
ಕಾರ್ಪಣ್ಯ ಕಟುಕತೆಗಳೆನಿಪುದಿನ್ನೊಂದು ಚಣ ।
ತೋರದಾವುದು ದಿಟವೊ - ಮಂಕುತಿಮ್ಮ ॥ ೧೮ ॥

ಎರಡುಮಿರಬಹುದು ದಿಟ; ಶಿವರುದ್ರನಲೆ ಬೊಮ್ಮ। !
ಕರವೊಂದರಲಿ ವೇಣು, ಶಂಖವೊಂದರಲಿ॥ !
ಬೆರಳ್ಗಳೆರಡಾನುಮಿರೆ ಕೈ ಚಿಟಿಕೆಯಾಡುವುದು ।
ಒರುವನಾಡುವುದೆಂತು? - ಮಂಕುತಿಮ್ಮ ॥ ೧೯ ॥

ಬ್ರಹ್ಮವೇ ಸತ್ಯ, ಸೃಷ್ಟಿಯೆ ಮಿಥ್ಯೆಯೆನ್ನುವೊಡೆ ।
ಸಂಬಂಧವಿಲ್ಲವೇನಾ ವಿಷಯಯುಗಕೆ? ॥
ನಮ್ಮ ಕಣ್ಮನಸುಗಳೆ ನಮಗೆ ಸಟೆ ಪೇಳುವೊಡೆ ।
ನೆಮ್ಮುವುದದಾರನೋ? - ಮಂಕುತಿಮ್ಮ ॥ ೨೦ ॥

ಬಚ್ಚಿಟ್ಟುಕೊಂಡಿಹುದೆ ಸತ್ಯ ಮಿಥ್ಯೆಯ ಹಿಂದೆ? ।
ನಚ್ಚುವುದೆ ಮರೆಯೊಳಿಹುದನೆ ಸತ್ಯವೆಂದು? ॥
ಅಚ್ಚರಿಯ ತಂತ್ರವಿದು; ಬ್ರಹ್ಮಸೃಷ್ಟಿಗಳೇಕೊ ।
ಮುಚ್ಚಿಹವು ಸಾಜತೆಯ - ಮಂಕುತಿಮ್ಮ ॥ ೨೧ ॥

ಪರಬೊಮ್ಮನೀ ಜಗವ ರಚಿಸಿದವನಾದೊಡದು ।
ಬರಿಯಾಟವೋ ಕನಸೊ ನಿದ್ದೆ ಕಲವರವೋ? ॥
ಮರುಳನವನಲ್ಲದೊಡೆ ನಿಯಮವೊಂದಿರಬೇಕು ।
ಗುರಿಗೊತ್ತದೇನಿಹುದೊ? - ಮಂಕುತಿಮ್ಮ ॥ ೨೨ ॥

ನರಪರೀಕ್ಷೆಯೆ ಬೊಮ್ಮನಾಶಯವೆ? ನಮ್ಮ ಬಾಳ್ ।
ಬರಿ ಸಮಸ್ಯೆಯೆ? ಅದರ ಪೂರಣವದೆಲ್ಲಿ? ॥
ಸುರಿದು ಪ್ರಶ್ನೆಗಳನುತ್ತರವ ಕುಡೆ ಬಾರದನ ।
ಗುರುವೆಂದು ಕರೆಯುವೆಯ? - ಮಂಕುತಿಮ್ಮ ॥ ೨೩ ॥

ಎಷ್ಟು ಚಿಂತಿಸಿದೊಡಂ ಶಂಕೆಯನೆ ಬೆಳಸುವೀ ।
ಸೃಷ್ಟಿಯಲಿ ತತ್ತ್ವವೆಲ್ಲಿಯೋ ಬೆದಕಿ ನರನು ॥
ಕಷ್ಟಪಡುತಿರಲೆನುವುದೋ ಬ್ರಹ್ಮವಿಧಿಯೇನೋ। !
ಅಷ್ಟೆ ನಮ್ಮಯ ಪಾಡು? - ಮಂಕುತಿಮ್ಮ ॥ ೨೪ ॥

ಇರಬಹುದು; ಚಿರಕಾಲ ಬೊಮ್ಮ ಚಿಂತಿಸಿ ದುಡಿದು ।
ನಿರವಿಸಿಹ ವಿಶ್ವಚಿತ್ರವ ಮರ್ತ್ಯನರನು ॥
ಅರಿತೆನಾನೆನ್ನುವಂತಾಗೆ ಕೃತಿ ಕೌಶಲದ ।
ಹಿರಿಮೆಗದು ಕುಂದಲ್ತೆ? - ಮಂಕುತಿಮ್ಮ ॥ ೨೫ ॥

ಎಲ್ಲೆಲ್ಲಿಯುಂ ಮೋಹಸಂಭ್ರಾಂತಿಗಳ ಕವಿಸಿ ।
ಸಲ್ಲದ ಕುಮಾರ್ಗದೊಳು ನಿನ್ನ ತಾಂ ನಡಸಿ ॥
ಗೆಲ್ಲಲಿಲ್ಲವನಾ ಪರೀಕ್ಷೆಯೊಳಗೆಂದು ವಿಧಿ ।
ಸೊಲ್ಲಿಪುದು ಸರಿಯೇನೋ? - ಮಂಕುತಿಮ್ಮ ॥ ೨೬ ॥

ಅವತರಿಸಿಹನು ಬೊಮ್ಮ ವಿಶ್ವದೇಹದೊಳೆನ್ನೆ ।
ಅವನ ವೇಷಗಳೇಕೆ ಮಾರ್ಪಡುತಲಿಹವು? ॥
ತವಕಪಡನೇತಕೋ ಕುರುಹ ತೋರಲು ನಮಗೆ ।
ಅವಿತುಕೊಂಡಿಹುದೇಕೋ? - ಮಂಕುತಿಮ್ಮ ॥ ೨೭ ॥

ಬೇರಯಿಸಿ ನಿಮಿಷನಿಮಿಷಕಮೊಡಲಬಣ್ಣಗಳ ।
ತೋರಿಪೊಸರವಳ್ಳಿಯಂತೇನು ಬೊಮ್ಮಂ? ॥
ಪೂರ ಮೈದೋರೆನೆಂಬಾ ಕಪಟಿಯಂಶಾವ ।
ತಾರದಿಂದಾರ್ಗೇನು? - ಮಂಕುತಿಮ್ಮ ॥ ೨೮ ॥

ಪುಸಿಯ ನೀಂ ಪುಸಿಗೈದು ದಿಟವ ಕಾಣ್ಬವೊಲೆಸಗೆ ।
ಮುಸುಕ ತಳೆದಿಹನು ಪರಬೊಮ್ಮನೆನ್ನುವೊಡೆ ॥
ಒಸೆದೇತಕವನೀಯನೆಮಗೊಂದು ನಿಜಕುರುಹ ।
ನಿಶೆಯೊಳುಡುಕರದವೊಲು? - ಮಂಕುತಿಮ್ಮ ॥ ೨೯ ॥

ನಿಶಿಯೊಳೇಂ ಕಾಣಬಾರನು ಹಗಲನೊಲ್ಲದೊಡೆ ।
ಶಶಿರವಿಗಳವನ ಮನೆಕಿಟಕಿಯಾಗಿರರೇಂ? ॥
ಮುಸುಕುಬೆಳಕೊಂದಾದ ಸಂಜೆಮಂಜೇನವನು ।
ಮಿಸುಕಿ ಸುಳಿಯುವ ಸಮಯ? - ಮಂಕುತಿಮ್ಮ ॥ ೩೦ ॥

ಕದಕಗಳಿಯನು ಬಿಗಿದು ಬೊಮ್ಮ ಗುಡಿಯೊಳಗಿರಲಿ ।
ಅದರ ಕೀಲ್ಕುಂಚಿಕೆಯ ಹೊರಕೆಸೆಯೆ ಸಾಕು ॥
ಪದವಾಕ್ಯವಿದರಾಗ ವಾದಗಡಣೆಯ ಬಿಟ್ಟು ।
ಒದವಿಪರು ದಿಟದರಿವ - ಮಂಕುತಿಮ್ಮ ॥ ೩೧ ॥

ಆಹಈ ಮೋಹಗಳೊ ನೇಹಗಳೊ ದಾಹಗಳೊ । !
ಊಹಿಪೆಯ ಸೃಷ್ಟಿಯಲಿ ಹೃದಯಮಿಹುದೆಂದು? ॥
ಹೋಹೊ ಹಾಹಾ ಎಂದು ನಮ್ಮ ಬಾಯ್ಬಿಡಿಸುವುದೆ ।
ಈ ಹರಿಬದೊಳಗುಟ್ಟೊ? - ಮಂಕುತಿಮ್ಮ ॥ ೪೧ ॥

ಮೇಲೆ ಕೆಳಗೊಳಗೆ ಬಳಿ ಸುತ್ತಲೆತ್ತೆತ್ತಲುಂ ।
ಮೂಲೆಮೂಲೆಯಲಿ ವಿದ್ಯುಲ್ಲಹರಿಯೊಂದು ॥
ಧೂಲಿಕಣ ಭೂಗೋಳ ರವಿ ಚಂದ್ರ ತಾರೆಗಳ ।
ಚಾಲಿಪುದು ಬಿಡು ಕೊಡದೆ - ಮಂಕುತಿಮ್ಮ ॥ ೪೩ ॥

ಮಂದಾಕ್ಷಿ ನಮಗಿಹುದುಬಲುದೂರ ಸಾಗದದು । .
ಸಂದೆ ಮಸಕಿನೊಳಿಹುದು ಜೀವನದ ಪಥವು ॥
ಒಂದುಮೆಟುಕದು ಕೈಗೆ; ಏನೊ ಕಣ್ಕೆಣಕುವುದು ।
ಸಂದಿಯವೆ ನಮ್ಮ ಗತಿ! - ಮಂಕುತಿಮ್ಮ ॥ ೪೪ ॥

ಬೆಂಕಿಯುಂಡೆಯ ಬೆಳಕು ಬೆಣ್ಣೆಯುಂಡೆಯ ಬೆಳಕು ।
ಮಂಕುವಿಡಿಸಲು ಸಾಕು ಮಣ್ಣುಂಡೆ ಕಣ್ಗೆ ॥
ಶಂಕೆಗೆಡೆಯಿರದು ಕತ್ತಲೆಯೆ ಜಗವನು ಕವಿಯೆ ।
ಬೊಂಕುದೀವಿಗೆ ತಂಟೆ - ಮಂಕುತಿಮ್ಮ ॥ ೪೫ ॥

ಇರಲಿ ಜೀವರಹಸ್ಯವರೆಪರದೆಯೊಳಗಡಗಿ ।
ಅರಸಿ ವರಿಸುವರಾರು ಬೀದಿಬತ್ತಲಿಯ? ॥
ಅರಳಿಪುದದಡಗಿರ್ದೊಡಾಗ ನಮ್ಮದೆಗಣ್ಣ ।
ಸುರಸತೆಯ ಕುತುಕದಿಂ - ಮಂಕುತಿಮ್ಮ ॥ ೪೬ ॥

ಅರೆಗಣ್ಣು ನಮದೆಂದು ಕೊರಕೊರಗಿ ಫಲವೇನು? ।
ಅರೆಬೆಳಕು ಧರೆಯೊಳೆಂದೊರಲಿ ಸುಖವೇನು? ॥
ಇರುವ ಕಣ್ಣಿರುವ ಬೆಳಕಿನೊಳಾದನಿತ ನೋಡಿ ।
ಪರಿಕಿಸಿದೊಡದು ಲಾಭ -ಮಂಕುತಿಮ್ಮ ॥ ೪೭॥

ಒಂದಿಹುದುಪಾಯವೋರೊರ್ವನರೆಗಣ್ಣುಗಳು ।
ಮೊಂದೊಂದು ಸತ್ಯಾಂಶಕಿರಣಗಳ ಪಿಡಿದು ॥
ಒಂದುಗೂಡಿದೊಡವರ್ಗಳರಿವನೆಲ್ಲವನಾಗ ।
ಮುಂದು ಸಾಗುವೆವಿನಿತು - ಮಂಕುತಿಮ್ಮ ॥ ೪೮ ॥

ಪಂಡಿತರೆ ಶಾಸ್ತ್ರಿಗಳೆ ಮಿಥ್ಯೆಯಿಂ ತಥ್ಯಕ್ಕೆ ।
ಖಂಡಿತದಿ ಸೇತುವೆಯ ಕಟ್ಟುವೊಡೆ ನೀವು ॥
ಕಂಡಿಹಿರ ನರಹೃದಯದಾಳ ಸುಳಿ ಬಿರುಬುಗಳ? ।
ದಂಡವದನುಳಿದ ನುಡಿ -ಮಂಕುತಿಮ್ಮ ॥ ೪೯॥

ಮನೆಯೆಲ್ಲಿ ಸತ್ಯಕ್ಕೆ? ಶ್ರುತಿ ತರ್ಕಮಾತ್ರದೊಳೆ? ।
ಅನುಭವಮುಮದರೊಂದು ನೆಲೆಯಾಗದಿಹುದೇಂ? ॥
ಮನುಜಹೃದಯಾಂಗಣದೊಳೆನಿತೆನಿತೊ ದನಿಯುದಿಸಿ ।
ಅಣಕಿಪುವು ತರ್ಕವನು -ಮಂಕುತಿಮ್ಮ ॥ ೫೦॥

ಸೆಳೆಯುತಿರ್ಪುವದೊಂದು ಹೊರಬೆಡಗಿನೆಳೆಗಳೆ ।
ನ್ನೊಳಗಿನಸುವೆಲ್ಲವನು ಕಟ್ಟಿನಿಂ ಬಿಗಿದು ॥
ಎಳೆದಾಟವೇಂ ಋಣಾಕರ್ಷಣೆಯೊ? ಸೃಷ್ಟಿವಿಧಿ ।
ಯೊಳತಂತ್ರವೊ? ನೋಡು -ಮಂಕುತಿಮ್ಮ ॥ ೫೧॥

ಗಗನನೀಲಿಮೆಯೆನ್ನ ಕಣ್ಗೆ ಸೊಗೆವೀವಂತೆ ।
ಮುಗಿವ ತರಣಿಯ ರಕ್ತ ಹಿತವೆನಿಸದೇಕೋ॥ !
ಸೊಗದ ಮೂಲವದೆಲ್ಲಿ ನೀಲದೊಳೊ ಕೆಂಪಿನೊಳೊ ।
ಬಗೆವೆನ್ನ ಮನಸಿನೊಳೊ? - ಮಂಕುತಿಮ್ಮ ॥ ೫೨ ॥

ತೃಣಕೆ ಹಸಿರೆಲ್ಲಿಯದು? ಬೇರಿನದೆ? ಮಣ್ಣಿನದೆ? ।
ದಿನಪನದೆ? ಚಂದ್ರನದೆ? ನೀರಿನದೆ? ನಿನದೆ? ॥
ತಣಿತಣಿವ ನಿನ್ನ ಕಣ್ಣಿನ ಪುಣ್ಯವೋ? ನೋಡು ।
ಗುಣಕೆ ಕಾರಣವೊಂದೆ? - ಮಂಕುತಿಮ್ಮ ॥ ೫೩ ॥

ಫಲವಿಲ್ಲ ಕಾರ್ಯಕಾರಣವಾದದಿಂ ತತ್ತ್ವ ।
ಸಿಲುಕದೆಮ್ಮಯ ತರ್ಕಕರ್ಕಶಾಂಕುಶಕೆ ॥
ಸುಳಿವುದಾಗೀಗಳದು ಸೂಕ್ಷ್ಮಾನುಭವಗಳಲಿ ।
ತಿಳಿಮನದೆ ನೋಳ್ಪರ್ಗೆ -ಮಂಕುತಿಮ್ಮ ॥ ೫೪ ॥

ಕುರುಡನಿನಚಂದ್ರರನು ಕಣ್ಣಿಂದ ಕಾಣುವನೆ? ।
ಅರಿಯುವಂ ಸೋಂಕಿಂದೆ ಬಿಸಿಲುತಣಿವುಗಳ ॥
ನರನುಮಂತೆಯೆ ಮನಸಿನನುಭವದಿ ಕಾಣುವನು ।
ಪರಸತ್ತ್ವ ಮಹಿಮೆಯನು -ಮಂಕುತಿಮ್ಮ ॥ ೫೫॥

ಮೇಲಿಂದ ನಕ್ಷತ್ರಜಯಘೋಷ ಸುತ್ತಣಿಂ ।
ಭೂಲೋಕದರಚು ಕೆಳಗಿಂ ಮೂಳೆಯಳುವು ॥
ಕೇಳಬರುತೀ ಮೂರು ಕೂಗೆನ್ನ ಹೃದಯದಲಿ ।
ಮೇಳಯಿಸುತಿದೆ ಸಂತೆ -ಮಂಕುತಿಮ್ಮ ॥ ೫೬॥

ಆಗುಂಬೆಯಸ್ತಮಯ ದ್ರೋಣಪರ್ವತದುದಯ ।
ತ್ಯಾಗರಾಜನ ಗಾನ ವಾಲ್ಮೀಕಿ ಕವನ ॥
ಆಗಿಸವೆ ತಾವಿವೆಮ್ಮಂತರಂಗದಿ ಸತ್ಯ ।
ಯೋಗಪುಲಕಾಂಕುರವ? - ಮಂಕುತಿಮ್ಮ ॥ ೫೭ ॥

ಮಲೆಕಣಿವೆಗಳ ಬೆರಗು ಪ್ರಕೃತಿಕೊಪದ ಗುಡುಗು ।
ಕಳೆಯೊಲವು ನಲ್ಲೆಯ ವಿಯೊಗವಿಂತಹವು ॥
ನಿಲಿಸಿ ಮನದೋಟವನು ಮೂಕಗೊಳಿಪುವುವೆನ್ನ ।
ನೊಳದನಿಯದೊಂದರಿಂ -ಮಂಕುತಿಮ್ಮ ॥ ೫೮ ॥

ಮಣಿಮಂತ್ರತಂತ್ರಸಿದ್ಧಿಗಳ ಸಾಕ್ಷ್ಯಗಳೇಕೆ ।
ಮನಗಾಣಿಸಲು ನಿನಗೆ ದೈವದದ್ಭುತವ? ॥
ಮನುಜರೊಳಗಾಗಾಗ ತೋರ್ಪ ಮಹನೀಯಗುಣ ।
ವನುವಾದ ಬೊಮ್ಮನದು -ಮಂಕುತಿಮ್ಮ ॥ ೫೯॥

ಗ್ರೀಸಿನಾ ಕಬ್ಬಗಳನೋದುವರು ದೆಹಲಿಯಲಿ ।
ಕಾಶಿಯಾ ಶಾಸ್ತ್ರಗಳನಾರ್ಕ್ಸ್ ಫರ್ಡಿನವರು ॥
ದೇಶಕಾಲವಿಭಾಗ ಮನದ ರಾಜ್ಯದೊಳಿರದು ।
ಶ್ವಾಸವದು ಬೊಮ್ಮನದು -ಮಂಕುತಿಮ್ಮ ॥ ೬೦ ॥

ನಕ್ಷತ್ರಮಂಡಲದಿನಾಚೆಯಿಂದೊಂದು ದನಿ ।
ವಕ್ಷೋಗುಹಾಂತರದಿನೊಂದು ದನಿಯಿಂತೀ ॥
ಸಾಕ್ಷಿದ್ವಯವು ನಿನ್ನೊಳೊಂದುಗೂಡಿದೊಡದೇ ।
ಪ್ರೇಕ್ಷೆ ಪರಬೊಮ್ಮನದು -ಮಂಕುತಿಮ್ಮ ॥ ೬೧ ॥

ಭೌತವಿಜ್ಞಾನಿ ರವಿತಾರೆಧರೆಗಳ ಚಲನ ।
ರೀತಿ ವೇಗವನೆಳೆದು ಶಕ್ತಿಗಳ ಗುಣಿಪನ್ ॥
ಪ್ರೀತಿ ರೋಷಗಳನವನಳೆವನೇನ್? ಅವ್ಯಕ್ತ ।
ಚೇತನವನರಿವನೇಂ? - ಮಂಕುತಿಮ್ಮ ॥ ೬೨ ॥

ನರಭಾಷೆ ಬಣ್ಣಿಪುದೆ ಪರಸತ್ತ್ವರೂಪವನು? ।
ಅರಿಯದದು ನಮ್ಮೆದೆಯ ಭಾವಗಳನೊರೆಯೆ ॥
ಪರಮಾನುಭವಗಳುಲಿಯನುಭವಿಗಳೊಳಕಿವಿಗೆ ।
ಒರಟುಯಾನವೊ ಭಾಷೆ -ಮಂಕುತಿಮ್ಮ ॥ ೬೩ ॥

ಚಿತ್ತದನುಭವ ಭಾವ ಸಂಭಾವನೆಗಳೆಲ್ಲ ।
ಭತ್ತವದನು ವಿಚಾರಯುಕ್ತಿಗಳು ಕುಟ್ಟೆ ॥
ತತ್ತ್ವ ತಂಡುಲ ದೊರೆಗುಮದು ವಿವೇಚಿತತತ್ತ್ವ ।
ನಿತ್ಯ ಭೋಜನ ನಮಗೆ -ಮಂಕುತಿಮ್ಮ ॥ ೬೪ ॥

ಪುಸ್ತಕದಿ ದೊರೆತರಿವು ಮಸ್ತಕದಿ ತಳೆದ ಮಣಿ ।
ಚಿತ್ತದೊಳು ಬೆಳೆದರಿವು ತರು ತಳೆದ ಪುಷ್ಪ ॥
ವಸ್ತು ಸಾಕ್ಷಾತ್ಕಾರವಂತರೀಕ್ಷಣೆಯಿಂದ ।
ಶಾಸ್ತ್ರಿತನದಿಂದಲ್ಲ -ಮಂಕುತಿಮ್ಮ ॥ ೬೫ ॥

ವ್ಯರ್ಥವೆಂದೆನಿಪುದಲ ಸೃಷ್ಟಿಯಲಿ ಬಹುಭಾಗ? ।
ಅರ್ಥವೇಂ ಕ್ರಿಮಿಕೀಟಕೋಟಿ ರಚನೆಯಲಿ? ॥
ಕರ್ತನಾಲೋಚಿಸದ ದುಂದಿನವನೆಂಬ ನುಡಿ ।
ಯರ್ಧದೃಷ್ಟಿಯ ವಿವರ -ಮಂಕುತಿಮ್ಮ ॥ ೬೬ ॥

ಸ್ರಷ್ಟುಸಂಕಲ್ಪಲಿಪಿಯೆಲ್ಲ ನಮ್ಮೆದುರಿಲ್ಲ ।
ದೃಷ್ಟಿಗೋಚರವದರೊಳೊಂದು ಗೆರೆ ಮಾತ್ರ ॥
ಅಷ್ಟರಿಂದಿದು ನಷ್ಟವದು ಶಿಷ್ಟವೆನ್ನುವುದೆ? ।
ಕ್ಲಿಷ್ಟದ ಸಮಸ್ಯೆಯದು -ಮಂಕುತಿಮ್ಮ ॥ ೬೭ ॥

ಎಲ್ಲ ಅರೆಬೆಳಕು ಅರೆಸುಳಿವು ಅರೆತಿಳಿವಿಲ್ಲಿ ।
ಎಲ್ಲಿ ಪರಿಪೂರಣವೊ ಅದನರಿಯುವನಕ ॥
ಸೊಲ್ಲಿಸುವರಾರು ಸೃಷ್ಟಿಯ ಪೇಟಿಯೊಳಗುಟ್ಟ? ।
ಎಲ್ಲ ಬಾಳು ರಹಸ್ಯ -ಮಂಕುತಿಮ್ಮ ॥ ೬೮ ॥

ಹೆಸರನರಿಯದ ಸಸಿಯೊಳಿರವೆ ರಸಗಂಧಗಳು? ।
ಬಿಸಿಲದನು ಪಕ್ವಗೊಳಿಸುತೆ ಬಿಡಿಸದಿಹುದೆ? ॥
ಪಸರಿಸದೆ ಗಾಳಿಯದನೊಯ್ದು ದಿಸೆದಿಸೆಗಳೊಳು ।
ಉಸಿರುತಿಹೆವದ ನಾವು - ಮಂಕುತಿಮ್ಮ ॥ ೬೯ ॥

ಭೂವಿಷಯದಲಿ ಪುದಿದ ರಸವಾಸನೆಗಳೆಲ್ಲ ।
ಆವಿಯಾಗೇಳ್ದು ಮುಗಿಲಾಗಿ ಮಳೆಗರೆದು ॥
ಬಾವಿಗೂಟೆಯನಿತ್ತು ನರರೊಡಲ ಸೇರುವುದು ।
ದೈವ ರಸತಂತ್ರವಿದು -ಮಂಕುತಿಮ್ಮ ॥ ೭೦ ॥

ತರಣಿ ಕಿರಣದ ನಂಟು ಗಗನ ಸಲಿಲದ ನಂಟು ।
ಧರಣಿ ಚಲನೆಯ ನಂಟು ಮರುತನೊಳ್ನಂಟು ॥
ಪರಿಪರಿಯ ನಂಟುಗಳಿನೊಂದು ಗಂಟೀ ವಿಶ್ವ ।
ಕಿರಿದು ಪಿರಿದೊಂದಂಟು -ಮಂಕುತಿಮ್ಮ ॥ ೭೧ ॥

ಈ ವಿಶ್ವದಲಿ ನೋಡಲೆಲ್ಲರೆಲ್ಲರ ನಂಟು ।
ಅವನಾ ಬಂಧುತೆಯ ಜಡೆಯ ಬಿಡಿಸುವನು? ॥
ಜೀವ ಜೀವಕೆ ನಂಟು ಜಡ ಚೇತನಕೆ ನಂಟು ।
ಆವುದದಕಂಟಿರದು? - ಮಂಕುತಿಮ್ಮ ॥ ೭೨ ॥

ನಂಟು ತಂಟೆಗಳ ಗಂಟೀ ಬ್ರಹ್ಮಭಂಡಾರ ।
ಅಂಟಿಲ್ಲವೆನಗಿದರೊಳೆನ್ನದಿರದೆಂದುಂ ॥
ಒಂಟಿ ನೀನೊಳಜಗಕೆ ಭಂಟ ಹೊರಜಗಕಾಗಿ ।
ಒಂಟಿಸಿಕೊ ಜೀವನವ -ಮಂಕುತಿಮ್ಮ ॥ ೭೩ ॥

ಸುಮ್ಮನೊಬ್ಬಂಟಿಯೆಂತಿಹುದು? ಬೇಸರವಹುದು ।
ಹೊಮ್ಮುವೆನು ಕೋಟಿರೂಪದಲಿ ನಾನೆಂದು ॥
ಬೊಮ್ಮನೆಳಸಿದನಂತೆಆ ಯೆಳ .ಸಿಕೆಯೆ ಮಾಯೆ ।
ನಮ್ಮಿರವು ಮಾಯೆಯಲಿ -ಮಂಕುತಿಮ್ಮ ॥ ೭೪ ॥

ಮರ ತನ್ನ ಹೆತ್ತ ಬೀಜವನಿಲ್ಲವೆನಿಸಿ ವಿ। -
ಸ್ತರಿಸುವಂದದಿ, ಸೃಷ್ಟಿ ತನ್ನ ಮೂಲವನು ॥
ಮರೆಮಾಚಿ ತಾನೆ ಮೆರೆಯುತ್ತಿಹುದು ಕಣ್ಗಳಿಗೆ ।
ನೊರೆ ಸೃಷ್ಟಿ ಪಾಲ್ ಬ್ರಹ್ಮ -ಮಂಕುತಿಮ್ಮ ॥ ೭೫ ॥

ಬಹುವಾಗಲೆಳಸಿ ತಾನೊಬ್ಬಂಟಿ ಬೊಮ್ಮ ನಿಜ ।
ಮಹಿಮೆಯಿಂ ಸೃಜಿಸಿ ವಿಶ್ವವನಲ್ಲಿ ನೆಲಸಿ ॥
ವಹಿಸಿ ಜೀವತೆಯ ಮಾಯೆಯ ಸರಸವಿರಸದಲಿ ।
ವಿಹರಿಪನು ನಿರ್ಲಿಪ್ತ !-ಮಂಕುತಿಮ್ಮ ॥ ೭೬ ॥

ತನ್ನ ಹೊಳಹೊಳಪುಗಳ ನೆನೆನೆನೆದು ಮೈಮರೆತ ।
ರನ್ನವೋ ಬ್ರಹ್ಮ; ನೋಡುವನು॥ ನಿಜಪಿಂಛ-
ವರ್ಣದೆಣಿಕೆಯಲಿ ತನ್ನನೆ ಮರೆತ ನವಿಲವೊಲು ।
ತನ್ಮಯನೊ ಸೃಷ್ಟಿಯಲಿ -ಮಂಕುತಿಮ್ಮ ॥ ೭೭ ॥

ತರುಣಿ ತನ್ನೊಡವೆಗಳ ತಳೆಯುತ್ತ ತೆಗೆಯುತ್ತ ।
ಪರಕಿಸುತೆ ಮುಕರದಲಿ ಸೊಗಸುಗಳ ಪರಿಯ ॥
ಮರೆತೆಲ್ಲವನು ವಿಲಸಿಪಂತೆ ತಾಂ ವಿಶ್ವದಲಿ ।
ಮೆರೆಯುವನು ಪರಬೊಮ್ಮ -ಮಂಕುತಿಮ್ಮ ॥ ೭೮ ॥

ಬರೆವ ಹಲಗೆಯನೊಡೆದು ಬಾಲಕನು ತಾನದನು ।
ಮರಳಿ ಜೋಡಿಪೆನೆನ್ನುತಾಯಾಸಗೊಳುತ ॥
ಸರಿಚೌಕಗೈವಾಟದಲಿ ಜಗವ ಮರೆವಂತೆ ।
ಪರಬೊಮ್ಮ ಸೃಷ್ಟಿಯಲಿ -ಮಂಕುತಿಮ್ಮ ॥ ೭೯ ॥

ಚೀಟಿಯಾಟದ ಬಿನದಿ ತಾನೊರ್ವನಿರ್ವರವೊಲ್ ।
ಆಟವಾಡುತಲಿ ತನ್ನೊರ್ ತನವ ಮೆರೆವಾ ॥
ಮಾಟದಲಿ ಬೊಮ್ಮನುಂ ತನ್ನೇಕತೆಯ ಜೀವ ।
ಪಾಟಿಯಲಿ ಮರೆತಿಹನು -ಮಂಕುತಿಮ್ಮ ॥ ೮೦ ॥

ಮರೆತಿಹನೆ ಬೊಮ್ಮ? ಮರೆತಿಲ್ಲ; ಮರೆತವೊಲಿಹನು ।
ಧರಿಸಿ ಜೀವಾಕೃತಿಯ ಜಗದಿ ತನ್ನನೆ ತಾನ್ ॥
ಅರಸಿಕೊಳುವವೊಲಿಹುದು; ದೊರೆತವೊಲ್ ತೋರೆ ಸುಖ ।
ದೊರೆವವರೆಗಾಯಸವೊ -ಮಂಕುತಿಮ್ಮ ॥ ೮೧ ॥

ಬನ್ನಿರಾಡುವ ಕಣ್ಣ ಮುಚ್ಚಾಲೆಯಾಟವನು ।
ಎನ್ನನರಸಿರಿ ಬನ್ನಿ ಮಕ್ಕಳಿರ ಬೇಗ ॥
ಬನ್ನಿರಾಟವ ಬೇಡವೆಂಬರನು ನಾಂ ಬಿಡೆನು ।
ಎನ್ನುವಜ್ಜಿಯೊ ಬೊಮ್ಮ -ಮಂಕುತಿಮ್ಮ ॥ ೮೨ ॥

ಮಾನಸವ ಚಿಂತೆವಿಡಿದಂದೊರ್ವನೆರಡಾಗಿ ।
ತಾನದಾರೊಳೊ ವಾದಿಸುವನಂತೆ ಬಾಯಿಂ ॥
ದೇನನೊ ನುಡಿಯುತ್ತ ಕೈಸನ್ನೆಗೈಯುವನು ।
ಭಾನವೊಂದರೊಳೆರಡು -ಮಂಕುತಿಮ್ಮ ॥ ೮೩ ॥

ಅಣು ಭೂತ ಭೂಗೋಲ ತಾರಾಂಬರಾದಿಗಳ ।
ನಣಿಮಾಡಿ ಬಿಗಿದು ನಸು ಸಡಿಲವನುಮಿರಿಸಿ ॥
ಕುಣಿಸುತಿರುವನು ತನ್ನ ಕೃತಿಕಂತುಕವನದರೊ ।
ಳಣಗಿದ್ದು ಪರಬೊಮ್ಮ -ಮಂಕುತಿಮ್ಮ ॥ ೮೪ ॥

ನಭದ ಬಯಲೊಳನಂತ, ಮನದ ಗುಹೆಯೊಳನಂತ ।
ವುಭಯದಾ ನಡುವೆ ಸಾದ್ಯಂತ ಜೀವಕಥೆ ॥
ವಿಭುವೊಬ್ಬನೀ ಗಾಳಿಬುಡ್ಡೆಗಳನೂದುವನು ।
ಹಬೆಗುಳ್ಳೆಯೋ ಸೃಷ್ಟಿ -ಮಂಕುತಿಮ್ಮ ॥ ೮೫ ॥

ಗಗನ ತಲೆನವಿರಾಗೆ ಪರೆ ತಾರೆ ಹೂವಾಗೆ ।
ಜಗವೆಲ್ಲ ವಪುವಾಗೆ ಮಾಯೆ ಸತಿಯಾಗೆ ॥
ನಗುನಗುವ ಬೊಬ್ಬಿಡುವ ಜೀವತಾಂಡವ ರಸಿಕ ।
ಭಗವಂತ ಶಿವರುದ್ರ -ಮಂಕುತಿಮ್ಮ ॥ ೮೬ ॥

ಬೆಳೆ ಹೊಳಪು ವಿಕಸನ ವಿಕಾರ ಸಂಭ್ರಮಗಳಲಿ ।
ಬೆಳಕು ವೇಗಗಳೆನಿಪ ಕಾಲ ದಿಕ್ಕುಗಳ ॥
ಚಲನೆಯಲಿ ವಿಶ್ವಸಂಮೋಹನಗಳೆಲ್ಲವಾ ।
ವಿಲಸಿತವು ಬೊಮ್ಮನದು -ಮಂಕುತಿಮ್ಮ ॥ ೮೭ ॥

ಚಲನೆ ವಿಶ್ವಾಸ್ತರಣೆಯದುವೆ ಮಾಯಾಭ್ರಮಣೆ ।
ಸಲೆ ಬಗೆಯಲದು ಪರಬ್ರಹ್ಮ ವಿಸ್ಫುರಣೆ ॥
ಥಳಥಳಕೆ ವಜ್ರದಲಿ ನೈಜವಿರುವಂತೆಯು ।
ಜ್ವಲತೆ ಬೊಮ್ಮಗೆ ನೈಜ -ಮಂಕುತಿಮ್ಮ ॥ ೮೮ ॥

ಆದಿದಿವಸವದಾವುದೆಂದೆಂದುಮಿಹ ಜಗಕೆ? ।
ಬೋಧನೆಯ ಸುಲಭತೆಗೆ ಸೃಷ್ಟಿಲಯಕಥನ ॥
ಪಾದಶಿರಗಳ ಕೂರ್ಮ ಚಾಚಿಕೊಂಡಿರೆ ಸೃಷ್ಟಿ ।
ಸೇದಿಕೊಂಡಿರೆ ಲಯವೊ -ಮಂಕುತಿಮ್ಮ ॥ ೮೯ ॥

ಆವುದಿರುವಿಕೆಗಾದಿ? ಎಂದು ಸೃಷ್ಟಿಯ ಮೊದಲು? ।
ಆವುದಬ್ಧಿಯ ತೆರೆಗಳಲಿ ಮೊಟ್ಟಮೊದಲು? ॥
ಆವುದೆಲರಿನ ನಿಲ್ಲದಲೆತಕ್ಕೆ ಪಡುಸೀಮೆ? ।
ಈ ವಿಶ್ವಕಥೆಯಂತು -ಮಂಕುತಿಮ್ಮ ॥ ೯೦ ॥

ಕಮಲವುದಯದೊಳರಳಿ ಸಂಜೆಯಲಿ ಮುಗುಳಾಗಿ ।
ಸುಮವಪ್ಪುದಂತೆ ಮರುವಗಲು ಮುಗುಳ್ದಂತು ॥
ಅಮಿತ ಪ್ರಪಂಚನಾಕುಂಚನಾವರ್ತನ ।
ಕ್ರಮವೆ ವಿಶ್ವಚರಿತ್ರೆ -ಮಂಕುತಿಮ್ಮ ॥ ೯೧ ॥

ಎತ್ತಣಿನೊ ದೃಕ್ಷರಿಧಿಯಾಚೆಯಿಂದಲನಂತ ।
ಸತ್ತ್ವ ತೆರೆತೆರೆಯಾಗಿ ಬೀಸಿ ಗೂಢದಲಿ ॥
ಬಿತ್ತರಿಸುತಿಹುದು ಹೊಸ ಹೊಸತನವನೆಡೆಬಿಡದೆ ।
ನಿತ್ಯನಿತ್ಯವು ಜಗದಿ -ಮಂಕುತಿಮ್ಮ ॥ ೯೨ ॥

ಜ್ವಾಲಮಾಲಾಕುಲ ಜಗದ್ರೂಪ ತಾಂಡವದಿ ।
ಲೀಲೆಯಿಂ ಜೀವತೆಯನಾಂತು ಪರಬೊಮ್ಮಂ ॥
ತಾಳಲಯಮೇಳನದಿನೊಮ್ಮೆ ರಭಸದಿನೊಮ್ಮೆ ।
ಲೊಲನಾಗಿರ್ಪನೆಲೊ -ಮಂಕುತಿಮ್ಮ ॥ ೯೩ ॥

ಕೇಳಿಯುಂ ಮಾಯೆಯದು; ನೃತ್ಯಗತಿ ಬರಿತೋರ್ಕೆ ।
ಮೂಲಮಂ ಕಂಡಂಗೆ ಸಂಭ್ರಾಂತಿಯೇನು? ॥
ಆಳದಲಿ ನಿರ್ಲಿಪ್ತ ಮೇಲೆ ನಿಯತಿಕ್ಲುಪ್ತ ।
ಲೀಲಾಪ್ರಿಯಂ ಬ್ರಹ್ಮ -ಮಂಕುತಿಮ್ಮ ॥ ೯೪ ॥

ಶ್ಯಾಮಸುಂದರನವನೆ ಚಕ್ರಿ ನರಹರಿಯಂತೆ ।
ಸೋಮಶಂಕರನೆ ಭೈರವ ರುದ್ರನಂತೆ ॥
ಹೈಮವತಿ ಶಿವೆ ತಾನೆ ಕಾಳಿ ಚಂಡಿಕೆಯಂತೆ ।
ಪ್ರೇಮ ಘೋರಗಳೊಂದೆ !-ಮಂಕುತಿಮ್ಮ ॥ ೯೫ ॥

ಸತ್ಯವೆಂಬುದದೇನು ಬ್ರಹ್ಮಾಂಡ ತಾಂಡವದಿ ।
ಸತ್ಯವೇ ಸತ್ಯವಲ ಕಡಲಲೆಯ ಬಾಳೊಳ್ ॥
ಮಿಥ್ಯೆಯೆಂಬುದೆ ಮಿಥ್ಯೆ; ಜೀವನಾಟಕ ಸತ್ಯ ।
ಕೃತ್ಯವಿದು ಬೊಮ್ಮನದು -ಮಂಕುತಿಮ್ಮ ॥ ೯೬ ॥

ಧರ್ಮವೆಂಬುದದೇನು? ಕರ್ಮವೆಂಬುದದೇನು? ।
ಬ್ರಹ್ಮಾಂಡಕಥೆಯೇನು? ಜೀವಿತವಿದೇನು? ॥
ಬ್ರಹ್ಮವೆಲ್ಲಕು ಮೂಲ ಮಾಯೆ ತತ್ಕೃತಿಜಾಲ ।
ಬ್ರಹ್ಮವೇ ಜೀವನವೊ -ಮಂಕುತಿಮ್ಮ ॥ ೯೭ ॥

ವಕ್ರಋಜುಮಿಶ್ರ ಜಗವದರ ಶೋಧನೆ ಧರ್ಮ ।
ಪ್ರಾಕೃತಧ್ವನಿಮಿಶ್ರವದರಡುಗೆ ರಾಗ ॥
ವ್ಯಾಕೃತದಿನವ್ಯಾಕೃತಾದಿಸತ್ತ್ವಕೆ ನಿನ್ನ ।
ಜಾಗೃತಿಪ ಮತಿ ಧರ್ಮ -ಮಂಕುತಿಮ್ಮ ॥ ೯೮ ॥

ಜಲಧಿತೀರದಿ ನಿಂತು ವೀಕ್ಷಿಸಿಕ್ಕೆಲಗಳಲಿ ।
ಚಲವೊಂದಚಲವೊಂದು ಸಮವದಸಮವಿದು ॥
ಕಲೆತಿರ್ಪುವಂತು ಮೇಯಾಮೇಯಗಳು ಜಗದಿ ।
ಮಿಲಿತತೆಯಿನೀ ರುಚಿಯೊ -ಮಂಕುತಿಮ್ಮ ॥ ೯೯ ॥

ಅವಿದಿತಾಖಂಡಸತ್ತ್ವದಪಾರ ಜಲಧಿಯಲಿ ।
ಭುವನದ ದ್ವೀಪ ಕಿಂಚಿನ್ಮಾತ್ರವಿದಿತ ॥
ಪವಿತಾಂತರಕ್ಷಿಗಾಯೆರಡುಮೊಂದೇ ವಸ್ತು ।
ವವಗುಂಠಿತ ಬ್ರಹ್ಮ -ಮಂಕುತಿಮ್ಮ ॥ ೧೦೦ ॥

ಹಾಲಿನೊಳು ಬೆಣ್ಣೆ ಕಡಲೊಳಗೆ ನೀರ್ಗಲ್ಲವೊಲು ।
ತೇಲುವುದಮೇಯಸತ್ತ್ವದಲಿ ಮೇಯ ಜಗ ॥
ಮೂಲದಶೆಯೊಳಗೊಂದು, ಮಾಪನದ ಬಗೆಗೆರಡು ।
ಗಾಳಿಯುಸಿರುಗಳಂತೆ -ಮಂಕುತಿಮ್ಮ ॥ ೧೦೧ ॥

ಕಾಯ ನಿರ್ಣೇಯವದರೊಳು ಮನವನಿರ್ಣೇಯ ।
ಸ್ನಾಯು ಸಂಖ್ಯೇಯ ಜೀವಳಮಸಂಖ್ಯೇಯ ॥
ಮೇಯಾಪ್ರಮೇಯಮಿಶ್ರಣವಿಂತು ನರಜಂತು ।
ನೇಯವದು ವಿಶ್ವಕಂ -ಮಂಕುತಿಮ್ಮ ॥ ೧೦೨ ॥

ಜ್ಞೇಯದ ದ್ವೀಪಕಜ್ಞೇಯಾಬ್ಧಿಯಾವರಣ ।
ಕಾಯಕದ ಗಿರಿಗೆ ಮಾನಸದಭ್ರಪಟಲ ॥
ಮೇಯವನು ಬಗೆದೇನ್ ಅಮೇಯ ಸುತ್ತಲುಮಿರಲು? ।
ಮಾಯೆಯೀ ಮಿಶ್ರಣವೊ -ಮಂಕುತಿಮ್ಮ ॥ ೧೦೩ ॥

ಕಾಲವಕ್ಷಯದೀಪವದರ ಪಾತ್ರೆಯಪಾರ ।
ಬಾಳ್ ಅದರಿನಾದೊಂದು ಕಿರುಹಣತೆ ಮಿಣಕು ॥
ಗಾಳಿಯಾರಿಪುದೊಂದನಿನ್ನೊಂದ ಹೊತ್ತಿಪುದು ।
ತೈಲಧಾರೆಯಖಂಡ -ಮಂಕುತಿಮ್ಮ ॥ ೧೦೪ ॥

ಭಿತ್ತಿಯೊಂದಿಲ್ಲದಿರೆ ಚಿತ್ರವೆಂತಿರಲಹುದು? ।
ಚಿತ್ರವಿಲ್ಲದ ಭಿತ್ತಿ ಸೊಗಸಹುದದೆಂತು? ॥
ನಿತ್ಯ ಸತ್ತ್ವವೆ ಭಿತ್ತಿ, ಜೀವಿತ ಕ್ಷಣಚಿತ್ರ ।
ತತ್ತ್ವವೀ ಸಂಬಂಧ -ಮಂಕುತಿಮ್ಮ ॥ ೧೦೫ ॥

ಚೌಕಟ್ಟನಂತವದರೊಳು ಚಿತ್ರಪಟ ಸಾಂತ ।
ಸಾಕಾರ ಘನತತಿ ನಿರಾಕಾರ ನಭದಿ ॥
ಲೌಕಿಕದ ಮೌಲ್ಯ ನಿರ್ಲೌಕಿಕದ ನಾಣ್ಯದಲಿ ।
ಲೆಕ್ಕ ತಾತ್ತ್ವಿಕನಿಗಿದು -ಮಂಕುತಿಮ್ಮ ॥ ೧೦೬ ॥

ಅಜ್ಞಾತವಾದುದನಭಾವವೆನೆ ನಾಸ್ತಿಕನು ।
ಅಜ್ಞೇಯವೆಂದದಕೆ ಕೈ ಮುಗಿಯೆ ಭಕ್ತ ॥
ಜಿಜ್ಞಾಸ್ಯವೆಂದು ಪರಿಕಿಸತೊಡಗೆ ವಿಜ್ಞಾನಿ ।
ಸ್ವಜ್ಞಪ್ತಿಶೋಧಿ ಮುನಿ -ಮಂಕುತಿಮ್ಮ ॥ ೧೦೭ ॥

ಜಡವೇನು? ಜೀವವೇಂ? ಚೈತನ್ಯ ನಿದ್ರಿಸಿರು ।
ವೆಡೆಯೆಲ್ಲ ಜಡಲೋಕ ಕಲ್ಲು ಕಡ್ಡಿ ಕಸ ॥
ಅಡಗಿರ್ಪ ಚೈತನ್ಯವೆಚ್ಚರಲು ಜಂತು ಜಗ ।
ಜಡವೆ ಜೀವದ ವಸತಿ -ಮಂಕುತಿಮ್ಮ ॥ ೧೦೮ ॥

ಶಿಲೆಯಾಗಿ ನಿದ್ರಿಸುತ್ತಿರ್ದಾಕೆ ರಾಮಪದ ।
ತಲದ ಸಂಸ್ಪರ್ಶದಿಂದೆದ್ದು ನಿಂತಂತೆ ॥
ಚಲಿಸದೆನಿಸಿದ ಜಡವನಾವ ಗಾಳಿಯೊ ಸೋಕೆ ।
ಬಲ ತೀವಿ ಚಲಿಪುದದು -ಮಂಕುತಿಮ್ಮ ॥ ೧೦೯ ॥

ಹಿಮಗಿರಿಯ ಕಂಡಂಗೆ ಕ್ರಿಮಿಯ ಹಿರಿಮೆಯದೇನು? ।
ಕ್ರಿಮಿಗೆ ಹಸಿವುಂಟನಿತು ಬೆದಕಾಟವುಂಟು ॥
ಅಮಿತ ಸಂತತಿಯುಂಟು ಹಿಮಗಿರಿಯ ಸಮಯುಗದ ।
ಕ್ರಿಮಿಪಂಕ್ತಿ ಕಿರಿದಹುದೆ? - ಮಂಕುತಿಮ್ಮ ॥ ೧೧೦ ॥

ಜಡವೆಂಬುದೇನು? ಸೃಷ್ಟಿಯಲಿ ಚೇತನ ಸುಪ್ತಿ ।
ಅಡಗಿ ನಿದ್ರಿಪುದಲ್ಲಿ ಚೈತನ್ಯದಗ್ನಿ ॥
ಮಿಡಿಯೆ ಪರಸತ್ತ್ವ ವಿದ್ಯುದ್ದೀಪ್ತಿಯದನಾಗ ।
ನೆಡೆವುದದು ಜೀವಿವೊಲು -ಮಂಕುತಿಮ್ಮ ॥ ೧೧೧ ॥

ಹಿಮಗಿರಿಯೊಳವಿತಿಹುದು ಚೈತನ್ಯದಗ್ನಿಕಣ ।
ಸ್ತಿಮಿತದಿಂ ನಿಂತಿರ್ಪುದದು ಧರೆಯ ಹಿತಕೆ ॥
ಶಮದ ಸುಂದರದ ಸಾತ್ತ್ವಿಕದ ಗಾಂಭೀರ್ಯವದು ।
ನಮಗೊಂದು ವೇದನಿಧಿ -ಮಂಕುತಿಮ್ಮ ॥ ೧೧೧ ॥

ಅಣುಸಂಖ್ಯೆಯೆಣಿಸುವನು ವಿಶ್ವದಲಿ ವಿಜ್ಞಾನಿ ।
ಗುಣಿಸುವನು ಭೂತಶಕ್ತಿಗಳನದರಿಂದೇಂ? ॥
ಗಣಿತಸಾಧ್ಯದ ಹಿಂದಗಣ್ಯದ ಮಹತ್ತತ್ತ್ವ ।
ವಣಗಿಹುದು ಮೂಲವದು -ಮಂಕುತಿಮ್ಮ ॥ ೧೧೨ ॥

ಸೃಷ್ಟಿರೂಪಂಗಳವತಾರದೊಳ್ ಕ್ರಮಲಕ್ಷ್ಯ ।
ಪುಷ್ಟವಾಗಿರ್ದೊಡೇನಿಲ್ಲದೊಡದೇನು? ॥
ಶಿಷ್ಟಮಾದುದು ಸತ್ತ್ವವದನು ಸೋಕದು ರೂಪ ।
ದೃಷ್ಟಿ ಸತ್ತ್ವದೊಳಿರಲಿ ಮಂಕುತಿಮ್ಮ - ॥ ೧೧೪ ॥

ಕ್ರಮದ ನಭವಿಕೃತಿ ವಾಯ್ವಾದಿ ರೂಪಗಳಂತೆ ।
ಕೃಮಿ ಬೀಜದಿಂ ಮತ್ಸ್ಯ ಮೃಗ ಮನುಜರಂತೆ ॥
ಕ್ರಮ ವಿವರವೇನಿರಲಿ ಸೃಷ್ಟಿಯ ವಿಧಾನದಲಿ ।
ಸಮಸದದು ಸತ್ತ್ವವನು -ಮಂಕುತಿಮ್ಮ ॥ ೧೧೫ ॥

ಪರಮಾಣುಮಿಂ ಪ್ರಪಂಚಗಳ ಸಂಯೋಜಿಪುದು ।
ಮರೆಯಿಂದ ಸೃಷ್ಟಿಯಂತ್ರವ ಚಾಲಿಸುವುದು ॥
ಚರಲೀಲೆಯಲಿ ಜೀವವೆನಿಪ ಚೈತನ್ಯವದು ।
ಪರಸತ್ತ್ವ ಶಕ್ತಿಯಲೊ -ಮಂಕುತಿಮ್ಮ ॥ ೧೧೬ ॥

ಸ್ಥಾಪಿತವೆ ಜೀವ ನಿನ್ನೊಡಲಿನೊಂದಂಗದಲಿ? ।
ಆಪಾದಶಿರವುಮದು ತುಂಬಿರುವುದಲ್ತೆ? ॥
ವ್ಯಾಪಿಸಿಹುದಂತೊಂದು ಚೈತನ್ಯ ವಿಶ್ವದಲಿ ।
ಲೇಪಗೊಳ್ಳದ ಸತ್ತ್ವ -ಮಂಕುತಿಮ್ಮ ॥ ೧೧೭ ॥

ರವಿಮಾತ್ರದಿಂದಲ್ಲ ಭುವಿಮಾತ್ರದಿಂದಲ್ಲ ।
ಭುವನಪೋಷಣೆಯುಭಯ ಸಹಕಾರದಿಂದ ॥
ವಿವಿಧ ಶಕ್ತಿರಸಂಗಳೇಕೀಭವಿಸೆ ಜೀವ ।
ಅವಿತರ್ಕ್ಯ ಸೂಕ್ಷ್ಮವದು -ಮಂಕುತಿಮ್ಮ ॥ ೧೧೮ ॥

ನಾವುಣ್ಣುವನ್ನಗಳು ನಾವು ಕುಡಿವುದಕಗಳು ।
ನಾವುಸಿರುವೆಲರುಗಳು ನಾವುಡುವ ವಸ್ತ್ರ ॥
ಭೂವ್ಯೋಮಗಳ ಯಂತ್ರ ಸಂಘದುತ್ಪನ್ನಗಳು ।
ಜೀವವೆರಡರ ಶಿಶುವು -ಮಂಕುತಿಮ್ಮ ॥ ೧೧೯ ॥

ಪಾಕ ನಿನ್ನೊಳದೊಂದು ಸಾಗುತಿಹುದೆಡೆಬಿಡದೆ ।
ಲೋಕದೆಲ್ಲವು ಸೂಕ್ಷ್ಮಗತಿಯಿನೊಳವೊಕ್ಕು ॥
ಸಾಕುಬೇಕುಗಳೆಲ್ಲವದರಿನಾ ಯಂತ್ರವನು ।
ಏಕೆ ರಚಿಸಿದನೊ ವಿಧಿ !-ಮಂಕುತಿಮ್ಮ ॥ ೧೨೦ ॥

ತನುವೇನು? ಮನವೇನು? ಪರಮಾಣು ಸಂಧಾನ ।
ಕುಣಿಸುತಿಹುದುಭಯವನು ಮೂರನೆಯದೊಂದು ॥
ತೃಣದ ಹಸಿರಿನ ಹುಟ್ಟು ತಾರೆಯೆಸಕದ ಗುಟ್ಟು ।
ದಣಿಯದದನರಸನು ನೀಂ -ಮಂಕುತಿಮ್ಮ ॥ ೧೨೧ ॥

ಜನಿಸಿದುದು ಮೃತಿಯನೆಳಸದೆ ಕುಲವ ಬೆಳಸುವುದು ।
ಒಣಗಿದಂತಿರುವ ತೃಣಮೂಲ ಮೊಳೆಯುವುದು ॥
ಮನುಜರಳಿವರು ಮನುಜಸಂತಾನ ನಿಂತಿಹುದು ।
ಅಣಗದಾತ್ಮದ ಸತ್ತ್ವ -ಮಂಕುತಿಮ್ಮ ॥ ೧೨೨ ॥

ಬನ್ನಬವಣೆಗಳ ತಾನೆನಿತೆನಿತು ಪಟ್ಟಿರೆಯು ।
ಮಿನ್ನೊಮ್ಮೆ ಮತ್ತೊಮ್ಮೆ ಹೊಸ ಸಾಹಸಗಳಿಂ ॥
ಸನ್ನಹಿಸುವಂ ಸುಮ್ಮನಿರಲೊಲದೆ ಮಾನವನು ।
ಚಿನ್ಮಯತೆಯಾತ್ಮಗುಣ -ಮಂಕುತಿಮ್ಮ ॥ ೧೨೩ ॥

ಮೌನದೊಳೊ ಮಾತಿನೊಳೊ ಹಾಸ್ಯದೊಳೊ ಹಾಡಿನೊಳೊ ।
ಮಾನವಂ ಪ್ರಣಯದೊಳೊ ವೀರ ವಿಜಯದೊಳೋ ॥
ಏನೊ ಎಂತೋ ಸಮಾಧಾನಗಳನರಸುತಿಹ ।
ನಾನಂದವಾತ್ಮಗುಣ -ಮಂಕುತಿಮ್ಮ ॥ ೧೨೪ ॥

ಸಚ್ಚಿದಾನಂದಂಗಳಾತ್ಮ ಸ್ವಭಾವ ರಸ ।
ಬಚ್ಚಿಡುವುದದನು ಜೀವಿತೆಯ ಮಾಯಿಕತೆ॥
ಇಕ್ಷುವೊಲ್ ಜೀವ; ಗಾಣದವೊಲ್ ಜಗನ್ಮಾಯೆ ।
ನಿಚ್ಚವಿಳೆಯಾಲೆಮನೆ -ಮಂಕುತಿಮ್ಮ ॥ ೧೨೫ ॥

ಒಳಿತೆಂದು ಸೊಗಸೆಂದು ಜಗವು ಮೆಚ್ಚುವುದೆಲ್ಲ ।
ಕಲೆ ಕಣಂಗಳು ಮಾತ್ರ ಪೂರ್ಣಂಗಳಲ್ಲ ॥
ನಲಿವು ಚೆಲುವುಗಳ ಪರಿಪೂರ್ಣ ಮೂಲಾಕೃತಿಯೆ ।
ಪರಬೊಮ್ಮನೆನ್ನುವರು -ಮಂಕುತಿಮ್ಮ ‖ ೧೧೬ ‖

ಶಿವಸೌಖ್ಯಸೌಂದರ್ಯಗಳ ಪೂರ್ಣರವಿ ಬೊಮ್ಮ ।
ಭುವನಜೀವನಜಲಧಿಯೂರ್ಮಿಕೋಟಿಯಲಿ ॥
ಛವಿಕೋಟಿಯೆರಚಲ್ ಪ್ರತಿಚ್ಛಾಯೆ ವಿಲಸಿಪುದು ।
ಸವಿ ನಮ್ಮದದರ ಕಣ -ಮಂಕುತಿಮ್ಮ ‖ ೧೧೭ ‖

ಹೊರಗಾವುದೊಳಗಾವುದೀ ಸೃಷ್ಟಿಚಕ್ರದಲಿ ।
ಎರಡನೊಂದಾಗಿಪುದು ಹರಿವ ನಮ್ಮುಸಿರು ॥
ಇರುವುದುಳಿದಿನಿತು ಹೊರಗಾಳಿ ಯೋಗಿಗಳೊಳಂ ।
ಬರಿ ಸುಷಿರಪಿಂಡ ಜಗ -ಮಂಕುತಿಮ್ಮ ‖ ೧೧೮ ‖

ಧರೆಯ ನೀರ್ಗಾಗಸದ ನೀರಿಳಿದು ಬೆರವಂತೆ ।
ನರನ ಪ್ರಾಕ್ತನಕೆ ನೂತನಸತ್ತ್ವ ಬೆರೆತು ॥
ಪರಿವುದೀ ವಿಶ್ವಜೀವನಲಹರಿಯನವರತ ।
ಚಿರಪ್ರತ್ನನೂತ್ನ ಜಗ -ಮಂಕುತಿಮ್ಮ ‖ ೧೧೯ ‖

ರಾಮನಡಿಯಿಟ್ಟ ನೆಲ,ಭೀಮನುಸಿರಿದ ಗಾಳಿ ।
ವ್ಯೋಮದೆ ಭಗೀರಥಂ ತಂದ ಸುರತಟಿನಿ ॥
ಸೋಮನಂ ಪೆತ್ತ ಕಡಲೀ ಪುರಾತನಗಳಿರೆ ।
ನಾಮೆಂತು ಹೊಸಬರೆಲೊ -ಮಂಕುತಿಮ್ಮ ‖ ೧೨೦ ‖

ಪುಲಿ ಸಿಂಗದುಚ್ಛ್ವಾಸ,ಹಸು ಹುಲ್ಲೆ ಹಯದುಸಿರು ।
ಹುಳು ಹಾವಿಲಿಯ ಸುಯ್ಲು, ಹಕ್ಕಿ ಹದ್ದುಯ್ಲು ॥
ಕಲೆತಿರ್ಪುವೀಯೆಲ್ಲ ನಾಮುಸಿರ್ವೆಲರಿನಲಿ ।
ಕಲಬೆರಿಕೆ ಜಗದುಸಿರು -ಮಂಕುತಿಮ್ಮ ‖ ೧೨೧ ‖

ರಾಮನುಚ್ಛ್ವಾಸವಲೆದಿರದೆ ರಾವಣನೆಡೆಗೆ? ।
ರಾಮನುಂ ದಶಕಂಠನೆಲರನುಸಿರಿರನೆ? ॥
ರಾಮರಾವಣರುಸಿರ್ಗಳಿಂದು ನಮ್ಮೊಳಗಿರವೆ? ।
ಭೂಮಿಯಲಿ ಪೊಸತೇನೊ? - ಮಂಕುತಿಮ್ಮ ॥ ೧೨೨ ॥

ಬಹಿರಂತರಗಳೊಂದು ಭೂತಭವ್ಯಗಳೊಂದು ।
ಇಹಪರಂಗಳುಮೊಂದು ಚೈತನ್ಯವೊಂದು ॥
ಬಹುಪಾತ್ರನಾಟಕದಿ ಮಾಯೆ ಶತವೇಷಗಳ ।
ವಹಿಸಲೀವಳು ಪತಿಗೆ -ಮಂಕುತಿಮ್ಮ ‖ ೧೨೩ ‖

ಏಕದಿಂದಲನೇಕ ಮತ್ತನೇಕದಿನೇಕ ।
ವೀ ಕ್ರಮವೆ ವಿಶ್ವದಂಗಾಂಗಸಂಬಂಧ ॥
ಲೋಕದಲಿ ಜಾತಿಯಲಿ ವ್ಯಕ್ತಿಯಲಿ ಸಂಸ್ಥೆಯಲಿ ।
ಸಾಕಲ್ಯದರಿವಿರಲಿ -ಮಂಕುತಿಮ್ಮ ‖ ೧೨೪ ‖

ಸಂಪೂರ್ಣಗೋಳದಲಿ ನೆನೆದೆಡೆಯೆ ಕೇಂದ್ರವಲ ।
ಕಂಪಿಸುವ ಕೇಂದ್ರ ನೀಂ ಬ್ರಹ್ಮಕಂದುಕದಿ ॥
ಶಂಪಾತರಂಗವದರೊಳು ತುಂಬಿ ಪರಿಯುತಿದೆ ।
ದಂಭೋಳಿ ನೀನಾಗು -ಮಂಕುತಿಮ್ಮ ‖ ೧೨೫ ‖

ವಿಶ್ವಪರಿಧಿಯದೆಲ್ಲೊ ಸೂರ್ಯಚಂದ್ರರಿನಾಚೆ ।
ವಿಶ್ವಕೇಂದ್ರವು ನೀನೆ, ನೀನೆಣಿಸಿದೆಡೆಯೆ ॥
ನಿಃಶ್ವಸಿತ ಸಂಬಂಧ ನಿನಗಂ ದಿಗಂತಕಂ ।
ಪುಷ್ಪವಾಗಿರು ನೀನು -ಮಂಕುತಿಮ್ಮ ‖ ೧೨೬ ‖

ನಾನೆನುವವನೆ ವಿಶ್ವಚಕ್ರನಾಭಿಯವಂಗೆ ।
ಕಾಣಬಹ ದಿಗ್ವಲಯ ಚಕ್ರನೇಮಿಪಥ ॥
ಅನಂತ್ಯವೀ ಜಗಚ್ಚಕ್ರನಾಭಿಕ್ರಮತೆ ।
ತಾನೊಂದೆ ಸತ್ತ್ವವದು -ಮಂಕುತಿಮ್ಮ ‖ ೧೨೭ ‖

ಬಾನಾಚೆಯಿಂ ವಿಶ್ವಸತ್ತ್ವ ತಾನಿಳಿದಿಳಿಗೆ ।
ನಾನೆನುವ ಚೇತನದಿ ರೂಪಗೊಂಡಿಹುದೊ? ॥
ನಾನೆನುವ ಕೇಂದ್ರದಿನೆ ಹೊರಟ ಸತ್ತ್ವದ ಪರಿಧಿ ।
ಬಾನಾಚೆ ಹಬ್ಬಿಹುದೊ? - ಮಂಕುತಿಮ್ಮ ॥ ೧೨೮ ॥

ಸೃಷ್ಟಿಕಥೆ ಕಟ್ಟುಕಥೆ; ವಿಲಯಕಥೆ ಬರಿಯ ಕಥೆ ।
ಹುಟ್ಟುಸಾವುಗಳೊಂದೆ ಪುರುಳಿನೆರಡು ದಶೆ ॥
ನಿತ್ಯಪರಿವರ್ತನೆಯೆ ಚೈತನ್ಯನರ್ತನೆಯೆ ।
ಸತ್ಯ ಜಗದಲಿ ಕಾಣೊ -ಮಂಕುತಿಮ್ಮ ‖ ೧೨೯ ‖

ಋತುಚಕ್ರ ತಿರುಗುವುದು, ಕಾಲನೆದೆ ಮರುಗುವುದು ।
ಮೃತನ ಮಣ್ಣಿಂದ ಹೊಸ ಹುಲ್ಲು ಮೊಳೆಯುವುದು ॥
ಕ್ಷಿತಿ ಗರ್ಭಧರಿಸುವಳು ಮತ್ತುದಿಸುವುದು ಜೀವ ।
ಸತತ ಕೃಷಿಯೋ ಪ್ರಕೃತಿ -ಮಂಕುತಿಮ್ಮ ॥ ೧೪೦ ॥

ಹಳೆ ಸೂರ್ಯ ಹಳೆ ಚಂದ್ರ ಹಳೆ ಭೂಮಿ ಹಳೆ ನೀರು ।
ಹಳೆ ಹಿಮಾಚಲ ಗಂಗೆ ಹಳೆ ವಂಶಚರಿತೆ ॥
ಹಳೆಯವಿವು ನೀನದರೊಳಾವುದನು ಕಳೆದೀಯೆ? ।
ಹಳದು ಹೊಸತರೊಳಿರದೆ? - ಮಂಕುತಿಮ್ಮ ॥ ೧೪೧ ॥

ಮೂಲವಸ್ತುವದೊಂದು ಲೀಲೆಗೋಸುಗ ನೂರು ।
ಕಾಲದೃಷ್ಟಿಗೆ ಬಹುಳ ಕೇವಲದೊಳೇಕ ॥
ಸ್ಥೂಲವಿವಿಧದಿ ಬಾಳಿ ಸೂಕ್ಷ್ಮಸಾಮ್ಯವ ತಾಳಿ ।
ಆಳುತಿರು ಜೀವನವ -ಮಂಕುತಿಮ್ಮ ॥ ೧೪೨ ॥

ಧಾತ್ರಿಯನು ಮದುವೆಮಂಟಪದವೊಲು ಸಿಂಗರಿಸಿ ।
ಕ್ಷಾತ್ರದಗ್ನಿಗಳ ನರಹೃದಯಗಳೊಳಿರಿಸಿ ॥
ಕೃತ್ರಿಮವನೆಡೆಬಿಡದೆ ನೆಡಸಿ ನಗುವ ವಿಲಾಸಿ ।
ಚಿತ್ರಕಾರಿಯೊ ಮಾಯೆ -ಮಂಕುತಿಮ್ಮ ॥ ೧೪೩ ॥

ವಾಯುವಂ ಕಾಣ್ಬನಾರ್? ತತ್ಕ್ರಿಯೆಯ ಕಾಣನಾರ್? ।
ಮಾಯೆಯಂತಪರೀಕ್ಷ್ಯ ಸತ್ತ್ವದೀಕ್ಷ್ಯ ಕೃತಿ ॥
ರಾಯನಂ ಕಾಣಲಾಗದೆ ಮಂತ್ರಿಯೆಡೆಸಾರ್ವ ।
ದೇಯಾರ್ಥಿಯೊಲು ನೀನು -ಮಂಕುತಿಮ್ಮ ॥ ೧೪೪ ॥

ಮಾಯೆಯೇ ಸರಸಿ; ನಿರ್ಗುಣ ಸತ್ತ್ವದಿಂದೇನು? ।
ಮಾಯೆ ಬಿಡೆ ಜಗವೆತ್ತ? ಜೀವಕಥೆಯೆತ್ತ? ॥
ಮೇಯವಲ್ಲದ ಮಹಿಮೆ ಛಾಯೆಯಾ ಬ್ರಹ್ಮನದು ।
ತಾಯವಳು ನೀಂ ಮಗುವು - ಮಂಕುತಿಮ್ಮ ॥ ೧೪೫ ॥

ರಾಯ ಮುದಿದಶರಥನಾಡಿಸುತ ಕೈಕೇಯಿ ।
ಸ್ವೀಯ ವಶದಲಿ ಕೋಸಲವನಾಳಿದಂತೆ ॥
ಮಾಯೆ ಬೊಮ್ಮನ ಬಿನದವಡಿಸಿ ನಮ್ಮೀ ಜಗವ ।
ಕಾಯುವಳು ತನ್ನಿಚ್ಛೆ -ಮಂಕುತಿಮ್ಮ ॥ ೧೪೬ ॥

ಮಾಯೆಯೊಮ್ಮೊಮ್ಮೆ ತೋರುವಳು ಮಿಗಿಲಕ್ಕರೆಯ ।
ಮಾಯಿಪಳು ಗಾಯಗಳನೀವಳಿಷ್ಟಗಳ ॥
ಮೈಯ ನೀಂ ಮರೆಯೆ ನೂಕುವಳಾಗ ಪಾತಾಳಕೆ ।
ಪ್ರೇಯ ಪೂತನಿಯವಳು -ಮಂಕುತಿಮ್ಮ ॥ ೧೪೭ ॥

ಪ್ರಕೃತಿಯಿಂ ಪೊರಗಿರುವ ನರನಾರು ಸೃಷ್ಟಿಯಲಿ? ।
ಸ್ವಕೃತಿಯೆಂದವನೆನುವುದವಳಿರದೊಡಿರದು ॥
ಸುಕೃತವೆನಿಸುವುದವಳ ನೀಂ ವಶಕೆ ಕೊಳುವ ನಯ ।
ವಿಕೃತಿಗೆಡೆಯಾಗದಿರೊ -ಮಂಕುತಿಮ್ಮ ॥ ೧೪೮ ॥

ಅರಸನೊಬ್ಬನಲ್ಲ; ಮೂವರು ಬಾಳನಾಳುವರು ।
ನರ ಕರುಮ ದೈವಗಳು; ತೊಡಕದಕೆ ಸಾಜ ॥
ಗುರಿಯಿಡದ, ಮೊದಲು ಕೊನೆಯಿರದ, ದರಬಾರಿನಲಿ ।
ಸರಿಯೇನೊ ತಪ್ಪೇನೊ? - ಮಂಕುತಿಮ್ಮ ॥ ೧೪೯ ॥

ದೊರೆ ಮೂವರಿರುವಲ್ಲಿ ಸರಿಯಿಹುದೆ ಸೋಜಿಗವು ।
ಕೊರತೆ ಹೆಚ್ಚಿಕೆಗಳಿರಲಚ್ಚರಿಯದೇನು? ॥
ಬರಲಿ ಬರುವುದು; ಸರಿವುದೆಲ್ಲ ಸರಿಯಲಿ; ನಿನಗೆ ।
ಪರಿವೆಯೇನಿಲ್ಲಲವೊ -ಮಂಕುತಿಮ್ಮ ॥ ೧೫೦ ॥

ದೈವವೆನಿಸಿರುತೆ ವಿಶ್ವಪ್ರಕೃತಿಶಕ್ತಿಯಲಿ ।
ಜೀವವಾಸನೆಗಳಲಿ ಪೂರ್ವಕೃತವೆನಿಸಿ ॥
ಧೀವರ್ತನೆಯಲಿ ಪೌರುಷವೆನಿಸಿ ಪರಸತ್ತ್ವ ।
ತ್ರೈವಿಧದೊಳಿರುತಿಹುದು -ಮಂಕುತಿಮ್ಮ ॥ ೧೫೧ ॥

ಪುಣ್ಯಪಾಪ ಋಣಾನುಬಂಧ ವಾಸನೆಗಳಿವು ।
ಜನ್ಮಾಂತರದ ಕರ್ಮಶೇಷದಂಶಗಳು ॥
ಎಣ್ಣಿಕೆಗೆ ಸಿಲುಕದಾಕಸ್ಮಿಕ ಯದೃಚ್ಛೆಗಳು ।
ಸನ್ನಿಹಿತ ದೈವಿಕದೆ -ಮಂಕುತಿಮ್ಮ ॥ ೧೫೨ ॥

ಪ್ರಾರಾಬ್ಧಕರ್ಮಮುಂ ದೈವಿಕದ ಲೀಲೆಯುಂ ।
ತೋರುವುವದೃಷ್ಟವಿಧಿಯೆಂಬ ಪೆಸರುಗಳಿಂ ॥
ಆರುಮಳೆವವರಿಲ್ಲವವುಗಳಾವೇಗಗಳ ।
ಪೌರುಷವು ನವಸತ್ತ್ವ -ಮಂಕುತಿಮ್ಮ ॥ ೧೫೩ ॥

ಪೊಸರಸಂ ಬೇರಿಗನುದಿನಮೊದವಿ ಧರೆಯಿಂದ ।
ಸಸಿಗೆ ಹೊಸತಳಿರ ತಲೆಯಲಿ ಮುಡಿಸುವಂತೆ ॥
ಹೊಸ ಸೃಷ್ಟಿಸತ್ತ್ವಮೆತ್ತಣಿನೊ ಬರುತನುದಿನಂ ।
ಪೊಸತಾಗಿಪುದು ಜಗವ -ಮಂಕುತಿಮ್ಮ ॥ ೧೫೪ ॥

ಶ್ವಸನನಾಗಸದಿನಿಳಿದದ್ರಿಗುಹೆಗಳೊಳಲೆಯು ।
ತುಸಿರಾಗಿ ನಮ್ಮೊಳಾವಗಮಾಡುವಂತೆ ॥
ವಿಸರಸತ್ತ್ವಮದೊಂದದೆತ್ತಣಿನೊ ಬಂದು ನ ।
ಮ್ಮಸುಗಳೊಳವೊಗುತಿಹುದು -ಮಂಕುತಿಮ್ಮ ॥ ೧೫೫ ॥

ತೋಯಿಸುತ ಬೇಯಿಸುತ ಹೆಚ್ಚುತ್ತ ಕೊಚ್ಚುತ್ತ ।
ಕಾಯಿಸುತ ಕರಿಯುತ್ತ ಹುರಿಯುತ್ತ ಸುಡುತ ॥
ಈಯವನಿಯೊಲೆಯೊಳೆಮ್ಮಯ ಬಾಳನಟ್ಟು ವಿಧಿ ।
ಬಾಯ ಚಪ್ಪರಿಸುವನು -ಮಂಕುತಿಮ್ಮ ॥ ೧೫೬ ॥

ಪರಬೊಮ್ಮನಾ ವಿಧಿಯ ನೇಮಿಸಿಹುದೇತಕೆನೆ ।
ನರಜಾತಿ ಸಾನುಭೂತಿಯ ಕಲಿಯಲೆಂದು ॥
ಪರರೆಂಬರಿಲ್ಲ ಆತ್ಮಾಂಶರೆಲ್ಲರೆನಿತ್ತೆ ।
ಬೆರೆ ನೀನು ವಿಶ್ವದಲಿ -ಮಂಕುತಿಮ್ಮ ॥ ೧೫೭ ॥

ಕರವೆದಡದೃಷ್ಟಕ್ಕೆ; ನರನ ಪೂರ್ವಿಕವೊಂದು ।
ಪೆರತೊಂದು ನವಸೃಷ್ಟಿಸತ್ತ್ವವಾ ಬೊಗಸೆ ॥
ಧರಿಸಿಹುದು ಮನುಜಜೀವಿತವನದರೊತ್ತಡದೆ ।
ಪರಿದಾಟ ನಮಗೆಲ್ಲ -ಮಂಕುತಿಮ್ಮ ॥ ೧೫೮ ॥

ತಾಪಿಸುತೆ ತಣಿಯಿಸುತೆ ಕುಲುಕಿಸುತೆ ಋತುವೈದ್ಯ ।
ಭೂಪಟದಿ ಜೀವರಸಗಳ ಪಚಿಸುವಂತೆ ॥
ಪಾಪಿಯಂ ಪ್ರೋತ್ಸಹಿಸಿ ಸುಕೃತಿಯ ಪರೀಕ್ಷಿಸುತ ।
ವೇಪಿಪನು ವಿಧಿ ನಮ್ಮ -ಮಂಕುತಿಮ್ಮ ॥ ೧೫೯ ॥

ಆವ ಬೇಳೆಯದಾವ ನೀರಿನಲಿ ಬೇಯುವುದೊ। !
ಆವ ಜೀವದ ಪಾಕವಾವ ತಾಪದಿನೋ॥ !
ಆ ವಿವರವನು ಕಾಣದಾಕ್ಷೇಪಣೆಯದೇನು? ।
ದೈವಗುಟ್ಟದು ತಿಳಿಯೆ-ಮಂಕುತಿಮ್ಮ ॥ ೧೬೦ ॥

ವಿಧಿಯ ಹೊರೆಗಳನು ತಪ್ಪಿಸಿಕೊಳುವನೆಲ್ಲಿಹನು? ।
ಬೆದರಿಕೆಯನದರಿಂದ ನೀಗಿಪನು ಸಖನು ॥
ಎದೆಯನುಕ್ಕಾಗಿಸಾನಿಸು ಬೆನ್ನ, ತುಟಿಯ ಬಿಗಿ ।
ವಿಧಿಯಗಸ, ನೀಂ ಕತ್ತೆ-ಮಂಕುತಿಮ್ಮ ॥ ೧೬೧ ॥

ಟಗರೆರಡ ಬೆಳಸಿ ಕೊಬ್ಬಿಸಿ ಕೆಣಕಿ ಹುರಿಗೊಳಿಸಿ ।
ಜಗಳವಾಡಿಸಿ ದೈವಜೀವಗಳ ಪೆಸರಿಂ ॥
ನಗುತಲಿರುವನು ನೋಡಿ; ಪರಬೊಮ್ಮನೇಂ ಬಿನದಿ। !
ಬಿಗಿಯದಿರು ನೀಂ ಬೀಗಿ-ಮಂಕುತಿಮ್ಮ ॥ ೧೬೨ ॥

ಮನುಷ್ಯಚರಿತೆಯಚ್ಛಿನ್ನವಾಹಿನಿ ಸಾಗ ।
ಲಾನುಪೂರ್ವ್ಯದ ಕರ್ಮಋಣಶೇಷವಿನಿತು ॥
ತಾನಿರಲೆಬೇಕಲ್ತೆ ಪೌರುಷಸ್ಪರ್ಧನೆಗೆ ।
ಆನೆಗಂಕುಶದಂತೆ-ಮಂಕುತಿಮ್ಮ ॥ ೧೬೩ ॥

ಹಳಯ ಮಲೆ ಹಳೆಯ ನೆಲವಾದೊಡೆಯುಮೊರತೆ ಮಳೆ ।
ಹೊಳೆನೀರನಾವಗಂ ಪೊಸದಾಗಿಸುವವೊಲ್ ॥
ಹಳೆಯ ಕರ್ಮವ ಹೊಸದು ಕೊಚ್ಚೆ ಪೌರುಷನದಿಯ ।
ಬೆಳೆಯಿಪುದು ನವತೆಯಲಿ-ಮಂಕುತಿಮ್ಮ ॥ ೧೬೪ ॥

ಹೊಸಹೊಸದು ತಾನಾಗುತಿರ್ದೊಡಂ ತನ್ನಯ ।
ಪ್ರಸವ ಪ್ರವಾಹ ಭೂಮಿಗಳ ಹಳತನದಿಂ ॥
ನಸುಸೋಂಕು ವಾಸನೆಯ ಪೊನಲೊಂದಬೇಕಲ್ತೆ? ।
ಹೊಸದು ಹಳದಾಗದೇ-ಮಂಕುತಿಮ್ಮ ॥ ೧೬೫ ॥

ಹುಳು ಹುಟ್ಟಿ ಸಾಯುತಿರೆ, ನೆಲ ಸವೆದು ಕರಗುತಿರೆ ।
ಕಡಲೊಳೆತ್ತಲೊ ಹೊಸದ್ವೀಪವೇಳುವುದು ॥
ಕಳೆಯುತೊಂದಿರಲಿಲ್ಲಿ, ಬೆಳೆವುದಿನ್ನೊಂದೆಲ್ಲೊ ।
ಅಳಿವಿಲ್ಲ ವಿಶ್ವಕ್ಕೆ -ಮಂಕುತಿಮ್ಮ ॥ ೧೬೬ ॥

ಕ್ಷಿತಿಚಕ್ರ ರವಿಚಕ್ರ ಋತುಚಕ್ರಗಳಿಗಿಹುದು ।
ಮಿತವೃತ್ತಿ; ನರನಿಗಂತೆಯೆ ಕರ್ಮನಿಯತಿ ॥
ಕ್ಷಿತಿಕಂಪ ರಾಹುಕೇತುಭ್ರಮೆ ನರಪ್ರಗತಿ ।
ಅತಿಚರಿತೆ ಪ್ರಕೃತಿಯಲಿ-ಮಂಕುತಿಮ್ಮ ॥ ೧೬೭ ॥

ಅನುಬಂಧ ಜೀವಜೀವಕೆ ಪುರಾಕೃತದಿಂದ ।
ಮನದ ರಾಗದ್ವೇಷವಾಸನೆಗಳದರಿಂ ॥
ತನುಕಾಂತಿ ಮೋಹ ವಿಕೃತಿಗಳುಮಾ ತೊಡಕಿನವು ।
ಕೊನೆಯಿರದ ಬಲೆಯೊ ಅದು-ಮಂಕುತಿಮ್ಮ ॥ ೧೭೮ ॥

ಋಣದ ಮೂಟೆಯ ಹೊರಿಸಿ, ಪೂರ್ವಾರ್ಜಿತದ ಹುರಿಯ ।
ಕುಣಿಕೆಯಲಿ ನಿನ್ನ ಕೊರಳನು ಬಿಗಿದು ವಿಧಿಯು ॥
ತೃಣದ ಕಡ್ಡಿಯ ಮುಂದೆ ಹಿಡಿದಾಶೆ ತೋರುತಿರೆ ।
ಕುಣಿವ ಗರ್ದಭ ನೀನು -ಮಂಕುತಿಮ್ಮ ॥ ೧೭೯ ॥

ಉಣುವುದುಡುವುದು ಪಡುವುದಾಡುವುದು ಮಾಡುವುದು ।
ಋಣಗಳೆಲ್ಲವು ಪೂರ್ವಸಂಚಿತಾಂಶಗಳು ॥
ಹಣೆಯೊಳದು ಲಿಖಿತಮಿರೆಯುಂ ವಾಚಿಸುವನಿಲ್ಲ ।
ಗೊಣಗಾಟವಳಿಸುವುದೆ?-ಮಂಕುತಿಮ್ಮ ॥ ೧೮೦ ॥

ಇಂದು ಮದುವೆಯ ಹಬ್ಬ; ನಾಳೆ ವೈಕುಂಠ ತಿಥಿ ।
ಇಂದು ಮೃಷ್ಟಾನ್ನಸುಖ, ನಾಳೆ ಭಿಕ್ಷಾನ್ನ ॥
ಇಂದು ಬರಿಯುಪವಾಸ, ನಾಳೆ ಪಾರಣೆ ಯಿಂತು । -
ಸಂದಿರುವುದನ್ನ ಋಣ-ಮಂಕುತಿಮ್ಮ ॥ ೧೮೧ ॥

ಅರಿ ಮಿತ್ರ ಸತಿ ಪುತ್ರ ಬಳಗವದೆಲ್ಲ ।
ಕರುಮದವತಾರಗಳೊ, ಋಣಲತೆಯ ಚಿಗುರೋ ॥
ಕುರಿಯನಾಗಿಸಿ ನಿನ್ನ ಕಾಪಿಡುವ ಸಂಸಾರ ।
ವುರಿಮಾರಿಯಾದೀತೊ-ಮಂಕುತಿಮ್ಮ ॥ ೧೮೨ ॥

ಬಂಧುಬಳಗವುಮಂತಕನ ಚಮುವೊ, ಭದ್ರ್ಮಚಮು ।
ದಂದುಗದ ಬಾಗಿನಗಳವರ ನಲುಮೆಗಳು ॥
ಕುಂದಿಪ್ಪುವಾತ್ಮನನವರ್ಗಳುಪಕಾರಗಳು ।
ಮಂದಿಗಾಗದಿರು ಬಲಿ-ಮಂಕುತಿಮ್ಮ ॥ ೧೮೩ ॥

ತಂದೆಮಕ್ಕಳಿಗೆ ಹದಗೆಟ್ಟುದನು ಕಾಣೆಯಾ? ।
ಹೊಂದಿರುವರವರ್ ಅಹಂತೆಯು ಮೊಳೆಯುವನಕ ॥
ತಂದೆಯಾರ್ ಮಕ್ಕಳಾರ್ ನಾನೆಂಬುದೆದ್ದುನಿಲೆ? ।
ಬಂಧ ಮುರಿವುದು ಬಳಿಕ-ಮಂಕುತಿಮ್ಮ ॥ ೧೮೪ ॥

ಕಾಂಕ್ಷೆಗಳ ಬೋಧಿಸುವ ಬಂಧುಸಖರುಪಕಾರ ।
ಯಕ್ಷಿಯರು ಮ್ಯಾಕ್ ಬೆತನಿಗೆಸಗಿದುಪದೇಶ ॥
ಉತ್ಸಾಹವಿದ್ದೇನು? ವಾತ್ಸಲ್ಯವಿದ್ದೇನು? ।
ಅಕ್ಷಿ ನಿರ್ಮಲವೇನೊ?-ಮಂಕುತಿಮ್ಮ ॥ ೧೮೫ ॥

ಇಂಗಿತಜ್ಞಾನವಿಲ್ಲದ ಬಂಧುಪರಿವಾರ ।
ಹಂಗಿಸುವ ಛಲವುಳ್ಳ ಸತಿಪುತ್ರಸಖರು ॥
ಬಂಗಾರದಸಿ ಚುಚ್ಚೆ ಸಿಂಗರದ ಬೊಟ್ಟೆನುವ ।
ಮಂಗಬುದ್ಧಿಯ ಜನರು-ಮಂಕುತಿಮ್ಮ ॥ ೧೮೬ ॥

ಬಂಧುವುಂ ಮಿತ್ರನುಂ ಭೃತ್ಯನುಂ ಶತ್ರುವೊಲೆ ।
ದಂಡಧರನೋಲಗಕೆ ನಿನ್ನನೆಳೆವವರೋ ॥
ಅಂದದೊಡವೆಯ ಮೊನೆಗಳಿಂದೆದೆಯನೊತ್ತುವಾ ।
ಮಂದಹಸಿತದ ಕೊಲೆಯೊ-ಮಂಕುತಿಮ್ಮ ॥ ೧೮೭ ॥

ದ್ವೇಷ ರೋಷಗಳವೊಲೆ ನೇಹಮುಂ ಮೋಹಮುಂ ।
ಪಾಶವಾಗಲ್ಬಹುದು ನಿನಗೆ ಮೈಮರಸಿ ॥
ವಾಸನೆಗಳುರುಬಿ ಚಿತ್ತಜ್ವರಂಗಳ ಬಿತ್ತಿ ।
ಮೋಸದಲಿ ಕೊಲ್ಲುವುವೊ-ಮಂಕುತಿಮ್ಮ ॥ ೧೮೮ ॥

ಕರುಮ ಬಂದಿದಿರಹುದು ಮೋಹನದ ರೂಪಿನಲಿ ।
ಕಿರುನಗುವು ಕುಡಿನೋಟ ಕೊಂಕುನುಡಿಗಳಲಿ ॥
ಕರೆದು ತಳ್ಳುವ, ತಳ್ಕರಿಸುತೊಳಗೆ ಕಿಚ್ಚಿಡುವ ।
ತರಳತೆಯದೇಂ ತಂತ್ರ?-ಮಂಕುತಿಮ್ಮ ॥ ೧೮೯ ॥

ಮೃತ್ಯು ತಾಂ ಬಂದು ಮೋಹಿನಿಯರೂಪದಿ ನಿನ್ನ ।
ಚಿತ್ತವನು ಸೆರೆವಿಡಿದು ನೆತ್ತರನು ಬಸಿದು ॥
ನಿತ್ಯ ನಿನ್ನಸುವ ಲವ ಲವ ಪೀರುತಲಿ ದೀರ್ಘ ।
ಹತ್ಯೆಯಲಿ ಹರುಷಿಪಳೊ-ಮಂಕುತಿಮ್ಮ ॥ ೧೯೦ ॥

ಕ್ಷಣವೊಂದರೊಳೆ ಪೂರ್ತಿ ಕೊಲ್ಲುವುದು ಯಮಶೂಲ ।
ಕ್ಷಣವನುಕ್ಷಣ ಕೊಲ್ಲುವುವು ಮೋಹಮಮತೆ ॥
ಕುಣಿಕೆಯನು ನಿನ್ನ ಕೊರಳಿಗೆ ಹೂಡಿ ಚಿರಕಾಲ ।
ವಣುವಣುವೆ ಬಿಗಿಯುವುವೊ-ಮಂಕುತಿಮ್ಮ ॥ ೧೯೧ ॥

ಋಣದ ಜಾಲವನಂತ, ಕರುಮಚಕ್ರವನಂತ ।
ಜನುಮಜನುಮದ ಕಥೆಯ ತಂತುಗಳನಂತ ॥
ಅನವರತ ನೂತನವಿದೆನಿಪ ವಿಶ್ವದ ತಂತ್ರ ।
ಬಿನದ ಪರಬೊಮ್ಮಂಗೆ-ಮಂಕುತಿಮ್ಮ ॥ ೧೮೨ ॥

ಪುಣ್ಯದಿಂ ಬಂದ ಸಿರಿ ಮದಮೋಹಗಳ ಮೂಲ ।
ಖಿನ್ನನಾಗಿಪ ಪಾಪಫಲವಾತ್ಮಶುದ್ಧಿ ॥
ಅನ್ಯೋನ್ಯಜನಕಗಳು ಪುಣ್ಯಪಾಪಗಳಿಂತು ।
ಧನ್ಯನುಭಯವ ಮೀರೆ-ಮಂಕುತಿಮ್ಮ ॥ ೧೮೩ ॥

ನೋಡುನೋಡುತ ಲೋಕಸಹವಾಸ ಸಾಕಹುದು ।
ಬಾಡುತಿಹ ಹೂಮಾಲೆ ಗೂಢವಿಹ ಕಜ್ಜಿ ॥
ತೋಡದಿರು ಬಾಳ್ವೆಯಾಳವನು; ಮೇಲ್ಮೇಲೆ ನೀ ।
ನೋಡಾಡು ಹಗುರದಿಂ-ಮಂಕುತಿಮ್ಮ ॥ ೧೮೪ ॥

ಹೃದಯಜೀವನಕಿನಿತು ಬೆಲೆಯಿರದೆ? ಫಲವಿರದೆ? ।
ಮಧುರಭಾವ ಪ್ರೇಮ ದಯೆಯೆಲ್ಲ ಬರಿದೆ ॥
ವಿಧಿಯಂಗಡಿಯೊಳದನು ಕಸವೆಂದು ತಳ್ಳುವೊಡೆ ।
ಬದುಕಿನಲಿ ತಿರುಳೇನು?-ಮಂಕುತಿಮ್ಮ ॥ ೧೮೫ ॥

ತಡಕಾಟ ಬದುಕೆಲ್ಲವೇಕಾಕಿಜೀವ ತ ।
ನ್ನೊಡನಾಡಿ ಜೀವಗಳ ತಡಕಿ ಕೈಚಾಚಿ ॥
ಪಿಡಿಯಲಲೆದಾಡುಗುಂ, ಪ್ರೀತಿ ಋಣ ಮಮತೆಗಳ ।
ಮಡುವೊಳೋಲಾಡುತ್ತೆ -ಮಂಕುತಿಮ್ಮ ॥ ೧೮೬ ॥

ನುಡಿಗಟ್ಟಿನಾಟದಕ್ಕರಚೀಟಿಯೊಟ್ಟಿನಲಿ ।
ತಡಕಿ ನಾವಾಯ್ದಾಯ್ದು ನುಡಿಜೋಡಿಪಂತೆ ॥
ಬಿಡಿಜೀವ ಸಂಗಾತಿಜೀವಗಳನರಸಿ ತಾಂ ।
ಪಡೆದಂದು ಪೂರ್ಣವದು-ಮಂಕುತಿಮ್ಮ ॥ ೧೮೭ ॥

ರಸರುಚಿಗಳನು ಕಲಿಸಿ ಪಕ್ವಾನ್ನಗಳ ಪಚಿಸಿ ।
ರಸನೆಯಲಿ ನೀರಿಳಿಸಿ ಬಿಸಿಯುಸಿರ ಬಿಡಿಸಿ ॥
ದಶದಿಶೆಗಳಿಂ ಮುತ್ತಿ ಬರುವ ಪ್ರಕೃತಿಗದಾರು ।
ವಶನಾಗದಿಹ ನರನು? -ಮಂಕುತಿಮ್ಮ ॥ ೧೮೮ ॥

ಪರಿಪರಿಯ ರೂಪಕಾಂತಿಗಳ ಕಣ್ಣಾಗಿಸುವ ।
ಪರಿಪರಿಯ ಫಲಮಧುರಗಳ ರಸನೆಗುಣಿಪ ॥
ಪರಿಪರಿಯ ಕಂಠರವಗಳ ಕಿವಿಗೆ ಸೋಕಿಸುವ ।
ಗುರು ಸೃಷ್ಟಿ ರಸಿಕತೆಗೆ-ಮಂಕುತಿಮ್ಮ ॥ ೧೮೯ ॥

ಅಮೃತಕಣವಂ ಮರ್ತ್ಯಮೃದ್ಘಟದಿ ಬಯ್ತಿರಿಸಿ ।
ವಿಮೃಶಬುದ್ಧಿಗೆ ಮೋಹದುಪನೇತ್ರವಿಡಿಸಿ ॥
ಸಾಮ್ರಾಜ್ಯಮಧ್ಯದಲಿ ದುರ್ಭಿಕ್ಷವಾಗಿಪುದು ।
ಕಮೃತೆಯೊ ನಮೃತೆಯೊ?-ಮಂಕುತಿಮ್ಮ ॥ ೧೯೦ ॥

ಪೊಡೆಯುಣಿಸ ಮಿಗಹಕ್ಕಿಹುಳುಗಳಂದದಿ ನರನು ।
ತಡಕುವನು; ತನ್ನಾತ್ಮದುಣಿಸ ಮರೆಯುವನು ॥
ಒಡಲಿನಬ್ಬರವೇನು? ಆತ್ಮದ ನಾಣ್ಚೇನು? ।
ಪೊಡವಿಗಿದೆ ದುಮ್ಮಾನ-ಮಂಕುತಿಮ್ಮ ॥ ೧೯೧ ॥

ದೇವದಾನವರ ರಣರಂಗ ಮಾನವಹೃದಯ ।
ಭಾವ ರಾಗ ಹಠಂಗಳವರ ಸೇನೆಗಳು ॥
ಭೂವಿಭವಜಯಗಳ ಭ್ರಾಂತಿಯಲಿ ಮರೆಯುವರು ।
ಜೀವಾಮೃತವನವರು-ಮಂಕುತಿಮ್ಮ ॥ ೧೯೨ ॥

ಪರಮೇಷ್ಠಿ ನಿಜಚಾತುರಿಯನಳೆಯ ನಿರವಿಸಿದ ।
ನೆರಡುಕೈಯಿಂದೆರಡು ಜಂತುಗಳ ಬಳಿಕ ॥
ಇರದೆ ತಾನವನೊಂದುಗೂಡಿಸಲು ಬೆರಗಾಯ್ತು ।
ನರಿಯು ವಾನರವು ನರ-ಮಂಕುತಿಮ್ಮ ॥ ೧೯೩ ॥

ಅಂತರಂಗವನೆಲ್ಲ ಬಿಚ್ಚಿ ತೋರಿಪನಾರು? ।
ಅಂತರಗಭೀರಗಳ ತಾನೆ ಕಂಡವನಾರ್? ॥
ಗಂತಿಗಳು ಗಂಟುಗಳು ಮಡಿಪುಮಡಿಪುಗಳಲ್ಲಿ ।
ಸ್ವಂತಕೇ ದುರ್ದರ್ಶ-ಮಂಕುತಿಮ್ಮ ॥ ೧೯೪ ॥

ಮೊಗ ನಾಲ್ಕು ನರನಿಗಂತೆಯೆ ನಾರಿಗಂ ಬಗೆಯೆ ।
ಜಗಕೆ ಕಾಣಿಪುದೊಂದು, ಮನೆಯ ಜನಕೊಂದು ॥
ಸೊಗಸಿನೆಳಸಿಕೆಗೊಂದು, ತನ್ನಾತ್ಮಕಿನ್ನೊಂದು ।
ಬಗೆಯೆಷ್ಟೊ ಮೊಗವಷ್ಟು-ಮಂಕುತಿಮ್ಮ ॥ ೧೯೫ ॥

ಮನುಜಲೋಕವಿಕಾರಗಳನು ನೀನಳಿಸುವೊಡೆ ।
ಮನಕೊಂದು ದರ್ಪಣವ ನಿರವಿಸೆಂತಾನುಂ ॥
ಅನುಭವಿಪರವರಂದು ತಮ್ಮಂತರಂಗಗಳ ।
ಅನುಪಮಾಸಹ್ಯಗಳ-ಮಂಕುತಿಮ್ಮ ॥ ೧೯೬ ॥

ಕನಲ್ದ ಹುಲಿ ಕೆರಳ್ದ ಹರಿ ಮುಳ್ ಕರಡಿ ಛಲನಾಗ ।
ಅಣಕು ಕಪಿ ಸೀಳ್ನಾಯಿ ಮೊದಲಾದ ಮೃಗದ ॥
ಸೆಣಸುಮುಸುಡಿಯ ಘೋರದುಷ್ಟಚೇಷ್ಟೆಗಳೆಲ್ಲ ।
ವಣಗಿಹುವು ನರಮನದಿ-ಮಂಕುತಿಮ್ಮ ॥ ೧೯೭ ॥

ಸತ್ಯವಂತನನರಸಲೆನುತ ಪೇಟೆಗಳೊಳಗೆ ।
ಹುಟ್ಟಹಗಲೊಳೆ ದೀವಿಗೆಯ ಹಿಡಿದು ನಡೆದು ॥
ಕೆಟ್ಟುದೀ ಜಗವೆಂದು ತೊಟ್ಟಿಯೊಳೆ ವಸಿಸಿದನು ।
ತಾತ್ತ್ವಿಕ ಡಯೋಜೆನಿಸ್-ಮಂಕುತಿಮ್ಮ ॥ ೧೯೮ ॥

ಪದರಪದರಗಳಿಹುವು ಗಂಟುಗಂಟುಗಳಿಹುವು ।
ಹೃದಯದಲಿ ಬುದ್ಧಿಯಲಿ ವಾಕ್ಚರ್ಯೆಗಳಲಿ ॥
ಇದಮಿತ್ಥಮೆಲ್ಲಿಹುದು ಮನುಜಸ್ವಭಾವದಲಿ? ।
ವಿಧಿಯ ಕೈಚಿತ್ರವದು-ಮಂಕುತಿಮ್ಮ ॥ ೧೯೯ ॥

ಹೊಟ್ಟೆಯೊಂದರ ರಗಳೆ ಸಾಲದೆಂದೇನೊ ವಿಧಿ ।
ಹೊಟ್ಟೆಕಿಚ್ಚಿನ ಕಿಡಿಯ ನೆಟ್ಟಿಹನು ನರನೊಳ್ ॥
ಹೊಟ್ಟೆತುಂಬಿದ ತೋಳ ಮಲಗೀತು; ನೀಂ ಪೆರರ ।
ದಿಟ್ಟಿಸುತ ಕರುಬುವೆಯೊ-ಮಂಕುತಿಮ್ಮ ॥ ೨೦೦ ॥

ಉರಿಯುತಿರೆ ಹೊಟ್ಟೆಕಿಚ್ಚಾರಿಸಲು ನೀರೆಲ್ಲಿ? ।
ನರಕವೇದೆಯಲಿ ನೆಲಸೆ ನಿದ್ದೆಗೆಡೆಯೆಲ್ಲಿ? ॥
ಹರಿಸಲಪ್ಪುದೆ ನರರು ಮತ್ಸರಿಯ ಸಂಕಟವ? ।
ಕರುಬಿದನ ಹರಿ ಪೊರೆಗೆ-ಮಂಕುತಿಮ್ಮ ॥ ೨೦೧ ॥

ರಾವಣನ ದಶಶಿರವದೇಂ? ನರನು ಶತಶಿರನು ।
ಸಾವಿರಾಸ್ಯಗಳನೊಂದರೊಳಣಗಿಸಿಹನು ॥
ಹಾವಾಗಿ ಹುಲಿಯಾಗಿ ಕಪ್ಪೆ ಹುಲ್ಲೆಯುಮಾಗಿ ।
ಭೂವ್ಯೋಮಕತಿಶಯನು-ಮಂಕುತಿಮ್ಮ ॥ ೨೦೨ ॥

ತಲೆಯೊಳಗೆ ನೆರೆದಿಹುವು ನೂರಾರು ಹಕ್ಕಿಗಳು ।
ಗಿಳಿ ಗೂಗೆ ಕಾಗೆ ಕೋಗಿಲೆ ಹದ್ದು ನವಿಲು ॥
ಕಿಲಕಿಲನೆ ಗೊರಗೊರನೆ ಕಿರಿಚಿ ಕೂಗುತ್ತಿಹುವು ।
ನೆಲೆಯೆಲ್ಲಿ ನಿದ್ದೆಗೆಲೊ?-ಮಂಕುತಿಮ್ಮ ॥ ೨೦೩ ॥

ದೇವಾಂಶ ಪಶ್ವಂಶಗಳ ಗಂಟು ಮಾನುಷತೆ ।
ಧೀವಿಮರ್ಶೆಯಿನೊಂದ ಸತ್ಕರಿಸಿ ಬಲಿಸಿ ॥
ಭಾವಪರಿಶೋಧನೆಯಿನಿನ್ನೊಂದ ದಂಡಿಪುದೆ ।
ಜೀವಪ್ರಕರ್ಷಗತಿ-ಮಂಕುತಿಮ್ಮ ॥ ೨೦೪ ॥

ಕಲ್ಲಾಗಿ ನಿಲ್ಲುವನು, ಬಳ್ಳಿವೊಲು ಬಳುಕುವನು ।
ಮುಳ್ಳಾಗಿ ಚುಚ್ಚುವನು, ಫುಲ್ಲಸುಮವಹನು ॥
ಕಲ್ಲೋಲವಾರಿಧಿವೊಲುರವಣಿಸಿ ಮೊರೆಯುವನು ।
ಕ್ಷುಲ್ಲಮಾನಿಸನಿವನು-ಮಂಕುತಿಮ್ಮ ॥ ೨೦೫ ॥

ಸತ್ತವೆನ್ನಾಶೆಗಳು, ಗೆದ್ದೆನಿಂದ್ರಿಯಗಣವ ।
ಚಿತ್ತವಿನ್ನಲುಗದೆಂಬಾ ಜಂಬ ಬೇಡ ॥
ಎತ್ತಣಿಂದಲೊ ಗಾಳಿ ಮೋಹಬೀಜವ ತಂದು ।
ಬಿತ್ತಲಾರದೆ ಮನದಿ-ಮಂಕುತಿಮ್ಮ ॥ ೨೦೬ ॥

ಒಣಗಿ ಬೇಸಗೆಯಿಂದ ಮಣ್ಣಾಗಿ ಕಾಣದಿಹ ।
ತೃಣ ಮೊಳೆಯುವುದು ಮರಳಿ ಹನಿಯೆರಡು ಬೀಳೆ ॥
ಅಣಗಿರ್ದು ನರನಾಶೆಯಂತು ಕಷ್ಟದ ದಿನದಿ ।
ಕುಣಿವುದನುಕೂಲ ಬರೆ - ಮಂಕುತಿಮ್ಮ ॥ ೨೦೭ ॥

ಬೆದಕಾಟ ಬದುಕೆಲ್ಲ; ಚಣಚಣವು ಹೊಸ ಹಸಿವು ।
ಅದಕಾಗಿ ಇದಕಾಗಿ ಮತ್ತೊಂದಕಾಗಿ ॥
ಅಧಿಕಾರ ಸಿರಿ ಸೊಗಸು ಕೀರ್ತಿಗಳ ನೆನೆದು ಮನ ।
ಕುದಿಯುತಿಹುದಾವಗಂ - ಮಂಕುತಿಮ್ಮ ॥ ೨೦೮ ॥

ದನ ಸಿಂಗ ಹುಲಿ ಹಕ್ಕಿ ಹಾವು ಮೀನ್ ಗಳಿಗೆಲ್ಲ ।
ಇನಿಸುಣಿಸು, ಬೆದೆ, ಬೆದರು - ಅಷ್ಟೆ ಜೀವಿತವು ॥
ಮನುಜನೆಂತನಿತರಿಂ ತೃಪ್ತಿವಡೆವನವಂಗೆ ।
ಕ್ಷಣಕ್ಷಣವು ಹೊಸ ಹಸಿವು - ಮಂಕುತಿಮ್ಮ ॥ ೨೦೯ ॥

ತಂಗಳುಣಿಸಾದೊಡಂ ಸಾಕೆನುವನುಪವಾಸಿ ।
ಸಿಂಗಾರ ಸಂಗಾತಿ ಬೇಕುಂಡವನಿಗೆ ॥
ಬಂಗಾರ ಪದವಿ ಪ್ರತಿಷ್ಠೆ ಬೇಕಾಬಳಿಕ ।
ಹಿಂಗದಾಯೆದೆಚೆಲುಮೆ - ಮಂಕುತಿಮ್ಮ ॥ ೧೦೦ ॥

ಮನಸು ಬೆಳೆದಂತೆಲ್ಲ ಹಸಿವು ಬೆಳೆಯುವುದಯ್ಯ ।
ತಣಿಸಲದನೊಗೆಯುವುದು ಬಗೆಬಗೆಯ ಯುಕ್ತಿ ॥
ಮನುಜನೇಳಿಗೆಯದರಿನ್; ಆ ಮನಸಿನೇಳಿಗೆಗೆ ।
ಕೊನೆಯೆಲ್ಲಿ? ಚಿಂತಿಸೆಲೊ - ಮಂಕುತಿಮ್ಮ ॥ ೧೦೧ ॥

ದಿನದಿನವು ಹಳಸುವುವು, ದಿನದಿನವು ಕೊಳೆಯುವುವು ।
ಮನುಜಕುಲದೆಲ್ಲ ಕೃತಿವಿಜಯವಿಭವಗಳು ॥
ಅನುದಿನವು ಮತ್ತವನು ತೊಳೆದು ಹೊಸತೆನಿಸುವುದೆ ।
ಜನುಮಸಫಲತೆ ನಿನಗೆ - ಮಂಕುತಿಮ್ಮ ॥ ೧೦೨ ॥

ಸಾಜಗುಣವೆಂದುಪೇಕ್ಷಿಪೆಯ ನಿನ್ನವಗುಣವ? ।
ಸಾಜವನು ಬಿಟ್ಟಲುಗದಿಹುದು ಮೃಗಕೀಟ ॥
ಸಾಜವಂ ಶಿಕ್ಷಿಸುತ ಲೋಕಸಂಸ್ಥಿತಿಗದನು ।
ಯೋಜಿಪುದೆ ನರಮಹಿಮೆ - ಮಂಕುತಿಮ್ಮ ॥ ೧೦೩ ॥

ಸಹಜ ನಗ್ನತೆ ನಮಗೆ, ಸಹಜ ನಖದಾಡಿಗಳು ।
ಬಹುಯುಗದ ಸಂಸ್ಕಾರ ವಸ್ತ್ರ ಸಿಂಗಾರ ॥
ಸಹಜತೆ ನಿರಕ್ಷರತೆ, ವಿದ್ಯೆ ತಾಂ ಕೃತಕವಲ ।
ಸಹಜಿದಿನೆ ಕೃತಕಮುಂ - ಮಂಕುತಿಮ್ಮ ॥ ೧೦೪ ॥

ಇಹುದಕಿಂತೊಳಿತಿಹುದು; ಒಳಿತ ಗಳಿಸಲ್ಬಹುದು ।
ಸಹಿಸಿಸುವೆನದಕೆನುವ ಮತಿಯಿನೇ ಪ್ರಗತಿ ॥
ರಹಸಿಯದ ಬುಗ್ಗೆಯದು, ಚಿಮ್ಮುತಿಹುದೆಲ್ಲರೊಳು ।
ಸಹಜವಾ ಮತಿ ಕೃತಕ - ಮಂಕುತಿಮ್ಮ ॥ ೧೦೫ ॥

ಸಿರಿ ಸೊಬಗುಗಳ ಬೆದಕು, ಕೆಳೆ ಬಲುಮೆಗಳ ಬೆದಕು ।
ಪರಬೊಮ್ಮ ನಾಟಕದ ವೇಷಚೇಷ್ಟೆ ॥
ಅರಸುತಿಹ ಜೀವ ನಾಯಕನು, ನಾಯಕಿಯವನ ।
ಕೆರಳಿಸುವ ಮೋಹರುಚಿ - ಮಂಕುತಿಮ್ಮ ॥ ೧೦೬ ॥

ಆಗಸದ ಬಾಗು, ಚಂದ್ರಮನ ಗುಂಡಿನ ನುಣ್ಪು ।
ಸಾಗರದ ತೆರೆವಂಕು, ಗಿಡಬಳ್ಳಿ ಬಳುಕು ॥
ಮೇಘವರ್ಣಚ್ಛಾಯೆ - ಯೀಸೃಷ್ಟಿಯಿಂ ನಮ್ಮೊ ।
ಳಾಗಿಹುದು ರೂಪರುಚಿ - ಮಂಕುತಿಮ್ಮ ॥ ೧೦೭ ॥

ಪರಿಪರಿಯ ರೂಪಿನಲಿ ಕಾಂತಿಯಲಿ ರಾಗದಲಿ ।
ನೆರೆಯಿಸುತ ಪರಿಪರಿಯ ರಸಗಳಂ ಪ್ರಕೃತಿ ॥
ಕೆರಳಿಸುತ  ಹಸಿವುಗಳ, ಸವಿಗಳನು ಕಲಿಸುವಳು ।
ಗುರು ರುಚಿಗೆ ಸೃಷ್ಟಿಯಲ - ಮಂಕುತಿಮ್ಮ ॥ ೧೦೮ ॥

ಅರೆಯರೆಯ ನಮಗೆ ತೋರ್ಪೊಲವು ಚೆಲುವುಗಳೆಲ್ಲ ।
ಪರಿಪೂರ್ಣ ಸುಖ ಸತ್ತ್ವ ಸಾಗರದ ತೆರೆಗಳ್ ॥
ತರಣಿ ದೂರದೊಳಿಹನು; ಕಿರಣ ನಮಗೆಟಕುವುದು ।
ತೆರೆಯು ನೆರೆತದ ಕುರುಹೊ - ಮಂಕುತಿಮ್ಮ ॥ ೧೦೯ ॥

ಸೌಂದರ್ಯ ಬಾಂಧವ್ಯಗಳು ಸತ್ಯವಲ್ಲದೊಡೆ ।
ಕುಂದುವಡೆಯದ ಸತ್ಯವಿಳೆಯೊಳಿನ್ನೆಲ್ಲಿ? ॥
ಗಂಧಾನಿಲಂಗಳವು ಪರಸತ್ತ್ವಪುಷ್ಪದವು ।
ಸಂದೇಹವೇನಲವೊ - ಮಂಕುತಿಮ್ಮ ॥ ೧೧೦ ॥

ಅರೆಗಳಿಗೆಯನುಭವವೆ ಮಾನಸವ ಕರಗಿಸದೆ? ।
ಪರಿಪಕ್ವಗೊಳಿಸದೇನದು ಜೀವರಸವ? ॥
ಉರಿ ತಣಿಪುಗಳಿನಾತ್ಮಸಂಸ್ಕಾರಗಳನೆಸಪ ।
ಪುರಳ ಪುಸಿಯೆನ್ನುವೆಯ? - ಮಂಕುತಿಮ್ಮ ॥ ೧೧೧ ॥

ಆವುದೋ ಒಳಿತೆಂದು ಆವುದೋ ಸೊಗವೆಂದು ।
ಆವಾವ ದಿಕ್ಕಿನೊಳಮಾವಗಂ ಬೆದಕಿ ॥
ಜೀವ ಪರಿಧಾವಿಪವೊಲ್ ಆಗಿಪಂತರ್ವೃತ್ತಿ ।
ಭಾವುಕದ ನೆಲೆಯ ಕರೆ - ಮಂಕುತಿಮ್ಮ ॥ ೧೧೧ ॥

ಒಡೆಯನಾವೆಡೆ ಸಾರ್ದನೆಂದು ಪದವಾಸನೆಯ ।
ತಡಕಿ ಮೂಸುತ ಶುನಕನಲೆದಾಡುವಂತೆ ॥
ಬಡಜಗವನೊಳಿತಕೆಂದತ್ತಿತ್ತ ಪುಡುಕಿಸುವ ।
ಬೆಡಗು ಶಿವನೊಡವೆಯದೊ - ಮಂಕುತಿಮ್ಮ ॥ ೧೧೨ ॥

ಅದು ಬೇಕು ಇದು ಬೇಕು ಮತ್ತೊಂದು ಬೇಕೆಂದು ।
ಬೆದಕುತಿರುವುದು ಲೋಕ ಸೊಗದಿರವನೆಳಸಿ ॥
ಹೃದಯಗುಹೆಯಾ ಸುಖಧ್ಯಾನದೂಟೆಯೆ ಸಾಕ್ಷಿ ।
ಮುದಗಳಮಿತದ ನಿಧಿಗೆ - ಮಂಕುತಿಮ್ಮ ॥ ೧೧೪ ॥

ಶರಧಿಯೊಳಗಣ ವಸ್ತುಗಳನಲಚಿ ಜಾಲಿಸುವ ।
ತೆರೆಯಂತೆ ವಿಶ್ವಸತ್ತ್ವದ ಲಹರಿ ನಮ್ಮ ॥
ಹೊರಗೊಳಗುಗಳಲಿ ಸಂತತ ನೆರೆದು ಹರಿಯುತ್ತ ।
ಭರಿಸುತಿರುವುದು ಬಾಳ - ಮಂಕುತಿಮ್ಮ ॥ ೧೧೫ ॥

ಉಸಿರವೊಲನುಕ್ಷಣಂ ಪುರುಷನೊಳವೊಗುತವನ ।
ಪೊಸಬನಂಗೆಯ್ದು ದೈವಿಕಸತ್ತ್ವಮವನುಂ ॥
ಪೊಸತನವನ್ ಉಳಿದ ಲೋಕಕೆ ನೀಡೆ ದುಡಿವಂತೆ ।
ಬೆಸಸುತಿಹುದೇಗಳುಂ - ಮಂಕುತಿಮ್ಮ ॥ ೧೧೬ ॥

ನೂತ್ನತೆಯ ಪೂರ್ಣತೆಯನನ್ಯೂನತೆಯ ಗಳಿಪ ।
ಯತ್ನಮೆ ಪೌರುಷಪ್ರಗತಿ; ಅದೆ ಪ್ರಕೃತಿ ॥
ವಿಜ್ಞಾನ ಶಾಸ್ತ್ರ ಕಲೆ ಕಾವ್ಯ ವಿದ್ಯೆಗಳೆಲ್ಲ ।
ಧನ್ಯತೆಯ ಬೆದಕಾಟ - ಮಂಕುತಿಮ್ಮ ॥ ೧೧೭ ॥

ಮತಿಯು ತಾಂ ಸತ್ಯಶುಭಗಳ ನವನವಾಂಶಗಳ ।
ಗತಿಯನರಸುತ ನಡೆಯೆ ಪೌರುಷಪ್ರಗತಿ ॥
ಮತ ನೀತಿ ಶಾಸ್ತ್ರಗಳು ರಾಜ್ಯಸಂಧಾನಗಳು ।
ಮತಿಯ ಕಿಂಚಿದ್ವಿಜಯ - ಮಂಕುತಿಮ್ಮ ॥ ೧೧೮ ॥

ತೊರೆಯ ತೆರೆಸಾಲ್ಗಳೇಳುತ ಬೀಳುತಿರುವಂತೆ ।
ಪರಿಯುತಿರ್ಪುದು ಪುರುಷಚೈತನ್ಯಲಹರಿ ॥
ಅರಿಯದದು ನಿಲುಗಡೆಯ, ತೊರೆಯದದು ಚಲಗತಿಯ ।
ಪರಬೊಮ್ಮನುಯ್ಯಲದು - ಮಂಕುತಿಮ್ಮ ॥ ೧೧೯ ॥

ತೆರೆಯೇಳುವುದು ದೈವಸತ್ತ್ವ ನರನೊಳು ನೆರೆಯೆ ।
ತೆರೆ ಬೀಳುವುದು ಕರ್ಮವಿಧಿಯಿದಿರು ಪರಿಯೆ ॥
ತೆರೆಯನಾನುತೆ ತಗ್ಗು, ತಗ್ಗನಾನುತಲಿ ತೆರೆ ।
ತೆರೆತಗ್ಗುಗಳಿನೆ ತೊರೆ - ಮಂಕುತಿಮ್ಮ ॥ ೧೨೦ ॥

ಇಂದೆದ್ದ ತೆರೆ ನಾಳೆ ಬೀಳುವುದು; ಮರುವಗಲು ।
ಮುಂದೆ ತಾನೇಳುವುದು ಬೇರೆ ಗಾತ್ರದಲಿ ॥
ಇಂದು ನಾಳೆಗಳನೆಲ್ಲವ ಕೂಡಿ ನೋಡಿದೊಡೆ ।
ಮುಂದಹುದು ಬೆರಗೊಂದೆ - ಮಂಕುತಿಮ್ಮ ॥ ೧೨೧ ॥

ಬೀಳುವುದ ನಿಲ್ಲಿಪುದು, ಬಿದ್ದುದನು ಕಟ್ಟುವುದು ।
ಹಾಲೊಡೆಯೆ ಕಡೆದದನು ತಕ್ರವಾಗಿಪುದು ॥
ಹಾಳ ಹಾಳಾಗಿಪುದು, ಹಳದ ಹೊಸತಾಗಿಪುದು ।
ಬಾಳಿಗಿದೆ ಚಿರಧರ್ಮ - ಮಂಕುತಿಮ್ಮ ॥ ೧೨೨ ॥

ಸೃಷ್ಟಿಯ ವಿಧಾನದಲಿ ಸೊಟ್ಟಗಳು ನೂರಿಹುವು ।
ನೆಟ್ಟಗಿಪೆನ್ ಅವನ್ ಎಂದು ನರರ ಚಿರದೀಕ್ಷೆ ॥
ಇಷ್ಟಗಳನನ್ಯೋನ್ಯವವರೇಕೆ ಬಗೆದಿರರು? ।
ನಿಷ್ಠುರಪ್ರಿಯರವರು - ಮಂಕುತಿಮ್ಮ ॥ ೧೨೩ ॥

ಕಣ್ಣೆರಡದೇಕೆರಡುಮೊಂದೆ ಪಕ್ಕದೊಳೇಕೆ? ।
ಬೆನ್ನೊಳೊಂದೆದೆಯೊಳೊಂದಿರಲು ಸುಕರವಲ? ॥
ಅನ್ಯಾಯ ವಿಕಟಂಗಳೆನಿತೊ ಸೃಷ್ಟಿಕ್ರಮದಿ! ।
ಸೊನ್ನೆ ಜನವಾಕ್ಕಲ್ಲಿ - ಮಂಕುತಿಮ್ಮ ॥ ೧೩೪ ॥

ಧರೆ ಸಸ್ಯಫಲದಿ ಜೀವಿಗೆ ಪುಷ್ಟಿಯಿತ್ತೊಡೇಂ? ।
ಮರಳಿ ತಾಂ ಪಡೆಯಳೇನ್ ಅವನಿನರ್ಥವನು? ॥
ಧರಣಿಗೇ ನಮ್ಮೊಡಲು ಹುಗ್ಗುಡುಬು ತಪ್ಪಲೆಯೊ! ।
ಪರಮೇಷ್ಠಿ ಯುಕ್ತಿಯದು - ಮಂಕುತಿಮ್ಮ ॥ ೧೩೫ ॥

ತರುಜಾತಿ ಖಗಜಾತಿ ಮೃಗಜಾತಿಗಳು ನೂರು ।
ನರಜಾತಿ ಮಿಕ್ಕ ಜಾತಿಗಳಿಂದ ಬೇರೆ ॥
ನರರೊಳೋರೊರ್ವನುಂ ತಾನೊಂದು ಬೇರೆ ಜಗ ।
ಬೆರಕೆ ಸಾಮ್ಯಾಸಾಮ್ಯ - ಮಂಕುತಿಮ್ಮ ॥ ೧೩೬ ॥

ನೆಲವೊಂದೆ, ಹೊಲ ಗದ್ದೆ ತೋಟ ಮರಳೆರೆ ಬೇರೆ ।
ಜಲವೊಂದೆ, ಸಿಹಿಯುಪ್ಪು ಜವುಗೂಟೆ ಬೇರೆ ॥
ಕುಲವೊಂದರೊಳೆ ಸೋದರವ್ಯಕ್ತಿಗುಣ ಬೇರೆ ।
ಹಲವುಮೊಂದುಂ ಸಾಜ - ಮಂಕುತಿಮ್ಮ ॥ ೧೩೭ ॥

ಮನುಜಕುಲವೊಂದೊಬ್ಬನಿನ್ನೊಬ್ಬನಂತಿಲ್ಲ ।
ತನುವಂಗಗಳೊಳೊಂದು, ರೂಪ ಗುಣ ಬೇರೆ ॥
ಮನದೊಳೊಬ್ಬೊಬ್ಬನೊಂದೊಂದು, ಪ್ರಪಂಚವಿಂ ।
ತನುವೇಕದೊಳ್ ಬಹುಳ - ಮಂಕುತಿಮ್ಮ ॥ ೧೩೮ ॥

ಸಮವಿಲ್ಲ ಸೃಷ್ಟಿಯಲಿ, ನರನಂತೆ ನರನಿಲ್ಲ ।
ಕ್ಷಮೆಯುಮವಳೊಳಗಿಲ್ಲ, ಕರ್ಮದಂತೆ ಫಲ ॥
ಕ್ರಮವೊಂದ ನೀಮಾಗಿಸಿರಿ ನೋಳ್ಪೆನಾನೆನುತೆ ।
ನಮಗವಳ್ ಪ್ರಸ್ಪರ್ಧಿ - ಮಂಕುತಿಮ್ಮ ॥ ೧೩೯ ॥

ಬೆರಳುಗಳ ನೋಡವುಗಳೊಂದರಂತೊಂದಿಲ್ಲ ।
ಕರಧರ್ಮಕುಚಿತವಾ ಹೆಚ್ಚು ಕಡಮೆಗಳು ॥
ಪುರಳ ಪಿಡಿವುವೆ ಬೆರಳ್ಗಳೆಲ್ಲಮೊಂದುದ್ದವಿರೆ? ।
ಸರಿಯಹುದು ಕಾರ್ಯದಲಿ - ಮಂಕುತಿಮ್ಮ ॥ ೧೪೦ ॥

ಅಸಮದಲಿ ಸಮತೆಯನು ವಿಷಮದಲಿ ಮೈತ್ರಿಯನು ।
ಅಸಮಂಜಸದಿ ಸಮನ್ವಯ ಸೂತ್ರ ನಯವ ॥
ವೆಸನಮಯ ಸಂಸಾರದಲಿ ವಿನೋದವ ಕಾಣ್ಬ ।
ರಸಿಕತೆಯೆ ಯೋಗವಲೊ - ಮಂಕುತಿಮ್ಮ ॥ ೧೪೧ ॥

ಐಕ್ಯ ನಾನಾತ್ವಗಳು, ನಿಯತಿ ಸ್ವತಂತ್ರಗಳು ।
ತರ್ಕ್ಯ ನಿಸ್ತರ್ಕ್ಯಗಳು ಬೆರೆತು ಚಿತ್ರದಲಿ ॥
ಶಕ್ಯಮುಂ ಪುರುಷತಂತ್ರಕ್ಕಶಕ್ಯಮುಮಾದ ।
ಸಿಕ್ಕುಗಳ ಕಂತೆ ಜಗ - ಮಂಕುತಿಮ್ಮ ॥ ೧೪೨ ॥

ಸಮವರ್ತಿಗಳು ಜಗದೊಳಿಬ್ಬರೇ ದಿಟವರಿಯೆ ।
ಯಮರಾಜನೊಬ್ಬ ಜಾಠರರಾಜನೊಬ್ಬ ॥
ಶ್ರಮವನನುದಿನಮುಮಾಗಿಪನೊಬ್ಬನೆಲ್ಲವನು ।
ಶಮಿಸಿ ಮುಗಿಸುವನೊಬ್ಬ - ಮಂಕುತಿಮ್ಮ ॥ ೧೪೩ ॥

ಒಲ್ಲೆನೆನುವರದಾರ್ ಅಹಿಂಸೆತತ್ತ್ವದ ಸೊಬಗ? ।
ಸಲ್ಲಿಸುವೆನಾ ವ್ರತವನೆನಲೊಂದು ತೊಡಕು ॥
ಹುಲ್ಲೆಯನು ತಿನುವ ಹುಲಿಯೊಣಹುಲ್ಲನುಣಲಹುದೆ ।
ಎಲ್ಲಿ ಸೃಷ್ಟಿಯಲಿ ದಯೆ? - ಮಂಕುತಿಮ್ಮ ॥ ೧೪೪ ॥

ಕೊಲೆಗಡಿಕನೆನಿಪ ಹುಲಿ ಸಲಹದೇಂ ಮರಿಗಳನು? ।
ಒಲುಮೆಕರುಳಡಗಿಹುದು ಪಗೆತನದ ಪೊದೆಯೊಳ್ ॥
ನಲುಮೆಯನು ಹೊರಹೊಮ್ಮಿಸುವುದು ನರನುನ್ನತಿಕೆ ।
ಒಲವಾತ್ಮವಿಸ್ತರಣ - ಮಂಕುತಿಮ್ಮ ॥ ೧೪೫ ॥

ಪ್ರೇಮಬೀಜಗಳಿಹುವು ವೈರಬೀಜಗಳವೊಲೆ ।
ಸೌಮ್ಯಮುಂ ಸಂಕ್ಷೋಭೆಯಂತೆ ಪ್ರಕೃತಿಯಲಿ ॥
ಭ್ರಾಮಕದ ಸೃಷ್ಟಿಯಾ ವಿಷಮಲಕ್ಷಣಗಳಲಿ ।
ಸಾಮರಸ್ಯವನರಸೊ - ಮಂಕುತಿಮ್ಮ ॥ ೧೪೬ ॥

ಮನದಿಂದ ಮನಕೆ ಪಾರ್ವುದು ಬಾಳಿನುರಿಯ ಕಿಡಿ ।
ಮನೆಯಿಂದ ಮನೆಗಲೆವ ಗಾಳಿ ಹೊಗೆಯಂತೆ ॥
ಮನುಜರ ಪರಸ್ಪರೋದ್ರೇಕ ಜಗದ ವಿಲಾಸ ।
ಮನವೆ ಪರಮಾದ್ಭುತವೊ - ಮಂಕುತಿಮ್ಮ ॥ ೧೪೭ ॥

ತೆರಿಗೆಗಳು ಹಲವುಂಟು ಪ್ರಕೃತಿಗಂ ಸಲ್ಲುವುವು ।
ತೆರದೆ ನೀಂ ಮರೆಯೆ ದಂಡಿಪಳಾಕೆ ಮುನಿದು ॥
ಕರಣಂಗಳಾಕೆಯವು ಮಿತದೊಳವುಗಳ ಬಳಸಿ ।
ತೆರು ಸಲುವ ಬಾಡಿಗೆಯ - ಮಂಕುತಿಮ್ಮ ॥ ೧೪೮ ॥

ಹಾಳು ಹಾಳೆಲ್ಲ ಬಾಳೆನ್ನುತಿರ್ದೊಡೆಯುಮದ- ।
ರೊಳಿಗವ ತಪ್ಪಿಸುವ ಜಾಣನೆಲ್ಲಿಹನು? ॥
ಊಳಿಗವೊ ಕಾಳಗವೊ ಕೂಕ್ಕರೆಯೊ ಗೋಳ್ಕರೆಯೊ ।
ಬಾಳು ಬಾಳದೆ ಬಿಡದು - ಮಂಕುತಿಮ್ಮ ॥ ೧೪೯ ॥

ಜೀವನವದೊಂದು ಪರಮೈಶ್ವರ್ಯ ಬೊಮ್ಮನದು ।
ಸೇವೆಯದನೂರ್ಜಿತಂಗೊಳಿಸುವೆಲ್ಲಸಕ ॥
ಈವರಾರ್ ಕೊಳುವರಾರೆಲ್ಲರೊಂದಾಗಿರಲು? ।
ನೈವೇದ್ಯಭಾಗಿ ನೀಂ - ಮಂಕುತಿಮ್ಮ ॥ ೧೫೦ ॥

ತಲೆಯಮೇಗಡೆ ಬೇರು, ಕೆಳಗೆ ಕೊಂಬೆಲೆ ಚಿಗುರು ।
ಬಿಳಲೂರೆಗಳ ಲೆಕ್ಕಕಿಲ್ಲ ಕೊನೆ ಮೊದಲು ॥
ಬೆಳೆವುದೀ ಪರಿಯರಳಿಮರದಂತೆ ನರಕೋಟಿ ।
ನಲಿವನದರಲಿ ಬೊಮ್ಮ - ಮಂಕುತಿಮ್ಮ ॥ ೧೫೧ ॥

ಒಂದು ಕೊಂಬೆಯು ಬಾಡಲಿನ್ನೊಂದು ಚಿಗುರುವುದು ।
ಸಂದಿಹುದು ಚಿರನವತೆಯಶ್ವತ್ಥಮರಕೆ ॥
ಎಂದೆಂದುಮಂತಿರುವುದೀ ವಿಶ್ವವೃಕ್ಷವದ ।
ರೊಂದು ರೆಂಬೆಯೊ ನೀನು - ಮಂಕುತಿಮ್ಮ ॥ ೧೫೨ ॥

ಅಂದಂದಿಗಾದನಿತು ಬುಡ ಕಟ್ಟಿ ಕಳೆ ತೆಗೆದು ।
ಚೆಂದಳಿರು ದಿನದಿನಮುಮೊಗೆಯೆ ನೀರೆರೆದು ॥
ಸಂದ ಬಲದಿಂದ ಜಗದಶ್ವತ್ಥ ಸೇವೆಯಲಿ ।
ನಿಂದಿರುವುದಲೆ ಧರ್ಮ - ಮಂಕುತಿಮ್ಮ ॥ ೧೫೩ ॥

ನಾಟಕವ ನೋಡು ಬ್ರಹ್ಮಾಂಡರಂಗಸ್ಥಲದಿ ।
ಕೋಟಿ ನಟರಾಂತಿಹರು ಚಿತ್ರಪಾತ್ರಗಳ ॥
ಆಟಕ್ಕೆ ಕಥೆಯಿಲ್ಲ ಮೊದಲಿಲ್ಲ ಕಡೆಯಿಲ್ಲ ।
ನೋಟಕರು ಮಾಟಕರೆ - ಮಂಕುತಿಮ್ಮ ॥ ೧೫೪ ॥

ನಾಟಕದೊಳನುವಿಂದ ಬೆರತದನು ಮೆಚ್ಚೆನಿಸಿ ।
ನೋಟಕನುಮಾಗಿ ತಾಂ ನಲಿದು ನಲಿಯಿಸುವಾ ॥
ಪಾಠವನು ಕಲಿತವನೆ ಬಾಳನಾಳುವ ಯೋಗಿ ।
ಆಟಕಂ ನಯವುಂಟು - ಮಂಕುತಿಮ್ಮ ॥ ೧೫೫ ॥

ಪರದ ಮೇಲ್ಕಣ್ಣಿಟ್ಟು ಧರೆಯ ತುಚ್ಛವೆನುತ್ತ ।
ತೊರೆದಾಯಸಂಗೊಳ್ಳೆ ದೊರೆವ ಫಲವೇನು? ॥
ಸುರಧನುವಿಗೇಣಿಯಿಡಹೊರಟು ನಿನ್ನಂಗಳದ ।
ಕಿರಿಹೂವ ಮರೆಯುವೆಯ - ಮಂಕುತಿಮ್ಮ ॥ ೧೫೬ ॥

ಪರಕಿಹವೆ ಸೋಪಾನವೆಂದು ನೀನೊಪ್ಪುವೊಡೆ ।
ಪರಕಿಂತಲಿಹವೆಂತು ಜೊಳ್ಳದಾದೀತು? ॥
ಹೊರಲೆಬೇಕಂತಾದೊಡಿಹದ ಹೊರೆಗಳನೆಲ್ಲ ।
ಜರೆವುದೇಕಿನ್ನದನು? - ಮಂಕುತಿಮ್ಮ ॥ ೧೫೭ ॥

ಒಲ್ಲೆನೆನದಿರು ಬಾಳನ್, ಒಲವದೇನೆನ್ನದಿರು ।
ಉಲ್ಲಾಸಕೆಡೆಮಾಡು ನಿನ್ನನಾದನಿತು ॥
ನಿಲ್ಲು ಕೆಚ್ಚೆದೆಯಿಂದಲನ್ಯಾಯಗಳನಳಿಸೆ ।
ಎಲ್ಲಕಂ ಸಿದ್ಧನಿರು - ಮಂಕುತಿಮ್ಮ ॥ ೧೭೮ ॥

ಕಡಲ ಕಡೆದರು ಸುರಾಸುರರು ನಿಜಬಲದಿಂದ ।
ಕುಡಿದನದನು ತಪಸ್ಸಿನಿಂದ ಕುಂಭಜನು ॥
ಕಡಮೆಜನ ಪಾರಗಾಂಬರೆ ಗಾಸಿಯನು ಪಡದೆ? ।
ಪೊಡವಿ ಬಾಳ್ವೆಯುಮಂತು - ಮಂಕುತಿಮ್ಮ ॥ ೧೭೯ ॥

ದ್ರಾಕ್ಷಿರಸವೇನಲ್ಲ ಜೀವನದ ತಿರುಳಾರ್ಗಮ್ ।
ಇಕ್ಷುದಂಡದವೊಲದು ಕಷ್ಟಭೋಜನವೆ ॥
ದಕ್ಷತೆಯಿನಿಡಿಯುವಂಗೊಂದೆರಡು ಗುಟುಕು ರಸ ।
ಮಾಕ್ಷಿಕರು ಮಿಕ್ಕೆಲ್ಲ - ಮಂಕುತಿಮ್ಮ ॥ ೧೮೦ ॥

ಆಟವೋ ಮಾಟವೋ ಕಾಟವೋ ಲೋಕವಿದು! ।
ಊಟ ಉಪಚಾರಗಳ ಬೇಡವೆನ್ನದಿರು ॥
ಪಾಟವವು ಮೈಗಿರಲಿ, ನೋಟ ತತ್ತ್ವದೊಳಿರಲಿ ।
ಪಾಠಿಸು ಸಮನ್ವಯವ - ಮಂಕುತಿಮ್ಮ ॥ ೧೮೧ ॥

ಒಂದು ಕಣ್ಣಳುವಂದು ಮತ್ತೊಂದ ತಳ್ಕೈಸಿ ।
ಅಂದ ಚೆಂದಗಳ ಜನವರಸುವುದು ಬಾಳೊಳ್ ॥
ಬಂಧುಮೋಹವೊ ಯಶವೊ ವೈರವೋ ವೈಭವವೊ ।
ಬಂಧಿಪುದು ಜಗಕವರ - ಮಂಕುತಿಮ್ಮ ॥ ೧೮೨ ॥

ಬಾಳು ಪಾಳೆನ್ನುವರ ಬಿಟ್ಟಿಹುದೆ ಬೆದಕಾಟ? ।
ತಾಳಿದರೆ ಬಾಳನಂತಹರುಮ್ ಆಶೆಯಲಿ? ॥
ಕಾಲವಿನ್ನಿರದಿಂತು ನಾಳೆ ನೋಡುವಮೆನುತ ।
ಮೇಲನೆ ನಿರೀಕ್ಷಿಪರು - ಮಂಕುತಿಮ್ಮ ॥ ೧೮೩ ॥

ಳಾಡಲುಂ ಬೇಡ, ಲೋಲಾಪ್ತಿಯುಂ ಬೇಡ ।
ಬಾಳು ಪರಚೇತನದ ಕೇಳಿಯೆಂದೆಣಿಸಿ ॥
ಪಾಲಿಗನು ನೀನದರೊಳೆನಿಪಂತೆ ಬಾಳುತಿರು ।
ಕೇಳಿಯುಂ ಧರ್ಮವೆಲೊ - ಮಂಕುತಿಮ್ಮ ॥ ೧೮೪ ॥

ಬಾಳ ಸಿರಿ ಸೊಗಸುಗಳ ಪೆರ್ಚಿಪನು ಖೇಲಕನು ।
ಕೀಳದೆನಿಪವನೊರಟ, ಮಂಕ, ಕಲ್ಲೆದೆಗ ॥
ತೋಳಿಂದೆ ತಿಳಿವಿಂದೆ ನುಡಿಯಿಂದೆ ಜಗದರಿವ ।
ಮೇಲೆನಿಪವನೆ ರಸಿಕ - ಮಂಕುತಿಮ್ಮ ॥ ೧೮೫ ॥

ಬಾಳ ಹಳಿವುದದೇಕೆ? ಗೋಳ ಕರೆವುದದೇಕೆ? ।
ಬಾಳಿದಲ್ಲದೆ ತಪ್ಪದೇನ ಮಾಡಿದೊಡಂ ॥
ಕೇಳಿಯದು ಬೊಮ್ಮನಾಡಿಪನು ನೀನದರೊಳಗೆ ।
ಪಾಲುಗೊಳಲಬೇಡ - ಮಂಕುತಿಮ್ಮ ॥ ೧೮೬ ॥

ಲೀಲೆಯೇಂ ಬಾಳೆಲ್ಲ? ಛೀ ತಳ್ಳು ಹಾಸ್ಯವನು ।
ಬಾಲರೇಂ ನಾವಿನ್ನುಮೆನುತ ಪಲ್ಕಡಿದು ॥
ಖೇಲನವ ಬೇಡವೆನುವರನು ವಿಧಿರಾಯನವ- ।
ಹೇಳಿಪನು ಸೆರೆವಿಡಿದು - ಮಂಕುತಿಮ್ಮ ॥ ೧೮೭ ॥

ನಾಚಿಕೆಯದೇಕೆ ನೀಂ ಬದುಕಿನಲಿ ಸೊಗವಡಲು? ।
ಚಾಚುದಿಹುದಾತ್ಮ ನಾಲಗೆಯ ದೆಸೆದೆಸೆಗೆ ॥
ಬಾಚಿಕೊಳಲಮೃತಕಣಗಳನೆಲ್ಲ ತನ್ನೆಡೆಗೆ ।
ಸಾಜ ಸೊಗವಾತ್ಮಂಗೆ - ಮಂಕುತಿಮ್ಮ ॥ ೧೮೮ ॥

ಸುಂದರವನೆಸಗು ಜೀವನದ ಸಾಹಸದಿಂದೆ ।
ಕುಂದಿಲ್ಲವದಕೆ ಸಾಹಸಭಂಗದಿಂದೆ ॥
ಮುಂದಕದು ಸಾಗುವುದು ಮರಳಿ ಸಾಹಸದಿಂದೆ ।
ಚೆಂದ ಧೀರೋದ್ಯಮವೆ - ಮಂಕುತಿಮ್ಮ ॥ ೧೮೯ ॥

ಎಲ್ಲರಿಗಮಾಗಿ ತಾನ್, ಎಲ್ಲರುಂ ತನಗಾಗಿ ।
ನಿಲ್ಲುವೇಕಾತ್ಮತೆಯ ಬಾಳ್ವೆಯಿಂ ಕಲಿಯಲ್ ॥
ಸಲ್ಲುವುಪಕರಣಗಳು ಮನೆ ರಾಜ್ಯ ಸಂಸಾರ- ।
ವಲ್ಲಗಳೆಯದಿರವನು - ಮಂಕುತಿಮ್ಮ ॥ ೧೭೦ ॥

ವ್ಯರ್ಥವೀ ಜೀವನದ ಬಡಿದಾಟವೆನ್ನದಿರು ।
ಅರ್ಥವಹುದದು ನಿನಗೆ ಪೂರ್ಣದರ್ಶನದಿಂ ॥
ನರ್ತಿಪನು ಜಡಜೀವರೂಪಂಗಳಲಿ ।
ಪೂರ್ತಿಯಿದನರಿಯೆ ಸೊಗ - ಮಂಕುತಿಮ್ಮ ॥ ೧೭೧ ॥

ಬೊಮ್ಮನೇ ಸಂಸೃತಿಯ ಕಟ್ಟಿಕೊಂಡುತ್ಸಹಿಸೆ ।
ಸುಮ್ಮನರೆಚಣವಿರದೆ ಪ್ರಕೃತಿ ತೊಡಗುತಿರೆ ॥
ಜನ್ಮ ಸಾಕೆನುವುದೇ? ದುಮ್ಮಾನವಡುವುದೇಂ? ।
ಚಿಮ್ಮುಲ್ಲಸವ ಧರೆಗೆ - ಮಂಕುತಿಮ್ಮ ॥ ೧೭೨ ॥

ಕೋಟಿ ದೆಸೆಯುಸಿರುಗಳು, ಕೋಟಿ ರಸದಾವಿಗಳು ।
ಕೋಟಿ ಹೃದಯದ ಹೋಹೊ ಹಾಹಕಾರಗಳು ॥
ಕೂಟ ಕೂಡಿಹುವಂತರಿಕ್ಷದಲಿ ನೀನದರಿನ್ ।
ಓಟವೋಡುವುದೆತ್ತ? - ಮಂಕುತಿಮ್ಮ ॥ ೧೭೩ ॥

ನಯದಿಂದ ಸೋಕು, ನೀಂ ದಯೆಯಿಂದ ನೋಡದನು ।
ಭಯದಿನೋಲಗಿಸು, ನೀಂ ಪೂಜೆಗೈಯದನು ॥
ಸ್ವಯಮಂಕುರಿತ ಸಕಲ ವಿಶ್ವಸತ್ತ್ವವೊ; ಜೀವ ।
ಪ್ರಿಯತಮವೊ ಸೃಷ್ಟಿಯಲಿ - ಮಂಕುತಿಮ್ಮ ॥ ೧೭೪ ॥

ಸರ್ವರುಂ ಸಾಧುಗಳೆ ಸರ್ವರುಂ ಬೋಧಕರೆ ।
ಜೀವನಪರೀಕ್ಷೆ ಬಂದಿದಿರು ನಿಲುವನಕ ॥
ಭಾವಮರ್ಮಂಗಳೇಳುವುವಾಗ ತಳದಿಂದ ।
ದೇವರೇ ಗತಿಯಾಗ - ಮಂಕುತಿಮ್ಮ ॥ ೧೭೫ ॥

ಎಲ್ಲರುಂ ಜಿತಮನಸ್ಕರೆ ದೈವ ವಿಧಿ ಮಾಯೆ ।
ಚೆಲ್ವರೂಪಿಂ ಬಂದು ಕಣ್ಕುಕ್ಕುವನಕ ॥
ವಲ್ಗುರೂಪೆ ಸುಭದ್ರೆ ಕಣ್ಮುಂದೆ ಸುಳಿವನಕ ।
ಫಲ್ಗುಣನು ಸಂನ್ಯಾಸಿ - ಮಂಕುತಿಮ್ಮ ॥ ೧೭೬ ॥

ಧಾರುಣೀಸುತೆಯವೊಲು ದೃಢಮನಸ್ಕರದಾರು? ।
ಮಾರೀಚಹರಣವಡ್ಡಾದರ್ಲೇನಾಯ್ತು? ॥
ವಾರಿಧಿಯೊಳಡಗಿ ನಿದ್ರಿಪ ಬಾಡವವೊ ತೃಷ್ಣೆ ।
ಆರದನು ಕೆರಳಿಪರೊ! - ಮಂಕುತಿಮ್ಮ ॥ ೧೭೭ ॥

ಆನೆಗಾರ್ ಇರುವೆಗಾರ್ ಕಾಗೆಗಾರ್ ಕಪ್ಪೆಗಾರ್ ।
ಕಾಣಿಸುವರನ್ನವನು? ಹಸಿವವರ ಗುರುವು ॥
ಮಾನವನುಮಂತುದರಶಿಷ್ಯನವನಾ ರಸನೆ ।
ನಾನಾವಯುವಗಳಲಿ - ಮಂಕುತಿಮ್ಮ ॥ ೧೭೮ ॥

ಯಮನಿಗೇಕಪಕೀರ್ತಿ? ನರರು ಬಲು ಕರುಣಿಗಳೆ? ।
ಮಮತೆಯಿನೊ ರೋಷದಿನೊ ಹಾಸ್ಯದಿನೊ ಹೇಗೋ ॥
ನಿಮಿಷನಿಮಿಷಮುಮೊರ್ವನಿನ್ನೊರ್ವನನು ತಿಕ್ಕಿ ।
ಸಮೆಯಿಸುವನಾಯುವನು - ಮಂಕುತಿಮ್ಮ ॥ ೧೭೯ ॥

ದೋಷಿಯವನಿವನು ಪಾಪಿಯೆನುತ್ತ ಗಳಹದಿರು ।
ಆಶೆಯೆನಿತವನು ಸಹಿಸಿದನೊ! ದಹಿಸಿದನೊ! ॥
ವಾಸನೆಗಳವನನೇನೆಳದವೋ ಬಲವೆನೊ! ।
ಪಾಶಬದ್ಧನು ನರನು - ಮಂಕುತಿಮ್ಮ ॥ ೧೮೦ ॥

ಪಾತಕಿಯೊಳಾಗ್ರಹವ ತೋರೆ ನಿರ್ಮಲನಾರು? ।
ಆತುಮದ ಪರಿಕಥೆಯನರಿತವರೆ ನಾವು? ॥
ಸೋತ ದುರ್ಬಲಿಗೆ ಸಲ್ಲುವುದು ನಮ್ಮನುಕಂಪೆ ।
ನೀತಿ ನಿಂದೆಯೊಳಿರದು - ಮಂಕುತಿಮ್ಮ ॥ ೧೮೧ ॥

ಪಾಪವೆಂಬುದದೇನು ಸುಲಭಸಾಧನೆಯಲ್ಲ ।
ತಾಪದಿಂ ಬೇಯದವನ್ ಅದನೆಸಪನಲ್ಲ ॥
ವಾಪಿಯಾಳವ ದಡದಿ ನಿಂತಾತನರಿವನೇಂ? ।
ಪಾಪಿಯೆದೆಯೊಳಕಿಳಿಯೊ - ಮಂಕುತಿಮ್ಮ ॥ ೧೮೨ ॥

ರಾವಣನ ಹಳಿವವನೆ, ಜೀವವನೆ ಬಿಸುಡಿಸುವ ।
ಲಾವಣ್ಯವೆಂತಹುದೊ? ನೋವದೆಂತಹುದೊ? ॥
ಬೇವಸವ ಪಟ್ಟು ತಿಳಿ; ತಿಳಿದು ಹಳಿಯುವೊಡೆ ಹಳಿ ।
ಗಾವಿಲನ ಗಳಹೇನು? - ಮಂಕುತಿಮ್ಮ ॥ ೧೮೩ ॥

ಜೀವಋಣಗಳ ಲೆಕ್ಕದಾದಿಯರಿಯದ ನಾವು ।
ಆವುದನು ಸರಿಯೆನುವ?ತಪ್ಪಾವುದೆನುವ? ॥
ಓವೊ ಬಿಡು ಕಡುಕಷ್ಟ ನೀತಿನಿರ್ಣಯದ ಹೊರೆ ।
ದೈವವದ ಹೊರಲಿ ಬಿಡು - ಮಂಕುತಿಮ್ಮ ॥ ೧೮೪ ॥

ನಾಚಿಕೆಯನಾಗಿಪುವು ನಮ್ಮ ಸುಖದಾತುರದ ।
ಯೋಚನೆಗಳವನು ಮರುವಗಲು ಪರಿಕಿಸಲು ॥
ಚಾಚಿದ್ದ ರಸನೆ ತಾನೊಳಸೇದಿಕೊಳ್ಳುವುದು ।
ರೇಚನವದಾತ್ಮಕ್ಕೆ - ಮಂಕುತಿಮ್ಮ ॥ ೧೮೫ ॥

ಸನ್ನಿಹಿತ ಮನುಜನಲಿ ದೈವಪಾಶವವೆರಡು ।
ಪುಣ್ಯ ಪಾಪದ ಮಿಶ್ರವವನ ಸ್ವಭಾವ ॥
ಕಣ್ಣೊಮ್ಮೆಯಾಗಸದ ಬೆಳಕಿನೊಡನಾಡುವುದು ।
ಮಣ್ಣೊಳುರುಳುವುದೊಮ್ಮೆ - ಮಂಕುತಿಮ್ಮ ॥ ೧೮೬ ॥

ನರರ ಸ್ವಭಾವ ವಕ್ರಗಳನೆಣಿಸುವುದೇಕೆ? ।
ಗಿರಿ ಕಣಿವೆಗಳ ಗಣಿಸಿ ರೋಷಗೊಳ್ಳುವೆಯೇಂ ॥
ಸುರೆ ಗರಲ ಸುಧೆಗಳ್ ಅಬ್ಧಿಯಲಿ ಸೋದರರಲ್ತೆ? ।
ಅರಿತೊಗ್ಗು ಸಾಜಕ್ಕೆ - ಮಂಕುತಿಮ್ಮ ॥ ೧೮೭ ॥

ರಾಮನಿರ್ದಂದು ರಾವಣನೊಬ್ಬನಿರ್ದನಲ ।
ಭೀಮನಿರ್ದಂದು ದುಶ್ಶಾಸನನದೊರ್ವನ್ ॥
ಈ ಮಹಿಯೊಳನ್ಯಾಯಕಾರಿಯಿಲ್ಲದುದೆಂದು? ।
ರಾಮಭಟನಾಗು ನೀಂ - ಮಂಕುತಿಮ್ಮ ॥ ೧೮೮ ॥

ಆಳನೀಳಗಳ ಕಾಣಲ್ಕಾಗಿಸದೆ ಮೊರೆವ ।
ಬಾಳ ಕಡಲೊಳು ಮುಳುಗಿ ತಳದಿಂದಲೆದ್ದು ॥
ಪೇಳುವರದಾರು ನ್ಯಾಯಾನ್ಯಾಯ ವಿವರಗಳ ।
ಗಾಳಿಗಾಬರಿಯೆಲ್ಲ - ಮಂಕುತಿಮ್ಮ ॥ ೧೮೯ ॥

ಬೀಸಿದಲ್ಲದೆ ಬೂದಿಕವಿದ ಕಿಡಿಯುರಿದೀತೆ? ।
ಕೈಸೋಕದಿರೆ ಕೈಯ ಸಪ್ಪುಳಾದೀತೆ? ॥
ವಾಸನೆಯೆ ಮಾತೆಯಾಶೆಗೆ ಪಿತನು ಸಂದರ್ಭ ।
ದೋಷವೊಳಗೋ ಹೊರಗೊ? - ಮಂಕುತಿಮ್ಮ ॥ ೧೯೦ ॥

ತಿದ್ದಿಕೊಳೊ ನಿನ್ನ ನೀಂ; ಜಗವ ತಿದ್ದುವುದಿರಲಿ ।
ತಿದ್ದಿಕೆಗಮೊಂದು ಮಿತಿಯುಂಟು ಮರೆಯದಿರು ॥
ಉದ್ದ ನೀಂ ಬೆರಳನಿತು ಬೆಳೆದೀಯೆ ಸಾಮಿಂದೆ ।
ಸ್ಪರ್ಧಿಯೆ ತ್ರಿವಿಕ್ರಮಗೆ?- ಮಂಕುತಿಮ್ಮ ॥ ೧೯೧ ॥

ದರಿಯಿರದೆ ಗಿರಿಯಿಲ್ಲ, ನೆರಳಿರದೆ ಬೆಳಕಿಲ್ಲ ।
ಮರಣವಿಲ್ಲದೆ ಜನನಜೀವನಗಳಿಲ್ಲ ॥
ವರಗುಣೋನ್ನತಿಗೆ ನಿಮ್ನಗುಣಂಗಳೊಡವುಟ್ಟು ।
ತೆರೆ ಬೀಳದೇಳುಳುವುದೆ?- ಮಂಕುತಿಮ್ಮ ॥ ೧೯೨ ॥

ಉಪ್ಪಿಷ್ಟು ಹುಳಿಯಿಷ್ಟು ಕಾರ ಸಿಹಿಯಷ್ಟಿಷ್ಟು ।
ಒಪ್ಪಿರ್ದೊಡದು ಭೋಜ್ಯವಂತು ಜೀವಿತಮುಂ ॥
ತಪ್ಪು ಸರಿ ಬೆಪ್ಪು ಜಾಣಂದಕುಂದುಗಳ ಬಗೆ ।
ಯಿಪ್ಪತ್ತು ಸೇರೆ ರುಚಿ - ಮಂಕುತಿಮ್ಮ ॥ ೧೯೪ ॥

ತಪ್ಪನಿನಿತುಂ ಸೈಸದಪ್ಪಟದ ಗುಣಶಾಲಿ ।
ಕಪ್ಪು ಕಂಡು ಕನಲ್ವ ಕೆಂಡ ಗುಲಗಂಜಿ ॥
ಉಪ್ಪೊ ಸಪ್ಪೆಯೊ ನಿನ್ನ ಮೈಬೆವರು ನೆಕ್ಕಿ ತಿಳಿ ।
ಒಪ್ಪಿಹೆಯ ನೀನಜನ?- ಮಂಕುತಿಮ್ಮ ॥ ೧೯೫ ॥

ಮರುಕದುಂಬಿದ ಕಣ್ಣನೋಟದೊಳಗಿದ್ದೀತು ।
ಬಿರುನುಡಿಯೊಳಿರದೊಂದು ಕೂರಲಗು, ಸಖನೆ ॥
ಕರವಾಳಕದಿರದಿಹ ದುರಿತಕಾರಿಯ ಹೃದಯ ।
ಕರುಣೆಯಿಂ ಕರಗೀತೊ- ಮಂಕುತಿಮ್ಮ ॥ ೧೯೬ ॥

ಪೆರ್ಮೆಯ ಗುಣಂಗಳಿನ್ನೂರು ಶಾಸ್ತ್ರೋಕ್ತದವು ।
ಸರ್ವೋತ್ತಮಗಳೆರಡು ಸರ್ವಕಠಿನಗಳು ॥
ನಿರ್ಮತ್ಸರತೆಯೊಂದು ದೋಷಿಯೊಳ್ ಕ್ಷಮೆಯೊಂದು ।
ಬ್ರಾಹ್ಮಿಕಾಭ್ಯಾಸವದು - ಮಂಕುತಿಮ್ಮ ॥ ೧೯೭ ॥

ಗಾರೆಗಚ್ಚೀನಲ್ಲ ದಾರು ದೂಲಗಳಲ್ಲ ।
ಪಾರದ ದ್ರವದವೊಲು ಮನುಜಸ್ವಭಾವ ॥
ವೀರಶಪಥಗಳಿಂದೆ ಘನರೂಪಿಯಾಗದದು ।
ಸೈರಿಸದನಿನಿತು ನೀಂ- ಮಂಕುತಿಮ್ಮ ॥ ೧೯೮ ॥

ಹಟವಾದಕೆಡೆಯೆಲ್ಲಿ ಮನುಜಪ್ರಪಂಚದಲಿ? ।
ಸಟೆಯೆಷ್ಟೊ ದಿಟವೆಷ್ಟೊ ಬೆರೆತಿರುವುವಿಲ್ಲಿ ॥
ಪಟುವಾಗಿ ನಿಲಲಹುದೆ ಮಣಲೊಳೆಸಗಿದ ಗೋಡೆ? ।
ಕಟುತೆ ಸಲ್ಲದು ಜಗಕೆ- ಮಂಕುತಿಮ್ಮ ॥ ೧೯೯ ॥

ಗಿಡದಿ ನಗುತಿರುವ ಹೂ ಪ್ರಕೃತಿಸಖನಿಗೆ ಚೆಂದ ।
ಮಡದಿ ಮುಡಿದಿರುವ ಹೂ ಯುವಕಂಗೆ ಚೆಂದ ॥
ಗುಡಿಯೊಳಗೆ ಕೊಡುವ ಹೂ ದೈವಭಕ್ತಗೆ ಚೆಂದ ।
ಬಿಡಿಗಾಸು ಹೂವಳಗೆ- ಮಂಕುತಿಮ್ಮ ॥ ೨೦೦ ॥

ಇಲ್ಲಿ ಚೆನ್ನಲ್ಲಿ ಚೆನ್ನೆಲ್ಲೊ ಚೆನ್ನೆನುತೆಣಿಸಿ ।
ಹುಲ್ಲು ಬಯಲೊಂದೆಡೆಯಿನೊಂದಕ್ಕೆ ನೆಗೆದು ॥
ಮೆಲ್ಲದೆಯೆ ಧಾವಿಸುತ ದಣಿವ ಕರುವನು ಪೋಲ್ತೊ- ।
ಡೆಲ್ಲಿಯೋ ಸುಖ ನಿನಗೆ ? - ಮಂಕುತಿಮ್ಮ ॥ ೨೦೧ ॥

ಹೊತ್ತು ಕಣಕಣದಿ ಮಣ್ಣನು ಗೆದ್ದಲಿರುವೆಗಳು ।
ಮೆತ್ತುತೆಡೆಬಿಡದೆ ದುಡಿದಾಗಿಸಿದ ಗೂಡು ॥
ಹುತ್ತವಾಗುವುದು ವಿಷಸರ್ಪಕ್ಕೆ; ಮಾನವನ ।
ಯತ್ನಗಳ ಕಥೆಯಿಷ್ಟೆ - ಮಂಕುತಿಮ್ಮ ॥ ೨೦೨ ॥

ಅಪ್ಪಾಲೆ ತಿಪ್ಪಾಲೆ ತಿರುಗಿಬಿದ್ದವನೊಬ್ಬ ।
ಸ್ವಪ್ನಲೋಕದಿ ತಿರೆಯ ಮರೆತಾತನೊಬ್ಬ ॥
ತಪ್ಪುಸರಿಗಳ ತೂಕವಳೆಯೆ ಕುಳಿತವನೊಬ್ಬ ।
ಬೆಪ್ಪನಾರ್ ಮೂವರಲಿ ? - ಮಂಕುತಿಮ್ಮ ॥ ೨೦೩ ॥

ಗಿರಿಯ ಮೇಲಕೆ ದೊಡ್ಡ ಬಂಡೆಯನು ಸಿಸಿಫಸನು ।
ಉರುಳಿಸಿರಲೊಂದೆರಡು ಮಾರು ಘಾಸಿಯಲಿ ॥
ಸರಿದು ಕೆಳಕದದೆಂತೊ ಜಾರುವುದು ಮರಮರಳಿ ।
ಪುರುಷಪ್ರಗತಿಯಂತು - ಮಂಕುತಿಮ್ಮ ॥ ೨೦೪ ॥

ಕಾಕತಾಳೀಯ ಕಥೆ ಲೋಕಚರಿತೆಯೊಳೆಷ್ಟೊ! ।
ತೀಕೆಗೆಟುಕವು ನಮಗೆ ಕಾರ್ಯಕಾರಣಗಳ್ ॥
ಎಕೊ ಕಣ್ಣಲೆಯುವುದು; ಎನೊ ಅದ ಪಿಡುಯುವುದು ।
ವ್ಯಾಕುಲತೆ ಫಲಿತಾಂಶ - ಮಂಕುತಿಮ್ಮ ॥ ೨೦೫ ॥

ನಾಸಿಕದ ಮಾಟದಿಂದಾ ಕ್ಲಿಯೋಪ್ಯಾಟ್ರಳಿಗೆ ।
ದಾಸರಾದರು ಶೂರ ಸೀಸರ್ ಆಂಟನಿಗಳ್ ॥
ದೇಶಚರಿತೆಗಮವರ ಜಸಕಮಂಕುಶವಾಯ್ತು ।
ನಾಸಾಪುಟದ ರೇಖೆ - ಮಂಕುತಿಮ್ಮ ॥ ೨೦೬ ॥

ಸುರಪಸಭೆಯಲಿ ಗಾಧಿಸುತ ವಸಿಷ್ಠ ಸ್ಪರ್ಧೆ ।
ಧರೆಯೊಳದರಿಂ ಹರಿಶ್ಚಂದ್ರಂಗೆ ತಪನೆ ॥
ಬರುವುದಿಂತೆತ್ತಣಿನೊ ಬೇಡದ ಪ್ರಾರಬ್ಧ ।
ಕರುಮಗತಿ ಕೃತ್ರಿಮವೊ - ಮಂಕುತಿಮ್ಮ ॥ ೨೦೭ ॥

ಸರಕಾರ ಹರಿಗೋಲು, ತೆರೆಸುಳಿಗಳತ್ತಿತ್ತ ।
ಸುರೆ ಕುಡಿದವರು ಕೆಲರು ಹುಟ್ಟು ಹಾಕುವರು ॥
ಬಿರುಗಾಳಿ ಬೀಸುವುದು, ಜನವೆದ್ದು ಕುಣಿಯುವುದು ।
ಉರುಳದಿಹುದಚ್ಚರಿಯೊ!- ಮಂಕುತಿಮ್ಮ ॥ ೨೦೮ ॥

ವನ್ಯಮೃಗಗಳ ನಡುವೆ ಗೋವು ಬಂದೇನಹುದು? ।
ಪಣ್ಯವೀಧಿಯಲಿ ತಾತ್ತ್ವಿಕನಿಗೇನಹುದು? ॥
ಅನ್ಯಾಯದುನ್ಮತ್ತ ಕೋಲಾಹಲದ ಲೋಕ ।
ಪುಣ್ಯವನು ಚಿಂತಿಪುದೆ ? - ಮಂಕುತಿಮ್ಮ ॥ ೨೦೯ ॥

ಸ್ವಾಭಾವಿಕವ ಮರೆತು ನಭಕೇಣಿ ಹೂಡುವುದುಮ್ ।
ಆಭಾಸವನು ಸತ್ಯವೊಂದು ಬೆಮಿಸುವುದುಮ್ ॥
ಸೌಭಾಗ್ಯಗಳನರಸಿ ದೌರ್ಭಾಗ್ಯಕೀಡಹುದುಮ್ ।
ಅಭಿಶಾಪ ನರಕುಲಕೆ - ಮಂಕುತಿಮ್ಮ ॥ ೨೧೦ ॥

ಒಟ್ಟಿನಲಿ ತತ್ತ್ವವಿದು: ವಿಕಟರಸಿಕನೋ ಧಾತ ।
ತೊಟ್ಟಿಲನು ತೂಗುವನು, ಮಗುವ ಜಿಗುಟುವನು ॥
ಸಿಟ್ಟನ್ ಒಡವುಟ್ಟುಗಳೊಳಾಗಿಪನು, ಸೋಲಿಪನು ।
ತುತ್ತು ವಿಕಟಿಗೆ ನಾವು- ಮಂಕುತಿಮ್ಮ ॥ ೨೧೧ ॥

ಒಂದು ಜನ್ಮದ ಲೆಕ್ಕವಂದೆ ಮುಗಿವಂತೇಕೆ ।
ಸಂಧಿಸವು ಕಾಲ ಕಾರಣ ಕರಣ ಕಾರ್ಯ ? ॥
ಮುಂದಕೇತಕೆ ಮಿಗಿಸಿ ಕರ್ಮಋಣಶೇಷಗಳ ।
ಬಂಧಿಪನು ವಿಧಿ ನಿನ್ನ ? - ಮಂಕುತಿಮ್ಮ ॥ ೨೧೨ ॥

ಒಳ್ಳೆ ಲೆಕ್ಕಿಗನಲ್ಲ ಪರಮೇಷ್ಠಿ; ನಮ್ಮಿಂದ ।
ಸಲ್ಲುವುದ ಕೊಳಲು ಜನ್ಮಾಂತರಕೆ ಕಾಯ್ವಂ ॥
ಇಲ್ಲಿ ಸಲ್ಲುವುದ ತಾನಿಂದೆ ತೀರಿಸಿಕೊಳ್ಳ- ।
ಲೊಲ್ಲನೇನಂತಕನು - ಮಂಕುತಿಮ್ಮ ॥ ೨೧೩ ॥

ಕರ್ಮಋಣಶೇಷಂಗಳುಳಿಯದಿರೆ ಬಿತ್ತಾಗಿ ।
ಜನ್ಮ ಜನ್ಮಾಂತರದ ಮರಗಳೇಳದಿರೆ ॥
ಬ್ರಹ್ಮನುದ್ಯಾನವನ ಶಾಶ್ವತದೊಳಿಹುದೆಂತು ? ।
ಮರ್ಮವಿದು ಸೃಷ್ಟಿಯಲಿ - ಮಂಕುತಿಮ್ಮ ॥ ೨೧೪ ॥

ಸಂಬಳದ ಹಂಬಲವೊ, ಡಾಂಭಿಕತೆಯಬ್ಬರವೊ ।
ಇಂಬು ಕೂರ್ಮೆಯ ಕರೆಯೊ, ಕರುಳ ಕರೆಕರೆಯೋ ॥
ತುಂಬಿಹುವು ಬಾಳಿನಲಿ ನೂರು ತಕರಾರುಗಳು ।
ಬೆಂಬಲವವೆಲೊ ಜಗಕೆ - ಮಂಕುತಿಮ್ಮ ॥ ೨೧೫ ॥

ತಿರುತಿರುಗಿ ತಿರುಗುತ್ತೆ ಬುಗುರಿ ತಾನೇ ಸೋತು ।
ತಿರೆಗುರುಳುವುದು ತನ್ನ ಬಲವ ತಾಂ ಕಳೆದು ॥
ನರನುಮಂತೆಯೆ ಸುತ್ತಿ ಕಡೆಗೊಂದು ದಿನ ।
ತೆರುವನಸ್ಥಿಯ ಧರೆಗೆ - ಮಂಕುತಿಮ್ಮ ॥ ೨೧೬ ॥

ಪುಣ್ಯಪಾಪದ ಮಿಶ್ರ ನರಜಂತುವವನ ನೆಲೆ ।
ಮಣ್ಣು ಕರುಳುಗಳೆಸಕವವನ ಮೈದೊಡವು ॥
ಬಣ್ಣ ಬಣ್ಣದ ವಸ್ತ್ರ; ಬಿಳ್ಪೊಡನೆ ಕಪ್ಪಿಹುದು ।
ಕಣ್ಣ ದುರುಗುಟಿಸದಿರು - ಮಂಕುತಿಮ್ಮ ॥ ೨೧೭ ॥

ಹಾಸ್ಯಗಾರನೊ ಬೊಮ್ಮ; ವಿಕಟ ಪರಿಹಾಸವದು ।
ಆಸ್ಯ ಗಂಭೀರ; ಬೆರಲಿಂದ ಚಕಳಗುಳಿ ॥
ವಿಶ್ವಾಸದುಪಚಾರ; ಹುಣಿಸೆಮೆಣಸಾಹಾರ ।
ವಿಶ್ವಪಾಲನೆಯಿಂತು - ಮಂಕುತಿಮ್ಮ ॥ ೨೧೮ ॥

ಪಂಚಭೂತಗಳಂತೆ; ಪಂಚೇಂದ್ರಿಯಗಳಂತೆ ।
ಪಂಚವೇಕೆ? ಚತುಷ್ಕ ಷಟ್ಕವೇಕಲ್ಲ? ॥
ಹೊಂಚುತಿಹನಂತೆ ವಿಭು; ಸಂಚವನದೇನಿಹುದೊ ।
ವಂಚಿತರು ನಾವೆಲ್ಲ - ಮಂಕುತಿಮ್ಮ ॥ ೨೦೯ ॥

ಪಂಚಕವೊ, ಪಂಚ ಪಂಚಕವೊ; ಮಾಭೂತಗಳ ।
ಹಂಚಿಕೆಯನರಿತೇನು? ಗುಣವ ತಿಳಿದೇನು? ॥
ಕೊಂಚ ಕೊಂಚಗಳರಿವು ಪೂರ್ಣದರಿವಾದೀತೆ? ।
ಮಿಂಚಿದುದು ಪರತತ್ತ್ವ - ಮಂಕುತಿಮ್ಮ ॥ ೨೧೦ ॥

ಜೀವನದ ಪರಿಪೂರ್ಣದರ್ಶನವದೊಂದಿಹುದು ।
ಭೂವ್ಯೋಮ ವಿಸ್ತರದ ಮಿತಿಯ ಮೀರ್ದುದುದು ॥
ದೇವ ನರ ಪಶು ಸಸಿಗಳೆಲ್ಲ ಕುಣಿಯುವರಲ್ಲಿ ।
ಭಾವಿಸಾ ಚಿತ್ರವನು - ಮಂಕುತಿಮ್ಮ ॥ ೨೧೦ ॥

ಆ ವಿಶ್ವರೂಪ ಸಂದರ್ಶನದಿ ಹೊಂದಿಹುವು ।
ಜೀವ ನಿರ್ಜೀವಗಳು, ಕ್ರಮ ಯದೃಚ್ಛೆಗಳು ॥
ಆವಶ್ಯ ವಶ್ಯ; ಸ್ವಾಚ್ಛಂದ್ಯ ನಿರ್ಭಂದಗಳು ।
ಕೈವಲ್ಯದೃಷ್ಟಿಯದು - ಮಂಕುತಿಮ್ಮ ॥ ೨೧೧ ॥

ಸಾರಸುಖನಿಧಿ ಪರಬ್ರಹ್ಮನಿರುತಿರಲ್ ।
ಸ್ವಾರಸ್ಯಹೀನರೆನ್ನುವರೆ ಜೀವಿತವೆ? ॥
ಪೌರುಷ ಪ್ರೇಮ ಸೌಂದರ್ಯಗಳುಮಂತೆಯೇ ।
ಸ್ವಾರಸ್ಯವೋ ರಹಸ್ಯ - ಮಂಕುತಿಮ್ಮ ॥ ೨೧೨ ॥

ಏನೆ ನಿಜವಿರಲಿ ಮತ್ತೇನೆ ಸುಳ್ಳಾಗಿರಲಿ ।
ನಾನೆನಿಪ್ಪಾತ್ಮವೊಂದಿರುವುದನುಭವಿಕ ॥
ಹಾನಿಗಾವಾತನಾತ್ಮವನುಮಂ ಕೆಡಹದಿರು ।
ಧ್ಯಾನಿಸಾತ್ಮದ ಗತಿಯ - ಮಂಕುತಿಮ್ಮ ॥ ೨೧೪ ॥

ಎಷ್ಟು ಬಗೆ ಯಂತ್ರಗಳೊಳೆಷ್ಟು ರಸಮಿಶ್ರದಿಂ ।
ದೆಷ್ಟಾಧಿಭೂತಗಳು ಪರಿಪಾಕವೊಂದಿ ॥
ಒಟ್ಟು ಸೇರಿಹವು ನರನೆಂಬ ಸಿದ್ಧಿಯೊಳವನು ।
ಸೃಷ್ಟಿಶೈಲದ ಶಿಖರ - ಮಂಕುತಿಮ್ಮ ॥ ೨೧೩ ॥

ಸುಮ್ಮನಿರಲೊಲದೆ ತನಗೊಡನಾಡಿಯೊರ್ವಳನು ।
ನಿರ್ಮಿಸಿ ನಿಜಾಂಶದಿಂ ಮಾಯೆಯೆಂಬವಳಿಂ ॥
ದುಣ್ಮಿದ ಜಗಜ್ಜಾಲಗಳಲ್ಲಿ ವಿಹರಿಸುತಿರುವ ।
ಬೊಮ್ಮನಾಟವ ಮೆರೆಸೊ - ಮಂಕುತಿಮ್ಮ ॥ ೨೧೫ ॥

ಜೀವಸಂಘವಿದೇನು? ಗಂಜೀಫಿನೆಲೆಗಟ್ಟು ।
ದೈವ ಪೌರುಷ ಪೂರ್ವವಾಸನೆಗಳೆಂಬಾ ॥
ಮೂವರದನಾಡುವರು, ಚದುರಿಸುತೆ, ಬೆರಸಿಡುತೆ ।
ನಾವೆಲ್ಲರಾಟದೆಲೆ - ಮಂಕುತಿಮ್ಮ ॥ ೨೧೭ ॥

ಎಲೆಕಟ್ಟನಾಗಾಗ ಕಲಸಿಕೊಡುವುದೆ ಸೃಷ್ಟಿ ।
ಬಳಿಕೆಲೆಯ ಗತಿಯೆಂತೋ ಎಲ್ಲಿ ಸೇರುವುದೋ! ॥
ಬಳಸುತಿಹುದೊಂದೊಂದುಮೊಂದೊಂದು ದಿಕ್ಕಿನಲಿ ।
ಅಲೆಯುವೆವು ನಾವಂತು - ಮಂಕುತಿಮ್ಮ ॥ ೨೧೮ ॥

ನಿಲದೆ ನಡೆವುದು ಮೊದಲು ಕೊನೆಯಿಲ್ಲದೀಯಾಟ ।
ಕಳೆವುವದರಲಿ ನಮ್ಮ ಜನುಮಜನುಮಗಳು ॥
ಗೆಲವಾರ್ಗೊ! ಸೋಲಾರ್ಗೊ! ಲೆಕ್ಕನೋಡುವುದೆಂದೊ! ।
ಫಲವು ಬರಿಯಾಟವೆಲೊ - ಮಂಕುತಿಮ್ಮ ॥ ೨೧೯ ॥

ಆಟಕ್ಕೆ ಫಲವೇನು? ಕುತುಕದ ರುಚಿಯೆ ಫಲ ।
ಚೀಟಿ ತಾಂ ಬೀಳೆನೆನಲ್ ಆಟ ಸಾಗುವುದೆ? ॥
ಏಟಾಯ್ತೆ ಗೆಲವಾಯ್ತೆಯೆಂದು ಕೇಳುವುದೇನು? ।
ಆಟದೋಟವೆ ಲಾಭ - ಮಂಕುತಿಮ್ಮ ॥ ೨೨೦ ॥

ಸತ್ಯ ಶಿವ ಸುಂದರದ ಸಚ್ಚಿದಾನಂದನದ ।
ಭಿತ್ತಿಯಲಿ ಬಣ್ಣಬಣ್ಣದ ಜೀವಚಿತ್ರ ॥
ನಿತ್ಯ ನೀನದ ನೆನೆದು ಚಿತ್ರದಲಿ ಮನವಿರಿಸೆ ।
ವೃತ್ತಿ ತನ್ಮಯವಹುದೊ - ಮಂಕುತಿಮ್ಮ ॥ ೩೩೧ ॥

ಸತ್ಯವೆಂಬುದದೆಲ್ಲಿ? ನಿನ್ನಂತರಂಗದೊಳೊ ।
ಸುತ್ತ ನೀನನುಭವಿಪ ಬಾಹ್ಯ ಚಿತ್ರದೊಳೋ ॥
ಯುಕ್ತಿಯಿಂದೊಂದನೊಂದಕೆ ತೊಡಿಸಿ ಸರಿನೋಡೆ ।
ತತ್ತ್ವದರ್ಶನವಹುದು - ಮಂಕುತಿಮ್ಮ ॥೩೩೨ ॥

ಸತ್ಯಾನುಭವವೆಲ್ಲರಿಂಗಮೊಂದೆಂತಹುದು? ।
ಬೆಟ್ಟದಡಿಯೊಳಗೊಬ್ಬ; ಕೋಡಬಳಿಯೊಬ್ಬ ॥
ಎತ್ತರದ ದೃಶ್ಯ ಕಣಿವೆಯೊಳಿಹನಿಗಾದೀತೆ? ।
ನೇತ್ರದಂದದೆ ನೋಟ - ಮಂಕುತಿಮ್ಮ ॥ ೩೩೩ ॥

ಓರೋರ್ವನಿಚ್ಛೆಗುಣವೊಂದೊಂದು ಬಗೆ ಜಗದಿ ।
ಭಾರಮೋರೊರ್ವನಿಂಗೊಂದೊಂದು ತೆರದಿ ॥
ದಾರಗಳಿನವರ ವಿಧಿ ಪಿಡಿದು ಕುಣಿದಾಡಿಸಲು ।
ನೂರುಜಡೆಕೋಲಾಟ - ಮಂಕುತಿಮ್ಮ ॥ ೩೩೪ ॥

ಆವ ಜನ್ಮದ ಋಣವೊ, ಆವ ಕರ್ಮದ ಕಣವೊ ।
ಮಾವಾಗಿ ಬೇವಾಗಿ ಸಂಸಾರ ವನದಿ ॥
ಜೀವಕೀಂಟಿಪುವು ಮಾದಕದ ರಸಪಾನಗಳ ।
ಭಾವಜ್ವರಂಗಳವು - ಮಂಕುತಿಮ್ಮ ॥ ೩೩೫ ॥

ನಿನ್ನ ಜೀವಿತವೆಲ್ಲ ನಿನ್ನ ಕೈಮಾಳ್ಕೆಯೇಂ? ।
ಅನ್ಯಶಕ್ತಿಗಳೆನಿತೊ ಬೆರೆತಿರುವುವಲ್ಲಿ ॥
ಅನ್ನವಿಡುವರು, ತಿಳಿವನೀವರ್, ಒಡನಾಡುವರು ।
ನಿನ್ನ ಬಾಳ್ಗಿವರಿರರೆ? - ಮಂಕುತಿಮ್ಮ ॥ ೩೩೬ ॥

ಅನಿಲಗುಣ ಭೂಗುಣಗಳಿಂ ಸಸ್ಯಧಾನ್ಯಗುಣ ।
ತನುಗುಣಗಳನ್ನದಿಂ, ಮನದ ಗುಣ ತನುವಿಂ ॥
ಜನಪದವಿಧಂಗಳಿಂತಾಗಿಹುವು ಸೃಷ್ಟಿಯನೆ ।
ಮನುವೊಬ್ಬ, ಜನತೆ ಶತ - ಮಂಕುತಿಮ್ಮ ॥ ೩೩೭ ॥

ಓರ್ವ ನಾನೆಂದು ನೀನೆಂತು ತಿಳಿಯುವೆ ಜಗದಿ? ।
ನೂರ್ವರಣಗಿಹರು ನಿನ್ನಾತ್ಮ ಕೋಶದಲಿ ॥
ಪೂರ್ವಿಕರು, ಜತೆಯವರು, ಬಂಧುಸಖಿಶತ್ರುಗಳು ।
ಸರ್ವರಿಂ ನಿನ್ನ ಗುಣ - ಮಂಕುತಿಮ್ಮ ॥ ೩೩೮ ॥

ನಿನ್ನಜ್ಜ ಮುತ್ತಜ್ಜ ಮೂಲಜ್ಜರೆಲ್ಲರುಂ ।
ನಿನ್ನೊಳವತರಿಸಿ ಮುಂದಿನ್ನು ಜನಿಸಲಿಹ ॥
ನಿನ್ನ ಮಗ ಮರಿಮೊಮ್ಮರೊಳು ಜೀವಿಪ್ಪರ್ ।
ಅನ್ವಯ ಚಿರಂಜೀವಿ - ಮಂಕುತಿಮ್ಮ ॥ ೩೩೯ ॥

ರೇಖಾರಹಸ್ಯಗಳು ನಿನ್ನ ಹಣೆಯವದಿರಲಿ ।
ನೀಂ ಕಾಣ್ಬ ರೂಪಭಾವಂಗಳೊಳಮಿಹುವು ॥
ತಾಕಿ ನಿನ್ನಾತುಮದ ನಾಕನರಕಂಗಳ್ ।
ಏಕವೆನಿಪುವುವು ನಿನಗೆ - ಮಂಕುತಿಮ್ಮ ॥ ೩೪೦ ॥

ಕ್ಷೀರಾನ್ನದಿಂದೆ ನರಪುಷ್ಟಿ; ಹಸುವಿಂ ಪಾಲು ।
ಪೈರು ಬೆಳಸಿಂದೆ ಹಸು; ಪೈರುಗಳ್ಗೂರ ॥
ಸಾರದಿಂ ಪುಷ್ಟಿ; ಇಂತುಣಿಸುಮುಂಬನುಮೊಂದು ।
ಪಾಲೇನು? ಪೇಲೇನು? - ಮಂಕುತಿಮ್ಮ ॥ ೩೪೧ ॥

ಪೂಸರದಿ ಕಾಂತಿ ಸೌರಭ ಮೊದಲನೆಯ ತಾಸು ।
ವಾಸನೆಯ ಹಳಸು ಕೊಳಕೊಳಚೆಯಾ ಬಳಿಕ ॥
ಮಾಸಿ ನಲುನಲುಗಿ ಮುಳ್ಳಹುದು ಮೂರನೆ ತಾಸು ।
ಸಂಸಾರಕಥೆಯದುವೆ - ಮಂಕುತಿಮ್ಮ ॥ ೩೪೨ ॥

ಸಾಕುಸಾಕೆನಿಸುವುದು ಲೋಕ ಸಂಪರ್ಕಸುಖ ।
ಸೋಕಿದೆಡೆ ತುರಿಯನೆಬ್ಬಿಸುವ ತುರುಚೆಯದು ॥
ಮೂಕನವೆ ತುರಿಸದಿರೆ, ತುರಿಯುತಿರೆ ಹುಣ್ಣುರಿತ ।
ಮೂಕನಪಹಾಸ್ಯವದು - ಮಂಕುತಿಮ್ಮ ॥ ೩೪೩ ॥

ಮಿಡಿಚೇಪೆಕಾಯಿಗಳ ತಡಬಡದೆ ನುಂಗುವುದು ।
ಕಡಿಯೆ ಹೊಟ್ಟೆಯಲಿ ಹರಳೆಣ್ಣೇ ಕುಡಿಯುವುದು ॥
ಬಿಡುತಿರಲು ನೋವಾಗ ಸುಖವೀಗಳೆನ್ನುವುದು ।
ಪೊಡವಿಗಿದೆ ಭೋಗವಿಧಿ - ಮಂಕುತಿಮ್ಮ ॥ ೩೪೪ ॥

ಅಡಿಜಾರಿ ಬೀಳುವುದು, ತಡವಿಕೊಂಡೇಳುವುದು ।
ಕಡುಬ ನುಂಗುವುದು, ಕಹಿಮದ್ದ ಕುಡಿಯುವುದು ॥
ದುಡುಕಿ ಮತಿದಪ್ಪುವುದು, ತಪ್ಪನೊಪ್ಪೆನ್ನುವುದು ।
ಬದುಕೆಂಬುದಿದು ತಾನೆ? - ಮಂಕುತಿಮ್ಮ ॥ ೩೪೫ ॥

ಹೇರಾಳು ಮೂಟೆಗೂಲಿಯ ಬೇಡಿ ಹೆಗಲೊಡ್ಡಿ ।
ಭಾರವನು ನಾಲ್ಕು ಮಾರೊಯ್ದಷ್ಟರೊಳಗೇ ॥
ದೂರವಿನ್ನೆಷ್ಟೆನುತಲಾತುರಿಪನ್ ಅದನಿಳಿಸೆ ।
ಕಾರುಬಾರುಗಳಷ್ಟೆ - ಮಂಕುತಿಮ್ಮ ॥ ೩೪೬ ॥

ರುಚಿಗೊಪ್ಪೆ ರಸನೆಗದು ಶೂಲವಹುದುದರಕ್ಕೆ ।
ತ್ವಚೆ ಬೇಳ್ವ ತಂಗಾಳಿಯಿಂ ಬೇನೆಯೆದೆಗೆ ॥
ರಚಿಸಿದವನಿಂತೊಡಲೊಳಿಡೆ ವಿಷಮ ಕುಟಿಲಗಳ ।
ಉಚಿತವಾವುದೋ ನಿನಗೆ? - ಮಂಕುತಿಮ್ಮ ॥ ೩೪೭ ॥

ಬಾಳಿನೊಳಕಿಚ್ಚು ದೆಸೆದೆಸೆಗುರಿಯ ಚಾಚುತಿರೆ ।
ಕಾಲನೆನ್ನುವ ಹುಚ್ಚ ಮಣ್ಣನೆರಚುತಿರೆ ॥
ಧೂಳು ಹೊಗೆಗಳ ಹೊರತು ಜಗದಿ ಬೇರಿಲ್ಲದಿರೆ ।
ಮೇಲೇನು? ಬೀಳೇನು? - ಮಂಕುತಿಮ್ಮ ॥ ೩೪೮ ॥

ಮಿತ ನಿನ್ನ ಗುಣ ಶಕ್ತಿ, ಮಿತ ನಿನ್ನ ಕರ್ತವ್ಯ ।
ಮಿತ ಅತಿಗಳಂತರವ ಕಾಣುವುದೆ ಕಡಿದು ॥
ಹಿತವೆನಿಸಿದನಿತೆಸಗು; ದೈವಕುಳಿದುದನು ಬಿಡು ।
ಕೃತಿಯಲಿ ದೈವಕಂ - ಮಂಕುತಿಮ್ಮ ॥ ೩೪೯ ॥

ಹೇಳಲಾಗದ ಹಸಿವು, ತಾಳಾಲಾಗದ ತಪನೆ ।
ಆಳಾದಲಿ ನಾಚನಾಗಿಪ ಚಿಂತೆಯೂಟೆ ॥
ಗಾಳಿಯೆತ್ತತ್ತಣಿನೊ ತಂದೀವ ಸೋಂಕು - ಇವೆ ।
ಬಾಳ ಸಾಮಗ್ರಿಯಲ - ಮಂಕುತಿಮ್ಮ ॥ ೩೫೦ ॥

ಹುದುಗಿಹುದದೆಲ್ಲಿ ಪರಮಾತ್ಮನೀ ತನುವಿನಲಿ? ।
ಹೃದಯದೊಳೊ ಮೆದುಳಿನೊಳೊ ಹುಬ್ಬಿನಿರುಕಿನೊಳೋ ॥
ಇದನೆನಿತೊ ತರ್ಕಿಸಿಹರ್; ಎನ್ನೆಣಿಕೆಯನು ಕೇಳು ।
ಉದರವಾತ್ಮನಿವಾಸ - ಮಂಕುತಿಮ್ಮ ॥ ೩೫೧ ॥

ಹೊಟ್ಟೆರಾಯನ ನಿತ್ಯದಟ್ಟಹಾಸವೊ ಬಾಳೊ ।
ಧೃಷ್ಟ ಧಣಿಯೂಳಿಗಕೆ ಸೊಟ್ಟು ಮೈಬಾಗು ॥
ಹಿಟ್ಟಿಗಗಲಿದ ಬಾಯಿ, ಬಟ್ಟೆಗೊಡ್ಡಿದ ಕೈಯಿ ।
ಇಷ್ಟೆ ನಮ್ಮೆಲ್ಲ ಕಥೆ - ಮಂಕುತಿಮ್ಮ ॥ ೩೫೨ ॥

ಏನಾದೊಡೇನು? ನೀನೆಲ್ಲಿ ಪೋದೊಡಮೇನು? ।
ಪ್ರಾಣವೇಂ ಮಾನವೇನಭ್ಯುದಯವೇನು? ॥
ಮಾನವಾತೀತವೊಂದೆಲ್ಲವನು ನುಂಗುವುದು ।
ಜಾನಿಸಿದನಾವಗಂ - ಮಂಕುತಿಮ್ಮ ॥ ೩೫೩ ॥

ಲೋಕವೆಲ್ಲವು ದೈವಲೀಲೆಯೆಂಬರೆ, ಪೇಳಿ ।
ಶೋಕ ಸೋಂಕಿರದೊಡಾ ಲೀಲೆ ನೀರಸವೇಂ? ॥
ಮೂಕಂಗೆ ಕಳ್ ಕುಡಿಸಿ ಚೇಳ್ ಕುಟುಕಿಪಾಟವಿದು ।
ಏಕಪಕ್ಷದ ಲೀಲೆ - ಮಂಕುತಿಮ್ಮ ॥ ೩೪೪ ॥

ಗುಣಿಗುಣಿಸಿ ತಿಣುಕುತ್ತ ಹೆಣಗಾಡಿ ಫಲವೇನು ।
ಗಣನೆಗೆಟುಕದದೊಂದಚಿಂತ್ಯವೆತ್ತಲೊ ತಾನ್ ।
ಅಣಗಿರ್ದು ನಿನ್ನೆಲ್ಲ ಗಣಿತಗಳನಣಕಿಪುದು ।
ದಣಿಯದಾ ವಿಧಿ ವಿಕಟ - ಮಂಕುತಿಮ್ಮ ॥ ೨೫೫ ॥

ಆಶೆ ಬಲೆಯನು ಬೀಸಿ, ನಿನ್ನ ತನ್ನೆಡೆಗೆಳೆದು ।
ಘಾಸಿ ನೀಂ ಬಡುತ ಬಾಯ್ಬಿಡಲೋರೆ ನೋಡಿ ॥
ಮೈಸವರಿ ಕಾಲನೆಡವಿಸಿ, ಗುಟ್ಟಿನಲಿ ನಗುವ ।
ಮೋಸದಾಟವೊ ದೈವ - ಮಂಕುತಿಮ್ಮ ॥ ೨೫೬ ॥

ಧಾತನೆಣ್ಣೆಯಗಾಣದೆಳ್ಳುಕಾಳಲೆ ನೀನು? ।
ಆತನೆಲ್ಲರನರೆವನ್; ಆರನುಂ ಬಿಡನು ॥
ಆತುರಂಗೊಳದೆ ವಿಸ್ಮೃತಿಬಡದುಪೇಕ್ಷಿಸದೆ ।
ಘಾತಿಸುವನೆಲ್ಲರನು - ಮಂಕುತಿಮ್ಮ ॥ ೨೫೭ ॥

ಇದು ನಡೆಯಲಿಲ್ಲವದು ನಿಂತುಹೋಯಿತೆನುತ್ತ ।
ಎದೆಯುಬ್ಬೆಗವನೊಂದಿ ಕುದಿಯುತಿಹುದೇಕೋ? ॥
ಅಧಿಕಾರಪಟ್ಟವನು ನಿನಗಾರು ಕಟ್ಟಿಹರು? ।
ವಿಧಿಯ ಮೇಸ್ತ್ರಿಯೇ ನೀನು? - ಮಂಕುತಿಮ್ಮ ॥ ೨೫೮ ॥

ಸೊಟ್ಟುಗಳ ನೆಟ್ಟಗಾಗಿಪ ಯತ್ನ ಲೋಕದಲಿ ।
ಸೃಷ್ಟಿಯಾದಿಯಿನಾಗುತಿಹುದು; ಫಲವೇನು? ॥
ಹೊಟ್ಟೆ ನೋವಿಳಿಯುತಿರೆ ರಟ್ಟೆ ನೋವೆನ್ನುವುದು ।
ಮಟ್ಟಸವೆ ತಿರೆಹರಿವು? - ಮಂಕುತಿಮ್ಮ ॥ ೨೫೯ ॥

ಇನ್ನೇನು ಮತ್ತೇನು ಗತಿಯೆಂದು ಬೆದರಿದರು ।
ನಿನ್ನ ಕೈಯೊಳಗಿಹುದೆ ವಿಧಿಯ ಲೆಕ್ಕಣಿಕೆ? ॥
ಕಣ್ಣಿಗೆಟುಕದೆ ಸಾಗುತಿಹುದು ದೈವದ ಸಂಚು ।
ತಣ್ಣಗಿರಿಸಾತ್ಮವನು - ಮಂಕುತಿಮ್ಮ ॥ ೨೬೦ ॥

ಎಲ್ಲಿಯೋ ವಿಧಿಯ ಗೂಢದ ಕರ್ಮಶಾಲೆಯಲಿ ।
ನಿಲ್ಲದಾಡುತ್ತಿಹುದು ಯಂತ್ರ ಕೀಲುಗಳು ॥
ಎಲ್ಲಾಗುಹೋಗುಗಳುಮಾ ಚಕ್ರಗತಿಯಂತೆ ।
ತಲ್ಲಣವು ನಿನಗೇಕೆ? - ಮಂಕುತಿಮ್ಮ ॥ ೨೬೧ ॥

ಕಾಲನದಿಯಲಿ ನಮ್ಮ ಬಾಳದೋಣಿಯು ಮೆರೆದು ।
ತೇಲುತ್ತ ಭಯವ ಕಾಣದೆ ಸಾಗುತಿರಲು ॥
ಗಾಳಿಯಾವಗಮೊ ಬಂದೆತ್ತಣಿನೊ ಬೀಸುತ್ತ ।
ಮೇಲ ಕೀಳಾಗಿಪುದು - ಮಂಕುತಿಮ್ಮ ॥ ೨೬೨ ॥

ಆತುರತೆಯೇನಿರದು ವಿಧಿಯಯಂತ್ರಚಲನೆಯಲಿ ।
ಭೀತತೆಯುಮಿರದು, ವಿಸ್ಮೃತಿಯುಮಿರದೆಂದುಂ ॥
ಸಾಧಿಪುದದೆಲ್ಲವನು ನಿಲದೆ, ತಪ್ಪದೆ, ಬಿಡದೆ ।
ಕಾತರತೆ ನಿನಗೇಕೆ? - ಮಂಕುತಿಮ್ಮ ॥ ೨೬೩ ॥

ನಟಿಪುದೊಮ್ಮೊಮ್ಮೆ ಮರುಕವ ದೈವ ಮನುಜರಲಿ ।
ಕಟುಕನಿನಿಸಕ್ಕಿಯನು ಹಕ್ಕಿಗೆರೆಚುವವೋಲ್ ॥
ತುಟಿ ಸುಟ್ಟು ರಸನೆಗೆಟುಕದ ಕೀರು ದೈವಕೃಪೆ ।
ತಟವಟವೊ ಸೃಷ್ಟಿದಯೆ - ಮಂಕುತಿಮ್ಮ ॥ ೨೬೪ ॥

ಅದು ಒಳಿತು ಇದು ಕೆಟ್ಟುದೆಂಬ ಹಟ ನಿನಗೇಕೆ? ।
ಹೊದಿಸುವುದು ದೈವವೆಲ್ಲಕಮೊಂದು ತೆರೆಯ ॥
ಸೊದೆಯ ಸೌರಭ ನಂಜುಬಟ್ಟಲಲಿ ತೋರೀತು ।
ವಿಧಿಯ ಬಗೆಯೆಂತಿಹುದೋ! - ಮಂಕುತಿಮ್ಮ ॥ ೨೬೫ ॥

ಗ್ರಹಗತಿಯ ತಿದ್ದುವನೆ ಜೋಯಿಸನು ಜಾತಕದಿ? ।
ವಿಹಿತವಾಗಿಹುದದರ ಗತಿ ಸೃಷ್ಟಿ ವಿಧಿಯಿಂ ॥
ಸಹಿಸಿದಲ್ಲದೆ ಮುಗಿಯದಾವ ದಶೆ ಬಂದೊಡಂ ।
ಸಹನೆ ವಜ್ರದ ಕವಚ - ಮಂಕುತಿಮ್ಮ ॥ ೨೬೬ ॥

ಧಾರಿಣಿಯ ವಾಸಿಗಳ್ಗಿಹುದೊಂದು ಹಿತವಾರ್ತೆ ।
ಆರಯ್ವುದಾರ್ತರ್ ಅತ್ಯಾರರಾಪದವ ॥
ರೌರವಿಗೆ ಹಿತ ಮಹಾರೌರವಿಯ ಗೋಳುದನಿ ।
ನಾರಕದೊಳುದುಪಾಯ - ಮಂಕುತಿಮ್ಮ ॥ ೩೬೭ ॥

ಮುಕ್ಕೋಟಿ ದೇವತೆಗಳಾಳುತಿಹ ಲೋಕದಲಿ ।
ದಿಕ್ಕುಕಾಣದೆ ಜೀವಿಯಲೆಯುವುದಚ್ಚರಿಯೇಂ? ॥
ಒಕ್ಕಟನೊಡೆಯರೇ ಕಲಿಯದಿರೆ ನಮ್ಮ ಗತಿ- ।
ಗಿಕ್ಕಟ್ಟು ತಪ್ಪುವುದೆ? - ಮಂಕುತಿಮ್ಮ ॥ ೩೬೮ ॥

ಏಕವಾಗವೆ ದೈವಚಿತ್ತನರಚಿತ್ತಗಳು? ।
ಏಕೆನ್ನ ಮನವನಾಳನು ಲೋಕದೊಡೆಯಂ? ॥
ಬೇಕೆನಿಪುದೊಂದೆನಗೆ, ವಿಧಿ ಗೆಯ್ವುದಿನ್ನೊಂದು ।
ಈ ಕುಟಿಲಕೇಂ ಮದ್ದು ?- ಮಂಕುತಿಮ್ಮ ॥ ೩೬೯ ॥

ಸ್ವಾತಿ ಮಳೆಹನಿ ಬೀಳ್ವ, ಶುಕ್ತಿ ಬಾಯ್ದೆರೆದೇಳ್ವ ।
ಕೌತುಕದ ಸಮಯಯೋಗದೆ ಮೌಕ್ತಿಕ ಫಲ ॥
ಪ್ರೀತಿ ಸುಖ ಸತ್ಯದರ್ಶನ ಶಾಂತಿಗಳ ಹುಟ್ಟುಮ್ ।
ಆ ತೆರೆದ ಯೋಗದಿನೆ - ಮಂಕುತಿಮ್ಮ ॥ ೩೭೦ ॥

ಬೇಕು ಬೇಕದು ಬೇಕು ಬೇಕಿದೆನಗಿನ್ನೊಂದು ।
ಬೇಕೆನುತ ಬೊಬ್ಬಿಡುತಲಿಹ ಘಟವನಿದನು ॥
ಏಕೆಂದು ರಚಿಸಿದನೊ ಬೊಮ್ಮನೀ ಬೇಕು ಜಪ ।
ಸಾಕೆನಿಪುದೆಂದಿಗಲೊ - ಮಂಕುತಿಮ್ಮ ॥ ೩೭೧ ॥

ವನದಿ ನಿರ್ಜನದಿ ಮೌನದಿ ತಪವನೆಸಗುವನ ।
ನೆನಪಿನಲಿ ಪಿಂತಿನನುಭವವುಳಿಯದೇನು? ॥
ಇವಿನೋಟ ಸವಿಯೂಟ ಕಿನಿಸು ಕರುಬುಗಳಾಟ ।
ಕನಲುತಿಹುವಾಳದಲಿ - ಮಂಕುತಿಮ್ಮ ॥ ೩೭೨ ॥

ಮನೆಯ ತೊರೆದೋಡಲೇಂ? ವನಗುಹೆಯ ಸಾರಲೇಂ? ।
ತನುವನುಗ್ರವ್ರತಗಳಿಂದೆ ದಂಡಿಸಲೇಂ? ॥
ಬಿನದಗಳನರಸಿ ನೀನೂರೂರೊಳಲೆದೊಡೇಂ? ।
ಮನವ ತೊರೆದಿರಲಹುದೆ - ಮಂಕುತಿಮ್ಮ ॥ ೩೭೩ ॥

ಈ ಜಗದ ಗಂಧ ಪರಿಪರಿ ಹಸಿವ ಕೆಣಕುತಿರೆ ।
ಭೋಜನವ ನೀಡನೆನೆ ಮನ ಸುಮ್ಮನಿಹುದೆ? ॥
ಸಾಜಗಳ ಕೊಲ್ಲೆನುವ ಹಠಯೋಗಕಿಂತ ಸರಿ ।
ರಾಜಯೋಗದುಪಾಯ - ಮಂಕುತಿಮ್ಮ ॥ ೩೭೪ ॥

ಮನವನಾಳ್ವುದು ಹಟದ ಮಗುವನಾಳುವ ನಯದೆ ।
ಇನಿತಿನಿತು ಸವಿಯುಣಿಸುಸವಿಕಥೆಗಳಿಂದೆ ॥
ಅನುಕೂಲಿಸದು ಬರಿಯ ಕೂಗು ಬಡಿತಗಳಿನದು ।
ಇನಿತಿತ್ತು ಮರಸಿನಿತ - ಮಂಕುತಿಮ್ಮ ॥ ೩೭೫ ॥

ಅಂತಾನುಮಿಂತಾನುಮೆಂತೊ ನಿನಗಾದಂತೆ ।
ಶಾಂತೆಯನೆ ನೀನರಸು ಮನ ಕೆರಳಿದಂದು ॥
ಸಂತವಿಡುತೊಮ್ಮೆ ಶಿಕ್ಷಿಸುತೊಮ್ಮೆ ಶಿಶುವೆಂದು ।
ಸ್ವಾಂತಮಂ ತಿದ್ದುತಿರು - ಮಂಕುತಿಮ್ಮ ॥ ೩೭೬ ॥

ಉದರ ದೈವಕೆ ಜಗದೊಳೆದುರು ದೈವವದೆಲ್ಲಿ? ।
ಮೊದಲದರ ಪೂಜೆ; ಮಿಕ್ಕೆಲ್ಲವದರಿಂದ ॥
ಮದಿಸುವುದದಾದರಿಸೆ, ಕುದಿವುದು ನಿರಾಕರಿಸೆ ।
ಹದದೊಳಿರಿಸುವುದೆಂತೋ? - ಮಂಕುತಿಮ್ಮ ॥ ೩೭೭ ॥

ಕುದಿ ಹೆಚ್ಚೆ ವೆಗಟಹುದು; ಕಡಿಮೆಯಿರೆ ಹಸಿನಾತ ।
ಕದಡಲೊಡೆವುದು ಹಾಲು; ಸೂಕ್ಷ್ಮವದರ ಹದ ॥
ಅದರವೊಲೆ ಮನದ ಹದ, ಅದನೆಚ್ಚರದಿ ನೋಡು ।
ಬದುಕು ಸೊಗ ಹದದಿಂದ - ಮಂಕುತಿಮ್ಮ ॥ ೩೭೮ ॥

ತೃಪ್ತಿಯರಿಯದ ವಾಂಛೆ, ಜೀರ್ಣಿಸದ ಭುಕ್ತಿವೊಲು ।
ಗುಪ್ತದಲಿ ಕೊಳೆಯುತ್ತೆ ವಿಷಬೀಜವಾಗಿ ॥
ಪ್ರಾಪ್ತಿಗೊಳಿಪುದು ಜೀವಕುನ್ಮಾದತಾಪಗಳ ।
ಸುಪ್ತವಹುದೆಂತಿಚ್ಛೆ? - ಮಂಕುತಿಮ್ಮ ॥ ೩೭೯ ॥

ಹುಲಿಯ ಕೆಣುಕುವುದು ಹುಲಿ; ಕಪಿಯನಣಕಿಪುದು ಕಪಿ ।
ಹುಲಿಕಪಿಗಳವಿತಿರದ ನರಜಂತುವೆಲ್ಲಿ? ॥
ಮಲಗಿರುವ ಮೃಗವನಂತಿರಲು ಬಿಡುವುದೆ ಜಾಣು ।
ಕುಲಕದಿರು ಬಾಲವನು - ಮಂಕುತಿಮ್ಮ ॥ ೩೮೦ ॥

ಅತಿಶಯದದೃಷ್ಟ ಹುಟ್ಟಿಂ ಮೃತೇಂದ್ರಿಯನದಲ? ।
ಇತರರೊಳು ವಿಷಪರೀಕ್ಷೆಗೆ ನಿಲುವರಾರು? ॥
ಮಿತಕುಕ್ಷಿ ಮಿತಭುಕ್ತ; ಮತ್ತಾರ್ ಜಿತೇಂದ್ರಿಯನು? ।
ಅತಿಚರ್ಚೆ ಸಲದಲ್ಲಿ - ಮಂಕುತಿಮ್ಮ ॥ ೩೮೧ ॥

ಇಂದ್ರಿಯವ ಜಯಿಸಿದೆಯೊ? ಮಂದವೋ ನಿನ್ನಕ್ಷಿ? ।
ಸೌಂದರ್ಯ ಯಕ್ಷಿಣಿಯೆ ನಿನ್ನ ತೊರೆದಿಹಳೋ? ॥
ಅಂಧನೆ ವಿರಕ್ತನ್; ಅಪ್ಸರೆಯ ಕಾಣದನೆ ಯತಿ ।
ಕಂಡು ಕೆರಳನಾರೊ! - ಮಂಕುತಿಮ್ಮ ॥ ೩೮೨ ॥

ಜನಕಜೆಯ ದರುಶನಿದಿನಾಯ್ತು ರಾವಣ ಚಪಲ ।
ಕನಕಮೃಗದರುಶನದೆ ಜಾನಕಿಯ ಚಪಲ ॥
ಜನವವನ ನಿಂದಿಪುದು, ಕನಿಕರಿಪುದಾಕೆಯಲಿ ।
ಮನದ ಬಗೆಯರಿಯದದು - ಮಂಕುತಿಮ್ಮ ॥ ೩೮೩ ॥

ಹೊಟ್ಟೆಯಲಿ ಹಸಿವು, ಮನದಲಿ ಮಮತೆ - ಈ ಎರಡು ।
ಗುಟ್ಟು ಕೀಲುಗಳಿಹವು ಸೃಷ್ಟಿಯಂತ್ರದಲಿ ॥
ಕಟ್ಟಿಪುವು ಕೋಟೆಗಳ, ಕೀಳಿಪುವು ತಾರೆಗಳ ।
ಸೊಟ್ಟಾಗಿಪುವು ನಿನ್ನ - ಮಂಕುತಿಮ್ಮ ॥ ೩೮೪ ॥

ದಾಸರೋ ನಾವೆಲ್ಲ ಶುನಕನಂದದಿ ಜಗದಿ ।
ವಾಸನೆಗಳೆಳೆತಕ್ಕೆ ದಿಕ್ಕು ದಿಕ್ಕಿನಲಿ ॥
ಪಾಶಗಳು ಹೊರಗೆ, ಕೊಂಡಿಗಳು ನಮ್ಮೊಳಗಿಹವು ।
ವಾಸನಾಕ್ಷಯ ಮೋಕ್ಷ - ಮಂಕುತಿಮ್ಮ ॥ ೩೮೫ ॥

ಹೃದಯದುಬ್ಬರವೇನು ಹೊಟ್ಟೆಯುಬ್ಬರದಂತೆ ।
ಅದರಿಳಿತ ಕೊರಳ ನಾದದ ಸದ್ದಿನಿಂದ ॥
ಅದೆ ನಗುವು ದುಗುಡಗಳು, ಅದೆ ಹೊಗಳು ತೆಗಳುಗಳು ।
ಅದನಿಳಿಸೆ ಶಾಂತಿಯೆಲೋ - ಮಂಕುತಿಮ್ಮ ॥ ೩೮೬ ॥

ರದನೋದಯಜ್ವರಕೆ ಸಿಲುಕದಿಹ ಶಿಶುವಿರದು ।
ವಿಧಿಯೊದೆಗೆ ಸಿಕ್ಕದಿಹ ನರಜಂತುವಿರದು ॥
ಒದೆಪೆಟ್ಟು ಮುಗಿದಂದು ರಾಹುದಂಷ್ಟ್ರದೆ ಹೊರಟ ।
ವಿಧುಬಿಂಬವೋ ನೀನು - ಮಂಕುತಿಮ್ಮ ॥ ೩೮೭ ॥

ದೇಹಾತುಮಂಗಳೆರಡಂಗಗಳು ಜೀವನಕೆ ।
ನೇಹದಿಂದೊಂದನೊಂದಾದರಿಸೆ ಲೇಸು ॥
ದಾಹಗೊಂಡಿರಲೊಂದು ಮಿಕ್ಕೊಂದಕೆಲ್ಲಿ ಸುಖ? ।
ದ್ರೋಹ ಬೇಡೊಂದಕಂ - ಮಂಕುತಿಮ್ಮ ॥ ೩೮೮ ॥

ಕಾಯವನು ಮೃದ್ಭಾಂಡ ಮಾಂಸಪಿಂಡವೆನುತ್ತೆ ।
ಹೇಯವೆಂದೆಂದೊಡಾತ್ಮಂಗಪ್ಪುದೇನು? ॥
ಆಯುಧವನದನು ತೊರೆದಾತ್ಮನೇಂಗೈದಪನು ।
ನ್ಯಾಯ ತನುವಿಗಮಿರಲಿ - ಮಂಕುತಿಮ್ಮ ॥ ೩೮೯ ॥

ಸುಳ್ಳಲ್ಲ ಕಥೆಯ ತಿರುಕನು ಕಂಡ ಸವಿಗನಸು ।
ಚೆಲ್ಲಿತಲ್ಲವೆ ಹಿಟ್ಟು ಘಟವನವನೊದೆಯೆ? ॥
ಜಳ್ಳು ಸುಖದುಃಖವಿರಬಹುದಾದೊಡದರ ಮೊನೆ ।
ಮುಳ್ಳಹುದು ಜೀವಕ್ಕೆ - ಮಂಕುತಿಮ್ಮ ॥ ೩೯೦ ॥

ಹುರಿಯುರುಳೆ ಹಾವಲ್ಲವಾದೊಡಂ ಮಬ್ಬಿನಲಿ ।
ಹರಿದಾಡಿದಂತಾಗೆ ನೋಳ್ಪಂಗೆ ಬೆದರಿ ॥
ಸುರಿಸುವಾ ಬೆವರು ದಿಟ; ಜಗವುಮಂತುಟೆ ದಿಟವು ।
ಜರೆಯದಿರು ತೋರ್ಕೆಗಳ - ಮಂಕುತಿಮ್ಮ ॥ ೩೯೧ ॥

ಸೌಂದರ್ಯ ಬಾಂಧವ್ಯಗಳನು ಬರಿದೆನಲಹುದೆ? ।
ಹೊಂದಿಸವೆ ಕುಂದಿಸವೆ ಜೀವಿಗಳನವುಗಳ್? ॥
ಸಿಂಧುಪೂರದಿ ಬಿದ್ದವರೊಳೊಬ್ಬರೊಬ್ಬರನು ।
ಅಂದಿಕೊಳಲದು ಬರಿದೆ? - ಮಂಕುತಿಮ್ಮ ॥ ೩೯೨ ॥

ಎನಿತೆನಿತ್ತು ವಿಕಾರ ಪರಿಣಾಮಗಳ ನಮ್ಮ ।
ಮನಕಾಗಿಪುವೊ ಲೋಕರೂಪಶಕ್ತಿಗಳು ॥
ಅನಿತನಿತು ಸತ್ಯತೆಯವಕ್ಕುಂಟು ಜೀವಿತದಿ ।
ಅನುಭವವೆ ದಿಟದಳತೆ - ಮಂಕುತಿಮ್ಮ ॥ ೩೯೩ ॥

ಕನಸು ದಿಟ; ನೆನಸು ದಿಟ; ತನುವೊಳಿಹ ಚೇತನವ ।
ಕನಲಿಸುವ ಕುಣಿಸುವಾ ಹಬೆಗಳೆಲ್ಲ ದಿಟ ॥
ಇನಿತನಿತು ದಿಟಗಳಿವು-ತುಂಬುದಿಟದಂಶಗಳು ।
ಗಣನೀಯವವು ಬಾಳ್ಗೆ - ಮಂಕುತಿಮ್ಮ ॥ ೩೯೪ ॥

ತುಂಬುದಿಟ ಜೀವಿತದ ಗಣನೆಗಳ ಮೀರಿದುದು ।
ಇಂಬುಗಳ ಬಿಂಬಗಳ ಸನ್ನಿಧಾನವದು ॥
ಅಂಬರದಿನಾಚೆನದು, ತುಂಬಿರುವುದೆತ್ತಲುಂ ।
ಶಂಭು ಪರಬೊಮ್ಮನದು - ಮಂಕುತಿಮ್ಮ ॥ ೩೯೫ ॥

ಕಲ್ಮಷದ ವಲ್ಮೀಕವೆಂದೊಡಲ ಜರೆಯದಿರು ।
ಬ್ರಹ್ಮಪುರಿಯೆಂದದನು ಋಷಿಗಳೊರೆದಿಹರು ॥
ಹಮ್ಮುಳ್ಳ ಹಯವ ಕಾಪಿಟ್ಟು ಕಡಿವಣ ತೊಡಿಸೆ ।
ನಮ್ಮ ಗುರಿಗೈದಿಪುದು - ಮಂಕುತಿಮ್ಮ ॥ ೩೯೬ ॥

ದೇಹವೆಂಬುದು ಕುದುರೆಯಾತ್ಮನದರಾರೋಹಿ ।
ವಾಹನವನುಪವಾಸವಿರಿಸೆ ನಡೆದೀತೆ? ॥
ರೋಹಿ ಜಾಗ್ರತೆದಪ್ಪೆ ಯಾತ್ರೆ ಸುಖ ಸಾಗೀತೆ? ।
ಸ್ನೇಹವೆರಡಕಮುಚಿತ - ಮಂಕುತಿಮ್ಮ ॥ ೩೯೭ ॥

ಇರುವನ್ನಮೀ ಬಾಳು ದಿಟವದರ ವಿವರಣೆಯ ।
ಹೊರೆ ನಮ್ಮ ಮೇಲಿಲ್ಲ ನಾವದರ ಸಿರಿಯ ॥
ಪಿರಿದಾಗಿಸಲು ನಿಂತು ಯುಕ್ತಿಯಿಂ ದುಡಿಯುವುದು ।
ಪುರುಷಾರ್ಥಸಾಧನೆಯೊ - ಮಂಕುತಿಮ್ಮ ॥ ೩೯೮ ॥

ಕಾಯಮಾತ್ರದುದಲ್ಲವಾತ್ಮಮಾತ್ರದುದಲ್ಲ- ।
ವಾಯೆರಡುಮೊಂದಾಗಲದು ಜೀವಲೀಲೆ ॥
ತಾಯಿವೊಲು ನಿನಗಾತ್ಮ, ಮಡದಿವೊಲು ಕಾಯವವ- ।
ರಾಯವನು ಸರಿನೋಡು - ಮಂಕುತಿಮ್ಮ ॥ ೩೯೯ ॥

ದೃಶ್ಯವೆಲ್ಲವು ನಶ್ಯವಾದೊಡೇಂ? ದೃಷ್ಟಿಗದು ।
ವಶ್ಯವಿರುವನಕದನು ದೃಷ್ಟಿಪುದೆ ಕಾರ್ಯಂ ॥
ವಿಶ್ವಾನುಭವವೆ ವಿಶ್ವಾತ್ಮಾನುಭವಕೆ ಪಥ ।
ನಶ್ಯದಿಂದವಿನಶ್ಯ - ಮಂಕುತಿಮ್ಮ ॥ ೪೦೦ ॥

ಮರಣಶಯ್ಯೆಯದೆಂದು ತಿಳಿದೊಡಂ ರೋಗಿಯನು ।
ಹರಣಮಿರುವನ್ನೆಗಂ ಪರಿಚರಿಸುವಂತೆ ॥
ಸ್ಥಿರವಲ್ಲವೀ ಲೋಕವಾದೊಡಮದುಳ್ಳನಕ ।
ಚರಿಸು ನೀನಾಳಾಗಿ - ಮಂಕುತಿಮ್ಮ ॥ ೪೦೧ ॥

ಜವನ ನಿಂದಿಪುದೇಕೆ ಸರ್ವಘಾತಕನೆಂದು? ।
ಭುವಿಗೆ ವೃದ್ಧಸಮೃದ್ಧಿಯನು ಸುಮ್ಮನಿರಲ್ ॥
ನವಜನಕ್ಕೆಡೆಯೆತ್ತಲಾರುಮೆಡೆಬಿಡದೆ ನಿಲೆ? ।
ನವತೆಯವನಿಂ ಜಗಕೆ - ಮಂಕುತಿಮ್ಮ ॥ ೪೦೨ ॥

ಹೊಳಪು ಹೊಳಪಿನ ನಡುವೆ ಬಿಡುವಿನಿತು ರತ್ನದಲಿ ।
ಬೆಳಕು ಬೆಳಕಿನ ನಡುವೆ ಅನಿತಿನಿತು ನೆರಳು ॥
ಬೆಳಸು ಬೆಳಾಸಿನ ಸಾಲು ನಡುವೆ ಬದಿ ಗದ್ದೆಯಲಿ ।
ಉಳಿಗಳಿವಿನ ನೆರೆಯೊ - ಮಂಕುತಿಮ್ಮ ॥ ೪೦೩ ॥

ದೇವರ್ಕಳುದಿಸಿ ಮರೆಯಹರು; ದೇವತ್ವ ಚಿರ ।
ಜಾವ ದಿನ ಬಂದು ಪೋಗುವುವು; ಕಾಲ ಚಿರ ॥
ಜೀವದ ವ್ಯಕ್ತಿ ಸಾಯ್ವುದು; ಜೀವಸತ್ವ ಚಿರ ।
ಭಾವಿಸಾ ಕೇವಲವ - ಮಂಕುತಿಮ್ಮ ॥ ೪೦೪ ॥

ಪರಬೊಮ್ಮ ಜೀವಭೇದದಿ ನಿಜೈಕ್ಯವ ಮರೆಯೆ ।
ಮರಳಿ ತನ್ನೊಟ್ಟನವನರಸಲೆಚ್ಚರಿಸಲ್ ॥
ನರನಾರಿಯರ ಪರಸ್ಪರ ಮೋಹದಲಿ ಮಾಯೆ ।
ನಿರವಿಸಿಹಳಂಕುಶವ - ಮಂಕುತಿಮ್ಮ ॥ ೪೦೫ ॥

ನರನಾರಿಮೋಹದಿಂ ವಂಶವದಕಾಗಿ ಮನೆ ।
ನೆರೆ ಹೊರೆಗಳೂರು ರಾಷ್ಟ್ರಗಳು ಸಂಘಗಳು ॥
ಕೆರೆಯೊಂದು ಕೇಂದ್ರದಿಂದಲೆಯೆ ಬಳೆಗಳು ನೂರು ।
ಹರಿವಂತೆ ಸಂಸಾರ - ಮಂಕುತಿಮ್ಮ ॥ ೪೦೬ ॥

ಅದರಿಂದ ನೀತಿ ನಯವದರಿಂದ ಕುಲಗೋತ್ರ ।
ವದರಿಂದ ರಾಜ್ಯ ಮಠ ಧರ್ಮ ಸಂಸ್ಥೆಗಳು ॥
ಒದವುವದರಿಂದೆ ಮಮತಾನಾಶದವಕಾಶ- ।
ವದರಿನಾತ್ಮವಿಕಾಸ - ಮಂಕುತಿಮ್ಮ ॥ ೪೦೭ ॥

ತಲೆಯಿಂದ ತಲೆಗೆ, ಪೀಳಿಗೆಯಿಂದ ಪೀಳಿಗೆಗೆ ।
ಅಲೆಯಿಂದಲಲೆಗೆ ಟಪ್ಪೆಯ ಚಾರನಂತೆ ॥
ಇಳಿಯುತಿದೆ ಯುಗದಿಂದ ಯುಗಕೆ ಮಾನವಧರ್ಮ ।
ನಿಲದಮೃತಧಾರೆ - ಮಂಕುತಿಮ್ಮ ॥ ೪೦೮ ॥

ಮಾನುಷದ ಚರಿತೆ ಪರಸತ್ತ್ವಸಾಕ್ಷಾತ್ಕವಿತೆ ।
ಕಾಣಿಪುದದಾತ್ಮಸ್ವಭಾವದುದ್ಗಮವ ॥
ಏನಾಶೆ! ಯೇನು ಸಾಹಸ! ವೇನು ಭಂಗಗಳು! ।
ಆನುಭವವೇದವದು - ಮಂಕುತಿಮ್ಮ ॥ ೪೦೯ ॥

ಜಾನಪದಗಳು ರಾಜ್ಯಸಾಮ್ರಾಜ್ಯಗಳು ಗುರು ।
ಸ್ಥಾನಗಳು ಧರ್ಮಗಳು ಭಾಷೆ ವಿದ್ಯೆಗಳು ॥
ಕಾಣಿಸದೆ ಸಾಗಿಹವು ಕಾಲಪ್ರವಾಹದಲಿ ।
ಮಾನವತೆ ನಿಂತಿಹುದು - ಮಂಕುತಿಮ್ಮ ॥ ೪೧೦ ॥

ತೆರಪನರಿಯದೆ ಪರಿವ ಕಾಲಪ್ರವಾಹದಲಿ ।
ಪುರುಷರಚಿತಗಳೆನಿತೊ ತೇಲಿಹೋಗಿಹವು ॥
ಪುರ ರಾಷ್ಟ್ರ ದುರ್ಗಗಳು, ಮತ ನೀತಿ ಯುಕ್ತಿಗಳು ।
ಪುರುಷತನ ನಿಂತಿಹುದು - ಮಂಕುತಿಮ್ಮ ॥ ೪೧೧ ॥

ಜನಿಸಿದೆಡೆಯಿಂ ಕಡಲವರೆಗಮಡಿಯಡಿ ನೆಲದ ।
ಗುಣದ ಕೊಳ್ಳುತ ಕೊಡುತ ಪೊನಲು ಮಾರ್ಪಡುಗಂ ॥
ಮನುಜಸಂತಾನದಲಿ ಗುಣದವತರಣವಂತು ।
ಗುಣಿಪುದೆಂತಾ ತೆರನ - ಮಂಕುತಿಮ್ಮ ॥ ೪೧೨ ॥

ಬರಿಯ ಹೆಣ್ ಬರಿಯ ಗಂಡೆಂಬುದಿಳೆಯೊಳಗಿಲ್ಲ ।
ಬೆರಕೆಯಲ್ಲರುಮರ್ಧನಾರೀಶನಂತೆ ॥
ನರತೆಯಣು ನಾರಿಯಲಿ ನಾರೀತ್ವ ನರನೊಳಣು ।
ತಿರಿಚುತಿರುವುದು ಮನವ - ಮಂಕುತಿಮ್ಮ ॥ ೪೧೩ ॥

ಅಳೆವನಾರ್ ಪೆಣ್ಗಂಡುಗಳನೆಳೆವ ನೂಲುಗಳ? ।
ಕೆಳೆಪಗೆಗಳೆಲ್ಲವಾಳದಲಿ ಬಲು ತೊಡಕು ॥
ಇಳೆಯ ಋಣಗಳ ಲೆಕ್ಕವಿಹುದು ವಿಧಿಯಕ್ಕರದಿ ।
ತಿಳಿಯಗೊಡನದ ನಮಗೆ - ಮಂಕುತಿಮ್ಮ ॥ ೪೧೪ ॥

ಎಲ್ಲಿಯದನೊ ಅದೆಲ್ಲಿಯದಕೋ ಹೆಣೆಯುವನು ।
ಒಲ್ಲೆವೆನೆ ನೀವೆ ಕಿತ್ತಾಡಿಕೊಳಿರೆನುವನ್ ॥
ಬೆಲ್ಲದಡುಗೆಯಲಿ ಹಿಡಿ ಮರಳನೆರಚಿರಿಸುವನು ।
ಒಳ್ಳೆಯುಪಕಾರಿ ವಿಧಿ - ಮಂಕುತಿಮ್ಮ ॥ ೪೧೫ ॥

ಕುಸುಮಕೋಮಲಗಾತ್ರ ಶೂರ್ಪಣಖಿಗಿರಿದಾಯ್ತೆ? ।
ವಿಷದ ಪೂತನಿ ನಯನಪಕ್ಷ್ಮದೊಳಗಿರಳೆ? ॥
ಮುಸಿನಗುವಿನೊಳಗಿರಲಶಕ್ಯವೆ ಪಿಶಾಚಿಕೆಗೆ ।
ಮೃಷೆಯೊ ಮೈಬೆಡಗೆಲ್ಲ - ಮಂಕುತಿಮ್ಮ ॥ ४೧೬ ॥

ಹೇಮಕುಂಭದಿ ಕೊಳಚೆರೊಚ್ಚುನೀರ್ಗಳ ತುಂಬಿ ।
ರಾಮನೀಯಕದೊಳಿಟ್ಟಾಮಗಂಧವನು ॥
ಪ್ರೇಮಪುಷ್ಪಕೆ ಮೊನಚು ಗರಗಸವನಂಚಿರಿಸಿ ।
ಏಂ ಮಾಡಿದನೊ ಬೊಮ್ಮ! - ಮಂಕುತಿಮ್ಮ ॥ ४೧೭ ॥

ಕೈಕೇಯಿ ಸತ್ಯಭಾಮೆಯರಂಶವಿರದ ಪೆಣ್ ।
ಲೋಕದೊಳಗಿರಳು; ಬೆಳೆವುದು ಲೋಕವವರಿಂ ॥
ಸಾಕಿ ಸಲಹುವ ಮತ್ಸರವದು ಸೃಷ್ಟಿಯುಪಾಯ ।
ಬೇಕದಕೆ ನಗು ಸಹನೆ - ಮಂಕುತಿಮ್ಮ ॥ ४೧೮ ॥

ಎಳೆಯ ತರು ದಿನದಿನವು ಹೊಸತಳಿರ ತಳೆವಂತೆ ।
ತಿಳಿನೀರು ಚಿಲುಮೆಯಲಿ ನಿಲದುಕ್ಕುವಂತೆ ॥
ಎಳೆ ಮಕ್ಕಳೊಳು ತಿಳಿವು ಮೊಳೆತು ಬೆಳೆವುದು ನೋಡು ।
ಇಳೆಯೊಳಗದೊಂದು ಸೊಗ - ಮಂಕುತಿಮ್ಮ ॥ ४೧೯ ॥

ಮಕ್ಕಳ ಭವಿಷ್ಯಕ್ಕೆ ಕಕ್ಕುಲಿತೆಗೊಳಬೇಡ ।
ಪಕ್ಕಾಗುವುದು ಭಾಗ್ಯವೆಂತೆಂತೊ ಜಗದಿ ॥
ದಕ್ಕಿತೇಂ ಕುರುಪಾಂಡುತನಯರ್ಗೆ ರಾಜ್ಯಸುಖ? ।
ದಿಕ್ಕುವರಿಗವರವರೆ - ಮಂಕುತಿಮ್ಮ ॥ ४೨೦ ॥

ತನುಭವವ್ಯಾಮೋಹ ಮುಸುಕಿತಾ ವ್ಯಾಸನಂ? ।
ಜನಿಪುದದು ಪ್ರಕೃತಿತಂತ್ರದೆ ಹೃದಯತಲದೊಳ್ ॥
ಕ್ಷಣಮಾತ್ರಮಾನುಮದು ಕಣ್ಣೀರ ಬರಿಸುವುದು ।
ಗಣಿಸಬೇಡದನು ನೀಂ - ಮಂಕುತಿಮ್ಮ ॥ ४೨೧ ॥

ಅನುರಾಗದುಃಖಂಗಳೊಮ್ಮೊಮ್ಮೆ ಬಿರುಬೀಸಿ ।
ಮನದಿ ತೆರೆಗಳ ಕುಲುಕಿ ಕಡೆಯುವುದುಮೊಳಿತು ॥
ಘನ ವರ್ಷ ಬಿರುಗಾಳಿ ಬಡಿಯಲಿರುಳೊಳ್ ನೆಲನ ।
ದಿನದ ಸೊಗಸಿಮ್ಮಡಿಯೊ - ಮಂಕುತಿಮ್ಮ ॥ ೪೧೧ ॥

ಭಾವರಾಗೋದ್ರೇಕ ತಾನೆ ತಪ್ಪೇನಲ್ಲ ।
ಧೀವಿವೇಕದ ಸಮತೆಯದರಿನದಿರದಿರೆ ॥
ಸ್ವಾವಿದ್ಯೆಯಾ ಮೋಹ ಮಮತೆಯದನಂಟದಿರೆ ।
ಪಾವನವೊ ಹೃನ್ಮಥನ - ಮಂಕುತಿಮ್ಮ ॥ ೪೧೨ ॥

ಕಾರಿರುಳೊಳಾಗಸದಿ ತಾರೆ ನೂರಿದ್ದೇನು? ।
ದಾರಿಗನ ಕಣ್ಗೆ ಬೇಕೊಂದು ಮನೆಬೆಳಕು ॥
ದೂರದಾ ದೈವವಂತಿರಲಿ, ಮಾನುಷಸಖನ ।
ಕೋರುವುದು ಬಡಜೀವ - ಮಂಕುತಿಮ್ಮ ॥ ೪೧೪ ॥

ಹರಿಗೆ ನಿನ್ನನುರಾಗವೆಲ್ಲವನು ಸಲ್ಲಿಸೆನೆ ।
ಮರುನುಡಿಯ ನುಡಿವನೇನ್ ಒಡಲ ತೋರದನು? ॥
ಪರಿತಪಿಸುವುದು ಜೀವ ಜೀವಸರಸವನೆಳಸಿ ।
ನರಧರ್ಮಸೂಕ್ಷ್ಮವಿದು - ಮಂಕುತಿಮ್ಮ ॥ ೪೧೫ ॥

ಮನುಜರೂಪದಿನಾದರವನು ಪಡೆಯದ ಹೃದಯ- ।
ವನುರಾಗವನು ಬಿಡಾಲಕೊ ಶುಕಕೊ ಕಪಿಗೊ ॥
ಶುನಕಕೋ ಸುರಿದದರ ಮಾರ್ದನಿಯನಾಲಿಪುದು ।
ತಣಿವು ಜೀವಸ್ವರದೆ - ಮಂಕುತಿಮ್ಮ ॥ ೪೧೬ ॥

ಮಾತೆವೊಲೊ ಪಿತನವೊಲೊ ಪತಿಯವೊಲೊ ಸತಿಯವೊಲೊ ।
ಭ್ರಾತಸುತಸಖರವೊಲೊ ಪಾತ್ರವೊಂದಕೆ ತಾಂ ॥
ಕಾತರಿಸುತಿಹುದು ತನ್ನೆಲ್ಲವನು ಮುಡುಪುಕುಡೆ ।
ಪ್ರೀತಿಯ ಹುಚ್ಚು ಚಟ - ಮಂಕುತಿಮ್ಮ ॥ ೪೧೭ ॥

ಪ್ರೇಮ ಕನಲೆ ಪಿಶಾಚಿ, ತೃಪ್ತಿಯಾಂತಿರೆ ಲಕ್ಷ್ಮಿ ।
ಭ್ರಾಮಿಪುದದು ಪ್ರತಿಪ್ರೇಮಯಾಚನೆಯೊಳ್ ॥
ಮಾಮಕವಿದೆಂದಾವುದಕೊ ತಾನೆ ಬಲಿವೋಗಿ ।
ಶಾಮನವನೊಂದುವುದು - ಮಂಕುತಿಮ್ಮ ॥ ೪೧೮ ॥

ಬಂಧನವದೇನಲ್ಲ ಜೀವಜೀವಪ್ರೇಮ ।
ಒಂದೆ ನಿಲೆ ಜೀವವರೆ, ಬೆರೆತರಳೆ ಪೂರ್ಣ ॥
ದಂದುಗವನ್ ಅರಗೆಯ್ದು, ಸಂತಸವನಿಮ್ಮಡಿಪ ।
ಬಾಂಧವ್ಯ ದೈವಕೃಪೆ - ಮಂಕುತಿಮ್ಮ ॥ ೪೧೯ ॥

ಒಬ್ಬನುಣುವೂಟದಲಿ ಸವಿಯಿಲ್ಲ ಸೊಗವಿಲ್ಲ ।
ಇಬ್ಬರಾಗುವೆನೆಂದನಂತೆ ಪರಬೊಮ್ಮಂ ॥
ಹೆಬ್ಬದುಕನೊಂಟಿತನದೊಳದೇನು ಬದುಕುವೆಯೊ? ।
ತಬ್ಬಿಕೊಳೊ ವಿಶ್ವವನು - ಮಂಕುತಿಮ್ಮ ॥ ೪೨೦ ॥

ಕೊಳದಿ ನೀಂ ಮೀವಂದು ತೆರೆಯೆದ್ದು ಹರಡುತ್ತೆ ।
ವಲಯವಲಯಗಳಾಗಿ ಸಾರುವುದು ದಡಕೆ ॥
ಅಲೆಗಳಾ ತೆರದಿ ನಿನ್ನಾತ್ಮದಿಂ ಪರಿಪರಿದು ।
ಕಲೆತುಕೊಳ್ಳಲಿ ಜಗದಿ - ಮಂಕುತಿಮ್ಮ ॥ ೪೨೩ ॥

ಪ್ರತ್ಯೇಕಸುಖವಲ್ಪದುದು, ಗಳಿಗೆತೋರ್ಕೆಯದು ।
ಆತ್ಮವಿಸ್ತಾರವಾಗಿಪುದೆ ನಿತ್ಯಸುಖ ॥
ವ್ಯಕ್ತಿಜೀವನದ ಸೊಂಪು ಸಮಷ್ಟಿಜೀವನದಿ ।
ಒಟ್ಟುಬಾಳ್ವುದ ಕಲಿಯೊ - ಮಂಕುತಿಮ್ಮ ॥ ೪೨೧ ॥

ಅಳುವೇನು? ನಗುವೇನು? ಹೃತ್ಕಪಾಟೋದ್ಘಾಟ ।
ಶಿಲೆಯೆ ನೀಂ ಕರಗದಿರಲ್? ಅರಳದಿರೆ ಮರಳೇಂ? ॥
ಒಳಜಗವ ಹೊರವಡಿಪ, ಹೊರಜಗವನೊಳಕೊಳುವ ।
ಸುಳುದಾರಿಯಳುನಗುವು - ಮಂಕುತಿಮ್ಮ ॥ ೪೨೨ ॥

ನಗುವೊಂದು ರಸಪಾಕವಳುವೊಂದು ರಸಪಾಕ ।
ನಗುವಾತ್ಮ ಪರಿಮಳವ ಪಸರಿಸುವ ಕುಸುಮ ॥
ದುಗುಡವಾತ್ಮವ ಕಡೆದು ಸತ್ತ್ವ ವೆತ್ತುವಮಂತು ।
ಬಗೆದೆರಡನುಂ ಭುಜಿಸು - ಮಂಕುತಿಮ್ಮ ॥ ೪೨೪ ॥

ರಮಣೀಯಕದಿ ನಲಿವಕ್ಷಿಯೊಡನೆಚಲಮನ ।
ಪ್ರೇಮಮಯಮನದೊಡನೆ ಮೋಹಬಡದಾತ್ಮ ॥
ಭೀಮಬಲದೊಡನೆ ರಾಮನ ಅಭಯ ನಿಯಮವಿರೆ ।
ಯಾಮಳ ವರಂಗಳವು - ಮಂಕುತಿಮ್ಮ ॥ ೪೨೫ ॥

ಎದೆ ಮಾರುವೋಗದೊಡೆ, ಕಣ್ ಸೊಬಗನುಂಡರೇಂ? ।
ಹೃದಯ ಮುಯ್ ಕೇಳದೊಡೆ, ನೆಲವ ಸೂಸಿದರೇಂ? ॥
ಕದಡದಿರ್ದೊಡೆ ಮನವ, ತನು ಸೊಗವ ಸವಿದೊಡೇಂ? ।
ಮುದ ತಾನೆ ತಪ್ಪಲ್ಲ - ಮಂಕುತಿಮ್ಮ ॥ ೪೩೬ ॥

ಶಕ್ತಿ ಕರಣಕ್ಕಿರಲಿ, ರಸ ಸಂಗ್ರಹಣ ಶಕ್ತಿ ।
ಯುಕ್ತಿವದರೊಡನಿರಲಿ ಭೋಗದಿ ವಿರಕ್ತಿ ॥
ಶಕ್ತಿ ತನ್ನೊಳಗಿದ್ದು ರಕ್ತಮನನಾಗದನೆ ।
ಉತ್ತಮೋತ್ತಮ ಸುಕೃತಿ - ಮಂಕುತಿಮ್ಮ ॥ ೪೩೭ ॥

ತಳಿರ ನಸುಕೆಂಪು, ಬಳುಕೆಲೆಯ ಹಸುರಿನ ಸೊಂಪು ।
ತಿಳಿಮನದ ಯುವಜನದ ನಗುಗಣ್ಣ ಹೊಳಪು ॥
ಬೆಳೆವರಿವು ಮಗುದುಟಿಯಿನುಣ್ಣಿಸುವ ನುಡಿಚೆಗುರು ।
ಇಳೆಯೊಳಿನೊಲ್ಲನಾರ್? - ಮಂಕುತಿಮ್ಮ ॥ ೪೩೮ ॥

ಏಳಿಸುವುದೊಂದು ಹೊರಸುಳಿವೆನ್ನ ಹೃದಯದಲಿ ।
ಗಾಳಿಸುಂಟರೆಯನದು ಹರಣಗಳ ಕುಲುಕಿ ॥
ಬಾಳನಲ್ಲಾಡಿಪುದು ಬೇರಿಂದ ತುದಿವರೆಗೆ ।
ಧೂಳದರೊಳೀ ಜನ್ಮ - ಮಂಕುತಿಮ್ಮ ॥ ೪೩೯ ॥

ಹೊರಗೆ ಹೊಳೆವೊಂದು ಹೊಳಪಿನ ಕಿರಣವೆನ್ನೆದೆಯೊ- ।
ಳುರಿಯನೆಬ್ಬಿಸಿ ಹೊಗೆಯನೆರಚೆ ಕಣ್ಗಳಿಗೆ ॥
ಕೆರಳಿಪುದು ಕರಣಗಳ, ಮರಳಿಪುದು ಹರಣಗಳ ।
ಹೊರಮೋಹವೊಳದಾಹ - ಮಂಕುತಿಮ್ಮ ॥ ೪೪೦ ॥

ಇಂತು ಹೊರಗೊಳಗುಗಳು ಬೇರೆಲೋಕಗಳಲ್ಲ ।
ಅಂತರಂಗದೊಳೂರಸಂತೆ ಸದ್ದಿಹುದು ॥
ಸಂತೆಯೊಳಮಂತರಂಗದ ಸದ್ದು ಕೇಳಿಪುದು ।
ಸ್ವಾಂತದಿಕ್ಕೆಲಗಳವು - ಮಂಕುತಿಮ್ಮ ॥ ೪೪೧ ॥

ಸೊಗಸು ಬೇಡದ ನರಪ್ರಾಣಿಯೆಲ್ಲಿಹುದಯ್ಯ? ।
ಮಗುವೆ, ಮುದುಕನೆ, ಪುರಾಣಿಕ ಪುರೋಹಿತರೆ? ॥
ಜಗದ ಕಣ್ಣಿಣಿಕದೆಡೆ ಮುಕುರದೆದುರೊಳು ನಿಂತು ।
ಮೊಗವ ತಿದ್ದುವರೆಲ್ಲ - ಮಂಕುತಿಮ್ಮ ॥ ೪೪೨ ॥

ತಿಂಗಳಾರರ ದುಡಿತ ಚೆಂಗುಲಾಬಿಯ ಬೆಳೆತ ।
ಕಂಗೊಳಿಪುದದರ ಸಿರಿಯರೆಗಳಿಗೆಯಲರೊಳ್ ॥
ಪೊಂಗುವಾನಂದವದನನುಭವಿಸಿದವನ್ ಅಜನ ।
ಹಂಗಿಪನೆ ಕೃಪಣತೆಗೆ? - ಮಂಕುತಿಮ್ಮ ॥ ೪೪೩ ॥

ಬಾಂದಳದ ಬಾಗು, ರವಿಕಿರಣಗಳ ನೀಳ್ಕೋಲು ।
ಇಂದುಮಣಿನುಣ್ಪು, ತಾರೆಗಳ ಕಣ್ಮಿನುಗು ॥
ಚೆಂದದಂಗಾಂಗಭಾವದಿ ಮೊದಲ ಪಾಠವಿವು ।
ಸೌಂದರ್ಯಗುರು ಪ್ರಕೃತಿ - ಮಂಕುತಿಮ್ಮ ॥ ೪೪೪ ॥

ಕ್ಷಣವದೊಂದೆ ಅನಂತಕಾಲ ತಾನಾಗುವುದು ।
ಅನುಭವಕೆ ಸತ್ತ್ವ ಶಿವ ಸುಂದರಗಳಮರೆ ॥
ಮನ ತುಂಬುಶಶಿಯಾಗಿ, ನೆನಪಮೃತವಾಗುವುದು ।
ಕ್ಷಣದೊಳಕ್ಷಯ ಕಾಣೊ - ಮಂಕುತಿಮ್ಮ ॥ ೪೪೫ ॥

ಸುಂದರತೆಯೆನುವುದೇಂ? ಜನಕೆ ಮೈಮರೆಯಿಪಾ- ।
ನಂದದೊಳಮರುಮವೇಂ? ವಿಶ್ವಚೇತನದಾ ॥
ಸ್ಪಂದನವೆ ಸೌಂದರ್ಯಮದುವೆ ಜೀವನಮೂಲ ।
ಬಂಧುರತೆ ಬೊಮ್ಮನದು - ಮಂಕುತಿಮ್ಮ ॥ ೪೪೬ ॥

ದೃಷ್ಟಿಚುಕ್ಕೆಯದೊಂದನೆಲ್ಲ ಚೆಂದಂಗಳ್ಗೆ- ।
ಮಿಟ್ಟಿಹನು ಪರಮೇಷ್ಠಿ, ಶಶಿಗೆ ಮಶಿಯವೊಲು ॥
ಗುಟ್ಟೇನೊ? ರಕ್ಷೆಯೋ? ಸಿಂಗರವೊ? ಹೇಳನವೊ? ।
ಮಷ್ಟು ಸೃಷ್ಟಿಗೆ ಬೊಟ್ಟು - ಮಂಕುತಿಮ್ಮ ॥ ೪೪೭ ॥

ಬಿಂದು ವಿಸರಗಳನುವು, ವಂಕು ಸರಲಗಳನುವು ।
ಚೆಂದ ಕಣ್ಣಿಗೆ ವರ್ಣವಿವಿಧಂಗಳನುವು ॥
ಚೆಂದ ವೇಗ ಸ್ತಿಮಿತದನುವು, ಹುಳಿಯುಪ್ಪನುವು ।
ದ್ವಂದ್ವದನುವುಗಳಂದೆ - ಮಂಕುತಿಮ್ಮ ॥ ೪೪೮ ॥

ಸೌಂದರ್ಯದಾಲಯ ಬರಿ ದ್ವಂದ್ವವೇನಲ್ಲ ।
ದ್ವಂದ್ವದೊಳಗನುವು; ಅದು ಪರಿಮಾಣದುಚಿತ ॥
ಸಂಧಾನರೀತಿಯದು; ಸಹಕಾರ ನೀತಿಯದು ।
ಸಂದರ್ಭಸಹಜತೆಯೊ - ಮಂಕುತಿಮ್ಮ ॥ ೪೪೯ ॥

ಸೌಂದರ್ಯದೊಳ್ ದ್ವಂದ್ವ, ಬಾಂಧವ್ಯದೊಳ್ ದ್ವಂದ್ವ ।
ದ್ವಂದ್ವವೀ ಲೋಕ ಸಹವಾಸಗಳೊಳೆಲ್ಲ ॥
ಮುಂದೆ ನೀನಾವುಭಯಗಳ ದಾಟಿ ಸಾಗುತಿರೆ ।
ಬಂಧಮೋಚನ ನಿನಗೆ - ಮಂಕುತಿಮ್ಮ ॥ ೪೫೦ ॥

ನೀಲ ವಿಸ್ತರವಿರಲು ನಕ್ಷತ್ರ ಬಿಂದು ಸೊಗ ।
ಶೈಲದಚಲತೆಯಿರಲು ಝರಿಯ ವೇಗ ಸೊಗ ॥
ಬಾಳು ಬಯಲಂತಿರಲು ಮನೆಯಚ್ಚುಕಟ್ಟಿಂಭು ।
ವೈಲಕ್ಷಣದೆ ಚೆಂದ - ಮಂಕುತಿಮ್ಮ ॥ ೪೫೧ ॥

ನೀಳುಗೆರೆ ಬಳುಬಳುಕೆ ಕಡಲತೆರೆಯೊಯ್ಯಾರ ।
ತಾಳಲಯ ಸೇರೆ ರಾಗದ ನಾಟ್ಯ ಧಾಟಿ ॥
ಗೋಳದ ಜ್ವಾಲೆಯಿಂ ಗಗನಪಟ ಸಿಂಗಾರ ।
ವೈಲಕ್ಷಣದೊಳಿಂಬು - ಮಂಕುತಿಮ್ಮ ॥ ೪೫೨ ॥

ತಾಯೊ ತಂಗಿಯೊ ಎನಿಪ ಶುಚಿಯ ಸೌಮ್ಯದ ಸೊಬಗು ।
ಪ್ರೇಯಸಿಯ ಕರೆವೊಲಾತುರವಡಿಪ ಬೆಡಗು ॥
ಈಯೆರಡು ಸಮದ ರುಚಿ ನಿನ್ನಿನಿಬ್ಬಗೊಳಿಸೆ ।
ಧ್ಯೇಯ ನಿನಗಾವುದೆಲೊ? - ಮಂಕುತಿಮ್ಮ ॥ ೪೫೩ ॥

ಪರಿಪರಿಯ ವಿಶ್ವಪ್ರಕೃತಿಶಕ್ತಿತೇಜಗಳು ।
ಕೆರಳಿಸಲು ನರಹೃದಯರಭಸಗಳನದರಿಂ ॥
ಪೊರಮಡುವ ಸಂಮೋಹಧೀರಗಂಭೀರಗಳ ।
ಸರಸತೆಯೆ ಸುಂದರವೊ - ಮಂಕುತಿಮ್ಮ ॥ ೪೫೪ ॥

ಸುಂದರದ ರಸ ನೂರು; ಸಾರವದರೊಳು ಮೂರು ।
ಹೊಂದಿಪ್ಪವವು ಮೋಹ ಕರುಣೆ ಶಾಂತಿಗಳ ॥
ಒಂದರಿಂದೊಂದು ಬೆಳೆಯಾದಂದು ಜೀವನವು ।
ಚೆಂದಗೊಂಡುಜ್ಜುಗವೊ - ಮಂಕುತಿಮ್ಮ ॥ ೪೫೫ ॥

ಪಿಡಿ ಗಳಿಸು ಭುಜಿಸೊಡೆಯನಾಗೆನ್ನುವುದು ಮೋಹ ।
ಕೊಡು ಸಲಿಸು ಸೇವೆಗೈಯೆನ್ನುವುದು ಕರುಣೆ ॥
ಬಿಡು ನೀನು ನಾನುಗಳ, ವಿಶ್ವಾತ್ಮಪದವನೀ- ।
ನಡರೆನ್ನುವುದು ಶಾಂತಿ - ಮಂಕುತಿಮ್ಮ ॥ ೪೫೬ ॥

ಚಾರುದೃಶ್ಯಂಗಳಿಂ ಪ್ರೀತಿ ಹೃದಯವಿಕಾಸ ।
ಕ್ರೂರದೌಷ್ಟ್ಯಂಗಳಿಂ ವೀರಾನುಕಂಪ ॥
ಭೈರವಾದ್ಭುತಗಳಿಂ ಮೌನದಂತರ್ಮನನ ।
ದಾರಿಯುದ್ಧಾರಕಿವು - ಮಂಕುತಿಮ್ಮ ॥ ೪೫೭ ॥

ಹಿಂದಣದರುಳಿವಿರದು, ಮುಂದಣದರುಸಿರಿರದು ।
ಒಂದರೆಕ್ಷಣ ತುಂಬಿ ತೋರುವುದನಂತ ॥
ಒಂದೆ ಕಣ್ಣೊಂದೆ ಗುರಿಯೊಂದೆ ಮೈಮನಮರೆತ ।
ಸುಂದರದ ಲೋಕವದು - ಮಂಕುತಿಮ್ಮ ॥ ೪೫೮ ॥

ಹೃದಯಪುಷ್ಪಮರಂದವಾತ್ಮಕೆ ನಿಜಾನಂದ ।
ಉದಿಪುದಾ ರಸ ಸುಂದರದ ಕಿರಣ ಸೋಕೆ ॥
ಬದುಕಿನೊಳ್ ಕವಿತೆಯೊಳ್ ಕಲೆಗಳೊಳ್ ಪ್ರಕೃತಿಯೊಳ್ ।
ಪುದಿದಿರ್ಪ ಕಾಂತಿಯದು - ಮಂಕುತಿಮ್ಮ ॥ ೪೫೯ ॥

ಜಗದ ಬಂದೀಗೃಹದಿ ಬಿಗಿಯುತಿರೆ ವಿಧಿ ನಿನ್ನ ।
ನಿಗಮ ಸತ್ಕಲೆ ಕಾವ್ಯಗಳ ಗವಾಕ್ಷಗಳಿಂ ॥
ಗಗನದೊಳನಂತದರ್ಶನದೆ ಮುಕ್ತಿಯನೊಂದು ।
ನಗುನಗಿಸಿ ಲೋಕವನು - ಮಂಕುತಿಮ್ಮ ॥ ೪೬೦ ॥

ರಾಮನುಂ ಭರತನುಂ ತಬ್ಬಿಕೊಂಡತ್ತಂದು ।
ಪ್ರೇಮಾಶ್ರುವುಕ್ಕಿ ನದಿಯಾಗಿ ಪರಿದಂದು ॥
ಸೀಮೆಯಂ ಮುಟ್ಟಿತಲ ಬಾಂಧವ್ಯಸೌಂದರ್ಯ ।
ಕ್ಷೇಮವದು ಜೀವಕ್ಕೆ - ಮಂಕುತಿಮ್ಮ ॥ ೪೬೧ ॥

ಪ್ರೀತಿಮಹಿಮೆಯ ಚಿತ್ರರೀತಿಯಂ ವಾಲ್ಮೀಕಿ ।
ನೀತಿಸೂಕ್ಷ್ಮದ ಗಹನಮಾರ್ಗಮಂ ವ್ಯಾಸರ್ ॥
ಗೀತೆಯಲಿ ವಿಶ್ವಜೀವನರಹಸ್ಯವನವರ್ ।
ಖ್ಯಾತಿಸಿಹರದು ಕಾವ್ಯ - ಮಂಕುತಿಮ್ಮ ॥ ೪೬೨ ॥

ಹೃದಯಕೊಪ್ಪುವ ಭಾಷೆ ರಾಗಲಯ ವಿಸ್ತಾರ ।
ಪದ ಚರ್ಚೆ ಮಿತವಿಚಾರಕೆ ತಕ್ಕ ಭಾಷೆ ॥
ಹೃದಯಮತಿ ಸತಿಪತಿಗಳಂತಿರಲು ಯುಕ್ತವದು ।
ಬದುಕು ರಸತರ್ಕೈಕ್ಯ - ಮಂಕುತಿಮ್ಮ ॥ ೪೬೩ ॥

ಸ್ರವಿಸುವುದು ಜೀವರಸ ಹೃದಯಗರ್ತದ ತಳದಿ ।
ಕಿವಿಗಾ ರಹಸ್ಯದುಲಿ ಕಾವ್ಯಗಾನಗಳಿಂ ॥
ಭುವನದಾಚೆಯ ರಹಸ್ಯದ ಕೀರ್ತಿ ವೇದಗಳ ।
ರವದಿನೆಂದಾರ್ಷಮತ - ಮಂಕುತಿಮ್ಮ ॥ ೪೭೪ ॥

ಸ್ವರರಾಗಗೀತಿಗಳು ನಾಟ್ಯಾಭಿನೀತಿಗಳು ।
ಕರೆದೇಳಿಸುವುವು ಮನಸಿನಲಿ ನಿದ್ರಿಸುವಾ ॥
ಪರಿಪರಿಯ ಭಾವಗಳ ಗೂಢಸ್ವಭಾವಗಳ ।
ಪರಮೇಷ್ಠಿ ಟೀಕು ಕಲೆ - ಮಂಕುತಿಮ್ಮ ॥ ೪೭೫ ॥

ವ್ಯಸನಕಾರಣವೊಂದು ಹಸನಕಾರಣವೊಂದು ।
ರಸಗಳೀಯೆರಡಕಿಂತಾಳವಿನ್ನೊಂದು ॥
ಭೃಶವಿಶ್ವಜೀವಿತಗಭೀರತೆಯ ದರ್ಶನದ ।
ರಸವದದ್ಭುತಮೌನ - ಮಂಕುತಿಮ್ಮ ॥ ೪೭೭ ॥

ಗಣನೆಗೆಟುಕದ ಗುಣಗಳಾತ್ಮದವರ್ಣ್ಯಗಳು ।
ಮನದ ದೇಹದ ಜೀವದೆಲ್ಲ ಕರಣಗಳಾ ॥
ಅನುಭವದ ಮುಕರದೊಳ್ ಪ್ರತಿಫಲಿಸೆ ತನ್ನದೊಂ - ।
ದಣುವದುವೆ ಸುಂದರವೊ - ಮಂಕುತಿಮ್ಮ ॥ ೪೭೮ ॥

ಲಾವಣ್ಯವಾತ್ಮಗುಣವದರಿಂದೆ ಲೋಕಜನ ।
ದೇವನನು ಕಮನೀಯ ವಿಗ್ರಹಂಗಳಲಿ ॥
ಭಾವಿಸುತ ತಮ್ಮಿಷ್ಟಭೋಗಗಳನರ್ಪಿಸುವ ।
ಸೇವೆಯಿಂ ನಲಿಯುವರು - ಮಂಕುತಿಮ್ಮ ॥ ೪೭೬ ॥

ಸೌಂದರ್ಯವೊಂದು ದೈವರಹಸ್ಯ, ಸೃಷ್ಟಿವೊಲು ।
ನಿಂದಿರ್ಪುದದರಾಶೆಯಿನೆ ಜೀವಿತಾಶೆ ॥
ಅಂದುವುದು ಕಣ್ಣಿಗದು ಸಂಸ್ಕೃತಿಗೆ ತಕ್ಕಂತೆ ।
ಚೆಂದದರಿವೆ ತಪಸ್ಸೊ - ಮಂಕುತಿಮ್ಮ ॥ ೪೭೯ ॥

ವಿವಿಧರಸಗಳ ಭಟ್ಟಿ, ಸೌಂದರ್ಯಕಾಮೇಷ್ಟಿ ।
ಕವಿಜಗತ್ಸೃಷ್ಟಿಯದು, ಕಲೆಗನಾಕೃಷ್ಟಿ ॥
ಗವಿಯೊಳಗಣ ಪ್ರಕೃತಿಯಂತ್ರ ವೈಚಿತ್ರ್ಯವದು ।
ತಪಸೊಂದೆ ಪಥವದಕೆ - ಮಂಕುತಿಮ್ಮ ॥ ೪೮೦ ॥

ಮಂದಿರದ ಶಿಲ್ಪಿ ಯಂತ್ರಗಳ ಯೊಜಕ ರಾಜ್ಯ - ।
ಸಂಧಾನಿ ವಿಜ್ಞಾನಿಯುದ್ಯೋಗದಾನಿ ॥
ಮಂದಿಮುಂದಾಳು ಜನಬಾಂಧವ್ಯಪೋಷಕನು ।
ಸೌಂದರ್ಯಕರರಿವರು - ಮಂಕುತಿಮ್ಮ ॥ ೪೮೧ ॥

ಕವಿ ಚಿತ್ರಕೋವಿದನು ಪರತತ್ತ್ವಶೋಧಕನು ।
ವಿವಿಧ ವಾದನ ಗೀತ ನೃತ್ಯ ಕುಶಲಿಗಳು ॥
ನವನವತೆಯಂ ಮನಸಿಗೀವೆಲ್ಲ ಕಲೆಗಾರ- ।
ರವರಿಂದ ಸುಂದರತೆ - ಮಂಕುತಿಮ್ಮ ॥ ೪೮೨ ॥

ಪಾರಿಜಾತವ ಕಂಡು ನಿಡುಸುಯ್ದು, ಪದಗಳಿಂ ।
ಶೌರಿಕಥೆಯನು ಹೆಣೆದು ತೃಪ್ತನಹನು ಕವಿ ॥
ಊರಿನುದ್ಯಾನಕದ ತರಿಸಿ ಬೆಳಸುವ ಕಾರ್ಯ- ।
ಧೀರನಲ ರಾಜ್ಯಕನು - ಮಂಕುತಿಮ್ಮ ॥ ೪೮೩ ॥

ಬಿದ್ದುದನು ನಿಲ್ಲಿಪುದೆ ನರನ ಮೃತ್ಯುಂಜಯತೆ ।
ಶುದ್ಧಿಸದೆ ನಭ ಧರೆಯ ಮರಮರಳಿ ಮಳೆಯಿಂ? ॥
ಗದ್ದೆ ಕೊಯ್ಲಾಗೆ ಮಗುಳ್ದದು ಬೆಳೆಯ ಕುಡದಿಹುದೆ? ।
ಬಿದ್ದ ಮನೆಯನು ಕಟ್ಟೊ - ಮಂಕುತಿಮ್ಮ ॥ ೪೮೪ ॥

ಗೌರವಿಸು ಜೀವನವ, ಗೌರವಿಸು ಚೇತನವ ।
ಆರದೋ ಜಗವೆಂದು ಭೇದವೆಣಿಸದಿರು ॥
ಹೋರುವುದೆ ಜೀವನಸಮೃದ್ಧಿಗೋಸುಗ ನಿನಗೆ ।
ದಾರಿಯಾತ್ಮೋನ್ನತಿಗೆ - ಮಂಕುತಿಮ್ಮ ॥ ೪೮೫ ॥

ಜೀವನೋದ್ಯಮವೆಲ್ಲ ತೋಟದುದ್ಯೋಗವೆನು ।
ಭಾವಬುದ್ಧಿಗಳ ಕೃಷಿಯಿಂದೊಗೆದ ಫಲದಿಂ ॥
ತೀವುತಿರೆ ನಗೆ ಹೊಳಪು ಮೊಗಮೊಗದೊಳಂ ಜಗದಿ ।
ಸೇವೆಯದು ಬೊಮ್ಮಂಗೆ - ಮಂಕುತಿಮ್ಮ ॥ ೪೮೭ ॥

ಹೂವ ತಳೆದ ಗುಲಾಬಿಯಿಂದ ಮನಕಹುದೇನು? ।
ನೋವೋ? ಸಂತಸವೊ? ನೋಡಾಮುಳ್ಳು ಬಾಳ್ಗೆ ॥
ಹೂವೆ ದಿವ್ಯಕಿರೀಟವದುವೆ ಕಾಲಕಟಾಕ್ಷ ।
ಜೀವನದ ತಿರುಳಷ್ಟೆ - ಮಂಕುತಿಮ್ಮ ॥ ೪೮೮ ॥

ಅಗೆದು ಗೊಬ್ಬರವಿಕ್ಕಿ ನೀರೆರೆದು ತೋಟಿಗನು ।
ಜಗಿದ ಮುಳ್ಳಿರಿತಗಳ ಸೈರಿಸೆ ಗುಲಾಬಿ ॥
ನಗುವುದೊಂದರೆನಿಮಿಷ ನಗಲು ಬಾಳ್ಮುಗಿಯುವುದು ।
ಮುಗುಳು ದುಡಿತಕೆ ತಣಿಸು - ಮಂಕುತಿಮ್ಮ ॥ ೪೭೮ ॥

ಸತ್ಯವೆಂಬುದದೇನು ಸೈನಿಕನ ಜೀವನದಿ? ।
ಕತ್ತಿಯವನಿಗೆ ಸತ್ಯವದರಿಂದೆ ಧರ್ಮ ॥
ಭುಕ್ತಿಸುಪ್ತಿಗಳ ವಿಭವಂಗಳವನಿಗೆ ಮಿಥ್ಯೆ ।
ಸಾರ್ಥಕತೆಯಿಂ ಸತ್ಯ - ಮಂಕುತಿಮ್ಮ ॥ ೪೭೯ ॥

ಕ್ಲೇಶ ನೂರಾಗಿರೆಯುಮಾಶೆಗಳ ಪುನರುದಯ ।
ಬೇಸರದ ನುಡಿಯೊಳಂ ಲೇಸುಗಳ ನೆನಪು ॥
ಆಶೆ ಸಾಯ್ತೆಂದೊಡಂ ಚೆಲುವೆನಲು ಕಣ್ಣಲೆತ ।
ಮಾಸವೀ ಜೀವಗುಣ - ಮಂಕುತಿಮ್ಮ ॥ ೪೮೦ ॥

ನಿಶಿ ಹಿಂದೆ, ನಿಶಿ ಮುಂದೆ, ನಡುವೆ ಮಿಸುಕಾಟ ಬಾಳ್ ।
ನಿಶಿ ಕೆಲವರಿಗೆ ಸೊನ್ನೆ , ಕೆಲವರಿಗೆ ಗುಟ್ಟು ॥
ಮಸಕಿನಲಿ ಭೂತವೊಂದಿಹುದು ದಿಟವಾದೊಡದ- ।
ರುಸಿರು ಸೋಕದೆ ನಿನ್ನ? - ಮಂಕುತಿಮ್ಮ ॥ ೪೮೧ ॥

ಗುಹೆಯೆಡಕೆ, ಗುಹೆ ಬಲಕೆ, ನಡುವೆ ಮಲೆ; ಕಣಿವೆಯಲಿ ।
ವಿಹರಿಪೆಯ ಹುಲಿ ಬಾರದೆಂದು ನೀಂ ನಚ್ಚಿ? ॥
ರಹಸಿಯದ ಭೂತ ಪಿಡಿಯದ ತೆರದಿ ಬದುಕ ನಿ- ।
ರ್ವಹಿಸುವುದೆ ಜಾಣ್ಮೆಯಲ - ಮಂಕುತಿಮ್ಮ ॥ ೪೮೨ ॥

ಗಾಳಿಯನು ಗುದ್ದಿದರೆ ಮೈ ನೊಯ್ವುದೊಂದೆ ಫಲ ।
ಮೂಲಸತ್ತ್ವವ ಮರೆತ ಸಾಹಸಗಳಂತು ॥
ಮೇಳವಿಸೆ ಪೌರುಷಕೆ ದೈವಕೃಪೆಯೆಂದು ಫಲ ।
ತಾಳಿ ಬಾಳಾವರೆಗೆ - ಮಂಕುತಿಮ್ಮ ॥ ೪೮೩ ॥

ಕತ್ತಲೆಯೊಳೇನನೋ ಕಂಡು ಬೆದರಿದ ನಾಯಿ ।
ಎತ್ತಲೋ ಸಖನೊರ್ವನಿಹನೆಂದು ನಂಬಿ ॥
ಕತ್ತೆತ್ತಿ ಮೋಳಿಡುತ ಬೊಗಳಿ ಹಾರಾಡುವುದು ।
ಭಕ್ತಿಯಂತೆಯೆ ನಮದು - ಮಂಕುತಿಮ್ಮ ॥ ೪೮೪ ॥

ನಂಬದಿರ್ದನು ತಂದೆ, ನಂಬಿದನು ಪ್ರಹ್ಲಾದ ।
ನಂಬಿಯುಂ ನಂಬದಿರುವಿಬ್ಬಂದಿ ನೀನು ॥
ಕಂಬದಿನೊ ಬಿಂಬದಿನೊ ಮೋಕ್ಷವವರಿಂಗಾಯ್ತು ।
ಸಿಂಬಳದಿ ನೊಣ ನೀನು - ಮಂಕುತಿಮ್ಮ ॥ ೪೮೫ ॥

ತನಗಿಂತ ಹಿರಿದ, ಭುವನಕ್ಕಿಂತ ಹಿರಿದೊಂದ- ।
ನನುಭವದ ಹಿಂದೆ, ಸೃಷ್ಟಿಯ ನೆರಳ ಹಿಂದೆ ॥
ಆನುಮಿತಿಸಿ ಮನುಜನಾ ಹಿರಿದನೆಳಸುವನೆಯ್ದೆ ।
ಮನುಜನೊಳಹಿರಿಮೆಯದು - ಮಂಕುತಿಮ್ಮ ॥ ೪೮೬ ॥

ನರರವೊಲೆ ಸುರರುಮಲೆದಲೆದು ಮರೆಯಾಗಿಹರು ।
ಭರತದೇಶದೊಳಮ್ಮೈಗುಪ್ತ ಯವನರೊಳಂ ॥
ಸುರ ನಾಮ ರೂಪಗಳಸಂಖ್ಯಾತ, ನಿಜವೊಂದು ।
ತೆರೆ ಕೋಟಿ ಕಡಲೊಂದು - ಮಂಕುತಿಮ್ಮ ॥ ೪೮೭ ॥

ಜೀವಿ ಬೇಡದಿರೆ ದೈವವನು ಕೇಳುವರಾರು? ।
ದೈವ ಗುಟ್ಟಿರಿಸದಿರೆ ಜೀವಿಯರಸುವುದೇಂ? ॥
ಜೀವ ದೈವಂಗಳ ಪರಸ್ಪರಾನ್ವೇಷಣೆಯೆ ।
ಲಾವಣ್ಯ ಸೃಷ್ಟಿಯಲಿ - ಮಂಕುತಿಮ್ಮ ॥ ೪೮೮ ॥

ಕಣ್ಣಿರದೆ ರವಿಯೇನು? ರವಿಯಿರದೆ ಕಣ್ಣೇನು? ।
ಅನ್ಯೋನ್ಯ ಸಹಕೃತಿಯಿನುಭಯ ಸಾರ್ಥಕತೆ ॥
ನಿನ್ನಾತ್ಮ ಜಗದಾತ್ಮಕಂತು ಸಂಬಂಧವವು ।
ವಹ್ನಿಸ್ಫುಲಿಂಗಗಳೊ - ಮಂಕುತಿಮ್ಮ ॥ ೪೮೯ ॥

ಬಹಿರದ್ಭುತವ ಮನುಜನಂತರದ್ಭುತವರಿತು ।
ಗ್ರಹಿಸುವಂತಾಗಿಸಲು ಪೂರ್ವಾನುಭವಿಗಳ್ ॥
ಬಹುಪರಿಯುಪಾಯಗಳ ನಿರವಿಸಿಹರದಕೇಕೆ ।
ಗಹಗಹಿಸುವೆಯೊ, ಮರುಳೆ? - ಮಂಕುತಿಮ್ಮ ॥ ೪೯೦ ॥

ಅಂಬುಧಿಯ ಮಡಕೆಯಲಿ, ಹೊಂಬಿಸಿಲ ಕಿಟಿಕಿಯಲಿ ।
ತುಂಬಿಕೊಳ್ಳುವ ಬಡವನೈಶ್ವರ್ಯದಂತೆ ॥
ಬಿಂಬದೊಳಗಮಿತ ಸತ್ತ್ವವ ಪಿಡಿದಿಡುವ ಭಕ್ತಿ- ।
ಯಿಂಬು ಕಿಂಚಿನ್ಮತಿಗೆ - ಮಂಕುತಿಮ್ಮ ॥ ೪೯೧ ॥

ಬಹಿರಂತರೈಕ್ಯವನು ನೆನಪಿಗಾಗಿಸಲೆಂದು ।
ವಿಹಿತಮ್ ಆಚಮನಾರ್ಘ್ಯ ಪೂಜೆ ನೈವೇದ್ಯ ॥
ಗುಹೆಯೊಳಗಣದ ಹೊರಗಣದ ಕೂಡಿಸುವುಪಾಯ ।
ಸಹಭಾವವದಕೆ ಸರಿ - ಮಂಕುತಿಮ್ಮ ॥ ೪೯೧ ॥

ಬಹುಜನಂ ಕೈಮುಗಿದ ತೀರ್ಥದೊಳ್ ಕ್ಷೇತ್ರದೊಳ್ ।
ಮಹಿಮೆಯಲ್ಲೇನೆಂದು ಸಂಶಯಿಸಬೇಡ ॥
ವಿಹಿತಗೈದವರಾರು ವಸತಿಂ ದೈವಕ್ಕೆ? ।
ಮಹಿಮೆ ಮನಸೋತೆಡೆಯೊ - ಮಂಕುತಿಮ್ಮ ॥ ೪೯೨ ॥

ಹರಿಭಜಕರೊಳು ಭಯದಿನೊಗೆದುದೆನಿಬರ ಭಕುತಿ? ।
ವರದ ಮೇಲಣ ಭಕ್ತಿಯೆನಿಬರದು ನೋಡೆ? ॥
ಬರಿಯ ಸಂತೋಷದನುರಾಗರಸ ನಿಜಭಕ್ತಿ- ।
ಪರಮದಾಕರ್ಷೆಯದು - ಮಂಕುತಿಮ್ಮ ॥ ೪೯೪ ॥

ಅರುಣೋದಯಪ್ರಭೆಯ, ಗಿರಿಶೃಂಗದುನ್ನತಿಯ ।
ವರುಣಾಲಯಾಯತಿಯ ನಿರುಕಿಸಿದೊಡಹುದೇಂ? ॥
ಬೆರಗು, ಬರಿಬೆರಗು, ನುಡಿಗರಿದೆನಿಪ್ಪಾನಂದ ।
ಪರಮಪೂಜೆಯುಮಂತು - ಮಂಕುತಿಮ್ಮ ॥ ೪೯೫ ॥

ಬೆರಗಾಗಿಪುವುವೆಲ್ಲ ಪಿರಿತನದ ನೋಟಗಳು ।
ಬೆರಗೆ, ಮೈಮರೆವೆ, ಸೊಲ್ಲಣಗುವುದೆ ಸೊಗಸು ॥
ಬೆರಗು ಚಿತ್ತವ ನುಂಗಲೊಗೆವ ಶಾಂತಿಯ ಕಾಂತಿ ।
ಪರಮನರ್ಚನೆಗೆ ವರ - ಮಂಕುತಿಮ್ಮ ॥ ೪೯೬ ॥

ಸುತೆಯ ಪೋಷಿಸಿ ಬೆಳಸಿ, ಧನಕನಕದೊಡನವಳನ್- ।
ಇತರಗೃಹಕಿತ್ತು ನೀಂ ಕೇಳ್ವ ಮುಯ್ಯೇನು? ॥
ಪ್ರತಿಫಲವು ಬೇರೇಕೆ? ಸುಕೃತಕದು ತಾನೆ ಫಲ ।
ಹಿತ ಮನದ ಪಾಕಕದು - ಮಂಕುತಿಮ್ಮ ॥ ೪೯೭ ॥

ಸಂಗೀತ ತಲೆದೂಗಿಪುದು, ಹೊಟ್ಟೆ ತುಂಬೀತೆ? ।
ತಂಗದಿರನೆಸಕ ಕಣ್ಣಮೃತ, ಕಣಜಕದೇಂ? ॥
ಅಂಗಡಿಯ ಮಾಡದಿರು ಸುಕೃತಪ್ರಸಕ್ತಿಯಲಿ ।
ಪೊಂಗುವಾತ್ಮವೆ ಲಾಭ - ಮಂಕುತಿಮ್ಮ ॥ ೪೯೮ ॥

ದೇವಮಂದಿರ ಭಜನೆ ಪೂಜೆ ಪ್ರಸಾದಗಳು ।
ಜೀವನದಲಂಕಾರ, ಮನಸಿನುದ್ಧಾರ ॥
ಭಾವವಂ ಕ್ಷುಲ್ಲಜಗದಿಂ ಬಿಡಿಸಿ ಮೇಲೊಯ್ವು- ।
ದಾವುದಾದೊಡಮೊಳಿತು - ಮಂಕುತಿಮ್ಮ ॥ ೪೯೯ ॥

ದೇವನೇನತಿಶಯಿತಮಾನಿಸನೆ ಭೋಗಕ್ಕೆ? ।
ಹೂವುಣಿಸು ಮುಡುಪೊಡವೆಯವನಿಗಂ ಬೇಕೆ? ॥
ಆವುದೊಳ್ಳಿತೊ ತನಗೆ ನರನದನು ಪರಮಂಗೆ ।
ನೈವೇದಿಪುದು ಸಾಜ - ಮಂಕುತಿಮ್ಮ ॥ ೫೦೦ ॥

ಯುಕ್ತಿಸಾಮ್ರಾಜ್ಯದಲಿ ಭಕ್ತಿ, ಬಡ ಪರದೇಶಿ ।
ಶಕ್ತಿ ಚತುರತೆಯುಡುಗಿ ನೀನು ಸೋತಂದು ॥
ಉತ್ಕ್ರಮಣದರೆಮನದಿ ದೈವವನು ಪಿಡಿದೇನು? ।
ಭಕ್ತಿ ರಕ್ತದಿ ಪರಿಗೆ - ಮಂಕುತಿಮ್ಮ ॥ ೫೦೧ ॥

ಸೃಷ್ಟಿಯದ್ಭುತಶಕ್ತಿಯುಳ್ಳೊರ್ವನಿರಲು ನ- ।
ಮ್ಮಿಷ್ಟಗಳನರಿತು ನೀಡುವುದವನಿಗರಿದೇಂ? ॥
ಇಷ್ಟವಾತನೊಳುದಿಸುವುವಂತೆ, ಚೋದಿಪುದೆಂತು? ।
ಕಷ್ಟ ನಮಗಿಹುದಷ್ಟೆ - ಮಂಕುತಿಮ್ಮ ॥ ೫೦೨ ॥

ಜೀವಸತ್ತ್ವದಪಾರಭಂಡಾರವೊಂದಿಹುದು ।
ಸಾವಕಾರನದೃಷ್ಟನ್ ಅದನಾಳುತಿಹನು ॥
ಅವಶ್ಯಕದ ಕಡವನವನೀವುದುಂಟಂತೆ! ।
ನಾವೊಲಿಪುದೆಂತವನ? - ಮಂಕುತಿಮ್ಮ ॥ ೫೦೩ ॥

ಗಗನ ಬಿಸಿಗವಸಾಗಿ, ಕೆರೆಗಳಾವಿಗೆಯಾಗಿ ।
ಜಗದುಸಿರೆ ಹೊಗೆಯಾಗಿ ಧಗಧಗಿಸುವಂದು ॥
ಒಗೆದೆತ್ತಣಿನೊ ರಾತ್ರಿಯಲಿ ಧರೆಗೆ ತಂಪೆರೆವ ।
ಮುಗಿಲವೊಲು ದೈವಕೃಪೆ - ಮಂಕುತಿಮ್ಮ ॥ ೫೦೪ ॥

ದೈವಕೃಪೆಯೆನುವುದೇಂ? ಪರಸತ್ತ್ವನವವೃಷ್ಟಿ ।
ಜೀವಗುಣ ಪಕ್ವಪಟ್ಟಂತದರ ವೇಗ ॥
ಭಾವಚೋದನೆಗಳಲಿ ಬಾಹ್ಯಸಾಧನೆಗಳಲಿ ।
ತೀವಿ ದೊರೆಕೊಳುವುದದು - ಮಂಕುತಿಮ್ಮ ॥ ೫೦೫ ॥

ದೊರೆಗೆ ನೀಂ ಬಿನ್ನಯಿಸೆ ನೂರೆಂಟು ಬಯಕೆಗಳ ।
ಸರಿ ತನಗೆ ತೋರ್ದನಿತನ್ ಅದರೊಳವನೀವಂ ॥
ಅರಿಕೆಯೆಲ್ಲವನಡಸದಿರೆ ದೊರೆಯೆ ಸುಳ್ಳಹನೆ? ।
ಕರುಣೆ ನಿರ್ಬಂಧವೇಂ? - ಮಂಕುತಿಮ್ಮ ॥ ೫೦೬ ॥

ದಂಡನಿರ್ಣಯದಿ ನೀಂ ಕ್ಷಮಿಸೆನಲ್ ನ್ಯಾಯಪತಿ ।
ಹಿಂದಿನಾ ನಿನ್ನೊಳ್ತನವನ್ ಅಂದಿನಳಲನ್ ॥
ತಂದೆಬಗೆಯಿಂ ಬಗೆದು ಶಾಸನೋಗ್ರವನಿನಿತು ।
ಕುಂದಿಸಲಿಕಾಗದೇಂ? - ಮಂಕುತಿಮ್ಮ ॥ ೫೦೭ ॥

ತಕ್ಕಡಿಯ ದೈವ ಪಿಡಿದದರೊಂದು ತಟ್ಟೆಯಲಿ ।
ಒಕ್ಕುವುದು ಬಿಡದೆ ಜೀವಿಯ ಪಾಪಚಯವ ॥
ಇಕ್ಕುವುದು ಸುಕೃತಗಳನಿನ್ನೊಂದರೊಳಗಲ್ಲಿ ।
ಭಕ್ತಿ ಪಶ್ಚಾತಾಪ - ಮಂಕುತಿಮ್ಮ ॥ ೫೦೮ ॥

ಪ್ರಾರಾಬ್ಧದಲಿ ನಿನ್ನ ಪುಣ್ಯವೆನಿತಾನುಮಿರೆ ।
ಸೇರೆ ಪಶ್ಚಾತಾಪ ಭಾರವದರೊಡನೆ ॥
ದಾರುಣದ ಕರ್ಮನಿಯತಿಯನಿನಿತು ಶಿಥಿಲಿಪುದು ।
ಕಾರುಣ್ಯದಿಂ ದೈವ - ಮಂಕುತಿಮ್ಮ ॥ ೫೦೯ ॥

ನಿನ್ನೇಳುಬೀಳುಗಳು ನಿನ್ನ ಸೊಗ ಗೋಳುಗಳು ।
ನಿನ್ನೊಬ್ಬನೋಸುಗವೆ ನೆಡೆವ ಯೋಜನೆಯೇಂ? ॥
ಇನ್ನದೆನಿಬರ ಜೀವಪಾಕವದರಿಂದಹುದೊ! ।
ಭಿನ್ನವಾ ಋಣಮಾರ್ಗ - ಮಂಕುತಿಮ್ಮ ॥ ೫೧೦ ॥

ನರಕ ತಪ್ಪಿತು ಧರ್ಮಜಂಗೆ, ದಿಟ, ಆದೊಡೇಂ? ।
ನರಕದರ್ಶನದುಃಖ ತಪ್ಪದಾಯಿತಲ? ॥
ದುರಿತತರುವಾರು ನೆಟ್ಟುದೊ, ನಿನಗಮುಂಟು ಫಲ ।
ಚಿರಋಣದ ಲೆಕ್ಕವದು - ಮಂಕುತಿಮ್ಮ ॥ ೫೧೧ ॥

ಆವ ಋಣಕೋಸುಗವೊ, ಆರ ಹಿತಕೋಸುಗವೊ ।
ಆವಾವ ಕಾರಣಕೊ, ಆವ ಯೋಜನೆಗೋ ॥
ನೋವ ನೀಂ ಪಡುವುದೇ ದೈವೇಚ್ಛೆಯಾಗಿರದೆ? ।
ದೈವ ಕುರುಡೆನ್ನದಿರು - ಮಂಕುತಿಮ್ಮ ॥ ೫೧೨ ॥

ಆವುದರಿನಾವಾಗ ದೈವ ತಾನೊಲಿದೀತೊ? ।
ಪೂರ್ವಿಕದ ನಿಯತಿಯನದೆಂದು ಸಡಲಿಪುದೋ? ॥
ಭಾವಿಸುಕೃತವದೆಂದು ಪೂರ್ವದುರಿತಕೆ ಮಿಗಿಲೊ? ।
ದೈವಿಕರಹಸ್ಯವದು- ಮಂಕುತಿಮ್ಮ ॥ ೫೧೩ ॥

ಎನಗೆ ಸುಖವಿಲ್ಲವದರಿಂ ದೇವರಿರನೆನ್ನು-।
ವನುಮತಿಯ ನೀಂ ಗೆಯ್ಯೆ, ಸುಖಿಯದೇನನುವಂ ॥
ತನುಬಾಹ್ಯಕರಣದನುಭವಕಿಂತ ಸೂಕ್ಷ್ಮ ತರ- ।
ದನುಭವವ ನೀನರಸೊ - ಮಂಕುತಿಮ್ಮ ॥ ೫೧೪ ॥

ಎನ್ನ ಬೇಡಿಕೆ ನಷ್ಟವಹುದೆಂತು ದೇವನಿರೆ? ।
ಅನ್ಯಾಯ ಜಗವೆಲ್ಲ; ದೇವನಿರನೆನುತ ॥
ತನ್ನ ತನ್ನನುಭವವ ನಂಬಲೋರೊರ್ವನುಂ ।
ಭಿನ್ನವಾಗದೆ ಸತ್ಯ? - ಮಂಕುತಿಮ್ಮ ॥ ೫೧೫ ॥

ಅನುಭವದ ಪರಿ ನೂರ್ವರಿಗೆ ನೂರು ನೂರು ಪರಿ ।
ದಿನವೊಂದರೊಳೆ ಅದೊಬ್ಬಂಗೆ ನೂರು ಪರಿ ॥
ಎಣಿಪುದಾರನುಭವವನ್, ಆವ ಪ್ರಮಾಣದಲಿ ।
ಮಣಲ ಗೋಪುರವೊ ಅದು - ಮಂಕುತಿಮ್ಮ ॥ ೫೧೬ ॥

ಮನುಜಸಾಕಲ್ಯದನುಭವಕೆ ಮಿತಿಗೊತ್ತುಂಟೆ? ।
ದಿನದಿನವು ಕಡಲಲೆಗಳಂತೆ ಪರಿವುದದು ॥
ಅನುಮಿತಿಯ ನಿರ್ಧಾರವದರಿಂ ನಿರಾಧಾರ ।
ದನಿ ನೂರು ನರನೆದೆಗೆ - ಮಂಕುತಿಮ್ಮ ॥ ೫೧೭ ॥

ಅರ್ಥವುಂಟನುಭವಕ್ಕಾದೊಡದು ಮಿತದರ್ಥ ।
ಸ್ವಾರ್ಥ ಮಿತವಾದಂತೆ ವಿಸ್ತರಿಪುದರ್ಥ ॥
ಸಾರ್ಥಕವಪ್ಪುದಾರ್ಷೇಯಾರ್ಥದೊಡವೆರೆಯೆ ।
ಪಾರ್ಥನನುಭವದಂತೆ - ಮಂಕುತಿಮ್ಮ ॥ ೫೧೮ ॥

ಪ್ರಾಲೇಯಗಿರಿಗುಹೆಯ ಗಂಗೆ ವೇದ ಪುರಾಣ ।
ಕಾಳಿಂದಿ ಶೋಣೆ ಪೌರುಷ ಬುದ್ಧಿ ಯುಕ್ತಿ ॥
ಮೂಲ ಸ್ವತಸ್ಸಿದ್ಧ ಸಂವಿದಾಪಗೆಗಿಂತು ।
ಕಾಲದುಪನದಿ ನೆರವು - ಮಂಕುತಿಮ್ಮ ॥ ೫೧೯ ॥

ತಿಳಿವಾವುದಿಳೆಗೆ ಯುಗಯುಗದ ಬೆಳಕಾಗಿತ್ತೊ ।
ಹಳದೆಂದು ನೀನದನು ಕಳೆಯುವೆಯ, ಮರುಳೆ ॥
ತಳಹದಿಯದಲ್ತೆ ನಮ್ಮೆಲ್ಲ ಹೊಸ ತಿಳಿವಿಂಗೆ? ।
ಹಳೆ ಬೇರು ಹೊಸ ತಳಿರು - ಮಂಕುತಿಮ್ಮ ॥ ೫೧೦ ॥

ವೇದ ಲೋಕಾಚಾರ ನಿನ್ನನುಭವದ ಯುಕ್ತಿ ।
ಶೋಧಿಸೀ ಮೂರನುಂ ಸಂವಾದಗೊಳಿಸು ॥
ಸಾಧಿಷ್ಠಾನ ನರಸಾಧ್ಯ ಪ್ರಮಾಣವದು ।
ಹಾದಿ ಬೆಳಕದು ನಿನಗೆ - ಮಂಕುತಿಮ್ಮ ॥ ೫೧೧ ॥

ಹೊಸ ಚಿಗುರು ಹಳೆ ಬೇರು ಕೂಡಿರಲು ಮರಸೊಬಗು ।
ಹೊಸಯುಕ್ತಿ ಹಳೆತತ್ತ್ವದೊಡಗೂಡೆ ಧರ್ಮ ॥
ಋಷಿವಾಕ್ಯದೊಡನೆ ವಿಜ್ಞಾನ ಕಲೆ ಮೇಳವಿಸೆ ।
ಜಸವು ಜನಜೀವನಕೆ - ಮಂಕುತಿಮ್ಮ ॥ ೫೧೨ ॥

ವೇದಗಳು ಶಾಸ್ತ್ರಗಳು ಲೋಕನೀತಿಗಳೆಲ್ಲ ।
ಹಾದಿ ತೋರಲು ನಿಶಿಯೊಳುರಿವ ಪಂಜುಗಳು ॥
ಸೌಧವೇರಿದವಂಗೆ, ನಭವ ಸೇರಿದವಂಗೆ ।
ಬೀದಿಬೆಳಕಿಂದೇನೊ? - ಮಂಕುತಿಮ್ಮ ॥ ೫೧೩ ॥

ಪಿರಿದೆಲ್ಲ ಮತನೀತಿಗಳಿಗಿಂತ ಜೀವಿತವು ।
ನೆರೆಬಂದ ನದಿ ದಡಕೆ ಬಾಗಿ ಪರಿಯುವುದೇಂ? ॥
ಧರುಮಸೂಕ್ಷ್ಮದ ತಿಳಿವೆ ಲೋಕಸೂತ್ರದ ಸುಳಿವು ।
ಅರಸು ಜೀವಿತ ಹಿತವ - ಮಂಕುತಿಮ್ಮ ॥ ೫೧೪ ॥

ಜಗ ಬೆಳೆದು ಚಿಗುರುತಿರೆ ಶಾಸ್ತ್ರ ಕರಟರಲಹುದೆ? ।
ನಿಗಮಸಂತತಿಗೆ ಸಂತತಿಯಾಗದಿಹುದೆ? ॥
ಬಗೆಬಗೆಯ ಜೀವಸತ್ತ್ವವಿಕಾಸವಾಗುತಿರ- ।
ಲೊಗೆವುದೈ ವಿಜ್ಞಾನ - ಮಂಕುತಿಮ್ಮ ॥ ೫೧೫ ॥

ಸೆರೆಬಿದ್ದು ಧರ್ಮಪಾದಪ ನಿಲದು ಮತಗಳಲಿ ।
ಜರೆಯಿಂದ ಬರಡಹುದು ಮಠದ ನೆರಳಿನಲಿ ॥
ಪರಸತ್ತ್ವರಸ ವಿಶ್ವಜೀವನದ ಬೇರ್ಗಳಿಂ ।
ನೆರೆಯಲಾ ತರು ಸೊಂಪು - ಮಂಕುತಿಮ್ಮ ॥ ೫೧೬ ॥

ಜೀವಕಾರಣಮೂಲ ಗೂಢವಾಗಿರ್ದೊಡಂ ।
ಧೀವಿಕಾಸದ ಬೆಳಕನಾದನಿತು ಗಳಿಸಿ ॥
ಕೈವಲ್ಯಪಥವನರಸುತ ಯಾತ್ರಿಸಲೆಬೇಕು ।
ದೀವಿಗೆಯು ಮತಿಯೊಂದೆ - ಮಂಕುತಿಮ್ಮ ॥ ೫೧೭ ॥

ಭಕ್ತಿ ನಂಬುಗೆ ಸುಲಭ, ಭಜನೆ ವಂದನೆ ಸುಲಭ ।
ತತ್ತ್ವ ಶೋಧನೆ ಕಷ್ಟ; ಮತಿಕಾರ್ಯ ಕಷ್ಟ ॥
ಸುತ್ತುವುದು ಗಿರಿಸುತ್ತ ಸುಳುವೆಂದು ಲೋಕಜನ ।
ಹತ್ತುವನು ತಾಪಸಿಯೊ - ಮಂಕುತಿಮ್ಮ ॥ ೫೧೮ ॥

ಪರದೈವವನು ತೊರೆಯೆ ಗತಿ ನರನಿಗಿಲ್ಲ ದಿಟ ।
ನರನಿಲ್ಲದಿರೆ ದೇವನನು ಕೇಳ್ವರಾರು? ॥
ಪುರುಷತೆಯೆ ಸೇತುವೆ ಮೃಗತ್ವದಿಂ ದಿವ್ಯತೆಗೆ ।
ಮುರಿಯದಿರು ಸೇತುವೆಯ - ಮಂಕುತಿಮ್ಮ ॥ ೫೧೯ ॥

ನಿನ್ನ ಕಣ್ ಕಿವಿ ಮನಗಳರಿವಷ್ಟು ನಿನ್ನ ಜಗ ।
ನಿನ್ನನಳಿಸುವ ನಗಿಸುವೆಲ್ಲ ನಿನ್ನಂಶ ॥
ಉನ್ನತಿಗೆ ನೀನೇರಿದಂತೆ ಜಗ ವಿಸ್ತರಿಸಿ ।
ಸಣ್ಣತನ ಸವೆಯುವುದು - ಮಂಕುತಿಮ್ಮ ॥ ೫೨೦ ॥

ಶಶ್ವದ್ವಿಕಾಸನ ಹ್ರಾಸವ ಕ್ರಮಗಳಿಂ ।
ವಿಶ್ವದಲಿ ನರ್ತಿಸುತೆ ಪೌರುಷೊನ್ನತಿಯೊಳ್ ॥
ಸ್ವಸ್ವರೂಪವನರಸುವಾಟ ಪರಚೇತನದ ।
ಹೃಷ್ಯದ್ವಿಲಾಸವೆಲೊ - ಮಂಕುತಿಮ್ಮ ॥ ೫೨೧ ॥

ಕಟ್ಟಡದ ಪರಿಯನಿಟ್ಟಿಗೆಯೆಂತು ಕಂಡೀತು? ।
ಗಟ್ಟಿ ನಿಲದದು ಬೀಳೆ ಗೋಡೆ ಬಿರಿಯುವುದು ॥
ಸೃಷ್ಟಿ ಕೋಟೆಯಲಿ ನೀನೊಂದಿಟಿಕೆ; ಸೊಟ್ಟಾಗೆ ।
ಪೆಟ್ಟು ತಿನ್ನುವೆ ಜೋಕೆ - ಮಂಕುತಿಮ್ಮ ॥ ೫೨೨ ॥

ಪುರುಷಂ ಸ್ವತಂತ್ರನೋ? ದೈವವಿಧಿ ಪರವಶನೊ? ।
ಎರಡುಮನಿತಿನಿತುಳ್ಳ ತೋಳಿನಂತಿಹನೋ? ॥
ತಿರುಗುವುದು ಮಡಿಸುವುದು ತೋಳ್ ಮೈಯಕಟ್ಟಿನಲಿ ।
ನರನಂತು ಮಿತಶಕ್ತ - ಮಂಕುತಿಮ್ಮ ॥ ೫೨೩ ॥

ಹರಡುವುದು ಸಾಜ ವಾಯುಗೆ ಸೈಸದದು ತಡೆಯನ್ ।
ಉರುಳಿಪುದದೆಲ್ಲವನು ತಡೆಗಳಿಲ್ಲದಿರೆ ॥
ನರನ ಸ್ವತಂತ್ರಗತಿಯಂತು ಹಿತಮಿತವಿರಲು ।
ಅರಸೊ ಮಿತಿಯಾಯತಿಯ - ಮಂಕುತಿಮ್ಮ ॥ ೫೩೪ ॥

ನೀರ ನೆರೆ ತನ್ನೆದುರಿನಣೆಕಟ್ಟನೊದೆಯುವುದು ।
ಊರನದು ಕೊಚ್ಚುವುದು ಬದಿಯ ಕಟ್ಟದಿರೆ ॥
ಏರಿಗಳನಿಕ್ಕೆಲದಿ ನಿಲಿಸೆ ಹರಿವುದು ಸಮನೆ ।
ಪೌರುಷದ ನದಿಯಂತು - ಮಂಕುತಿಮ್ಮ ॥ ೫೩೫ ॥

ಎಸಳಿನಡಿ, ಗಿಡದ ಬಿಗಿ, ಮೇಲೆ ಗಾಳಿಯ ಸರಸ ।
ಕುಸುಮದ ಕ್ಷೇಮವಾ ಬಿಗಿತ ಬಿಡುತೆಗಳಿಂ ॥
ಕುಶಲ ಸೌರಭವ ನಿರ್ಯತ್ನ ಸ್ವತಂತ್ರದಿಂ ।
ಪಸರಿಪಾ ನಯ ಸುಖವೊ - ಮಂಕುತಿಮ್ಮ ॥ ೫೩೬ ॥

ತರಣಿಶಶಿಪಥಗಳನು, ಧರೆವರುಣಗತಿಗಲನು ।
ಮರುದಗ್ನಿವೇಗಗಳ ನಿಯಮಿಸಿಹ ದಕ್ಷನ್ ॥
ನರನರಸಿಕೊಳಲಿ ದಾರಿಯ ತನಗೆ ತಾನೆಂದು ।
ತೊರೆದನೇತಕೆ ನಮ್ಮ? - ಮಂಕುತಿಮ್ಮ ॥ ೫೩೭ ॥

ತನ್ನ ಬೆವರಿನ ಕೊಳದಿ ತಾಂ ಮುಳುಗಿ ತೇಲುತ್ತೆ ।
ಧನ್ಯನಾನೆನ್ನುವನದೊರ್ವ ಸ್ವತಂತ್ರನ್ ॥
ಪುಣ್ಯತೀರ್ಥದೊಳಿಳಿದು ಕರಗಲ್ ಸ್ವತಂತ್ರ ತಾನ್ ।
ಎನ್ನುವವನಿನ್ನೊರ್ವ - ಮಂಕುತಿಮ್ಮ ॥ ೫೩೮ ॥

ಬರಿಯ ಬುದ್ಧಿವಿಮರ್ಶೆಗರಿದು ಜೀವನತತ್ತ್ವ ।
ಪರಿಶೋಧಿಸುವರಾರು ಬುದ್ಧಿಋಜುತೆಯನು? ॥
ಸ್ಫುರಿಸುವುದದೆಂದೊ ತಾನೇ ಮಿಂಚುಬಳ್ಳಿವೊಲು ।
ಪರತತ್ತ್ವ ಮನದೊಳಗೆ - ಮಂಕುತಿಮ್ಮ ॥ ೫೩೯ ॥

ನರವಿವೇಕವದೇನು ಬರಿಯ ಮಳೆ ನೀರಲ್ಲ ।
ಕೆರೆಯನೀರ್ ಊರ ಮೈಸೋಂಕುಗಳ ಬೆರಕೆ ॥
ಧರೆಯ ರಸವಾಸನೆಗಳಾಗಸದ ನಿರ್ಮಲದ ।
ವರವ ಕದಡಾಗಿಪುವು - ಮಂಕುತಿಮ್ಮ ॥ ೫೪೦ ॥

ಪ್ರಾಕ್ತನದ ವಾಸನೆ ಮನಕೆ ಮೊದಲಿನ ಮಂತ್ರಿ ।
ಯುಕ್ತಿಗಳ ತನಗೊಪ್ಪುವಂತೆ ತಿರುಗಿಪುದು ॥
ಸೂಕ್ತವೆನಿಪುದು ಸಹಜರುಚಿ ತನ್ನ ತರ್ಕವನೆ ।
ಗುಪ್ತದೊಳು ಕುಟಿಲವಿದು - ಮಂಕುತಿಮ್ಮ ॥ ೫೪೧ ॥

ಆಶೆ ಮಂಥರೆ, ನರವಿವೇಚನೆಯೆ ಕೈಕೇಯಿ ।
ಬೀಸೆ ಮನದುಸಿರು ಮತಿದೀಪವಲೆಯುವುದು ॥
ವಾಸನೆಗಳನುಕೂಲ ಸತ್ಯತರ್ಕಕೆ ಶೂಲ ।
ಶೋಧಿಸಾ ವಾಸನೆಯ - ಮಂಕುತಿಮ್ಮ ॥ ೫೪೨ ॥

ಭಾವದಾವೇಶದಿಂ ಮನವಶ್ವದಂತಿರಲಿ ।
ಧೀವಿವೇಚನೆಯದಕೆ ದಕ್ಷರಾಹುತನು ॥
ತೀವಿದೊಲವಿನ ದಂಪತಿಗಳಾಗಿ ಮನಬುದ್ಧಿ ।
ಜೀವಿತವು ಜೈತ್ರಕಥೆ - ಮಂಕುತಿಮ್ಮ ॥ ೫೪೩ ॥

ಅನುಭವದ ಪಾಲೊಳು ವಿಚಾರ ಮಂಥನವಾಗೆ ।
ಜನಿಯಿಕುಂ ಜ್ಞಾನನವನೀತವದೆ ಸುಖದಂ ॥
ಗಿಣಿಯೋದು ಪುಸ್ತಕಜ್ಞಾನ; ನಿನ್ನನುಭವವೆ ।
ನಿನಗೆ ಧರುಮದ ದೀಪ - ಮಂಕುತಿಮ್ಮ ॥ ೫೪೪ ॥

ಬುದ್ಧಿಪ್ರಕಾಶದಿಂದಂತರನುಭವಶೋಧೆ ।
ಸಿದ್ಧವಾ ಶೋಧೆಯಿಂ ಸತ್ಯಸಂವೀಕ್ಷೆ ॥
ಶುದ್ಧಸತ್ಯವ ಜೀವಿತಪ್ರಶ್ನೆಗನ್ವಯಿಪ ।
ಪದ್ಧತಿಯೆ ಧರ್ಮವೆಲೊ - ಮಂಕುತಿಮ್ಮ ॥ ೫೪೫ ॥

ಶ್ರೀಯನಾಯುವ ಬಲವ ಜಯವ ಬೇಡಿರ್ದೊಡಂ ।
ಗಾಯತ್ರಿಯನೆ ಪರಮಮಂತ್ರವೆಂದಾರ್ಯರ್ ॥
ಧೀಯಂ ಪ್ರಚೋದಿಸೆಂದನುದಿನದಿ ಬೇಡಿದರು ।
ಶ್ರೇಯಸ್ಸು ಧೀಮಹಿಮೆ - ಮಂಕುತಿಮ್ಮ ॥ ೫೪೬ ॥

ಮತಿ ನಯನದಂತೆ ಮುಂದಿರ್ಪುದನು ನೋಡುವುದು ।
ಮಿತವದರ ಕೆಲಸ, ಹೆಳವನ ಚಲನೆಯಂತೆ ॥
ಗತಿಶಕ್ತಿಯದಕೆ ಮನವೆಂಬ ಚರಣದ ಬಲದೆ ।
ಮತಿಬಿಟ್ಟ ಮನ ಕುರುಡು - ಮಂಕುತಿಮ್ಮ ॥ ೫೪೭ ॥

ಪುರುಷಬುದ್ಧಿಯೆ ಸಾಕು ವರಸಿದ್ಧಿಗೆಂದಲ್ಲ ।
ಪರಮೇಶಕರುಣೆಯನವಶ್ಯವೆಂದಲ್ಲ ॥
ಚರಣ ನಡೆವನಿತು ಕಣ್ಣರಿವನಿತು ದೂರ ನೀಂ ।
ಚರಿಸದಿರೆ ಲೋಪವಲ? - ಮಂಕುತಿಮ್ಮ ॥ ೫೪೮ ॥

ವಿಧಿಗೆ ನೀಂ ಕಾರ್ಯನಕ್ಷೆಯ ವಿಧಿಸ ಹೊರಡದಿರು ।
ಅಧಿಕಾರಿ ನೀನಲ್ಲ; ವಿಧಿ ಬೆಪ್ಪನಲ್ಲ ॥
ಹದವರಿತು ವಿಧಿ ತಾನೆ ಕುದುರಿಸುವನೆಲ್ಲವನು ।
ಅದಟದಿರು ನೀನವನ - ಮಂಕುತಿಮ್ಮ ॥ ೫೪೯ ॥

ತಾಳಿ ಮೆಲುಮೆಲನೊಮ್ಮೆ ಧಾಳಿ ರಭಸದಿನೊಮ್ಮೆ ।
ಹೇಳದೆಯೆ ಕೇಳದೆಯೆ ಬಹನು ವಿಧಿರಾಯ ॥
ಕೀಳ ಮೇಲಾಗಿಪನು ಮೇಲ ಕೀಳಾಗಿಪನು ।
ತಾಳುಮೆಯಿನಿರು ನೀನು - ಮಂಕುತಿಮ್ಮ ॥ ೫೫೦ ॥

ನಿನ್ನ ಹೆಗಲಿನ ಹೊರೆಯ ದೈವಭುಜಕೇರಿಸುವ ।
ಸನ್ನಾಹ ಸಾಗೀತೆ? ದೈವವೊಪ್ಪೀತೆ? ॥
ಮನ್ನಿಸಲಿ ವಿಧಿ ನಿನ್ನ ಬೇಡಿಕೆಯ, ಭಿನ್ನಿಸಲಿ ।
ನಿನ್ನ ಬಲವನು ಮೆರಸೊ - ಮಂಕುತಿಮ್ಮ ॥ ೫೫೧ ॥

ಶ್ರುತಿಯರ್ಥ ವಿಶದವಪ್ಪುದು ಪುರುಷಭಾಷ್ಯದಿಂ ।
ಶ್ರುತಿಮತಿಗಳನ್ಯೋನ್ಯಪರಿಪೂರಕಂಗಳ್ ॥
ಯತಿಯೊಳವು ಸೇರಿರಲು ಸತ್ಯದರ್ಶನ ನಿನಗೆ ।
ಕೃತ ಸಮನ್ವಯನಾಗು - ಮಂಕುತಿಮ್ಮ ॥ ೫೫೨ ॥

ಚೂರುಗಳು ಹದಿನಾರು ಚಂದ್ರಮಂಡಲಕಂತೆ ।
ನೂರಾರು ಚೂರುಗಳು ಸತ್ಯಚಂದ್ರನವು ॥
ಸೇರಿಸುತಲವುಗಳನು ಬಗೆಯರಿತು ಬೆಳಸುತಿರೆ ।
ಸಾರ ಋತಪೂರ್ಣಿಮೆಯೊ - ಮಂಕುತಿಮ್ಮ ॥ ೫೫೩ ॥

ತಿಳಿವಿಗೊಳಿತೆನಿಸುದುದು ನಡೆಯೊಳೇತಕ್ಕರಿದು? ।
ಕುಳಿ ಮೇಡು ದೂರ ಮತಿಮನಸುಗಳ ನಡುವೆ ॥
ಒಳಗಿನಾಯೆಣ್ಣೆ ಬತ್ತಿಗಳೆರಡುಮೊಡವೆರೆಯೆ ।
ಬೆಳಕು ಜೀವೋನ್ನತಿಗೆ - ಮಂಕುತಿಮ್ಮ ॥ ೫೫೪ ॥

ಧರ್ಮಸಂಕಟದಿ ಮನ ತಲ್ಲಣಿಸುತಿರುವಂದು ।
ನಿರ್ಮಥಿಸು ನಿನ್ನಾತ್ಮವನೆ ಮಮತೆ ಬಿಟ್ಟು ॥
ನಿರ್ಮಮದ ಸದ್ವಿವೇಕದ ದೀಪಕಿಂತ ನೀಂ ।
ನೆಮ್ಮಲಿನ್ನೇನಿಹುದೊ? - ಮಂಕುತಿಮ್ಮ ॥ ೫೫೫ ॥

ಶಕ್ತಿಮೀರ್ದ ಪರೀಕ್ಷೆಗಳನು ವಿಧಿ ನಿಯಮಿಸಿರೆ ।
ಯುಕ್ತಿಮೀರ್ದ ಪ್ರಶ್ನೆಗಳನು ಕೇಳುತಿರೆ ॥
ಚಿತ್ತವನು ತಿರುಗಿಸೊಳಗಡೆ; ನೋಡು, ನೋಡಲ್ಲಿ ।
ಸತ್ತ್ವದಚ್ಛಿನ್ನ ಝರಿ - ಮಂಕುತಿಮ್ಮ ॥ ೫೫೬ ॥

ಅಂತರಂಗದ ಗವಾಕ್ಷಗಳ ತೆರೆದಿಡಲಲ್ಲಿ ।
ಚಿಂತೆ ಕುಮುಲದು, ಹೊಗೆಗಳೊತ್ತವಾತ್ಮವನು ॥
ಶಾಂತಿ ಬೇಳ್ಪೊಡೆ ಮನೆಗೆ ಗೋಡೆವೊಲೆ ಕಿಟಕಿಯುಂ ।
ಸಂತತದಪೇಕ್ಷಿತವೊ - ಮಂಕುತಿಮ್ಮ ॥ ೫೫೭ ॥

ಆಳವನು ನೋಡಿ ಬಗೆದಾಡುವ ಮಾತಿಂಗೆ ।
ರೂಢಿಯರ್ಥವದೊಂದು ಗೂಡಾರ್ಥವೊಂದು ॥
ವಾರಿಧಿಯ ದಾಂಟುವುದುಪಕೆ ಗಾಳಿಪಟವೊಂದು ।
ಕೋಲು ಹುಟ್ಟೊಂದು ಬಲ - ಮಂಕುತಿಮ್ಮ ॥ ೫೫೮ ॥

ಪರಮಪದದಲಿ ನೋಡು; ಬೇರುಗಳ್ ವ್ಯೋಮದಲಿ ।
ಧರೆಗಿಳಿದ ಕೊಂಬುರಂಬೆಗಳು, ಬಿಳಲುಗಳು ॥
ಚಿರಜೀವಿವೃಕ್ಷವಿದು ವಿಶ್ವಜೀವಾಶ್ವತ್ಥ ।
ಪರಿಕಿಸಿದರರ್ಥವನು - ಮಂಕುತಿಮ್ಮ ॥ ೫೫೯ ॥

ಜೀವನದ ಮೂಲ ಮೇಲಿಹುದು ಪರಮೋರ್ಧ್ವದಲಿ ।
ತೀವಿರ್ಪುದದು ಕೆಳಗೆ ನಮ್ಮ ಲೋಕದಲಿ ॥
ನಾವದರ ಕಡ್ಡಿಯೆಲೆ, ಚಿಗುರುವೆವು, ಬಾಡುವೆವು ।
ಸಾವು ಮರಕೇನಿಲ್ಲ - ಮಂಕುತಿಮ್ಮ ॥ ೫೬೦ ॥

ಒಂದು ಕಡೆ ಚಿಗುರುತಲಿ, ಒಂದು ಕಡೆ ಬಾಡುತಲಿ ।
ಕಂದುತಿರೆ ಕೊಂಬೆ, ಮುಂಡದಲಿ ಹಬ್ಬುತಲಿ ॥
ಎಂದೆಂದುಮಶ್ವತ್ಥ ಹಳೆಹೊಸದು; ತಾನದಾ ।
ಸ್ಪಂದನವೊ ಬ್ರಹ್ಮನದು - ಮಂಕುತಿಮ್ಮ ॥ ೫೬೧ ॥

ಎಲೆಗಳನು ಕಡ್ಡಿ, ಕಡ್ಡಿಯ ರಂಬೆಕೊಂಬೆಗಳು ।
ತಳೆದು ಪೆರ್ಚಿಸುತಿಹುವು ಮರದ ಬಾಳ್ಸಿರಿಯ ॥
ಸ್ಥಲವೊಂದು ನಿನಗಿಹುದು ವಿಶ್ವವೃಕ್ಷದೊಳಂತು ।
ಹಳಿಯದಿರು ನಿನ್ನಿರವ - ಮಂಕುತಿಮ್ಮ ॥ ೫೭೨ ॥

ಬಿಳಲಲ್ಲ, ಬೇರಲ್ಲ, ಮುಂಡಕಾಂಡಗಳಲ್ಲ ।
ತಳಿರಲ್ಲ, ಮಲರಲ್ಲ, ಕಾಯಿಹಣ್ಣಲ್ಲ ॥
ಎಲೆ ನೀನು; ವಿಶ್ವವೃಕ್ಷದೊಳ್ ಎಲೆಯೊಳೊಂದು ನೀಂ ।
ತಿಳಿದದನು ನೆರವಾಗು - ಮಂಕುತಿಮ್ಮ ॥ ೫೭೩ ॥

ಎತ್ತಲೋ ಕಾಡುಮಬ್ಬಿನ ಬಳ್ಳಿ ಮೊಗ್ಗಿನಲಿ ।
ಚಿತ್ರರಚನೆಗದೇಕೆ ತೊಡಗುವಳ್ ಪ್ರಕೃತಿ? ॥
ಕೃತ್ಯಕ್ಕೆ ತಾಂ ತರುವ ಶಕ್ತಿ ಗುಣ ಪೂರ್ಣತೆಯೆ ।
ಸಾರ್ಥಕವೊ ಜೀವಿತಕೆ - ಮಂಕುತಿಮ್ಮ ॥ ೫೭೪ ॥

ಕಾಡುಹಕ್ಕಿ ಹುಳಕ್ಕೆ ವರ್ಣಚಿತ್ರಗಳೇಕೆ?- ।
ನೋಡುವರ ಕಣ್ಣೊಲವ ಬೇಡುವಳೆ ಸೃಷ್ಟಿ? ॥
ಮಾಡುವಾ ಮಾಟಗಳನಾದನಿತು ಬೆಳಗಿಪುದು ।
ರೂಢಿಯಾ ಪ್ರಕೃತಿಯದು - ಮಂಕುತಿಮ್ಮ ॥ ೫೭೫ ॥

ಆರಣ್ಯಕದ ಪುಷ್ಪಗಳ ಮೂಸುವವರಾರು? ।
ಆರಿಹರು ಪತಗದುಡುಪನು ಹುಡುಕಿ ಮಚ್ಚಲ್? ॥
ಬೇರೊಬ್ಬರೆಣಿಕೆಯಿಲ್ಲದೆ ಪ್ರಕೃತಿ ತನಗೆಂದೆ ।
ಸ್ವಾರಸ್ಯವೆಸಗುವಳೊ! - ಮಂಕುತಿಮ್ಮ ॥ ೫೭೬ ॥

ಮನದ ಭಾವಗಳ ಪೂರ್ಣದಿನೊರೆಯಲರಿತ ಕವಿ ।
ಇನಿತನುಂ ಬಿಡದೆ ರೂಪಿಸಲರಿತ ಶಿಲ್ಪಿ ॥
ಅನುರೂಪದಿಂದ ವಾಸ್ತವಗೊಳಿಪ ಕೃತಿಚತುರ ।
ಧನಿಯರಿವರೆಲ್ಲಿಹರೊ? - ಮಂಕುತಿಮ್ಮ ॥ ೫೭೭ ॥

ಮನದ ಭಾವಿತಕೊಪ್ಪುವುಪಕರಣ ನಮಗಿಲ್ಲ ।
ಎಣಿಕೆಗಳ ಪೂರಯಿಪ ಸಾಧನಗಳಿಲ್ಲ ॥
ಜನುಮಜನುಮಗಳಿಂತು ಪೇಚಾಟ, ತಿಣಕಾಟ ।
ಮುನಿಪುದಾರಲಿ, ಹೇಳು? - ಮಂಕುತಿಮ್ಮ ॥ ೫೭೮ ॥

ಕ್ಷಿತಿರುಹಕೆ ಸುಮಫಲಮುಹೂರ್ತ ನಿಶ್ಚಿತವೇನು? ।
ಮತಿಮನಂಗಳ ಕೃಷಿತಪಃಫಲವುಮಂತು ॥
ಸತತ ಕೃಷಿ, ಬೀಜಗುಣ, ಕಾಲವರ್ಷಗಳೊದವೆ ।
ಪ್ರತಿಭೆ ವಿಕಸಿತವಹುದೊ - ಮಂಕುತಿಮ್ಮ ॥ ೫೭೯ ॥

ವಕ್ತ್ರವುಂಟೆಲ್ಲರಿಗೆ, ವರ್ಚಸೋರ್ಯೊರ್ವರಿಗೆ ।
ಕತ್ತಿ ಪಣ್ಯದೊಳುಂಟು, ಶಕ್ತಿ ಸಹಜದಲಿ ॥
ವ್ಯಕ್ತಿ ಪ್ರಭಾವೀ ಲೋಕಚರಿತೆಯ ಕೀಲು ।
ಹಸ್ತವದು ದೈವಕೆಲೊ - ಮಂಕುತಿಮ್ಮ ॥ ೫೮೦ ॥

ನಿನಗಿರದ ಕಣ್ ಬಾಯಿ ವಾಲ್ಮೀಕಿಗೆಂತಾಯ್ತು? ।
ಮುನಿಕವಿತೆಗೆಂತು ನಿನ್ನೆದೆಯೊಳೆಡೆಯಾಯ್ತು? ॥
ಘನಮಹಿಮನೊಳ್ ಜ್ವಲಿಸುತಿತರರೊಳು ನಿದ್ರಿಸುತೆ ।
ಅನಲನೆಲ್ಲರೊಳಿಹನು - ಮಂಕುತಿಮ್ಮ ॥ ೫೮೧ ॥

ಪುರುಷಯೋಚನೆಯೆಲ್ಲ ಮುರಿದು ಮಣ್ಣಹುದೆಂದು ।
ಕೊರಗದಿರು; ಕೆಟ್ಟನೆಂದೆಂದುಮೆನ್ನದಿರು ॥
ಶರಧಿಯೊಳು ಮೀನೊಂದು ಪುಟ್ಟಲೇಂ ಸಾಯಲೇಂ? ।
ಪರವೆಯೇನಿಲ್ಲವೆಲೊ - ಮಂಕುತಿಮ್ಮ ॥ ೫೮೨ ॥

ಹೋರಾಡು ಬೀಳ್ವನ್ನಮೊಬ್ಬಂಟಿಯಾದೊಡಂ ।
ಧೀರಪಥವನೆ ಬೆದಕು ಸಕಲಸಮಯದೊಳಂ ॥
ದೂರದಲಿ ಗೊಣಗುತ್ತ ಬಾಳ್ವ ಬಾಳ್ಗೇನು ಬೆಲೆ? ।
ಹೋರಿ ಸತ್ತ್ವವ ಮೆರಸು - ಮಂಕುತಿಮ್ಮ ॥ ೫೮೩ ॥

ಹೋರು ಧೀರತೆಯಿಂದ, ಮೊಂಡುತನದಿಂ ಬೇಡ ।
ವೈರ ಹಗೆತನ ಬೇಡ, ಹಿರಿ ನಿಯಮವಿರಲಿ ॥
ವೈರಾಗ್ಯ ಕಾರುಣ್ಯ ಮೇಳನವೆ ಧೀರತನ ।
ಹೋರುದಾತ್ತತೆಯಿಂದ - ಮಂಕುತಿಮ್ಮ ॥ ೫೮೪ ॥

ಕಕ್ಷಿಗಾರನವೋಲೇ ಪೋರುತ್ತೆ ನ್ಯಾಯಕ್ಕೆ ।
ಸಾಕ್ಷಿವೊಲಿರು ಕಡೆಗೆ ತೀರ್ಪಾಗುವಂದು ॥
ಭಿಕ್ಷುವೊಲು ಕಾಲ ಸವೆಯಿಸಿ ಲೋಕಯಾತ್ರೆಯಲಿ ।
ಪಕ್ಷಿವೊಲು ಮನದೊಳಿರು - ಮಂಕುತಿಮ್ಮ ॥ ೫೮೫ ॥

ತನ್ನ ಶಕ್ತಿಯನಳೆದು, ತನ್ನ ಗುಣಗಳ ಬಗೆದು ।
ಸನ್ನಿವೇಶದ ಸೂಕ್ಷ್ಮವರಿತು, ಧೃತಿದಳೆದು ॥
ತನ್ನ ಕರ್ತವ್ಯಪರಿಧಿಯ ಮೀರದುಜ್ಜುಗಿಸೆ ।
ಪುಣ್ಯಶಾಲಿಯ ಪಾಡು - ಮಂಕುತಿಮ್ಮ ॥ ೫೭೬ ॥

ಕಿಡಿ ಸಣ್ಣದನು ಮೇಲೆಬಿದ್ದ ಕೊರಡಾರಿಪುದು ।
ಸುಡುವುದಾ ಕಿಡಿಯುರಿಯೆ ನೂರು ಕೊರಡುಗಳ ॥
ಉಡುಗಿ ನಿನ್ನಾತ್ಮವಿರೆ ಬಿಡು ಹೆಗ್ಗಲಸಗಳನು ।
ತೊಡಗಾತ್ಮ ಬಲಿತಂದು - ಮಂಕುತಿಮ್ಮ ॥ ೫೭೭ ॥

ಬೆಟ್ಟಕ್ಕೆ ಸನ್ನೆಹಾಕಿರುವ ಮಹದಾಶಿಗನೆ ।
ಗಟ್ಟಿಯೇ? ಸೊಟ್ಟಾಗದೇ ಸನ್ನೆಗೋಲು? ॥
ರಟ್ಟೆಯೇ ಮುರಿದೀತು ಮೈಮರೆತ ಸಾಹಸದಿ ।
ಎಷ್ಟುಚಿತವೋ ನೋಡು - ಮಂಕುತಿಮ್ಮ ॥ ೫೭೮ ॥

ಬೆನ್ನಿನಗಲವನಳೆದು ಹೊರಗೆ ನೀನದನೊಡ್ಡು ।
ತನ್ನದೆನುವುದನು ವಿಧಿ ತಾನೆ ಕೊಳಲಿ ಬಿಡು ॥
ಬನ್ನ ನಿನಗೊದಗಲದನಾತ್ಮ ಶಿಕ್ಷಣವೆನ್ನು ।
ಮಾನ್ಯದೊಪ್ಪಂದವಿದು - ಮಂಕುತಿಮ್ಮ ॥ ೫೭೯ ॥

ದೊರೆಯ ವೇಷವ ಧರಿಸಿ ಮರೆಯುವೆಯ ಮೀಸೆಯನು? ।
ತಿರುಕಹಾರುವನಾಗಿ ಮೀಸೆ ತಿರಿಚುವೆಯೆ? ॥
ಇರುವುದವನವನಿಗವನವನ ತಾಣದ ಧರ್ಮ ।
ಅರಿವೆ ಋತುಗತಿಯಂತೆ - ಮಂಕುತಿಮ್ಮ ॥ ೫೮೦ ॥

ದೇವರದಿದೆಲ್ಲ ದೇವರಿಗೆಲ್ಲವೆಂದೊರಲು- ।
ತಾವುದನುಮವನ ನಿರ್ಣಯಕೆ ಬಿಡದೆಯೆ ತಾಂ ॥
ದಾವನ್ತ ಬಡುತ ತನ್ನಿಚ್ಛೆಯನೆ ಘೋಷಿಸುವ ।
ಭಾವವೆಂತಹ ಭಕುತಿ? - ಮಂಕುತಿಮ್ಮ ॥ ೫೮೧ ॥

ಸರಿಯಾಗಲಿಲ್ಲವದು ಸರಿಯಿದಲ್ಲವೆನುತ್ತ ।
ಹರಡಿಕೊಳಬೇಡ ಮುಳ್ಳನು ಹಾಸಿಗೆಯಲಿ ॥
ಕೊರೆಯಾದೊಡೇನೊಂದು? ನೆರೆದೊಡೇನಿನ್ನೊಂದು? ।
ಒರಟು ಕೆಲಸವೊ ಬದುಕು - ಮಂಕುತಿಮ್ಮ ॥ ೫೮೨ ॥

ಅಷ್ಟದಿಗ್ಗಜವೆ ನೀನ್? ಆದಿಶೇಷನೆ ನೀನು? ।
ಕಷ್ಟಭಾರವಿದೆಂದು ನಿಟ್ಟುಸಿರ ಬಿಡುವೆ! ॥
ನಿಷ್ಠುರದ ನಿನ್ನ ಕನಿಕರ ಜಗಕೆ ಬೇಕಿಲ್ಲ ।
ಎಷ್ಟಾದರಷ್ಟೆ ಸರಿ - ಮಂಕುತಿಮ್ಮ ॥ ೫೮೩ ॥

ಎಲ್ಲಕಂ ನಿನಗಿಲ್ಲ ಕರ್ತವ್ಯದಧಿಕಾರ ।
ಇಲ್ಲದೆಯುಮಿಲ್ಲ ನಿನಗಾ ಹೊರೆಯ ಪಾಲು ॥
ಸಲ್ಲಿಸಾದನಿತ, ಮಿಕ್ಕುದು ಪಾಲಿಗನ ಪಾಡು।
ಒಲ್ಲನವನ್ ಅರೆನಚ್ಚ - ಮಂಕುತಿಮ್ಮ ॥ ೫೮೪ ॥

ಫಲವೇನು ಹೆಣಗಾಡಿ ಹೋರಾಡಿ ಧರೆಯೊಳಗೆ? ।
ಸಲಿಸದೊಂದನುಮೊಂದನುಂ ದೈವ ಬಿಡದು ॥
ಹೊಲಸೆಲ್ಲವೆಲ್ಲ ಪಾಳ್, ಬಾಳ್ಗೆ ತಳಹದಿಯಿಲ್ಲ ।
ಗಲಿಬಿಲಿಯಿದೆನಬೇಡ - ಮಂಕುತಿಮ್ಮ ॥ ೫೮೫ ॥

ಕೆಂಡಮುಸುಡಿಯ ದೈವವೆಲ್ಲವನು ದಹಿಸುತಿರೆ ।
ದಂಡಧರನತ್ತಲ್ಲೆಲ್ಲವನು ಕೆಡಹುತಿರೆ ॥
ಮೊಂಡುಘಾಸಿಯ ಲಾಭ ಪಿಂಡಮಾತ್ರವು ತಾನೆ? ।
ಭಂಡಬಾಳಲೆ ನಮದು? - ಮಂಕುತಿಮ್ಮ ॥ ೫೮೬ ॥

ಅಹುದು ಬಾಳ್ ಭಂಡತನವಿಹದಿ ಬಾಳ್ ಮುಗಿಯುವೊಡೆ ।
ಕಹಿಯೊಗರು ಕಾಯಿ, ಮಿಡಿತನದೊಳದು ಮುಗಿಯೆ ॥
ಸಿಹಿಯಹುದು ಕಾಯಿ ಹಣ್ಣಾಗೆ, ಜೀವಿತವಂತು ।
ಮಹಿಮೆಗೊಳುವುದು ಮಾಗೆ - ಮಂಕುತಿಮ್ಮ ॥ ೫೮೭ ॥

ಜಟ್ಟಿ ಕಾಳಗದಿ ಗೆಲ್ಲದೊಡೆ ಗರಡಿಯ ಸಾಮು ।
ಪಟ್ಟುವರಸೆಗಳೆಲ್ಲ ವಿಫಲವೆನ್ನುವೆಯೇಂ? ॥
ಮುಟ್ಟಿ ನೋಡವನ ಮೈಕಟ್ಟು ಕಬ್ಬಿಣ ಗಟ್ಟಿ ।
ಗಟ್ಟಿತನ ಗರಡಿ ಫಲ - ಮಂಕುತಿಮ್ಮ ॥ ೫೮೮ ॥

ಪರಿ ಪರಿ ಪರೀಕ್ಷೆಗಳು, ಪರಿಭವದ ಶಿಕ್ಷೆಗಳು ।
ಗರಡಿಯ ವ್ಯಾಯಾಮ ಮನಬುದ್ಧಿಗಳಿಗೆ ॥
ಪುರುಷತೆಗೆ ಪೆಟ್ಟುಗಳಿನಾದ ಗಂತಿಯೆ ವಿಜಯ ।
ಬಿರಿದ ನನೆ ಫಲಕೆ ಮನೆ - ಮಂಕುತಿಮ್ಮ ॥ ೫೮೯ ॥

ಪುರುಷನ ಸ್ವಾತಂತ್ರ್ಯವವನ ತೋಳ್ಗಿರುವಷ್ಟು ।
ಪರಿಧಿಯೊಂದರೊಳದರ ಯತ್ನ ಕಡೆಯುಂಟು ॥
ತಿರುಗುವುದು ಮಡಿಸುವುದು ನಿಗುರುವುದು ನೀಳುವುದು ।
ತೊರೆದು ಹಾರದು ತೋಳು - ಮಂಕುತಿಮ್ಮ ॥ ೫೯೦ ॥

ಬದುಕು ಕದನದ ತೆರನೆ; ನೋಡೆ ಲೀಲೆ ಕದನ ।
ಮೊದಲುಮುಗಿವುಗಳಿರದ ಚಿತ್ರಲೀಲೆಯದು ॥
ಇದರೊಳೆಂದಿಗುಮಿರದು ಸೋಲ್ಗೆಲುವು ಕಡೆಯೆಣಿಕೆ ।
ಸದರದಾಟವೆ ಮುಖ್ಯ - ಮಂಕುತಿಮ್ಮ ॥ ೫೯೧ ॥

ನರಜೀವನದ ರಣದಿ ವಿಧಿಯ ಬಲವೊಂದು ಕಡೆ ।
ಚಿರವಿವೇಕದಿ ಬೆಳೆದ ನಲುಮೆಯೊಂದು ಕಡೆ ॥
ಉರುಬುತಿರೆ ಪುರುಷಂಗೆ ನಲುಮೆಯುಳಿತವೆ ಗೆಲವು।
ಪುರುಷತನವೇ ವಿಜಯ - ಮಂಕುತಿಮ್ಮ ॥ ೫೯೨ ॥

ಸತ್ತೆನೆಂದೆನಬೇಡ; ಸೋತೆನೆಂದೆನಬೇಡ ।
ಬತ್ತಿತೆನ್ನೊಳು ಸತ್ತ್ವ ದೂಟೆಯೆನಬೇಡ ॥
ಮೃತ್ಯುವೆನ್ನುವುದೊಂದು ತೆರೆಯಿಳಿತ; ತೆರೆಯೇರು ।
ಮತ್ತೆ ತೋರ್ಪುದು ನಾಳೆ - ಮಂಕುತಿಮ್ಮ ॥ ೫೯೩ ॥

ಬಿಡುವಿಲ್ಲದೀ ಜೀವಿತಾಪಣದ ಸರಕೆಣಿಸೆ ।
ಕಡೆಯೆಂದು? ಮುಗಿಯದಿಹ ಲಾಭನಷ್ಟಗಳ ॥
ಕಡತದೊಳ್ ಅದೆಂದಿನಾ ಲೆಕ್ಕವೇ ತೀರ್ಮಾನ? ।
ಬಿಡು ಲಾಭದಾತುರವ - ಮಂಕುತಿಮ್ಮ ॥ ೫೯೪ ॥

ಎನಿತು ನಿಂಗೆಲಿದೆಯೆಂದೆನರು ಬಲ್ಲವರೆಂದು- ।
ಮೆನಿತು ನೀಂ ಪೋರ್ದೆ ಯೆನಿತನು ಪೊತ್ತೆಯೆನುವರ್ ॥
ಗಣನೆ ಸಲುವುದು ತೋರ್ದ ಪೌರುಷಕೆ, ಜಯಕೆಲ್ಲ ।
ದಿನದಿನದ ಗರಡಿಯಿದು - ಮಂಕುತಿಮ್ಮ ॥ ೫೯೫ ॥

ಗರಡಿಯ ಸಾಮಿಂದೆ ನೀನೆದುರಾಳ ಗೆಲ್ಲದೊಡೇಂ? ।
ಬರದಿಹುದೆ ನಿನಗನಿತು ಕಾಯಾಂಗಪಟುತೆ? ॥
ವರ ಸದ್ಯಕಿಲ್ಲದೊಡೆ ಬರಿದಾಗುವುದೆ ಪೂಜೆ? ।
ಪರಿಶುದ್ಧ ಮನವೆ ವರ - ಮಂಕುತಿಮ್ಮ ॥ ೫೯೬ ॥

ಬಿತ್ತ ಮಳೆಗಳವೋಲು ಯತ್ನ ದೈವಿಕ ನಮಗೆ ।
ಯುಕ್ತದೊಳಗೆರಡುಮನುವಾಗೆ ಬೆಳೆ ಹುಲುಸು ॥
ಯತ್ನ ಬಿಟ್ಟರೆ ಲೋಪ, ದೈವ ತಾಂ ಬಿಡೆ ತಾಪ ।
ಗೊತ್ತಿಲ್ಲ ಫಲದ ಬಗೆ - ಮಂಕುತಿಮ್ಮ ॥ ೫೯೭ ॥

ಬದುಕು ಕದನವೆಂದಂಜಿ ಬಿಟ್ಟೋಡುವನು ।
ಬಿದಿಯ ಬಾಯಿಗೆ ಕವಳವಾಗದುಳಿಯುವನೆ? ॥
ಎದೆಯನುಕ್ಕಾಗಿಸುತ, ಮತಿಗದೆಯ ಪಿಡಿದು, ನೀ- ।
ನೆದುರು ನಿಲೆ ಬಿದಿಯೊಲಿವ - ಮಂಕುತಿಮ್ಮ ॥ ೫೯೮ ॥

ತಿರುಗಿಸಲಿ ವಿಧಿರಾಯನಿಚ್ಛೆಯಿಂ ಯಂತ್ರವನು ।
ಚರಿಕೆ ತಾರಾಗ್ರಹಗಳಿಷ್ಟವೋದಂತೆ ॥
ಪರಿಹಾಸದಿಂ ಕರ್ಮ ದೈವ ಕೇಕೆಗಳಿಡಲಿ ।
ಸ್ಥಿರಚಿತ್ತ ನಿನಗಿರಲಿ - ಮಂಕುತಿಮ್ಮ ॥ ೫೯೯ ॥

ಬದುಕು ಜಟಕಾಬಂಡಿ, ವಿಧಿಯದರ ಸಾಹೇಬ ।
ಕುದುರೆ ನೀನ್, ಅವನು ಪೇಳ್ದಂತೆ ಪಯಣಿಗರು ॥
ಮದುವೆಗೋ ಮಸಣಕೋ ಹೋಗೆಂದ ಕಡೆಗೋಡು ।
ಪದ ಕುಸಿಯೆ ನೆಲವಿಹುದು - ಮಂಕುತಿಮ್ಮ ॥ ೨೦೦ ॥

ಇರುವ ಕೆಲಸವ ಮಾಡು ಕಿರಿದೆನದೆ ಮನವಿಟ್ಟು ।
ದೊರೆತುದ ಹಸಾದವೆಂದುಣ್ಣು ಗೊಣಗಿಡದೆ ॥
ಧರಿಸು ಲೋಕದ ಭರವ ಪರಮಾರ್ಥವನು ಬಿಡದೆ ।
ಹೊರಡು ಕರೆ ಬರಲ್ ಅಳದೆ - ಮಂಕುತಿಮ್ಮ ॥ ೨೦೧ ॥

ಮಾಯೆಯೆಂಬಳ ಸೃಜಿಸಿ, ತಾಯನಾಗಿಸಿ ಜಗಕೆ ।
ಆಯಸಂಗೊಳುತ ಸಂಸಾರಿಯಾಗಿರುವ ॥
ನಾಯಕ ಬ್ರಹ್ಮನ್ ಅನುಯಾಯಿಗಳು ನಾವೆಲ್ಲ ।
ಹೇಯವದರೊಳಗೇನೊ - ಮಂಕುತಿಮ್ಮ ॥ ೨೦೨ ॥

ಧರಣಿಗೋಳವು ಮೂಸೆ; ಜೀವಗಳನದರೊಳಗೆ ।
ಪರಿಶುದ್ಧಿಗೊಳಿಸುವುದು ಸಂಸಾರತಾಪ ॥
ಪರಿಪರಿಯ ಬಂಧುಧರ್ಮದಿನ್ ಅಹಂಮತಿ ಕರಗೆ ।
ಹರಡಿ ಹಬ್ಬುವುದಾತ್ಮ - ಮಂಕುತಿಮ್ಮ ॥ ೨೦೩ ॥

ಹೊಸಹೊಸಬನಾಗುವನನುಕ್ಷಣಂ ಮಾನವನು ।
ವಸುಧೆಯಾ ಮೂಸೆಯಲಿ ಪುಟಪಾಕವಾಂತು ॥
ರಸಮೂರ್ತಿಯಾಗುವನು ಜಗದಾತ್ಮಮತಿ ಬೆಳೆಯೆ ।
ಕಸವೆಲ್ಲ ಕಳೆದವನು - ಮಂಕುತಿಮ್ಮ ॥ ೭೦೪ ॥

ಉದರಶಿಖಿಯೊಂದುಕಡೆ, ಹೃದಯಶಿಖಿಯೊಂದುಕಡೆ ।
ಕುದಿಸದಿರೆ ಜೀವಶಿಲೆ ಮೃದುವಪ್ಪುದೆಂತು? ॥
ಬದುಕಿನುರಿಯಲಿ ಕರಗಿ ತಿಳಿಯಾಗದಿಹ ಜೀವ ।
ಪುದಿಯದಾತ್ಮಾರ್ಣವದಿ - ಮಂಕುತಿಮ್ಮ ॥ ೭೦೫ ॥

ತ್ರಾಸಿನಲಿ ಕಪ್ಪೆಗಳ ಸರಿಕೂಡಿಸುವ ಚತುರಿ ।
ಸಂಸ್ಕೃತಿ ದ್ವಂದ್ವಗಳ ಸಮತೂಗಲರಿವಂ ॥
ಬೀಸುಕತ್ತಿಗಳ ಮಧ್ಯದಿ ನೂಲಮೇಲ್ ನಡೆವ ।
ಸಾಸವೀ ಗೃಹಧರ್ಮ - ಮಂಕುತಿಮ್ಮ ॥ ೭೦೬ ॥

ಪ್ರೇಮಾತಿಶಯವಿರದ ದಾಂಪತ್ಯ ವರ್ಧಿಸದು ।
ವ್ಯಾಮೋಹಕೆಡೆಗೊಟ್ಟೊಡದು ನಿಗಳವಹುದು ॥
ಸಾಮರಸ್ಯವನೆಂತು ಕಾಣ್ಬುದೀ ವಿಷಮದಲಿ? ।
ಆಮಿಷದ ತಂಟೆಯಿದು - ಮಂಕುತಿಮ್ಮ ॥ ೭೦೭ ॥

ಕೈಕಯಿಯವೊಲು ಮಾತೆ, ಸತ್ಯಭಾಮೆವೊಲು ಸತಿ ।
ಸಾಕಿ ಸಂತಸವೆರೆಯೆ ಸಂಸಾರ ಲೀಲೆ ॥
ಬೇಕು ಮತ್ಸರ ಮಮತೆ ಮೋಹಂಗಳಾವೇಶ ।
ಲೋಕನಾಟಕಕಾಗ - ಮಂಕುತಿಮ್ಮ ॥ ೭೦೮ ॥

ಆವ ಜೀವದ ಪಾಕವಾವನುಭವದಿನಹುದೊ! ।
ಆವ ಪಾಪಕ್ಷಯವದಾವ ಪುಣ್ಯದಿನೋ! ॥
ಕಾವಿರದೆ ಪಕ್ವವಿಹ ಜೀವವಿಳೆಯೊಳಗಿರದು ।
ನೋವೆಲ್ಲ ಪಾವಕವೊ - ಮಂಕುತಿಮ್ಮ ॥ ೭೦೯ ॥

ಕ್ಷುತ್ತುಮಮತೆಗಳು ಜೀವಕೆ ಕುಲಿಮೆಸುತ್ತಿಗೆಗಳ್ ।
ಉತ್ತಮವದೆನಿಪುವುವು ಕಿಟ್ಟಗಳ ಕಳೆದು ॥
ಚಿತ್ತ ಸಂಸ್ಕಾರಸಾಧನವಯ್ಯ ಸಂಸಾರ ।
ತತ್ತ್ವ ಪ್ರವೃತ್ತಂಗೆ - ಮಂಕುತಿಮ್ಮ ॥ ೭೧೦ ॥

ಮನೆಯೆ ಮಠವೆಂದು ತಿಳಿ, ಬಂಧು ಬಳಗವೆ ಗುರುವು ।
ಅನವರತಪರಿಚರ್ಯೆಯವರೊರೆವ ಪಾಠ ॥
ನಿನಗುಳಿದ ಜಗವ ಮುಟ್ಟಿಪ ಸೇತು ಸಂಸಾರ ।
ಮನಕೆ ಪುಟಸಂಸ್ಕಾರ - ಮಂಕುತಿಮ್ಮ ॥ ೭೧೧ ॥

ಕಾಷಾಯವೇಂ ತಪಸು ಗೃಹಲೋಕನಿರ್ವಾಹ ।
ವೇಷತಾಳದ ತಪಸು, ಕಠಿನತರ ತಪಸು ॥
ಲೇಸಿನಿಂದದು ಸಾಗೆ ಬೇಕು ಶಮ ದಮ ಸಮತೆ ।
ಆಸಿಧಾರವ್ರತವೊ - ಮಂಕುತಿಮ್ಮ ॥ ೭೧೨ ॥

ನಯನಯುಗದಿಂ ಜಗವ ಪೊರೆದು, ನಿಟಿಲಾಕ್ಷಿಯಿಂ ।
ಲಯವಡಿಸುವುದದೇನು ಶಿವಯೋಗಲೀಲೆ? ॥
ಜಯಿಸಿ ಮದನನ ಬಳಿಕ ತನ್ನೊಡಲೊಳ್ ಉಮೆಯನ- ।
ನ್ವಯಿಸಿಕೊಂಡಿಹುದೇನು? - ಮಂಕುತಿಮ್ಮ ॥ ೭೧೩ ॥

ಮಾರನಂ ದಂಡಿಸಿರೆ ಗೌರಿಯಿಂ ಭಯವೇನು? ।
ಚಾರುಸಹಕಾರಿಯವಳೆಂದು ಶಿವನೊಲಿದನ್ ॥
ಮೀರೆ ಮೋಹವನು ಸಂಸಾರದಿಂ ಭಯವೇನು? ।
ದಾರಿ ಕೆಳೆಯದು ನಿನಗೆ - ಮಂಕುತಿಮ್ಮ ॥ ೭೧೪ ॥

ಹಾಲ ಕಾಯಿಸಿ ಹೆಪ್ಪನಿಕ್ಕಿ ಕಡೆದೊಡೆ, ಮೊದಲು ।
ಮೇಲೆ ಕಾಣದ ಬೆಣ್ಣೆ ತೇಲಿ ಬರುವಂತೆ ॥
ಬಾಳನೀ ಜಗದ ಮಂತುವು ಕಡೆಯಲೇಳುವುದು ।
ಆಳದಿಂದಾತ್ಮಮತಿ - ಮಂಕುತಿಮ್ಮ ॥ ೭೧೫ ॥

ಭುಕ್ತಿಪಥ ಮುಕ್ತಿಪಥ ಬೇರೆಬೇರೆಯವಲ್ಲ ।
ಯುಕ್ತದಿಂದೆರಡುಮಂಚುಗಳೊಂದೆ ಪಥಕೆ ॥
ಸತ್ತ್ವ ಶೋಧನೆ ಲೋಕಸಂಸ್ಕಾರದಿಂ ನಿನಗೆ ।
ಶಕ್ತಿಯಧ್ಯಾತ್ಮಕದು - ಮಂಕುತಿಮ್ಮ ॥ ೭೧೬ ॥

ಧ್ವನಿತ ಪ್ರತಿಧ್ವನಿತ ಮನುಜಜೀವಿತವೆಲ್ಲ ।
ಕುಣಿವುದವನೆದೆ ಜಗತ್ಪ್ರಕೃತಿ ಪಾಡುವವೊಲ್ ॥
ಇನಿದಕೊಲವಳಲಿಗನುತಾಪ; ಸೆಣಸಿಗೆ ಬೀರ ।
ಘನಗರ್ಜಿತಕೆ ದೈನ್ಯ - ಮಂಕುತಿಮ್ಮ ॥ ೭೧೭ ॥

ಜಗದ ಸಂತಾಪ ಸಂತಸ ಸಂಭ್ರಮಂಗಳುಲಿ ।
ಬಗಿದು ನರನೆದೆಯ, ಜೀವವ ಪಿಡಿದು ಕುಲುಕೆ ॥
ಸೊಗಯಿಪುದು ಮನಸಿಗದು ಕವಿಕಲಾರಸಿಕರ್ಗೆ ।
ಜಗ ಸೂರ್ಯ ನೀಂ ಕಮಲ - ಮಂಕುತಿಮ್ಮ ॥ ೭೧೮ ॥

ಪ್ರತ್ಯೇಕ ಸುಖವ, ನೀಂ ಪ್ರತ್ಯೇಕ ಸಂಪದವ- ।
ನತ್ಯಾಶೆಯಿಂದರಸಿ ಮಿಕ್ಕೆಲ್ಲ ಜಗವ- ॥
ನೊತ್ತಟ್ಟಿಗಿಡುವೆನೆನೆ, ನಷ್ಟವಾರಿಗೊ ಮರುಳೆ? ।
ಬತ್ತುವುದು ನಿನ್ನಾತ್ಮ - ಮಂಕುತಿಮ್ಮ ॥ ೭೧೯ ॥

ಲೋಕಜೀವನದೆ ಮಾನಸದ ಪರಿಪಾಕವಾ ।
ಪಾಕದಿಂ ಮತಿಶುದ್ಧಿಯದರಿನೊಳದೃಷ್ಟಿ ॥
ಸಾಕಲ್ಯದಾತ್ಮಸಂದರ್ಶನಕೆ ಕರಣವದು ।
ಲೋಕದಿಂ ನಿರ್ಲೋಕ - ಮಂಕುತಿಮ್ಮ ॥ ೭೧೦ ॥

ಧರಿಸಿರ್ಪುದಲ ಧರ್ಮ? ಧರಿಸು ಜೀವನಧುರವ ।
ಚರಿಸು ಲೋಕದ ಮಾರ್ಗಗಳಲಿ ಹಿತವರಿತು ॥
ಸರಿಪಡಿಸಿ ದಾರಿಗಳ ಕೆರೆ ತೋಪು ಸತ್ರಗಳ ।
ನೆರವಾಗು ಪಯಣಕ್ಕೆ - ಮಂಕುತಿಮ್ಮ ॥ ೭೧೧ ॥

ಧರ್ಮನಿರ್ಣಯ ನಿನಗೆ ಜನ್ಮಜನ್ಮಾಂತರದ ।
ಕರ್ಮಸಂದರ್ಭದಿಂದೊಗೆವುದದನರಿತು ॥
ನಿರ್ಮಮದ ನಿರ್ಮಲೋತ್ಸಹದೆ ನೀನಾಚರಿಸೆ ।
ಬ್ರಹ್ಮಸಾಮೀಪ್ಯವೆಲೊ - ಮಂಕುತಿಮ್ಮ ॥ ೭೧೧ ॥

ಗೃಹದಿ ರಾಷ್ಟ್ರದಿ ಸಮಾಜದಿ ಲೋಕಸಂಗತದಿ ।
ವಿಹಿತದ ಸ್ಥಾನದಿಂ ಸಹಜಗುಣಬಲದಿಂ- ॥
ದಿಹಪರಸಮನ್ವಯದೆ ಸರ್ವಹಿತಸಂಸ್ಥಿತಿಗೆ ।
ಸಹಕರಿಪುದಲೆ ಧರ್ಮ - ಮಂಕುತಿಮ್ಮ ॥ ೭೧೨ ॥

ಹತ್ಯೆಯೋ ಹನ್ಯತೆಯೊ ವಿಜಯವೋ ಪರಿಭವವೊ ।
ಕ್ಷತ್ರಿಯಂ ಸ್ವಾರ್ಥಮಂ ಗಣಿಸುವನೆ ರಣದೊಳ್? ॥
ಕೃತ್ಯನಿರ್ಣಯ ಬಾಹ್ಯಲಾಭನಷ್ಟದಿನಲ್ಲ ।
ಆತ್ಮಋಣವದು ಜಗಕೆ - ಮಂಕುತಿಮ್ಮ ॥ ೭೧೪ ॥

ಕೆಟ್ಟ ಪ್ರಪಂಚವಿದು, ಸುಟ್ಟ ಕರಿ ನರಮನಸು ।
ಬಿಟ್ಟುಬಿಡಲರಿದದನು, ಕಟ್ಟಿಕೊಳೆ ಮಷ್ಟು ॥
ಮುಟ್ಟಿ ಮುಟ್ಟದವೋಲುಪಾಯದಿಂ ನೋಡದನು ।
ಗಟ್ಟಿ ಪುರುಳೇನಲ್ಲ - ಮಂಕುತಿಮ್ಮ ॥ ೭೧೫ ॥

ಕುಸುಮಸಖನೇಂ ನೀನು? ಹಿಸುಕದೆಯೆ ಮೂಸದನು ।
ಹಿಸುಕೆ ಕಟುಕಂಪು; ನರಲೋಕವದರವೋಲೇ ॥
ಗಸಿಯ ಕಲಕದೆ ಕೊಳದ ಮೇಲ್ತಿಳಿಯ ಕುಡಿದು ನಡೆ ।
ಹಸನು ಹಗುರದ ಬಾಳು - ಮಂಕುತಿಮ್ಮ ॥ ೭೧೬ ॥

ವಿಷಯಸನ್ನಿಧಿಗಿಂತ ಮಸಣಸನ್ನಿಧಿ ಲೇಸು ।
ವಿಷದೂಟಕಿಂತುಪೋಷಿತವೆ ಲೇಸಲ್ತೆ? ॥
ತೃಷೆ ಕನಲೆ, ಜೀವ ಬಿಸಿಬಾಣಲಿಗೆ ಬಿದ್ದ ಹುಳು ।
ಶಿಶು ಪಿಶಾಚಿಯ ಕೈಗೆ - ಮಂಕುತಿಮ್ಮ ॥ ೭೧೭ ॥

ಋಣವ ತೀರಿಸಬೇಕು, ಋಣವ ತೀರಿಸಬೇಕು ।
ಋಣವ ತೀರಿಸುತ ಜಗದಾದಿಸತ್ತ್ವವನು ॥
ಜನದಿ ಕಾಣುತ್ತದರೊಳ್ ಒಂದುಗೂಡಲುಬೇಕು ।
ಮನೆಯೊಳಗೆ ಮಠ ನಿನಗೆ - ಮಂಕುತಿಮ್ಮ ॥ ೭೧೮ ॥

ವೈವಿಧ್ಯವೊಂದುಕೃಪೆ ನಮಗಿರುವ ಕಷ್ಟದಲಿ ।
ಆವರಿಸದಳಲ್ ಎಲ್ಲರನುಮೊಂದೆ ಸಮಯ ॥
ನೋವಿಲ್ಲದರು ನೊಂದವರನು ಸಂತಯಿಸುತಿರೆ ।
ಜೀವನವು ಕಡಿದಹುದೆ? - ಮಂಕುತಿಮ್ಮ ॥ ೭೧೯ ॥

ಸ್ಥೂಲಸೂಕ್ಷ್ಮ ವಿವೇಕರಹಿತೇಷ್ಟ ಬಂಧುಜನ ।
ಕಾಲದಂಷ್ಟ್ರಕೆ ನಿನ್ನ ಮೃದುಗೊಳಿಪ ಭಟರು ॥
ಸಾಲವನು ನಿನ್ನಿಂದ ಸಲಿಸಕೊಳಬಂದವರು ।
ತಾಳುಮೆಯಿನವರೊಳಿರು - ಮಂಕುತಿಮ್ಮ ॥ ೭೨೦ ॥

ಸರಿಗೆಪಂಚೆಯೊ ಹೊದಿಕೆ, ಹರಕುಚಿಂದಿಯೊ ಮೈಗೆ ।
ಪರಮಾನ್ನ ಭೋಜನವೊ, ತಿರುಪೆಯಂಬಲಿಯೋ ॥
ಪರಿಣಾಮದಲಿ ಧನಿಕ ಬಡವರಿರ್ವರುಮೊಂದೆ ।
ಕರುಬು ಕೊರಗೇತಕೆಲೊ - ಮಂಕುತಿಮ್ಮ ॥ ೭೨೧ ॥

ಕಿವುಡುತನ ತಪ್ಪೀತೆ ರನ್ನ ಕುಂಡಲದಿಂದ? ।
ತೊವಲು ಜಬ್ಬಲು ಬಿಳದೆ ಮೃಷ್ಟಾನ್ನದಿಂದ? ॥
ಭುವಿಯ ಪರಿಣಾಮದಲಿ ಸಿರಿಬಡತನಗಳೊಂದೆ ।
ಜವರಾಯ ಸಮವರ್ತಿ - ಮಂಕುತಿಮ್ಮ ॥ ೬೩೨ ॥

ಸಾಧ್ಯಪಡದಾರಿಗಂ ನರಭಾಲಪಟ್ಟವನು ।
ಶುದ್ಧಪಡಿಸಲು ತೊಡೆದು ಪೂರ್ವದೆಲ್ಲವನು ॥
ಹೊದ್ದೆ ಹರಿಯಲಿ ಬೇಕು ಕರ್ಮಶೇಷದ ಪಟವ ।
ಬುದ್ಧಿನುಡಿ ಸ್ವೈರಣೆಯೆ - ಮಂಕುತಿಮ್ಮ ॥ ೬೩೩ ॥

ಯುದ್ಧವಾಗಲಿ ರಾಜ್ಯವಿದ್ಯೆಯಾಗಲಿ ಶಾಸ್ತ್ರ ।
ವೃದ್ಧಿಯಾಗಲಿ ನರನ ಹಣೆಯಿನಳಿಯಿಸದಾ ॥
ಕ್ಷುದ್ರಕಾರ್ಪಣ್ಯದನ್ಯಾಯದನಿತಿನಿತುಳಿಕೆ ।
ಯಿದ್ದೆಯಿರುವುದು ನಮಗೆ - ಮಂಕುತಿಮ್ಮ ॥ ೬೩೪ ॥

ಗುದ್ದಲಿಯಿನಾದೀತೆ ಮಲೆ ಕಣಿವೆ ಸಮದ ನೆಲ? ।
ಮದ್ದು ತಡೆವುದೆ ಮುಪ್ಪು ಕಳ್ಳನವೊಲಮರೆ? ॥
ಯುದ್ಧತಾಪದೆ ಶಾಂತಿಶೀತಲತೆಯುದಿಸೀತೆ? ।
ಸಿದ್ಧವಿರು ಸ್ವೈರಣೆಗೆ - ಮಂಕುತಿಮ್ಮ ॥ ೬೩೫ ॥

ಸಾಸಿರದ ಯುಕ್ತಿ ಸಾಹಸವ ನೀನೆಸಗುತಿರು ।
ಲೇಸು ಫಲ ದೊರೆಗೆ ನಿನ್ನೆಲ್ಲ ಪೌರುಷಕಂ ॥
ಶೇಷ ನಿನಗುಳಿವುದೆಂತಾದೊಡಂ ನೋವಿನಿತು ।
ಸೈಸದನು ನೀನಳದೆ - ಮಂಕುತಿಮ್ಮ ॥ ೬೩೬ ॥

ಸಿರಿದರಿದ್ರತೆಗಳ್ಗೆ ಫಲದೊಳಂತರ ಕಿರಿದು ।
ಸರಿತಪ್ಪುಗಳಿಗಂತು, ಜಾಣ್ ಬೆಪ್ಪುಗಳ್ಗಂ ॥
ಮರಣವೆಲ್ಲವನೊಂದೆ ತೆರದಿ ಮುಸುಕುವುದೆಂದೊ ।
ಪರವೆಯೆಂತಾದೊಡೇಂ? - ಮಂಕುತಿಮ್ಮ ॥ ೬೩೭ ॥

ನಂಬು ದೇವರ, ನಂಬು, ನಂಬೆನ್ನುವುದು ಲೋಕ ।
ಕಂಬನಿಯನಿಡುವ ಜನ ನಂಬಲೊಲ್ಲದರೇಂ? ॥
ಹಂಬಲನೆ ತೊರೆದಂಗೆ ನಂಬಿಕೆಯ ಹಂಗೇಕೆ? ।
ತುಂಬು ವಿರತಿಯ ಮನದಿ - ಮಂಕುತಿಮ್ಮ ॥ ೬೩೮ ॥

ಮುಗ್ಧನಾಗದೆ ಭುಜಿಸು ಭುಜಿಸಲಿಹುದನು ಜಗದಿ ।
ಮಾಧ್ವೀಕ ಭಯವಿರದು ಜಾಗರೂಕನಿಗೆ ॥
ದೃಗ್ದೃಶ್ಯಚಿತ್ರಪ್ರಪಂಚದಲಿ ಸೇರಿ ನೀಂ ।
ಮುಗ್ಧನಾಗದೆ ಸುಖಿಸು - ಮಂಕುತಿಮ್ಮ ॥ ೬೩೯ ॥

ತಿರುಕ ನೀನೀ ಬ್ರಹ್ಮಪುರಿಯೊಳದ ಮರೆಯದಿರು ।
ಸಿರಿಯಿರ್ದೊಡೇನು? ಪರಿಜನವಿರ್ದೊಡೇನು? ॥
ತೊರೆದೆಲ್ಲ ಡಂಭಗಳ ನೀನೆ ನಿನ್ನಾಳಾಗು ।
ಪರದೇಶಿವೊಲು ಬಾಳು - ಮಂಕುತಿಮ್ಮ ॥ ೬೪೦ ॥

ಬಾನೊಳಿರುವುದೆ ಪಕ್ಷಿ ಪಾರ್ವ ದಾರಿಯ ನಕ್ಷೆ? ।
ಮೀನು ನೀರೊಳು ನುಸುಳೆ ಪಥನಿಯಮವಿಹುದೆ? ॥
ಏನೊ ಜಿವವನೆಳೆವುದೇನೊ ನೂಕುವುದದನು ।
ನೀನೊಂದು ಗಾಳಿಪಟ - ಮಂಕುತಿಮ್ಮ ॥ ೬೪೧ ॥

ದಾರಿಗುರಿಗಳ ಗೊತ್ತು ಕಾಗೆಗುಂಟೇನಯ್ಯ ।
ಆರ ಮನೆ ಸಂಡಿಗೆಯೊ, ಚುಂಡಿಲಿಯೊ, ಹುಳುವೋ ॥
ಆರ ಪಿಂಡವೊ, ಏನೊ, ಎಂತೊ ಆ ಬಾಳ ಗತಿ! ।
ಮೀರಿದವನೇಂ ನೀನು? - ಮಂಕುತಿಮ್ಮ ॥ ೬೪೨ ॥

ಬಾಳ್ಕೆಯಲಿ ನೂರೆಂಟು ತೊಡಕು ತಿಣಕುಗಳುಂಟು ।
ಕೇಳ್ಕೆಮಾಣ್ಕೆಗಳಿಗವು ಜಗ್ಗವೊಂದಿನಿಸುಂ ॥
ಗೋಳ್ಕರದರೇನು ಫಲ? ಗುದ್ದಾಡಲೇನು ಫಲ? ।
ಪಲ್ಕಿರಿದು ತಾಳಿಕೊಳೊ- ಮಂಕುತಿಮ್ಮ ॥ ೬೪೩ ॥

ತರಚುಗಾಯವ ಕೆರೆದು ಹುಣ್ಣನಾಗಿಪುದು ಕಪಿ ।
ಕೊರತೆಯೊಂದನು ನೀನು ನೆನೆನೆನೆದು ಕೆರಳಿ ॥
ಧರೆಯೆಲ್ಲವನು ಶಪಿಸಿ, ಮನದಿ ನರಕವ ನಿಲಿಸಿ ।
ನರಳುವುದು ಬದುಕೇನೊ? - ಮಂಕುತಿಮ್ಮ ॥ ೬೪೪ ॥

ಚಿಂತೆಸಂತಾಪಗಳು ಮನಸಿಗೆ ವಿರೇಚಕವೊ ।
ಸಂತಸೋತ್ಸಾಹಗಳೆ ಪಥ್ಯದುಪಚಾರ ॥
ಇಂತುಮಂತುಂ ನಡೆಯುತಿರುವುದಾತ್ಮ ಚಿಕಿತ್ಸೆ ।
ಎಂತಾದೊಡಂತೆ ಸರಿ - ಮಂಕುತಿಮ್ಮ ॥ ೬೪೫ ॥

ಶೀತವಾತಗಳಾಗೆ ದೇಹಕೌಷಧ ಪಥ್ಯ ।
ಚೇತ ಕೆರಳಿರೆ ಕಣ್ಣು ಕಿವಿಗಳಾತುರದಿಂ ॥
ಪ್ರೀತಿಯಿಂದದನೊಲಿಸಿ ನೀತಿಯಲಿ ಶಿಕ್ಷಿಸುವು- ।
ದಾತುಮದ ನೆಮ್ಮದಿಗೆ - ಮಂಕುತಿಮ್ಮ ॥ ೬೪೬ ॥

ಮುಕ್ತಿಯೆಂಬುದು ಮನದ ಸಂಸ್ಥಿತಿಯೆ, ಬೇರಲ್ಲ ।
ರಕ್ತಿ ವಿಪರೀತವದಕಾಗದಿರೆ ಮುಕ್ತಿ ॥
ಯುಕ್ತಿಯಿಂ ಕರಣಚೇಷ್ಟಿತವ ತಿದ್ದುತೆ ಶಮಿಪ ।
ಶಕ್ತಿವಂತನೆ ಮುಕ್ತ - ಮಂಕುತಿಮ್ಮ ॥ ೬೪೭ ॥

ತರಿದುಬಿಡು, ತೊರೆದುಬಿಡು, ತೊಡೆದುಬಿಡು ನೆನಹಿಂದ ।
ಕರೆಕರೆಯ ಬೇರುಗಳ, ಮನದ ಗಂಟುಗಳ ॥
ಉರಕೆ ಸೊಗಸೆನಿಸಿದಾ ಪ್ರೀತಿಹಾರಮುಮೊರ್ಮೆ ।
ಉರುಳಪ್ಪುದಾತ್ಮಕ್ಕೆ - ಮಂಕುತಿಮ್ಮ ॥ ೬೪೮ ॥

ಜಗವೆನ್ನ ಮುದ್ದಿಸದದೇಕೆಂದು ಕೊರಗದಿರು ।
ಮಗುವು ನೀಂ ಪೆತ್ತರ್ಗೆ, ಲೋಕಕೆ ಸ್ಪರ್ಧಿ ॥
ಹೆಗಲಹೊರೆ ಹುಟ್ಟಿದರ್ಗೆಲ್ಲಮಿರುತಿರೆ, ನಿನ್ನ ।
ರಗಳೆಗಾರೆಗೆ ಬಿಡುವೊ? - ಮಂಕುತಿಮ್ಮ ॥ ೬೪೯ ॥

ರಾಗಿಮುದ್ದೆಯ ನುಂಗಿ ನಲಿದು ಬಾಳ್ವಾತಂಗೆ ।
ಕಾಗೆ ಕದ್ದುಣುವ ಭಕ್ಷ್ಯವ ಕಂಡು ಕರುಬೆ? ॥
ನೀಗುವುದು ಹಸಿವನ್ ಉಣಿಸೆಂತಪ್ಪುದಾದೊಡಂ ।
ಬಾಗಿಸದಿರಾತ್ಮವನು - ಮಂಕುತಿಮ್ಮ ॥ ೬೫೦ ॥

ಮೌನದಿಂದಂಬಲಿಯನುಂಡು ತಣಿಯುವ ಮಾನಿ ।
ಶ್ವಾನನುಣುವೆಂಜಲೋಗರಕೆ ಕರುಬುವನೆ? ॥
ಜ್ಞಾನಿ ನಡೆವಂ ವಿಷಯ ತರತಮವಿವೇಕದಲಿ ।
ಮಾಣು ನೀಂ ತಲ್ಲಣವ - ಮಂಕುತಿಮ್ಮ ॥ ೬೫೧ ॥

ಅನ್ನದಾತುರಕಿಂತ ಚಿನ್ನದಾತುರ ತೀಕ್ಷ್ಣ ।
ಚಿನ್ನದಾತುರಕಿಂತ ಹೆಣ್ಣುಗಂಡೊಲವು ॥
ಮನ್ನಣೆಯ ದಾಹವೀಯೆಲ್ಲಕಂ ತೀಕ್ಷ್ಣತಮ ।
ತಿನ್ನುವುದದಾತ್ಮವನೆ - ಮಂಕುತಿಮ್ಮ ॥ ೬೫೨ ॥

ಮನೆಯೊಳೋ ಮಠದೊಳೋ ಸಭೆಯೊಳೋ ಸಂತೆಯೊಳೊ ।
ಕೊನೆಗೆ ಕಾಡೊಳೊ ಮಸಾಣದೊಳೊ ಮತ್ತೆಲ್ಲೋ ॥
ಗಣನೆಗೇರಲಿಕೆಂದು ಜನ ತಪಿಸಿ ತೊಳಲುವುದು ।
ನೆನೆಯದಾತ್ಮದ ಸುಖವ - ಮಂಕುತಿಮ್ಮ ॥ ೬೫೩ ॥

ಹೆಸರು ಹೆಸರೆಂದು ನೀಂ ಬಸವಳಿವುದೇಕಯ್ಯ? ।
ಕಸದೊಳಗೆ ಕಸವಾಗಿ ಹೋಹನಲೆ ನೀನು? ॥
ಮುಸುಕಲೀ ಧರೆಯ ಮರೆವೆನ್ನನ್, ಎನ್ನುತ ಬೇಡು ।
ಮಿಸುಕದಿರು ಮಣ್ಣಿನಲಿ - ಮಂಕುತಿಮ್ಮ ॥ ೬೫೪ ॥

ಅಕ್ಕಿಯೊಳಗನ್ನವನು ಮೊದಲಾರು ಕಂಡವನು? ।
ಅಕ್ಕರದ ಬರಹಕ್ಕೆ ಮೊದಲಿಗನದಾರು? ॥
ಲೆಕ್ಕವಿರಿಸಿಲ್ಲ ಜಗ ತನ್ನಾದಿಬಂಧುಗಳ ।
ದಕ್ಕುವುದೆ ನಿನಗೆ ಜಸ? - ಮಂಕುತಿಮ್ಮ ॥ ೬೫೫ ॥

ಹೆಸರು ಹೆಸರೆಂಬುದೇಂ? ಕಸುರು ಬೀಸುವ ಗಾಳಿ ।
ಹಸೆಯೊಂದು ನಿನಗೇಕೆ ಬ್ರಹ್ಮಪುರಿಯೊಳಗೆ ॥
ಶಿಶುವಾಗು ನೀಂ ಮನದಿ, ಹಸುವಾಗು, ಸಸಿಯಾಗು ।
ಕಸಬೊರಕೆಯಾಗಿಳೆಗೆ - ಮಂಕುತಿಮ್ಮ ॥ ೬೫೬ ॥

ಸಿರಿಮಾತ್ರಕೇನಲ್ಲ, ಪೆಣ್ ಮಾತ್ರಕೇನಲ್ಲ ।
ಕರುಬಿ ಜನ ಕೆಸರುದಾರಿಯಲಿ ಸಾಗುವುದು ॥
ಬಿರುದ ಗಳಿಸಲಿಕೆಸಪ, ಹೆಸರ ಪಸರಿಸಲೆಸಪ ।
ದುರಿತಗಳ್ಗೆಣೆಯುಂಟೆ? - ಮಂಕುತಿಮ್ಮ ॥ ೬೫೭ ॥

ಎದ್ದೆದ್ದು ಬೀಳುತಿಹೆ, ಗುದ್ದಾಡಿ ಸೋಲುತಿಹೆ ।
ಗದ್ದಲವ ತುಂಬಿ ಪ್ರಸಿದ್ಧನಾಗುತಿಹೆ ॥
ಉದ್ಧರಿಸುವೆನು ಜಗವನೆನ್ನುತಿಹ ಸಖನೆ, ನಿ- ।
ನ್ನುದ್ಧಾರವೆಷ್ಟಾಯ್ತೊ? - ಮಂಕುತಿಮ್ಮ ॥ ೬೫೮ ॥

ಎಂದೊ ನಿನಗೊಂದುದಿನ ಮೂಗು ಮುರಿಯುವುದು ದಿಟ ।
ವೃಂದಾರಕರು ಮತ್ಸರಿಸರೆ, ಗರ್ವಿತರ? ॥
ಸಂದರ್ಭಗಳನದಕೆ ಜೋಡಿಪನು ವಿಧಿರಾಯ ।
ಅಂದಿಕೊಳ್ಳನೆ ನಿನ್ನ? - ಮಂಕುತಿಮ್ಮ ॥ ೬೫೯ ॥

ಗರುವಭಂಗವನಾಗಿಸಿದನು ಗರುಡಂಗೆ ಹರಿ ।
ಮುರಿಯಿಸಿದನಂತೆ ಫಲುಗುಣನ ಹೆಮ್ಮೆಯನು ॥
ಕರುಬುವಿಧಿಸ್ವೈರಿಸನು ದರ್ಪವನದಾರೊಳಂ ।
ಶಿರವ ಬಾಗಿಹುದೆ ಸಿರಿ - ಮಂಕುತಿಮ್ಮ ॥ ೬೬೦ ॥

ಇಳೆಯಿಂದ ಮೊಳಕೆಯೊಗವಂದು ತಮಟೆಗಳಿಲ್ಲ ।
ಫಲ ಮಾಗುವಂದು ತುತ್ತೂರಿ ದನಿಯಿಲ್ಲ ॥
ಬೆಳಕೀವ ಸೂರ್ಯಚಂದ್ರರದೊಂದು ಸದ್ದಿಲ್ಲ ।
ಹೊಲಿ ನಿನ್ನ ತುಟಿಗಳನು - ಮಂಕುತಿಮ್ಮ ॥ ೬೬೧ ॥

ಖದ್ಯೋತನಂತೆ ಬಿಡುಗೊಳದೆ ಧರ್ಮವ ಚರಿಸು ।
ವಿದ್ಯುಲ್ಲತೆಯ ತೆರದಿ ತೇಜಗಳ ಸೂಸು ॥
ಗೆದ್ದುದೇನೆಂದು ಕೇಳದೆ, ನಿನ್ನ ಕೈಮೀರೆ ।
ಸದ್ದುಮಾಡದೆ ಮುಡುಗು - ಮಂಕುತಿಮ್ಮ ॥ ೬೬೨ ॥

ಎರಡುತೆರ ಮೌಲ್ಯಂಗಳೆಲ್ಲಕಂ ಲೋಕದಲಿ ।
ಪರಮಾರ್ಥಕೊಂದು, ಸಾಂಪ್ರತದರ್ಥಕೊಂದು ॥
ಪರಿಕಿಸೆರಡಂ ನೀನು; ಹೊರಬೆಲೆಯ ಗುಣಿಪಂದು ।
ಮರೆಯಬೇಡೊಳಬೆಲೆಯ - ಮಂಕುತಿಮ್ಮ ॥ ೬೬೩ ॥

ನರನೊಂದುವೆವಹಾರಕೆರಡಾಯವೆಯ ಲೆಕ್ಕ ।
ಹೊರಗಣನುಭೋಗಕೊಂದೊಳನೀತಿಗೊಂದು ॥
ವರಮಾನ ದೇಹಕಾದೊಡೆ ಮಾನಸಕದೇನು? ।
ಪರಕಿಸಾ ಲೆಕ್ಕವನು - ಮಂಕುತಿಮ್ಮ ॥ ೬೬೪ ॥

ತನುವ ತಣಿಸುವ ತುತ್ತು ಮನಕೆ ನಂಜಾದೀತು ।
ಮನಮೋಹ ಜೀವಕ್ಕೆ ಗಾಳವಾದೀತು ॥
ಅನುಭವದ ಪರಿಣಾಮವೊಂದರಿಂದೊಂದಕ್ಕೆ ।
ಗಣಿಸಾತ್ಮಲಾಭವನು - ಮಂಕುತಿಮ್ಮ ॥ ೬೬೫ ॥

ನೂರಾರು ಸರಕುಗಳು ಜೀವಿತದ ಸಂತೆಯಲಿ ।
ಊರಿನವು, ಕೇರಿಯವು, ಮನೆಯವಾತ್ಮದವು ॥
ಬೇರೆ ಬೇರೆ ಪುರಳ್ಗೆ ಬೇರೆ ನೆಲೆ, ಬೇರೆ ಬೆಲೆ ।
ತಾರತಮ್ಯವೆ ತತ್ತ್ವ - ಮಂಕುತಿಮ್ಮ ॥ ೬೬೬ ॥

ಮನೆಯ ಸುಡುತಿಹ ಬೆಂಕಿಯುರಿಯನಾರಿಸೆ ನುಗ್ಗು ।
ಮನವ ಸುಡುವುರಿಯಿಂದ ದೂರ ನೀಂ ನಿಲ್ಲು ॥
ತನುವಿಗುಪಕೃತಿಗೆಯ್ದು ಭರದಿ ನೀನಾತುಮದ ।
ಅನುನಯವ ಕೆಡಿಸದಿರು - ಮಂಕುತಿಮ್ಮ ॥ ೬೬೭ ॥

ಬಡಗಿ ಬೇಸಾಯಿ ಕರ್ಮಿಗರೇನು ಯೋಗಿಗಳೊ! ।
ಮುಡಿಪವರ ಮನಸೆಲ್ಲ ಕೈಯ ದುಡಿತಕ್ಕೆ ॥
ಬಿಡುವಿರದು ಬಣಗು ಚಿಂತೆಗೆ, ಬುತ್ತಿ ಹಂಗಿರದು ।
ಕಡಿದಲ್ಲವರ್ಗೆ ಬಾಳ್ - ಮಂಕುತಿಮ್ಮ ॥ ೬೬೮ ॥

ಹಾಗೆಯೋ ಹೀಗೆಯೋ ಹೇಗೆ ಹೇಗೆಯೊ ಜನುಮ ।
ಸಾಗಿ ಮುಗಿವುದು; ಮುಗಿದು ಮರೆವುದದೆ ಸುಕೃತ ॥
ಈಗಲೊ ಆಗಲೋ ಎಂದೊ ಮುಗಿವುಂಟೆಂಬ ।
ಭಾಗ್ಯವನು ನೆನೆದು ನಲಿ - ಮಂಕುತಿಮ್ಮ ॥ ೬೬೯ ॥

ಬರುವೆಲ್ಲ ಬೇನೆಗಂ ಮದ್ದನಾರರಿಸಿಹರು? ।
ನರರ ಕೀಳ್ತನಕೆಲ್ಲ ಪರಿಹಾರವೆಂತು? ॥
ಕಿರಿದು ಪಲ್ಲನು ತಾಳಿಕೊಳಲೆಬೇಕಷ್ಟಿಷ್ಟು ।
ಧರೆಯಂತರುಷ್ಣವನು - ಮಂಕುತಿಮ್ಮ ॥ ೬೭೦ ॥

ತಿರಿದನ್ನವುಂಬಂಗೆ ಹುರುಡೇನು, ಹಟವೇನು ।
ತಿರುಪೆಯಿಡುವರು ಕುಪಿಸಿ ಬಿರುನುಡಿಯ ನುಡಿಯೆ ॥
ದುರದುರನೆ ನೋಡಿ ನೀನೆದುರುನುಡಿ ನುಡಿಯುವುದೆ? ।
ಗರುವವೇತಕೆ ನಿನಗೆ? - ಮಂಕುತಿಮ್ಮ ॥ ೬೭೧ ॥

ಯಾತ್ರಿಕರು ನಾವು, ದಿವ್ಯಕ್ಷೇತ್ರವೀ ಲೋಕ ।
ಸತ್ರದಲಿ ನೇಮದಿಂದಿರಲಿಕೆಡೆಯುಂಟು ॥
ರಾತ್ರಿ ಮೂರಾಯ್ತು ಹೊರಡೆನೆ ತೆರಳಿದೊಡೆ, ಪಾರು- ।
ಪತ್ಯದವ ಮೆಚ್ಚುವನು - ಮಂಕುತಿಮ್ಮ ॥ ೬೭೨ ॥

ಒಂದಗಳು ಹೆಚ್ಚಿರದು, ಒಂದಗಳು ಕೊರೆಯಿರದು ।
ತಿಂದು ನಿನ್ನನ್ನಋಣ ತೀರುತಲೆ ಪಯಣ ॥
ಹಿಂದಾಗದೊಂದು ಚಣ, ಮುಂದಕುಂ ಕಾದಿರದು ।
ಸಂದ ಲೆಕ್ಕವದೆಲ್ಲ - ಮಂಕುತಿಮ್ಮ ॥ ೬೭೩ ॥

ತೊಟ್ಟಿಲುಗಳೆಷ್ಟೊ ಮಸಣಗಳಷ್ಟು ಧರೆಯೊಳಗೆ ।
ತೊಟ್ಟಲಿಗೆ ಹಬ್ಬ ಮಸಣವು ತೇಗುತಿರಲು ॥
ಹುಟ್ಟಿದವರೆಲ್ಲ ಸಾಯದೆ ನಿಲ್ತೆ, ಹೊಸತಾಗಿ ।
ಹುಟ್ಟುವರ್ಗೆಡೆಯೆಲ್ಲಿ? - ಮಂಕುತಿಮ್ಮ ॥ ೬೭೪ ॥

ಅಪರಿಮಿತವೇನಲ್ಲ ಜೀವನಕೆ ಲಭ್ಯ ಸುಖ ।
ಚಪಲದಿಂ ಕಣ್ಣನತ್ತಿತ್ತಲಲಸುತಿರೆ ॥
ಸ್ವಪರಿಸ್ಥಿತಿಯ ಧರ್ಮ ನಷ್ಟವಹುದೊಂದೆ ಫಲ ।
ವಿಫಲ ವಿಪರೀತಾಶೆ - ಮಂಕುತಿಮ್ಮ ॥ ೬೭೫ ॥

ಸ್ವಾರಸ್ಯವಮಿತಮಾರಿಗುಮಿರದು ಜೀವನದಿ ।
ಪಾರದಿರ್ಕೆಯ ನೆನೆದು ನೆಡೆಯಲದು ಸಫಲ ॥
ಸಾರಂಗಳ್ ಎಲ್ಲ ಪಣ್ಗಳವುಮ್ ಒಂದರೊಳಿರವು ।
ಆರೋಗಿಸಿರುವುದನು - ಮಂಕುತಿಮ್ಮ ॥ ೬೭೬ ॥

ಎಷ್ಟು ನೀನುಂಡರೇಂ? ಪುಷ್ಟಿ ಮೈಗಾಗುವುದು ।
ಹೊಟ್ಟೆ ಜೀರ್ಣಿಸುವಷ್ಟೆ; ಮಿಕ್ಕುದೆಲ್ಲ ಕಸ ॥
ಎಷ್ಟು ಗಳಿಸಿಟ್ಟೊಡಂ ನಿನಗೆ ದಕ್ಕುವುದೆಷ್ಟು? ।
ಮುಷ್ಟಿ ಪಿಷ್ಟವು ತಾನೆ? - ಮಂಕುತಿಮ್ಮ ॥ ೬೭೭ ॥

ಧನ್ಯತಮವಾ ಘಳಿಗೆ, ಪುಣ್ಯತಮವಾ ಘಳಿಗೆ ।
ನಿನ್ನ ಮಮತೆಯ ನೂಲ ವಿಧಿಯ ಪರಿದಂದು ॥
ಉನ್ನತಿಯಿನಾತ್ಮವನು ತಡೆದಿಡುವ ಪಾಶಗಳು ।
ಛಿನ್ನವಾದಂದೆ ಸೊಗ - ಮಂಕುತಿಮ್ಮ ॥ ೬೭೮ ॥

ಶಿಶುಗಳವಲಕ್ಕಿಬೆಲ್ಲದ ಸಂಭ್ರಮವ ನೋಡಿ ।
ಹಸಿವನೊಂದುವನೆ ಹಿರಿಯನು? ನಲಿಯದಿಹನೆ? ॥
ವಿಷಯಸಂಸಕ್ತಲೋಕವನ್ ಅನಾಸಕ್ತಿಯಿಂ- ।
ದೊಸೆದುನೋಳ್ಪನು ಜಾಣ - ಮಂಕುತಿಮ್ಮ ॥ ೬೭೯ ॥

ಉಂಡಾತನುಣುತಿರುವರನು ಕಾಣ್ಬ ನಲವಿಂದ ।
ಪಂಡಿತನು ವಿದ್ಯಾರ್ಥಿಗಳಿಗೊರೆವ ನಯದಿಂ ॥
ಕಂಡು ಲೋಕವನು ಸಂತೈಸುತಿರುವಂ ಜ್ಞಾನಿ ।
ಕಂಡೆಲ್ಲರೊಳು ತನ್ನ - ಮಂಕುತಿಮ್ಮ ॥ ೬೮೦ ॥

ಮುಂದೇನೊ, ಮತ್ತೇನೊ, ಇಂದಿಗಾ ಮಾತೇಕೆ? ।
ಸಂದರ್ಭ ಬರಲಿ, ಬಂದಾಗಳಾ ಚಿಂತೆ ॥
ಹೊಂದಿಸುವನಾರೊ, ನಿನ್ನಾಳಲ್ಲ, ಬೇರಿಹನು ।
ಇಂದಿಗಿಂದಿನ ಬದುಕು - ಮಂಕುತಿಮ್ಮ ॥ ೬೮೧ ॥

ದಿವಸದಿಮ್ ದಿವಸಕ್ಕೆ, ನಿಮಿಷದಿಂ ನಿಮಿಷಕ್ಕೆ ।
ಭವಿಷಿಯವ ಚಿಂತಿಸದೆ ಬದುಕ ನೂಕುತಿರು ॥
ವಿವರಗಳ ಜೋಡಿಸುವ ಯಜಮಾನ ಬೇರಿಹನು ।
ಸವೆಸು ನೀಂ ಜನುಮವನು - ಮಂಕುತಿಮ್ಮ ॥ ೬೮೨ ॥

ರವಿ ನಿಲದೆ ಸುತ್ತುತಿರೆ ಕೊರಗು ಕಳವಳವೇಕೊ ।
ಸವೆಯಿಸುತಲೆಲ್ಲವನು ಕಡೆಗೊಯ್ವನವನು ॥
ಕವಳಿಸುವುದೆಲ್ಲವನು ಮರೆವು; ಬಾಳೊಲ್ ಅದೊಂದು ।
ಶಿವಕೃಪೆಯ ಲಕ್ಷಣವೊ - ಮಂಕುತಿಮ್ಮ ॥ ೬೮೩ ॥

ದಿವಸಕೊಳಗದಿನ್ ಆಯುರಾಶಿಯನು ರವಿಯಳೆಯಲ್ ।
ಅವನ ಮಗ ಜವನ್ ಅದರ ಲೆಕ್ಕವಿರಿಸುವನು ॥
ದಿವಿಜರೊಳಗಿವರಿರ್ವರುಪಕಾರಿಗಳು ನಮಗೆ ।
ಸವೆಸುವರು ತನುಘಟವ - ಮಂಕುತಿಮ್ಮ ॥ ೬೮೪ ॥

ಅಂತೊ ಇಂತೋ ಎಂತೊ ಜೀವಕಥೆ ಮುಗಿಯುವುದು ।
ಅಂದೊ ಇಂದೋ ಎಂದೊ ಜನುಮ ಕಳೆಯುವುದು ॥
ಒಂದೆ ಮರೆವಿನ ಮುಸುಕು ಮುಸುಕಲಿಹುದೆಲ್ಲವನು ।
ಸಂತಸದ ಮಾತಿಷ್ಟೆ - ಮಂಕುತಿಮ್ಮ ॥ ೬೮೫ ॥

ಎಲ್ಲ ಬರಿ ಗೊಣಗಾಟ, ತಿಣಕಾಟ, ತಡಕಾಟ ।
ಇಲ್ಲ ನಮಗೊರೆಕೋಲ್, ತಿಳಿಬೆಳಕುಮಿಲ್ಲ ॥
ಬಲ್ಲತನ ಮಬ್ಬಿನಲಿ ನಿದ್ರಿಸದೆ ತೆವಳುವುದು ।
ಸಲ್ಲದುಬ್ಬಟೆ ನಮಗೆ - ಮಂಕುತಿಮ್ಮ ॥ ೬೮೬ ॥

ಅತ್ಯಂತದುತ್ಕಟದ ಸನ್ನಿವೇಶಗಳ ಭರ ।
ಪ್ರತ್ಯಕ್ಷ ದರ್ಶನದಿನಲ್ಲದೆಂತಹುದು? ॥
ಪುಸ್ತಕದ ಚಿತ್ರದಿಂದೂಹಿಪೆಯ ಹಿಮಗಿರಿಯ ।
ವಿಸ್ತಾರದದ್ಭುತವ - ಮಂಕುತಿಮ್ಮ ॥ ೬೮೭ ॥

ಅರ್ಣವವ ಕಣ್ಣಿಂದ ಕಂಡ ಬೆರಗಾದೀತೆ ।
ವರ್ಣನೆಯನೋದಿದೊಡೆ, ತೆರೆಯನೆಣಿಸಿದೊಡೆ? ॥
ಪೂರ್ಣವಸ್ತುಗ್ರಹಣವಪರೋಕ್ಷದಿಂದಹುದು ।
ನಿರ್ಣಯ ಪ್ರತ್ಯಕ್ಷ - ಮಂಕುತಿಮ್ಮ ॥ ೭೮೮ ॥

ಒರ್ವನೇ ನಿಲುವೆ ನೀನುತ್ಕಟಕ್ಷಣಗಳಲಿ ।
ಧರ್ಮಸಂಕಟಗಳಲಿ, ಜೀವಸಮರದಲಿ ॥
ನಿರ್ವಾಣದೀಕ್ಷೆಯಲಿ, ನಿರ್ಯಾಣಘಟ್ಟದಲಿ ।
ನಿರ್ಮಿತ್ರನಿರಲು ಕಲಿ - ಮಂಕುತಿಮ್ಮ ॥ ೭೮೯ ॥

ಶುನಕ ಬೆಂಬತ್ತಿತಲ ಧರ್ಮಜನ ಕಡೆವರಂ ।
ನಿನಗಂತು ಸಂಗಡಿಗನೊರ್ವನೆಡೆಬಿಡದನ್ ॥
ಇಣಿಕಿ ನೋಡರದಾರುಮೆನ್ನುವೆಡೆ ಕಾದಿಹನು ।
ಅಣಕಿಗ ಮನಸ್ಸಾಕ್ಷಿ - ಮಂಕುತಿಮ್ಮ ॥ ೭೯೦ ॥

ಸುತ್ತಿ ಸುತ್ತುವ ಖಗದ ಗೂಡ ನೆನಪೆಳೆಯುವುದು ।
ಗೊತ್ತುನೂಲ್ ಪಿಡಿದಿಹುದು ದನವ ಬಯಲಿನಲಿ ॥
ತತ್ತ್ವವೊಂದರ ಹಿಡಿತಕೊಗ್ಗದಿಹ ಬಾಳೇನು? ।
ಕಿತ್ತ ಗಾಳಿಯ ಪಟವೊ - ಮಂಕುತಿಮ್ಮ ॥ ೭೯೧ ॥

ಬರಿಯೋದು ಬರಿವಾದ ಬರಿಬುದ್ಧಿ ದೊರಕಿಸದು ।
ಪರತತ್ತ್ವವನು; ಬೇಕು ಬೇರೆ ಕಣ್ಣದಕೆ ॥
ಚಿರದ ಮಮತಾವೇಷ್ಟಿತದ ಪೊರೆಯ ಪರಿದಂದು ।
ಅರಳ್ವದರಿವಿನ ಕಣ್ಣು - ಮಂಕುತಿಮ್ಮ ॥ ೭೯೨ ॥

ಇಂದ್ರಿಯಾತೀತವನು ಪಿಡಿಯಲಿಂದ್ರಿಯಕಳವೆ? ।
ಇಂದ್ರಧನು ಕೈದೋಟಿ ಕೊಂಕಿಗೆಟುಕುವುದೆ? ॥
ಸಂದೃಶ್ಯವಾತ್ಮಕೆ ಬೇರೆ ಕರಣದಿಂ ।
ತಂದ್ರಿ ಬಿಡೆ ದೊರೆವುದದು - ಮಂಕುತಿಮ್ಮ ॥ ೭೯೩ ॥

ಬಂಧನಗಳೆಲ್ಲವನು ದಾಟಿ, ಹೊಳೆ ನೆರೆ ನೀರು ।
ಸಂಧಿಪುದು ಕಡಲನೀರ್ಗಳನ್; ಅಂತು ಜೀವನ್ ॥
ಇಂದ್ರಿಯದ ಕಟ್ಟುಗಳ ಮೀರ್ದೀಕ್ಷೆಯೋಟದಿಂ ।
ಸಂದರುಶಿಪನು ಪರನ - ಮಂಕುತಿಮ್ಮ ॥ ೭೯೪ ॥

ದ್ವಂದ್ವಲೋಕವನಕ್ಷಿಯುಗದೆ ಪೊರೆದು ತ್ರ್ಯಕ್ಷ- ।
ನೊಂದರಿಂ ಮಾಯೆಯಾಟವ ಮೀರುವಂತೆ ॥
ಇಂದ್ರಿಯಾತೀತದರ್ಶನಕೆ ಬೇರೊಂದಕ್ಷಿ ।
ಸಂಧಾನವನು ಗಳಿಸೊ - ಮಂಕುತಿಮ್ಮ ॥ ೭೯೫ ॥

ಶರಧಿಯನೀಜುವನು, ಸಮರದಲಿ ಕಾದುವನು ।
ಗುರಿಯೊಂದನುಳಿದು ಪೆರತೊಂದ ನೋಡುವನೆ? ॥
ಮರೆಯುವನು ತಾನೆಂಬುದನೆ ಮಹಾವೇಶದಲಿ ।
ನಿರಹಂತೆಯದು ಮೋಕ್ಷ - ಮಂಕುತಿಮ್ಮ ॥ ೭೯೬ ॥

ಉತ್ತಮತೆಯಿಂತೆಂದು ಮತಿಗೆ ತೋರ್ದೊಡದೇನು? ।
ವೃತ್ತಿಯೊಳ್ ಅದೂರಿ ಸ್ವಭಾವಾಂಶವಾಗಲ್ ॥
ಮತ್ತುಮತ್ತನುವರ್ತಿಸುತ, ಭಂಗವಾದಂದು ।
ಯತ್ನಿಸಿನ್ನುಂ ಮರಳಿ - ಮಂಕುತಿಮ್ಮ ॥ ೭೯೭ ॥

ಎಡವದೆಯೆ, ಮೈಗಾಯವಡೆಯದೆಯೆ, ಮಗುವಾರು ।
ನಡೆಯ ಕಲಿತವನು? ಮತಿನೀತಿಗತಿಯಂತು ॥
ತಡವರಿಸಿ ಮುಗ್ಗರಿಸಿ ಬಿದ್ದು ಮತ್ತೆದ್ದು ಮೈ- ।
ದಡವಿಕೊಳುವವರೆಲ್ಲ - ಮಂಕುತಿಮ್ಮ ॥ ೭೯೮ ॥

ಏಸು ಸಲ ತಪಗೈದುದೇಸು ಬನ್ನವನಾಂತು ।
ಕೌಶಿಕಂ ಬ್ರಹ್ಮರ್ಷಿಪದಕರ್ಹನಾದನ್? ॥
ಘಾಸಿಪಡುತಿನ್ನೊಮ್ಮೆ ಮತ್ತೊಮ್ಮೆ ಮರಮರಳಿ ।
ಲೇಸಾಗಿಸಾತ್ಮವನು - ಮಂಕುತಿಮ್ಮ ॥ ೭೯೯ ॥

ವಾಸನೆ ವಿವೇಚನೆಗಳೆರಡಕಂ ಸಂಗರ್ಷ ।
ಪ್ರಾಚೀನಕಂ ಪೌರುಷಕ್ಕಮಿರುವಂತೆ ॥
ಆಶಾವಿನಾಶಮುಂ ಧೀಶಕ್ತಿಯುದ್ಭವಮುಮ್ ।
ಈಶಪ್ರಸಾದದಿಂ - ಮಂಕುತಿಮ್ಮ ॥ ೮೦೦ ॥

ಎರಡು ಕೋಣೆಗಳ ನೀಂ ಮಾಡು ಮನದಾಲಯದಿ ।
ಹೊರಕೋಣೆಯಲಿ ಲೋಗರಾಟಗಳನಾಡು ॥
ವಿರಮಿಸೊಬ್ಬನೆ ಮೌನದೊಳಮನೆಯಲಿ ಶಾಂತಿಯಲಿ ।
ವರಯೋಗಸೂತ್ರವಿದು - ಮಂಕುತಿಮ್ಮ ॥ ೮೦೧ ॥

ಮನೆಯ ಸಂಸಾರದಲಿ ವಾಸವಿರುತಾಗಾಗ ।
ನೆನೆದು ನೀಂ ದೇಗುಲಕೆ ಪೋಗಿಬರುವಂತೆ ॥
ದಿನವೆಲ್ಲ ದೇವಸನ್ನಿಧಿಯೊಳಿರುತಾಗಾಗ ।
ಮನೆಗೆ ಬರುವನವೊಲಿರು - ಮಂಕುತಿಮ್ಮ ॥ ೭೦೧ ॥

ಬೇಕು ಜೀವನಯೋಗಕೊಂದು ಬಹುಸೂಕ್ಷ್ಮನಯ ।
ಬೇಕೊಂದು ಜಾಗರೂರಕತೆ, ಬುದ್ಧಿ ಸಮತೆ ॥
ತಾಕನೊಂದನು ಯೋಗಿ, ನೂಕನೊಂದನು ಜಗದಿ ।
ಏಕಾಕಿ ಸಹವಾಸಿ - ಮಂಕುತಿಮ್ಮ ॥ ೭೦೨ ॥

ಸಮತೆಸಂಯಮಶಮಗಳಿಂ ಭವವನೋಲಗಿಸೆ ।
ಸಮನಿಪುದು ಮತಿಯ ಹದವಾತ್ಮಾನುಭವಕೆ ॥
ಮಮತೆಯಳಿವಿಂ ಜ್ಞಾನ; ಪಾಂಡಿತ್ಯದಿಂದಲ್ಲ ।
ಶ್ರಮಿಸಿಳೆಯ ಗಾಣದಲಿ - ಮಂಕುತಿಮ್ಮ ॥ ೭೦೩ ॥

ಸಂತತದ ಶಿಕ್ಷೆಯಿಂ ದೀರ್ಘದಭ್ಯಾಸದಿಂ- ।
ದಂತರಂಗದ ಕಡಲು ಶಾಂತಿಗೊಳಲಹುದು ॥
ಸಂತೃಪ್ತವೃತ್ತಿಯಿಂದೇಕಾಂತಸೇವೆಯಿಂ ।
ಸಂತಯಿಸು ಚಿತ್ತವನು - ಮಂಕುತಿಮ್ಮ ॥ ೭೦೪ ॥

ಅರಸಡವಿಗೈದಿದೊಡಮ್, ಅವನಿತ್ತ ಪಾದುಕೆಗ- ।
ಳೊರೆಯದೊಡಮೆನನಂ, ತಾಂ ವರದಿಯೊರೆದು॥
ದೊರೆತನದ ಭಾರವನು ಹೊತ್ತು ದೊರೆಯಾಗದಾ ।
ಭರತನವೊಲಿರು ನೀನು - ಮಂಕುತಿಮ್ಮ ॥ ೭೦೫ ॥

ಒಡೆಯನೆಂದೋ ಬಂದು ಕೇಳ್ವನದಕುತ್ತರವ ।
ಕೊಡಬೇಕು ತಾನೆನುವವೊಲು ಋಜುತೆಯಿಂದ ॥
ಒಡಲ, ಜಾಣಿನ, ಜೀವಶಕ್ತಿಗಳನೆಲ್ಲವನು ।
ಮುಡುಪುಕೊಟ್ಟನು ಭರತ - ಮಂಕುತಿಮ್ಮ ॥ ೭೦೬ ॥

ಒಡರಿಸುವನೆಲ್ಲವನ್, ಅದಾವುದುಂ ತನದಲ್ಲ ।
ಬಿಡನೊಂದನುಂ ರಾಜ್ಯ ತನದಲ್ಲವೆಂದು ॥
ನಡೆವಂ ಸ್ವತಂತ್ರದಲಿ ಸಲಿಸುತೆ ವಿಧೇಯತೆಯ ।
ಕಡುಯೋಗಿ ಭರತನಲ? - ಮಂಕುತಿಮ್ಮ ॥ ೭೦೭ ॥

ದೊರೆತನದ ಜಟಿಲಗಳ, ಕುಟಿಲಗಳ, ಖಠಿನಗಳ ।
ಭರತನುಳಿಸಿದನೆ ರಾಮನ ತೀರ್ಪಿಗೆಂದು ॥
ಅರಿವಿಗಿಹ ಕರ್ತವ್ಯಭಾರವನು ತಾನರಿತು ।
ಧುರವ ಧರಿಸಿದನವನು - ಮಂಕುತಿಮ್ಮ ॥ ೭೦೮ ॥

ಪ್ರತ್ಯಕ್ಷವಿಲ್ಲದಾ ಸ್ವಾಮಿಯಂ ನೆನೆನೆನೆದು ।
ಸತ್ಯಭಕ್ತಿಯ ಸೇವೆಗೆಯ್ದುವಂ ಭರತಂ ॥
ನಿತ್ಯಜೀವನದಿ ನೀನಾ ನಯವನನುಸರಿಸೊ ।
ಸ್ವತ್ವದಾಶೆಯ ನೀಗಿ - ಮಂಕುತಿಮ್ಮ ॥ ೭೦೯ ॥

ಧರೆಯೆ ಕೋಸಲ, ಪರಬ್ರಹ್ಮನೇ ರಘುವರನು ।
ಭರತವೊಲನುಪಾಲನಕ್ರಿಯರು ನಾವು ॥
ಅರಸನೂಳಿಗ ನಮ್ಮ ಸಂಸಾರದಾಡಳಿತ ।
ಹರುಷದಿಂ ಸೇವಿಸೆಲೊ - ಮಂಕುತಿಮ್ಮ ॥ ೭೧೦ ॥

ನಾಸಿಕದೊಳುಚ್ಛ್ವಾಸ ನಿಶ್ವಾಸ ನಡೆವಂತೆ ।
ಸೂಸುತ್ತಲಿರಲಿ ನಿನ್ನಿರವು ಮಂಗಳವ ॥
ಆಶಿಸದೆ ಸಂಕಲ್ಪಯತ್ನಗಳನಿನಿತುಮಂ ।
ಸಾಜವಾಗಲಿ ಸಯ್ಪು - ಮಂಕುತಿಮ್ಮ ॥ ೭೧೧ ॥

ಕಾಯಕವ ಚರಿಪುದಾತ್ಮ ಜುಗುಪ್ಸೆಗೆಡೆಗುಡದೆ ।
ಆಯತದ ಲೋಕಧರ್ಮಗಳ ಪಾಲಿಪುದು ॥
ಆಯತಿಗೆ ಬಾಯ್ಬಿಡದೆ ಗತವ ಚಿಂತಿಸದಿಹುದು ।
ಧ್ಯೇಯವೀ ಸೂತ್ರಗಳು - ಮಂಕುತಿಮ್ಮ ॥ ೭೧೨ ॥

ಪರಿಮಿತಿಯನರಿತಾಶೆ, ಪರವಶತೆಯಳಿದ ಸುಖ ।
ವಿರತಿಯೊಡವೆರೆದ ಲೋಕೋದ್ಯೋಗಯುಕ್ತಿ ॥
ಪರಿಕಿಸುತ ಜೀವಿತವ ಸತ್ಯವನೆ ಪಿಡಿವ ಮತಿ ।
ವರಗಳೀ ನಾಲ್ಕೆ ವರ - ಮಂಕುತಿಮ್ಮ ॥ ೭೧೩ ॥

ಕ್ಷಮೆ ದೋಷಿಗಳಲಿ, ಕೆಚ್ಚೆದೆ ವಿಧಿಯ ಬಿರುಬಿನಲಿ ।
ಸಮತೆ ನಿರ್ಮತ್ಸರತೆ ಸೋಲ್ಗೆಲುವುಗಳಲಿ ॥
ಶಮವ ನೀಂ ಗಳಿಸಲೀ ನಾಲ್ಕು ತಪಗಳೆ ಸಾಕು ।
ಭ್ರಮೆಯೊ ಮಿಕ್ಕೆಲ್ಲ ತಪ - ಮಂಕುತಿಮ್ಮ ॥ ೭೧೪ ॥

ಮೃತನ ಸಂಸಾರಕಥೆ ಶವವಾಹಕರಿಗೇಕೆ? ।
ಸತಿಯು ಗೋಳಿಡಲಿ, ಸಾಲಿಗನು ಬೊಬ್ಬಿಡಲಿ ॥
ಜಿತಮನದಿ ಚಿತಿಗಟ್ಟಿ ಕೊಂಡೊಯ್ಯುತಿಹರವರು ।
ಧೃತಿಯ ತಳೆ ನೀನಂತು - ಮಂಕುತಿಮ್ಮ ॥ ೭೧೬ ॥

ನಿನ್ನ ಹೆಣವನು ನೀನೆ ಹೊತ್ತು ಸಾಗಿಸಬೇಕೊ ।
ಅಣ್ಣ ಬಾ ತಮ್ಮ ಬಾ ಎಂದಳುವುದೇಕೋ? ॥
ನಿನ್ನೊಡಲೆ ಚಿತೆ, ಜಗದ ತಂಟೆಗಳೆ ಸವುದೆಯುರಿ ।
ಮಣ್ಣೆ ತರ್ಪಣ ನಿನಗೆ - ಮಂಕುತಿಮ್ಮ ॥ ೭೦೭ ॥

ತನ್ನ ಶಿಲುಬೆಯ ತಾನೆ ಹೊತ್ತನಲ ಗುರು ಯೇಸು? ।
ನಿನ್ನ ಕರ್ಮದ ಹೊರೆಯ ಬಿಡದೆ ನೀನೆ ಹೊರು ॥
ಖಿನ್ನನಾಗದೆ ತುಟಿಯ ಬಿಗಿದು ಶವಭಾರವನು ।
ಬೆನ್ನಿನಲಿ ಹೊತ್ತು ನಡೆ - ಮಂಕುತಿಮ್ಮ ॥ ೭೦೮ ॥

ತಲೆಪಾಗಿನೊಳಕೊಳಕ, ಪಂಚೆನಿರಿಯೊಳಹರಕ ।
ತಿಳಿಸುವೆಯ ರಜಕಗಲ್ಲದೆ ಲೋಗರಿಂಗೆ? ॥
ಅಳಲುದುಗುಡಗಳ ನಿನ್ನೊಳಗೆ ಬಯ್ತಿಡದೆ ನೀ ।
ನಿಳೆಗೆ ಹರಡುವುದೇಕೊ? - ಮಂಕುತಿಮ್ಮ ॥ ೭೦೯ ॥

ಹೊಸತನವೆ ಬಾಳು; ಹಳಸಿಕೆಯೆಲ್ಲ ಸಾವು ಬಿಡು ।
ರಸವು ನವನವತೆಯಿಂದನುದಿನವು ಹೊಮ್ಮಿ ॥
ಹಸನೊಂದು ನುಡಿಯಲ್ಲಿ ನಡೆಯಲ್ಲಿ ನೋಟದಲಿ ।
ಪಸರುತಿರೆ ಬಾಳ್ ಚೆಲುವು - ಮಂಕುತಿಮ್ಮ ॥ ೭೧೦ ॥

ಮೆರೆಯುವುವು ನೂರಾರು ಮೈಮೆಗಳು ಸೃಷ್ಟಿಯಲಿ ।
ಧರಣಿಯವು, ಗಗನದವು, ಮನುಜಯತ್ನದವು ॥
ಪಿರಿದೆಂಬೆನವುಗಳೊಳು ಧರುಮವರಿತವನೊಲುಮೆ ।
ಅರಿವುಳ್ಳೊಲುಮೆ ಪಿರಿದು - ಮಂಕುತಿಮ್ಮ ॥ ೭೧೧ ॥

ಚೆಲುವುನಗುವುಗಳ ಕಂಡವನ ಕಣ್ಣರಳುವುದು ।
ಅಳುವುನೋವುಗಳ ಕಂಡೊದ್ದೆಯಾಗುವುದು ॥
ಇಳೆಯ ದನಿಗವನೆದೆಯೊಳೊಪ್ಪ ಮರುದನಿಯಹುದು ।
ಶಿಲೆಯಲ್ಲ ಯೋಗಿಯೆದೆ - ಮಂಕುತಿಮ್ಮ ॥ ೭೧೨ ॥

ಸ್ವಸ್ಥತೆಯ ಕದಲಿಸದ ಜಗದಾಸ್ಥೆಯೊಂದು ಗುಣ ।
ಆಸ್ಥೆಯನು ಕುಂದಿಸದ ತಾಟಸ್ಥ್ಯವೊಂದು ॥
ನಷ್ಟಲಾಭಂಗಳಲಿ ಲಘುಹಾಸ್ಯನಯವೊಂದು ।
ಸ್ವಸ್ತಿಗಾವಶ್ಯಕವೊ - ಮಂಕುತಿಮ್ಮ ॥ ೭೧೩ ॥

ಸ್ಮಿತವಿರಲಿ ವದನದಲಿ, ಕಿವಿಗೆ ಕೇಳಿಸದಿರಲಿ ।
ಹಿತವಿರಲಿ ವಚನದಲಿ, ಖತವ ಬಿಡದಿರಲಿ ॥
ಮಿತವಿರಲಿ ಮನಸಿನುದ್ವೇಗದಲಿ, ಭೋಗದಲಿ ।
ಅತಿ ಬೇಡವೆಲ್ಲಿಯುಂ - ಮಂಕುತಿಮ್ಮ ॥ ೭೧೪ ॥

ಕಡಲ್ಗಳೊಂದಾದೊಡಂ, ಪೊಡವಿ ಹಬೆಯಾದೊಡಂ ।
ಬಿಡದಿರೊಳನೆಮ್ಮದಿಯ, ಬಿಡು ಗಾಬರಿಕೆಯ ॥
ಕಡಲ ನೆರೆ ತಗ್ಗುವುದು, ಪೊಡವಿಧೂಳಿಳಿಯುವುದು ।
ಗಡುವಿರುವುದೆಲ್ಲಕಂ - ಮಂಕುತಿಮ್ಮ ॥ ೭೧೫ ॥

ನಲಿಸುವೊಲಿಸುವ, ಕೆಣಕಿ ಕಾಡಿಸುವ ಮುಳಿಯಿಸುವ ।
ಕೆಳೆ ನಂಟು ಹಗೆ ಕಲಹ ಕುಹಕದೋಲೆಗಳಂ ॥
ಹಲಬರಿಗೆ ಹಂಚಿ ಬಾರೆಂದು ವಿಧಿ ನೇಮಿಸಿಹ ।
ಇಳೆಯಂಚೆಯಾಳು ನೀಂ - ಮಂಕುತಿಮ್ಮ ॥ ೭೧೬ ॥

ಓಲೆಗಾರನಿಗೇಕೆ ಬರೆದ ಸುದ್ದಿಯ ಚಿಂತೆ? ।
ಓಲೆಗಳನವರವರಿಗೈದಿಸಿರೆ ಸಾಕು ॥
ಸಾಲಗಳೊ, ಶೂಲಗಳೊ, ನೋವುಗಳೊ, ನಗುವುಗಳೊ! ।
ಕಾಲೋಟವವನೂಟ - ಮಂಕುತಿಮ್ಮ ॥ ೭೧೭ ॥

ನಗುಮನದಿ ಲೋಗರ ವಿಕಾರಂಗಳನು ನೋಡಿ ।
ಬಿಗಿ ತುಟಿಯ ದುಡಿವಂದು ನೋವಪಡುವಂದು ॥
ಪೊಗು ವಿಶ್ವಜೀವನದ ಜೀವಾಂತರಂಗದಲಿ ।
ನಗುನಗುತ ಬಾಳ್, ತೆರಳು - ಮಂಕುತಿಮ್ಮ ॥ ೭೧೮ ॥

ಎಡರು ತೊಡರೆನಲೇಕೆ? ಬಿಡಿಸು ಮತಿಗಾದನಿತ ।
ದುಡಿ ಕೈಯಿನಾದನಿತು; ಪಡು ಬಂದ ಪಾಡು ॥
ಬಿಡು ಮಿಕ್ಕುದನು ವಿಧಿಗೆ; ಬಿಡದಿರುಪಶಾಂತಿಯನು ।
ಬಿಡುಗಡೆಗೆ ದಾರಿಯದು - ಮಂಕುತಿಮ್ಮ ॥ ೭೧೯ ॥

ಹಕ್ಕಿ ಮುನ್ನರಿಯುವುದೆ ತನ್ನ ಪಯಣದ ತೆರನ? |
ಇಕ್ಕುವರದಾರದನು ಕರೆದು ತಿರುಪೆಯನು? ||
ರೆಕ್ಕೆ ಪೋದಂತಲೆದು, ಸಿಕ್ಕಿದನುಣ್ಣುವುದು ।
ತಕ್ಕುದಾ ವ್ರತ ನಿನಗೆ - ಮಂಕುತಿಮ್ಮ ॥ ೭೩೦ ॥

ಏನೊ ಕಣ್ಣನು ಪಿಡಿವುದೇನೊ ದಿಗಿಲಾಗಿಪುದು ।
ಏನನೋ ನೆನೆದು ಸರ್‍ರೆಂದು ಹಾರುವುದು ॥
ಬಾನೊಳಾಡುವ ಹಕ್ಕಿಗದುವೆ ನಿತ್ಯಾನುಭವ ।
ನೀನದನು ಮೀರಿಹೆಯ? - ಮಂಕುತಿಮ್ಮ ॥ ೭೩೧ ॥

ಆವ ಕಡೆ ಹಾರುವುದೊ! ಆವ ಕಡೆ ತಿರುಗುವುದೊ ।
ಆವಾಗಳಾವಕಡೆಗೆರಗುವುದೊ ಹಕ್ಕಿ! ॥
ನಾವುಮಂತೆಯೆ ಸೃಷ್ಟಿಕೃತ್ರಿಮದ ಕೈಗೊಂಬೆ ।
ಜೀವಮಾರ್ಗವನೂಹ್ಯ - ಮಂಕುತಿಮ್ಮ ॥ ೭೩೨ ॥

ಮಾವುಸಸಿಯನು ನೆಟ್ಟು ಬೇವುಣಲು ಸಿದ್ಧನಿರು ।
ಭೂವಿಷಯದಿಂದ ರಸ ಮಾರ್ಪಡುವುದುಂಟು ॥
ಆ ವಿವರ ನಿನಗೇಕೆ? ತೋಟದೊಡೆಯನಿಗಿರಲಿ ।
ಸೇವಕನು ನೀನಲ್ತೆ? - ಮಂಕುತಿಮ್ಮ ॥ ೭೩೩ ॥

ಸೈನಕನು ನೀನು, ಸೇನಾಧಿಪತಿಯೆಲ್ಲಿಹನೊ! ।
ಆಣತಿಯ ಕಳುಹುತಿಹನದನು ನೀನರಿತು ॥
ಜಾಣಿನಧಟಿಂ ಪೋರು; ಸೋಲುಗೆಲುವವನೆಣಿಕೆ ।
ಕಾಣಿಸದನಾಳ್ಕೆಯದು - ಮಂಕುತಿಮ್ಮ ॥ ೭೩೪ ॥

ನಾಯಕನಿಗಿರಲಿ ರಣವಿಜಯ ಪರಿಭವ ಗಣನೆ ।
ಆಯವದರಿಂ ಭಟನ ಸತ್ತ್ವಶಿಕ್ಷಣಕೆ ॥
ಸ್ವೀಯ ಸತ್ತ್ವವಿಕಾಸ ನಿಜಶಕ್ತಿಯಭ್ಯಾಸ ।
ಶ್ರೇಯಸಿಗೆ ಸೋಪಾನ - ಮಂಕುತಿಮ್ಮ ॥ ೭೩೫ ॥

ಕಾಯಕವ ಚರಿಸುತ್ತ, ಮಾನಸವ ಸಯ್ತಿಡುತ ।
ಆಯಸಂಬಡಿಸದವೊಲಂತರಾತ್ಮನನು ॥
ಮಾಯೆಯೊಡನಾಡುತ್ತ, ಬೊಮ್ಮನನು ಭಜಿಸುತ್ತ ।
ಆಯುವನು ಸಾಗಿಸೆಲೊ - ಮಂಕುತಿಮ್ಮ ॥ ೭೩೬ ॥

ಎಂದಿಗಾನುಂ ನಿನ್ನ ಪೂರ್ವಋಣಗಳ ಲೆಕ್ಕ ।
ನೊಂದಬೇಕೆಂದಿರ್ದೊಡಿಂದೆ ಮೊದಲನಿಡು ॥
ಅಂದಿಸಿಕೊ ಹೆರರೆನಿಪರನು ಹೃದಯವಿಸ್ತರದೆ ।
ಹೊಂದು ವಿಶ್ವಾತ್ಮತೆಯ - ಮಂಕುತಿಮ್ಮ ॥ ೭೩೭ ॥

ತನಗೆ ಬಾರದ ಲಾಭ ತನಯಂಗೆ ಬಂದಾಗ ।
ಜನಕನ್ ಅದು ತನದೆಂದು ಸಂತಸಿಪ ತೆರದಿ ॥
ಜನದೊಳಾರ್ಗಾವ ಸೊಗವಾದೊಡಂ ತನದೆನ್ನು- ।
ತನುಭವಿಪನೋ ಜ್ಞಾನಿ - ಮಂಕುತಿಮ್ಮ ॥ ೭೩೮ ॥

ತನ್ನ ಮನದಾಟಗಳ ತಾನೆ ನೋಡುತ ನಗುವ ।
ತನ್ನೊಳಗೆ ತಾನಿರ್ವರಾದವೊಲು ಬಾಳ್ವ ॥
ಚಿನ್ಮಾತ್ರವನು ಬೇರೆ ಬಗೆದು ಜಾನಿಪ ಚತುರ ।
ಧನ್ಯತೆಯ ಕಂಡವನು - ಮಂಕುತಿಮ್ಮ ॥ ೭೩೯ ॥

ಜೀವನವದೊಂದು ಕಲೆ; ಕಲೆಯ ಕಲಿಸುವುದೆಂತು? |
ಸಾವಿರದ ನಿಯಮ ಯುಕ್ತಿಗಳನೊರೆದೊಡೆಯುಂ ॥
ಆವುದೋ ಕುಶಲತೆಯದೊಂದಿರದೆ ಜಯವಿರದು ।
ಆ ವಿವರ ನಿನ್ನೊಳಗೆ - ಮಂಕುತಿಮ್ಮ ॥ ೭೪೦ ॥

ತಲೆ ಕೊಡವ ತಳೆದಿರಲು, ಕೈ ಕತ್ತಿ ಪಿಡಿದಿರಲು |
ಬಳುಕು ಹಗ್ಗದ ಮೇಲೆ ತಾನಡಿಯನಿಡುತ ॥
ಕೆಲ ಬಲಕೆ ಬೀಳದೆ ಮುನ್ನಡೆವ ಡೊಂಬನುಪಾಯ ।
ಕಲೆಯೆ ಜೀವನಯೋಗ - ಮಂಕುತಿಮ್ಮ ॥ ೭೪೧ ॥

ಬಹುವಿದ್ಯೆ ಬಹುತರ್ಕ ಬಹುನೇಮ ಬೇಕಿಲ್ಲ ।
ವಹಿಸೆ ಜೀವನಭರವನದು ಹಗುರೆನಿಪವೊಲ್ ॥
ಸಹನೆ ಸಮರಸಭಾವವಂತಃಪರೀಕ್ಷೆಗಳು ।
ವಿಹಿತವಾತ್ಮದ ಹಿತಕೆ - ಮಂಕುತಿಮ್ಮ ॥ ೭೪೨ ॥

ಎಲ್ಲ ನಾಶನವೆಲ್ಲ ಕಾಲವಶವಾದೊಡಂ ।
ಕ್ಷುಲ್ಲಕನು ನರನಾದೊಡಂ ಲಾಲನಿದಿರೊಳ್ ॥
ಉಲ್ಲಾಸವೇ ಧರ್ಮ; ಕೊಲ್ಲಿಪನೆ ಬೆಳೆಯಿಪನು ।
ಹುಲ್ಲೊಣಗಿ ಬೆಳೆವುದಲ? - ಮಂಕುತಿಮ್ಮ ॥ ೭೪೩ ॥

ಅಣಗಿದ್ದು ಬೇಸಗೆಯೊಳ್, ಎದ್ದು ಮಳೆ ಕರೆದಂದು ।
ಗುಣಿಯೆನದೆ ತಿಟ್ಟೆನದೆ ಸಿಕ್ಕಿದೆಡೆ ಬೆಳೆದು ॥
ಉಣಿಸನೀವನು ದನಕೆ, ತಣಿವನೀವನು ಜಗಕೆ ।
ಗುಣಶಾಲಿ ತೃಣಸಾಧು - ಮಂಕುತಿಮ್ಮ ॥ ೭೪೪ ॥

ಪರಹಿತದ ಮಾತಿರಲಿ; ಪರರಿನೇ ಜೀವಿಪನು ।
ನರಜಂತು, ಪಶು ಪಕ್ಷಿ ಕೀಟ ಮೀನ್ಗಳವೋಲ್ ॥
ಪರರಿನೆಳಸದದೇನನುಂ ಪರರಿಗುಪಕರಿಪ ।
ತರುಜನ್ಮವಲ ಪುಣ್ಯ! - ಮಂಕುತಿಮ್ಮ ॥ ೭೪೫ ॥

ನೆರಳನಿನಿತನು ಕೊಡುವ, ದಣಿವನಿನಿತನು ಕಳೆವ ।
ತಿರೆಯ ಪಯಣದ ಹೊರೆಯನಿನಿತು ಸುಳುವೆನಿಪಾ ॥
ತರುವಾಗಿ ಮನೆಯೊಳಗೊ ಹೊರಗೊ ನೀಂ ಬೆಳೆಯುತಿರೆ ।
ಪರಮಧರ್ಮವದೆಲವೊ - ಮಂಕುತಿಮ್ಮ ॥ ೭೪೬ ॥

ಅವರೆಷ್ಟು ಧನವಂತರ್, ಇವರೆಷ್ಟು ಬಲವಂತರ್ ।
ಅವರೆಷ್ಟು ಯಶವಂತರ್ ಎನುವ ಕರುಬಿನಲಿ ॥
ಭವಿಕ ನಿನಗೆಷ್ಟಿಹುದೊ ಮರೆತು ನೀಂ ಕೊರಗುವುದು ।
ಶಿವನಿಗೆ ಕೃತಜ್ಞತೆಯೆ? - ಮಂಕುತಿಮ್ಮ ॥ ೭೪೭ ॥

ಅನ್ನವುಣುವಂದು ಕೇಳ್: ಅದನು ಬೇಯಿಸಿದ ನೀರ್ ।
ನಿನ್ನ ದುಡಿತದ ಬೆಮರೊ, ಪೆರರ ಕಣ್ಣೀರೋ? ॥
ತಿನ್ನು ನೀಂ ಜಗಕೆ ತಿನಲಿತ್ತನಿತ; ಮಿಕ್ಕೂಟ ।
ಜೀರ್ಣಿಸದ ಋಣಶೇಷ - ಮಂಕುತಿಮ್ಮ ॥ ೭೪೮ ॥

ಪರಮಲಾಭವ ಗಳಿಸೆ ಜೀವಿತವ್ಯಾಪಾರ ।
ಕಿರಬೇಕು ಮೂಲಧನವದು ತತ್ತ್ವದೃಷ್ಟಿ ॥
ಚಿರಲಾಭ ಜಗದಾತ್ಮಲೀಲಾವಿಹಾರಸುಖ ।
ಧರೆಯ ಸುಖ ಮೇಲ್ ಬಡ್ಡಿ - ಮಂಕುತಿಮ್ಮ ॥ ೭೪೯ ॥

ಮುಳುಗದಿರು; ಜೀವನದ ತೆರೆಯ ಮೇಲೀಜುತಿರು ।
ಒಳಿತನಾಗಿಸು, ಕೊಡುತ ಕೊಳುತ ಸಂತಸವ ॥
ಕಳವಳಂಬಡದೆ ನಡೆ ಕಡೆಯ ಕರೆ ಬಂದಂದು ।
ಮಿಳಿತನಿರು ವಿಶ್ವದಲಿ - ಮಂಕುತಿಮ್ಮ ॥ ೭೫೦ ॥

ಲೋಕವೆಲ್ಲವು ಚಿತ್ರವಿಂದ್ರಜಾಲದ ಕೃತ್ಯ ।
ಸಾಕೆನದೆ ಬೇಕೆನದೆ ನೋಡು ನೀನದನು ॥
ತಾಕಿಸದಿರಂತರಾತ್ಮಂಗಾವಿಚಿತ್ರವನು ।
ಹಾಕು ವೇಷವ ನೀನು - ಮಂಕುತಿಮ್ಮ ॥ ೭೫೧ ॥

ಭೋಜನದಿ ಪ್ರಮುಭೋಜನ ಪರಬ್ರಹ್ಮರಸ ।
ಯಾಚಿಸಲ್ಕೇನಿರ್ಪುದದನುಂಡ ಬಳಿಕ? ॥
ತ್ಯಾಜಕ ತ್ಯಾಗ ಸಂತ್ಯಾಜ್ಯ ಭೇದಗಳಿರದೆ ।
ರಾಜ ನೀಂ ಜಗಕೆಲ್ಲ - ಮಂಕುತಿಮ್ಮ ॥ ೭೫೨ ॥

ಬ್ರಹ್ಮಾನುಸಂಧಾನ ಲೋಕಸಂಧಾನದಲಿ ।
ಬ್ರಹ್ಮದರ್ಶನವೆಲ್ಲ ಜೀವರೂಪದಲಿ ॥
ಬ್ರಹ್ಮಾನುಭವ ದೇಹಕರಣಾನುಭವಗಳಲಿ ।
ಮರ್ಮವಿದು ಮುಕ್ತಿಗೆಲೊ - ಮಂಕುತಿಮ್ಮ ॥ ೭೫೩ ॥

ಒಮ್ಮೆ ಹೂದೋಟದಲಿ, ಒಮ್ಮೆ ಕಳೆಕೂಟದಲಿ ।
ಒಮ್ಮೆ ಸಂಗೀತದಲಿ, ಒಮ್ಮೆ ಶಾಸ್ತ್ರದಲಿ ॥
ಒಮ್ಮೆ ಸಂಸಾರದಲಿ, ಮತ್ತೊಮ್ಮೆ ಮೌನದಲಿ ।
ಬ್ರಹ್ಮಾನುಭವಿಯಾಗೊ - ಮಂಕುತಿಮ್ಮ ॥ ೭೫೪ ॥

ಮತಿಗರ್ಥವಾದೊಡೇಂ? ಸ್ಮೃತಿಯೊಳದು ನೆಲಸಿರಲಿ ।
ಸತತ ಸಂಧಾನದಲಿ ಪರಮಾರ್ಥವಿರಲಿ ॥
ಶತಲಕ್ಷಧನದ ಲೆಕ್ಕವ ಬಾಯಿ ನುಡಿದೊಡೇಂ? ।
ಭೃತಿಯೆಷ್ಟು ವೆಚ್ಚಕ್ಕೆ? - ಮಂಕುತಿಮ್ಮ ॥ ೭೫೫ ॥

ಸಾರ್ವಭೌಮತೆ ನಾಲ್ಕು ಗುಣಕೆ ಗುಣರಾಜ್ಯದಲಿ ।
ಧೈರ್ಯ ಮೊದಲಿನದೆರಡನೆಯದು ಮತಿಯೋಜೆ ॥
ಸರ್ವದಯೆ ಮೂರನೆಯದದುವೆ ನೀತಿಯ ಮೂಲ ।
ನಿರ್ಮಮತ್ವವೆ ಮುಕುಟ - ಮಂಕುತಿಮ್ಮ ॥ ೭೫೬ ॥

ವ್ಯಾಮೋಹವಿಲ್ಲದ ಪ್ರೇಮ ನಿರ್ಭರವಿರಲಿ ।
ಭೀಮಸಾಹಸವಿರಲಿ ಹಗೆತನವನುಳಿದು ॥
ನೇಮನಿಷ್ಠೆಗಳಿರಲಿ ಡಂಭಕರಿಣತೆ ಬಿಟ್ಟು ।
ಸೌಮ್ಯವೆಲ್ಲಡೆಯಿರಲಿ - ಮಂಕುತಿಮ್ಮ ॥ ೭೫೭ ॥

ಔದಾರ್ಯ ತಾಯಿ ನೀತಿಗೆ, ಧೈರ್ಯವೇ ತಂದೆ ।
ಸ್ವಾಧಿಪತ್ಯದೆ ನೀನು ಬಾಳನಾಳುವೊಡೆ ॥
ಹೋದುದನು ನೆನೆಯದಿರು, ಬರುವುದಕೆ ಸಿದ್ಧನಿರು ।
ಆದನಿತು ಸಂತೋಷ - ಮಂಕುತಿಮ್ಮ ॥ ೭೫೮ ॥

ಬರದಿಹುದರೆಣಿಕೆಯಲಿ ಬಂದಿಹುದ ಮರೆಯದಿರು ।
ಗುರುತಿಸೊಳಿತಿರುವುದನು ಕೇಡುಗಳ ನಡುವೆ ॥
ಇರುವ ಭಾಗ್ಯವ ನೆನೆದು ಬಾರೆನೆಂಬುದನು ಬಿಡು ।
ಹರುಷಕದೆ ದಾರಿಯೆಲೊ - ಮಂಕುತಿಮ್ಮ ॥ ೭೫೯ ॥

ಮುನ್ನಾದ ಜನುಮಗಳ ನೆನಸಿನಿಂ ನಿನಗೇನು? ।
ಇನ್ನುಮಿಹುದಕೆ ನೀಡು ಮನವನ್; ಎನ್ನುವವೋಲ್ ॥
ಬೆನ್ನ ಪಿಂತಿನದು ಕಾಣಿಸದಂತೆ ಪರಮೇಷ್ಠಿ ।
ಕಣ್ಣನಿಟ್ಟನು ಮುಖದಿ - ಮಂಕುತಿಮ್ಮ ॥ ೭೬೦ ॥

ಲೋಚನದ ಸಂಚಾರ ಮುಖದ ಮುಂದಕಪಾರ ।
ಗೋಚರಿಪುದೇನದಕೆ ತಲೆಯ ಹಿಂದಣದು? ॥
ಪ್ರಾಚೀನ ಹೊರತು ಸ್ವತಂತ್ರ ನೀಂ, ಸಾಂತವದು ।
ಚಾಚು ಮುಂದಕೆ ಮನವ - ಮಂಕುತಿಮ್ಮ ॥ ೭೬೧ ॥

ಧಾರುಣಿಯ ನಡಿಗೆಯಲಿ ಮೇರುವಿನ ಗುರಿಯಿರಲಿ ।
ಮೇರುವನು ಮರೆತಂದೆ ನಾರಕಕೆ ದಾರಿ ॥
ದೂರವಾದೊಡದೇನು? ಕಾಲು ಕುಂಟಿರಲೇನು? ।
ಊರ ನೆನಪೇ ಬಲವೊ - ಮಂಕುತಿಮ್ಮ ॥ ೭೬೨ ॥

ಮೇರುಪರ್ವತಕಿಹುವು ನೂರೆಂಟು ಶಿಖರಗಳು ।
ದಾರಿ ನೂರಿರಬಹುದು, ನಿಲುವ ಕಡೆ ನೂರು ॥
ಸಾರು ನೀಂ ಯಾತ್ರಿಕರಿಗೆಲ್ಲ ಕೆಳೆಯಾಗಿರುತೆ ।
ಮೇರುಸಂಸ್ಕೃತಿಯೆ ಬಲ - ಮಂಕುತಿಮ್ಮ ॥ ೭೬೩ ॥

ಧನ್ಯ ಹೊಲೆಯರ ನಂದ; ಹಿಡಿದುದವನನು ಕನಸು ।
ಸ್ವರ್ಣಸಭೆಯಾ ಶೈವತಾಂಡವದ ಕನಸು ॥
ಅನ್ಯ ಚಿಂತೆಗಳನದು ಬಿಡಿಸುತವನಾತ್ಮವನು ।
ಚಿನ್ಮಯಕೆ ಸೇರಿಸಿತು - ಮಂಕುತಿಮ್ಮ ॥ ೭೬೪ ॥

ತನ್ನ ರುಚಿ ರಾಮರುಚಿ; ತನ್ನ ಸಂತುಷ್ಟಿ ಪರಿ- ।
ಪೂರ್ಣವಪ್ಪುದು ರಾಮಸಂತುಷ್ಟಿಯಿಂದೆ ॥
ಎನ್ನುವಾ ಸಾಜಾದಾ ದೈವಾತ್ಮಭಾವದಲಿ ।
ಧನ್ಯಳಾದಳು ಶಬರಿ - ಮಂಕುತಿಮ್ಮ ॥ ೭೬೫ ॥

ಘನತತ್ತ್ವವೊಂದಕ್ಕೆ ದಿನರಾತ್ರಿ ಮನಸೋತು ।
ನೆನೆಯದಿನ್ನೊಂದನೆಲ್ಲವ ನೀಡುತದರಾ ॥
ಅನುಸಂಧಿಯಲಿ ಜೀವಭಾರವನು ಮರೆಯುವುದು ।
ಹನುಮನುಪದೇಶ - ಮಂಕುತಿಮ್ಮ ॥ ೭೬೬ ॥

ಕ್ಷಣದಿಂದನುಕ್ಷಣಕೆ, ದಿನದಿಂದ ಮರುದಿನಕೆ ।
ಅನಿತನಿತರೊಳೆ ಬದುಕುತಾಯುವನು ಕಳೆವಾ ॥
ಮನದ ಲಘುಸಂಚಾರವೊಂದು ಯೋಗದುಪಾಯ ।
ಶುನಕೋಪದೇಶವದು - ಮಂಕುತಿಮ್ಮ ॥ ೭೬೭ ॥

ಗತಿಯೇನು ಎನಗೆನುತ ಕೇಳ್ವವರೆ ಎಲ್ಲರುಂ ।
ಹಿತವೆಂತು ಜಗಕೆಂದು ಕೇಳುವವರಾರು? ॥
ಮತಿಯ ವಿಶ್ವದಿ ಬೆರಸಿ ಜೀವಿತವ ವಿಸ್ತರಿಸೆ ।
ಪಥ ಮುಕ್ತಿಗಾಗಳೇ - ಮಂಕುತಿಮ್ಮ ॥ ೭೬೮ ॥

ಒಂದುದಿನವೌತಣಕೆ, ಉಪವಾಸಕಿನ್ನೊಂದು ।
ಸಂದಣಿಯದಿನವೊಂದು, ಬಿಡುವು ದಿನವೊಂದು ॥
ಹೊಂದಿರ್ದೊಡುಭಯಮುಂ ಜೀವಕದು ಸುಖ ಚಲನ ।
ಒಂದುಕಾಲ್ನಡೆ ಸುಖವೆ? - ಮಂಕುತಿಮ್ಮ ॥ ೭೬೯ ॥

ನೇತ್ರಯುಗಳಂ ಪಿಡಿಗುಮೊಂದು ಲಕ್ಷ್ಯವ ಕೂಡಿ ।
ಹಸ್ತಯುಗ ಸಾಧಿಪುದು ಮನದರ್ಥವೊಂದನ್ ॥
ದ್ವೈತದಿಂದದ್ವೈತವದ್ವೈತದೊಳ್ ದ್ವೈತ ।
ಚೈತನ್ಯ ಲೀಲೆಯಿದು - ಮಂಕುತಿಮ್ಮ ॥ ೭೭೦ ॥

ನೀರಧಿ ಬ್ರಹ್ಮ, ನೀರ್ಗಲ್ ಜೀವವೆನುತೊಂದು ।
ಕ್ಷೀರವದು, ಘೃತವಿದದರೊಳಗೆನ್ನುತೊಂದು ॥
ಕೀರು ಪರಮಾನ್ನವದು, ದ್ರಾಕ್ಷಿಯಿದೆನುತ್ತೊಂದು ।
ಮೂರಿಂತು ಮತವಿವರ - ಮಂಕುತಿಮ್ಮ ॥ ೭೭೧ ॥

ಮೂರಿರಲಿ ವಾದ, ಮುನ್ನೂರಿರಲಿ; ಸಕಲರುಂ ।
ಸಾರವಸ್ತುವನೊಂದನೊಪ್ಪಿಕೊಳುವವರೇ ॥
ಪಾರಮಾರ್ಥಿಕವನಂತೆಣಿಸಿದ ವ್ಯವಹಾರ ।
ಭಾರವಾಗದು ಜಗಕೆ - ಮಂಕುತಿಮ್ಮ ॥ ೭೭೨ ॥

ಹೊರಗೆ ಲೋಕಾಸಕ್ತಿಯೊಳಗೆ ಸಕಲ ವಿರಕ್ತಿ ।
ಹೊರಗೆ ಕಾರ್ಯಧ್ಯಾನವೊಳಗುದಾಸೀನ ॥
ಹೊರಗೆ ಸಂಸೃತಿಭಾರವೊಳಗದರ ತಾತ್ಸಾರ ।
ವರಯೋಗಮಾರ್ಗವಿದು - ಮಂಕುತಿಮ್ಮ ॥ ೭೭೩ ॥

ತರಣಿದರ್ಶನಕಿಂತ ಕಿರಣಾನುಭವ ಸುಲಭ ।
ಪರಮಶಾಸ್ತ್ರಕ್ಕಿಂತ ಸರಿಯುದಾಹರಣೆ ॥
ಪರಮತತ್ತ್ವ ಕಂಡ ಗುರುವನರಸುವುದೆಲ್ಲಿ? ।
ದೊರೆತಂದು ನೀಂ ಧನ್ಯ - ಮಂಕುತಿಮ್ಮ ॥ ೭೭೪ ॥

ಕಾಗೆಯುಂ ಕೋಗಿಲೆಯುಮೊಂದೆ ಮೇಲ್ನೋಟಕ್ಕೆ ।
ಯೋಗಿಯುಂ ಸಂಸಾರಭೋಗಿಯೇ ಹೊರಕೆ ॥
ಲೋಗರವೊಲಿರುತೆ ಸುಖದುಃಖಸಂಭ್ರಮಗಳಲಿ ।
ತ್ಯಾಗಿಯವನ್ ಆಂತರದಿ - ಮಂಕುತಿಮ್ಮ ॥ ೭೭೫ ॥

ಪರಿಪರಿಯ ರೂಪದಲಿ ಪರದೈವ ಕಣ್ಮುಂದೆ ।
ಚರಿಸುತಿರೆ ನರನದರ ಗುರುತನರಿಯದೆಯೆ ॥
ಧರೆಯದದು ತನ್ನಂದದ ಪ್ರಾಣಿಯೆಂದೆಣಿಸಿ ।
ತೊರೆಯುವನು ದೊರೆತುದನು - ಮಂಕುತಿಮ್ಮ ॥ ೭೭೬ ॥

ಸಾಮಾನ್ಯ ರೂಪದಲಿ, ಸಂಸಾರಿವೇಷದಲಿ ।
ಸ್ವಾಮಿ ನಿನ್ನೆಡೆಗೆ ಬರಬಹುದು ವರ ನೀಡಿ ॥
ಮೈಮೆ ಕಾಂಬೊಡೆ ನಿನಗೆ ಸಂಸ್ಕಾರವಿರಬೇಕು ।
ತಾಮಸಿಗೆ ವರವೆಲ್ಲಿ? - ಮಂಕುತಿಮ್ಮ ॥ ೭೭೭ ॥

ವಿಷಯಭೋಗವಿರಕ್ತಿ, ವಿಶ್ವಲೀಲಾಸಕ್ತಿ ।
ಕೃಷಿಗೆ ಸಂತತ ದೀಕ್ಷೆ, ವಿಫಲಕೆ ತಿತಿಕ್ಷೆ ॥
ವಿಷಮದಲಿ ಸಮದೃಷ್ಟಿ, ವಿವಿಧಾತ್ಮ ಸಂಸೃಷ್ಟಿ ।
ಕುಶಲಸಾಧನಗಳಿವು - ಮಂಕುತಿಮ್ಮ ॥ ೭೭೮ ॥

ದೊರೆವ ಜೀತಕೆ ದುಡಿತ, ಮರುದಿನದ ಚಿಂತೆ ಮಿತ ।
ಹೊರೆಯ ಹಗುರಾಗಿಸುವ ಕೆಳೆಯರೊಡನಾಟ ॥
ಸರಳತೆಯ ಪರಿತುಷ್ಟಿ, ಪರಮಾರ್ಥ ದೃಷ್ಟಿಯಿವು ।
ಸರಿಗೂಡೆ ಸುಕೃತವದು - ಮಂಕುತಿಮ್ಮ ॥ ೭೭೯ ॥

ಮಳೆಗೊಂದು ಬೆಳೆಗೊಂದು ಫಲಕೊಂದು ಋತುವಂತೆ ।
ಬೆಳೆಯಿಪುದು ಜೀವವೃಕ್ಷವ ಕಾಲನಿಯತಿ ॥
ತಿಳಿವುಮೊಳ್ತನಮುಂ ವಿರಕ್ತಿಯುಂ ಮುಕ್ತಿಯುಂ ।
ಗಳಿಗೆ ಸರಿಸೇರ್ದಂದು - ಮಂಕುತಿಮ್ಮ ॥ ೭೮೦ ॥

ಕಾಳನುದಯದಿ ಬಿತ್ತೆ ಸಂಜೆಗದು ಪೈರಹುದೆ? ।
ಪಾಲುಂಟು ಕಾಲಂಗೆ ನಮ್ಮ ಕೃಷಿಗಳಲಿ ॥
ವೇಳೆ ಗಡು ಮರೆತಾತುರದಿನ್ ಅಡುಗೆ ಪಕ್ವಹುದೆ ।
ತಾಳುಮೆಯೆ ಪರಿಪಾಕ - ಮಂಕುತಿಮ್ಮ ॥ ೭೮೧ ॥

ಅಂದಿಗಂದಿನ ಕೆಲಸ, ಸಂದನಿತರಲಿ ತೃಪ್ತಿ ।
ಕುಂದದುಬ್ಬದ ಮನಸು ಬಂದುದೇನಿರಲಿ ॥
ಬಂಧು ಮತಿ ಲೋಕದಲಿ, ಮುನ್ ದೃಷ್ಟಿ ಪರಮದಲಿ ।
ಹೊಂದಿರಲಿವದು ಪುಣ್ಯ - ಮಂಕುತಿಮ್ಮ ॥ ೭೮೨ ॥

ಬುದ್ಧಿಮಾತಿದು ನಿನಗೆ; ಸಿದ್ಧನಿರು ಸಕಲಕ್ಕಂ ।
ಎದ್ದು ಕುಣಿಯಲಿ ಕರ್ಮ; ದೈವ ನಿದ್ರಿಸಲಿ ॥
ಅದ್ಭುತಗಳರಿದಲ್ಲ; ಭವ್ಯಕ್ಕೆ ಹದ್ದಿಲ್ಲ ।
ಸಿದ್ಧನಾಗೆಲ್ಲಕಂ - ಮಂಕುತಿಮ್ಮ ॥ ೭೮೩ ॥

ಏನಾದೊಡೆಯುಮಪ್ಪುದುಂಟು, ಸಿದ್ಧನಿರದಕೆ ।
ಭಾನು ತಣುವಾದಾನು; ಸೋಮ ಸುಟ್ಟಾನು ॥
ಕ್ಷೋಣಿಯೇ ಕರಗೀತು; ಜಗ ಶೂನ್ಯವಾದೀತು ।
ಮೌನದಲಿ ಸಿದ್ಧನಿರು - ಮಂಕುತಿಮ್ಮ ॥ ೭೮೪ ॥

ಕುಂದದೆಂದಿಗುಮೆನ್ನಿಸುವ ಮನದ ಕಾತರತೆ ।
ಯೆಂದೊ ತಾನೆ ಬಳಲಿ ತಣ್ಣಗಾಗುವುದು ॥
ಮಂದದಾ ಕಾರ್ಮೋಡ ಬಿರಿದು ರವಿ ಬೆಳಗುವನು ।
ಅಂದಿನಾ ಸುಖವೆ ಸುಖ - ಮಂಕುತಿಮ್ಮ ॥ ೭೮೫ ॥

ಅನ್ತವೆಲ್ಲಕುಮಿರುವುದಿರಲಿ; ವಿಷಯೇಂದ್ರಿಯದ ।
ಸಂತಾಪವುಂ ಮುಗಿವುದೆಂಬುದಲ ಪುಣ್ಯ? ॥
ಎಂತೊ, ನಿನ್ನಾಜ್ಞೆಯಿನೊ, ತಾಂ ಸೋತೋ, ಬೇಸತ್ತೊ ।
ಶಾಂತಿವಡೆಯಲಿ ಕರಣ - ಮಂಕುತಿಮ್ಮ ॥ ೭೮೬ ॥

ಶೀತಾಳಿ ಸಿಡುಬು ಶಿಶುಗಳ ಕುಲುಕಿ ತೆರಳುವುದು ।
ಪ್ರೀತಿಕಾಮನೆಗಳಷ್ಟಿಷ್ಟು ಬೆಳೆದವರ ॥
ಯಾತನೆಗಳಿಂ ಕುದಿಸಿ ಕುಲುಕಿ ಬಳಿಕಾರುವುವು ।
ಕಾತರತೆ ಕಳೆಯೆ ಸುಖ - ಮಂಕುತಿಮ್ಮ ॥ ೭೮೭ ॥

ಜ್ವರ ಬಂದು ತನು ಬೆಂದ ಯಾತನೆಯ ಮಾತೇನು? ।
ಉರಿಬೇಗೆಯಿಳಿಯೆ ಹೊಸ ಹೊಸಬನಾ ನರನು ॥
ಕರಣತಪನೆಗಳಿಳಿಯೆ, ಕಾರಣವದೇನಿರಲಿ ।
ಮರುಜನ್ಮವಾತ್ಮಂಗೆ - ಮಂಕುತಿಮ್ಮ ॥ ೭೮೮ ॥

ಹುಲ್ಲಾಗು ಬೆಟ್ಟದಡಿ, ಮನೆಗೆ ಮಲ್ಲಿಗೆಯಾಗು ।
ಕಲ್ಲಾಗು ಕಷ್ಟಗಳ ಮಳೆಯ ವಿಧಿ ಸುರಿಯೆ ॥
ಬೆಲ್ಲ ಸಕ್ಕರೆಯಾಗು ದೀನದುರ್ಬಲರಿಂಗೆ ।
ಎಲ್ಲರೊಳಗೊಂದಾಗು - ಮಂಕುತಿಮ್ಮ ॥ ೭೮೯ ॥

ಏನಾನುಮಂ ಮಾಡು ಕೈಗೆ ದೊರೆತುಜ್ಜುಗವ ।
ನಾನೇನು ಹುಲ್ಲುಕಡ್ಡಿಯೆಂಬ ನುಡಿ ಬೇಡ ॥
ಹೀನಮಾವುದುಮಿಲ್ಲ ಜಗದ ಗುಡಿಯೂಳಿಗದಿ ।
ತಾಣ ನಿನಗಿಹುದಲ್ಲಿ - ಮಂಕುತಿಮ್ಮ ॥ ೭೯೦ ॥

ದಿನದಿನವು ಕುಸಿದು ಕಟ್ಟಿಸಿಕೊಳುವ ಗುಡಿ ವಿಶ್ವ ।
ಜನರೆಲ್ಲರಾಗುಡಿಯ ಕೆಲಸದಾಳುಗಳು ॥
ಮನೆಯೇನು? ನಾಡೇನು? ಕುಲವೇನು? ಮಠವೇನು? ।
ಎಣಿಸೆಲ್ಲವದೆಯೆಂದು - ಮಂಕುತಿಮ್ಮ ॥ ೭೯೧ ॥

ಆಶೆಗಳ ಕೆಣಕದಿರು, ಪಾಶಗಳ ಬಿಗಿಯದಿರು ।
ಕ್ಲೇಶದ ಪರೀಕ್ಷೆಗಳಿಗೆನ್ನ ಕರೆಯದಿರು ॥
ಬೇಸರದ ಪಾತಕಸ್ಮೃತಿಯ ಚುಚ್ಚದಿರ್: ಎನ್ನು- ।
ತೀಶನನು ಬೇಡುತಿರೊ - ಮಂಕುತಿಮ್ಮ ॥ ೭೯೨ ॥

ನಾನೆಂಬುದೊಂದಂಶವಿತರ ಜಗವೊಂದಂಶ ।
ನಾನು ನೀನುಗಳಳಿದ ಸರ್ವೈಕ್ಯವೊಂದು ॥
ಧ್ಯಾನಿಸುತ್ತೈಕ್ಯವನು ಪಾಲಿಸುವುದುಭಯವನು ।
ಜಾಣಿನಾ ನಾಟಕವೊ - ಮಂಕುತಿಮ್ಮ ॥ ೭೯೩ ॥

ಮನಸು ಬೆಳೆಯಲಿ ಭುಜಿಸಿ ನೂರು ನೂರನುಭವವ ।
ಹೊನಲು ನೂರೀ ಬಾಳ ಕಡಲನುಬ್ಬಿಸಲಿ ॥
ತನುಬಂಧ ಕಳಚಿ, ಜೀವವಖಂಡಚೇತನದ ।
ಕುಣಿತದಲಿ ಕೂಡಿರಲಿ - ಮಂಕುತಿಮ್ಮ ॥ ೭೯೪ ॥

ಮೊಳೆವ ಸಸಿಯೊಳು ನಾನು, ತೊಳಗುವಿನನೊಳು ನಾನು ।
ಬೆಳೆವ ಶಿಶುವೊಳು ನಾನು, ಕೆಳೆನೋಟ ನಾನು ॥
ಕಳಕಳಿಸುವೆಲ್ಲಮುಂ ನಾನೆಂದು ಭಾವಿಸುತೆ ।
ಒಳಗೂಡು ವಿಶ್ವದಲಿ - ಮಂಕುತಿಮ್ಮ ॥ ೭೯೫ ॥

ಸರಿ ಹದದ ಕಾಳು ತಿರೆಯಪ್ಪಿದೊಡೆ ಮೊಳೆಯುವುದು ।
ಹುರಿದೊಡದು ಮೊಳೆಯದರಳಹುದು ಬಾಯ್ಸವಿಗೆ ॥
ಪರಮತತ್ತ್ವಜ್ಞಾನಿಯೊಡರಿಸುವ ಕರುಮಗಳು ।
ಮರುಬೆಳೆಗೆ ಬಿತ್ತಲ್ಲ - ಮಂಕುತಿಮ್ಮ ॥ ೭೯೬ ॥

ಸುಟ್ಟ ಹಗ್ಗದ ಬೂದಿ ರೂಪಮಾತ್ರದಿ ಹಗ್ಗ ।
ಗಟ್ಟಿ ಜಗವಂತು ತತ್ತ್ವಜ್ಞಾನ ಸೋಕೆ ॥
ತೊಟ್ಟಿಹುದು ಲೋಕರೂಪವ, ತಾತ್ತ್ವಿಕನ ವೃತ್ತಿ ।
ಕಟ್ಟದವನಾತ್ಮವನು - ಮಂಕುತಿಮ್ಮ ॥ ೭೯೭ ॥

ನೈರಾಶ್ಯನಿರತಂಗೆ ದೇವತೆಗಳಿಂದೇನು? ।
ವೈರಾಗ್ಯಪಥಿಕಂಗೆ ನಷ್ಟಭಯವೇನು? ॥
ಪಾರಂಗತಂಗಂತರಾಳ ದೂರಗಳೇನು? ।
ಸ್ವೈರಪಥವಾತನದು - ಮಂಕುತಿಮ್ಮ ॥ ೭೯೮ ॥

ಘೋರವನು ಮೋಹವನು ದೇವತೆಗಳಾಗಿಪರು ।
ಭೀರು ಯಾಚಕರಾಸ್ಥೆ ತಪ್ಪದಿರಲೆಂದು ॥
ಆರಿಂದಲೇಂ ಭೀತಿ, ಏಂ ಬಂದೊಡದ ಕೊಳುವ ।
ಪರಮಾರ್ಥಿಕನಿಗೆಲೊ? - ಮಂಕುತಿಮ್ಮ ॥ ೭೯೯ ॥

ಹಣ್ಣೇನು ಕಾಯೇನು ಹೊಟ್ಟೆ ತುಂಬಿರುವಂಗೆ? |
ಪುಣ್ಯವೇಂ ಪಾಪವೇಂ ಪೂರ್ಣದರ್ಶನಿಗೆ? ||
ಉನ್ನತ ಶಿಖರದಿಂ ತಿಟ್ಟೇನು ಕುಳಿಯೇನು? |
ಪೂರ್ಣತೆಗೆ ಸೊಟ್ಟೇನು? - ಮಂಕುತಿಮ್ಮ || ೮೦೦ ||

ಕೋಡುಗಲ್ಲನು ಹತ್ತಿ ದೂರವನು ನೋಳ್ಪಂಗೆ |
ಗೋಡೆಗೊತ್ತುಗಳೇನು? ಮೇಡು ಕುಳಿಯೇನು? ||
ನೋಡು ನೀನುನ್ನತದಿ ಜನಜೀವಿತವ |
ಮಾಡುದಾರದ ಮನವ - ಮಂಕುತಿಮ್ಮ || ೮೦೧ ||

ಹರ್ಮ್ಯಾಗ್ರಕೇರಿ ಸೋಪಾನದಿನತೀತನಹೆ |
ನಿರ್ಮಮತೆಗೇರಿ ಕರ್ಮಾತೀತನಪ್ಪೆ ||
ಬ್ರಹ್ಮಪದದಿಂದ ಧರ್ಮಾಧರ್ಮಗಳ ನಿಯಮ |
ನಿರ್ಮಾಲ್ಯವಾಗುವುದು - ಮಂಕುತಿಮ್ಮ || ೮೦೨ ||

ಎಲ್ಲರೊಳು ತಾನು ತನ್ನೊಳಗೆಲ್ಲರಿರುವವೋ- |
ಲೆಲ್ಲೆಲ್ಲಿಯುಂ ನೋಡಿ ನಡೆದು ನಗುತಳುತ ||
ಬೆಲ್ಲ ಲೋಕಕ್ಕಾಗಿ ತನಗೆ ತಾಂ ಕಲ್ಲಾಗಿ |
ಬಲ್ಲವನೆ ಮುಕ್ತನಲ - ಮಂಕುತಿಮ್ಮ || ೮೦೩ ||

ಶುಭವಾವುದಶುಭವಾವುದು ಲೋಕದಲಿ ನೋಡೆ? |
ವಿಭಜಿಸಲ್ಕಾಗದನ್ಯೋನ್ಯಸಂಬಂಧ ||
ಉಭಯವನು ಮೀರ್ದ ಸಾಮ್ಯದ ನೀತಿಯೊಂದಿಹುದು |
ಅಭಯಪಥವದು ನಿನಗೆ - ಮಂಕುತಿಮ್ಮ || ೮೦೪ ||

ಸಾರ್ವಭೌಮನು ಸೃಷ್ಟಿಯೊಳಗದೊರ್ವನೆ ಕಾಣೊ |
ಸರ್ವವನು ತನ್ನಾತ್ಮವೆಂದು ಬದುಕುವನು ||
ನಿರ್ವಿಕಾರಾಂತರಂಗದಿ ಜಗವ ಧರಿಸುವನು |
ಸರ್ವಮಂಗಳನವನು - ಮಂಕುತಿಮ್ಮ || ೮೦೫ ||

ಗರ್ವಪಡದುಪಕಾರಿ, ದರ್ಪ ಬಿಟ್ಟಧಿಕಾರಿ |
ನಿರ್ವಿಕಾರದ ನಯನದಿಂ ನೋಳ್ಪುದಾರಿ ||
ಸರ್ವಧರ್ಮಾಧಾರಿ, ನಿರ್ವಾಣಸಂಚಾರಿ |
ಉರ್ವರೆಗೆ ಗುರುವವನು - ಮಂಕುತಿಮ್ಮ || ೮೦೬ ||

ಜಗದ ಕಲ್ಯಾಣದೊಳಗಾತ್ಮ ಕಲ್ಯಾಣವನು |
ಜಗದ ಬೀದಿಗಳೊಳು ನಿಜಾತ್ಮ ಯಾತ್ರೆಯನು ||
ಜಗದ ಜೀವಿತದಿ ನಿಜಜೀವಿತದ ಪೂರ್ತಿಯನು |
ಬಗೆಯಲರಿತವನೆ ಸುಖಿ - ಮಂಕುತಿಮ್ಮ || ೮೦೭ ||

ಚಿರ ಶಿಕ್ಷೆಯಿಂ ನಿನಗೆ ಸರ್ವಾತ್ಮತಾಭ್ಯಾಸ |
ಸರಳ ಸಹಜವದಹುದು ಮೂಗಿನುಸಿರವೊಲು ||
ಪರನಿಯತಿಯಿರದು ಸ್ವತಸಿದ್ಧ ನಿಯತಿಯಿರೆ |
ಹೊರಸಡಿಲಕೊಳಹಿಡಿತ - ಮಂಕುತಿಮ್ಮ || ೮೦೮ ||

ದ್ವೈತವೇನದ್ವೈತವೇನಾತ್ಮದರ್ಶನಿಗೆ? |
ಶ್ರೌತಾದಿವಿಧಿಯೇನು? ತಪನಿಯಮವೇನು? ||
ನೀತಿ ಸರ್ವಾತ್ಮಮತಿಯದರಿನಮಿತ ಪ್ರೀತಿ |
ಭೀತಿಯಿಲ್ಲದನವನು - ಮಂಕುತಿಮ್ಮ || ೮೦೯ ||

ಬರಿಭಕ್ತಿ ಬರಿಕರ್ಮ ಬರಿತರ್ಕ ದೊರಕಿಸದು |
ಪರಮಾತ್ಮ ದರ್ಶನವ; ಬೇಕದಕೆ ತಪಸು ||
ಪರಿಪೂರ್ಣ ಜೀವನಾನುಭವತಾಪದಿ ಮತಿಯು |
ಪರಿಪಕ್ವವಾಗಲದು - ಮಂಕುತಿಮ್ಮ || ೮೧೦ ||

ಹೊರಗು ಹೊರೆಯಾಗದವೊಲ್ ಒಳಗನನುಗೊಳಿಸಿ, ನೀ- |
ನೊಳಗು ಶೆಕೆಯಾಗದವೊಲ್ ಅಳವಡಿಸೆ ಹೊರಗ ||
ಸರಿಸಮದೊಳೆರಡನುಂ ಬಾಳಿನಲಿ ಜೋಡಿಪುದೆ |
ಪರಮಜೀವನಯೋಗ - ಮಂಕುತಿಮ್ಮ || ೮೧೧ ||

ಅಳಬೇಕು, ನಗಬೇಕು, ಸಮತೆ ಶಮವಿರಬೇಕು |
ಹೊಳೆಯ ನೆರೆವೊಲು ಹೃದಯರಸ ಹರಿಯಬೇಕು ||
ಅಲೆಯಿನಲುಗದ ಬಂಡೆಯವೊಲಾತ್ಮವಿರಬೇಕು |
ತಿಳಿದವರ ಚರಿತವದು - ಮಂಕುತಿಮ್ಮ || ೮೧೨ ||

ಟ್ಟೆನೆಲ್ಲವನೆಂಬ ಹೃದಯಶೋಷಣೆ ಬೇಡ |
ಕಟ್ಟಿಕೊಳ್ಳುವ ಶಿರಃಪೀಡೆಯುಂ ಬೇಡ ||
ತೊಟ್ಟು ನಿರಹಂಕೃತಿಯ ಕವಚವನು ನೀಂ ಪೋರು |
ಮುಟ್ಟದಿಳೆಯಸಿ ನಿನ್ನ - ಮಂಕುತಿಮ್ಮ || ೮೧೩ ||

ನ್ಯಾಯಾಧಿಪತಿ ತನ್ನ ಮತಿ ಮನಸುಗಳನೆಲ್ಲ ।
ಸ್ವೀಯಲಾಭಸ್ಮರಣೆಯುಳಿದು ವಿವಾದಗಳಾ ॥
ದಾಯನಿರ್ಣಯಕೆ ಯೋಜಿಸುವಂತೆ, ನೀಂ ಜಗದ ।
ಶ್ರೇಯಸ್ಸಿಗುಜ್ಜುಗಿಸು - ಮಂಕುತಿಮ್ಮ ॥ ೮೧೪ ॥

ಪೌರುಷಾಶ್ವಕ್ಕಾಶೆ ಛಾಟಿ, ಭಯ ಕಡಿವಾಣ ।
ಹಾರಾಟವದರದಾ ವೇಧೆಗಳ ನಡುವೆ ॥
ಧೀರನೇರಿರೆ, ಹೊಡೆತ ಕಡಿತವಿಲ್ಲದೆ ಗುರಿಗೆ ।
ಸಾರುವುದು ನೈಜದಿಂ - ಮಂಕುತಿಮ್ಮ ॥ ೮೧೫ ॥

ಆರೋಗ್ಯಭಾಗ್ಯವನು ಮನಕೆ ತನುಗೆಂತಂತೆ ।
ಹಾರಯಿಸುವೊಡೆ ಹಲವು ಸರಳ ನೀತಿಗಳ ॥
ಧಾರಯಿಸು ನೆನಸಿನಲಿ ನುಡಿಯಲ್ಲಿ ನಡತೆಯಲಿ ।
ಪಾರಾಗು ಸುಳಿಯಿಂದ - ಮಂಕುತಿಮ್ಮ ॥ ೮೧೬ ॥

ಮರವ ನೀನರಿಯುವೊಡೆ ಬುಡವ ಕೀಳಲು ಬೇಡ ।
ತರಿಯಬೇಡೆಲೆಕಡ್ಡಿಗಳ ಪರೀಕ್ಷಣಕೆ ॥
ಎರೆ ನೀರ, ಸುರಿ ಗೊಬ್ಬರವ, ಕೆದಕು ಪಾತಿಯನು ।
ನಿರುಕಿಸುತ ತಳಿರಲರ - ಮಂಕುತಿಮ್ಮ ॥ ೮೧೭ ॥

ವನಜಂತುಗಳ ಸಸ್ಯಮೂಲಿಕಾಹಾರದಿಂ ।
ಗುಣವನರಿತವರಾದಿವೈದ್ಯರೌಷಧದೊಳ್ ॥
ಒಣತರ್ಕಗಳಿನೇನು? ಜೀವನದ ವಿವಿಧರಸ- ।
ದನುಭವದಿ ತತ್ತ್ವವೆಲೊ - ಮಂಕುತಿಮ್ಮ ॥ ೮೧೮ ॥

ಕಡಿದೊಡೆ ಪರೀಕ್ಷೆಗುಳಿವುವು ಸತ್ತನಾರುಗಳು ।
ಕಡಿಯದಿರೆ ಮರದಿ ಪರಿಯುವುದು ಜೀವರಸ ॥
ಬಿಡುವಮ್ ಈ ಬಾಳ್ ಅದೇಕೆಂಬ ಚರ್ಚೆಯ; ನಾವು ।
ದುಡಿವಮ್ ಅದು ಪೆಂಪುಗೊಳೆ - ಮಂಕುತಿಮ್ಮ ॥ ೮೧೯ ॥

ಜೀವನವ್ಯಾಪಾರ ಮೂವರೊಟ್ಟು ವಿಚಾರ ।
ಭಾವಿಪೊಡೆ ನೀನು, ಜಗ, ಇನ್ನೊಂದದೃಷ್ಟ ॥
ಆವಗಂ ಮೂರನೆಯ ಭಾಗಸ್ಥನಿಚ್ಛೆ ಬಲ ।
ಈ ವಿವರವರಿಯೆ ಸುಖ - ಮಂಕುತಿಮ್ಮ ॥ ೮೨೦ ॥

ಏನೇನು ಹಾರಾಟ ಸುಖಕೆಂದು ಲೋಕದಲಿ! ।
ತಾನಾಗಿ ಗಾಳಿವೊಲ್ ಬಂದ ಸುಖವೆ ಸುಖ ॥
ನೀನೆ ಕೈಬೀಸಿಕೊಳೆ ನೋವು ಬೆವರುಗಳೆ ಫಲ ।
ಮಾಣು ಮನದುಬ್ಬಸವ - ಮಂಕುತಿಮ್ಮ ॥ ೮೨೧ ॥

ಆತುರತೆಯಿರದ ಸತತೋದ್ಯೋಗ ಸರ್ವಹಿತ ।
ಭೂತದಾವೇಶವಾತುರತೆಯಾತ್ಮಕ್ಕೆ ॥
ಕಾತರನು ನಿನಾಗೆ ಮೂರನೆಯ ಸಹಭಾಗಿ ।
ಪ್ರೀತನಾಗುವನೇನೊ? - ಮಂಕುತಿಮ್ಮ ॥ ೮೨೨ ॥

ಎಣಿಕೆಯೊಳಿತಾದೊಡೆಯುಮೊಳಿತನಾಗಿಸದು ಹಟ ।
ಮಣಿಕನಕ ಸಂಕೋಲೆ ತನುವ ಬಂಧಿಸದೇಂ? ॥
ತನಯುನಿರಿದಸಿ ನಿನ್ನ ಮೈಯ ಹುಣ್ಣಾಗಿಸದೆ? ।
ಮನ ಸರ್ವಸಮವಿರಲಿ - ಮಂಕುತಿಮ್ಮ ॥ ೮೨೩ ॥

ಗುರಿಯನ್ನೈದದೊಡೊಮ್ಮೆ ಮರಳಿ ನೀನುಜ್ಜುಗಿಸು ।
ಕರಯುಕ್ತಿ ಪೆರ್ಚಿಯೋ, ದೈವ ಕರುಣಿಸಿಯೋ ॥
ಕರುಮಖುಣ ಸಂಧಿಸಿಯೊ ಕೈಗೂಡಬಹುದು ಗುರಿ ।
ಪರವೆಯಿಡದುಜ್ಜುಗಿಸು - ಮಂಕುತಿಮ್ಮ ॥ ೮೨೪ ॥

ಕಲೆಗಳಲಿ ಪರಮಕಲೆ ಜೀವನದ ಲಲಿತಕಲೆ ।
ಕಲಿಸಲದನಳವಲ್ಲ ಬಾಹ್ಯಬೋಧನೆಯಿಂ ॥
ಒಲಿದೊಲಿಸಿಕೊಳುವ ಲೌಕಿಕನಯದ ಸೊಗಸ ನೀಂ ।
ತಿಳಿವುದೊಳಹದದಿಂದ - ಮಂಕುತಿಮ್ಮ ॥ ೮೨೫ ॥

ಸಂಗೀತಕಲೆಯೊಂದು, ಸಾಹಿತ್ಯಕಲೆಯೊಂದು ।
ಅಂಗಾಂಗ ಭಾವ ರೂಪಣದ ಕಲೆಯೊಂದು ॥
ಸಂಗಳಿಸಲೀ ಕಲೆಗಳನುನಯವು ಚರ್ಯೆಯಲಿ ।
ಮಂಗಳೋನ್ನತ ಕಲೆಯೊ - ಮಂಕುತಿಮ್ಮ ॥ ೮೨೬ ॥

ಲೋಕದಲಿ ಭಯವಿರಲಿ, ನಯವಿರಲಿ, ದಯೆಯಿರಲಿ ।
ನೂಕುನುಗ್ಗುಗಳತ್ತ, ಸೋಂಕುರೋಗಗಳು ॥
ಸಾಕಿಸಲಹುವರುಮ್ ಅತ್ತಲೆ ನಿನಗೆ; ನಿನ್ನೆಲ್ಲ ।
ಲೋಕ ಮೂಲವು ನೋಡೊ - ಮಂಕುತಿಮ್ಮ ॥ ೮೨೭ ॥

ಕಳವಳವ ನೀಗಿಬಿಡು, ತಳಮಳವ ದೂರವಿಡು ।
ಕಳೆ, ತಳ್ಳು ಗಲಭೆ ಗಾಬರಿಯ ಮನದಿಂದ ॥
ಅಲೆದಾಡುತಿರೆ ದೀಪ ಕಣ್ಗೆ ಗುರಿ ತಪ್ಪುವುದು ।
ತಿಳಿತಿಳಿವು ಶಾಂತಿಯಲಿ - ಮಂಕುತಿಮ್ಮ ॥ ೮೧೮ ॥

ಕೊಳದ ಜಲ ನಿನ್ನ ಮನ; ಲೋಗರದರೊಳಗಿಳಿಯೆ ।
ತಳದ ಕಸ ತೇಲುತ್ತ ಬಗ್ಗಡವದಹುದು ॥
ಕಲಕದದ್ದೆದೆ ಕೊಂಚ ಬಿಟ್ಟಿದ್ದೊಡದು ಮರಳಿ ।
ತಿಳಿಯಹುದು ಶಾಂತಿಯಲಿ - ಮಂಕುತಿಮ್ಮ ॥ ೮೧೯ ॥

ಕೊಳಕೆಂದು, ಹುಳುಕೆಂದು, ಹೇಸಿಗೆಯ ಹುಳುವೆಂದು ।
ಇಳೆಯೊಳಾವುದರೊಳಮಸಹ್ಯಪಡಬೇಡ ॥
ಬೆಲೆಯುಂಟು ಕೊಳೆಗಮೀ ಜೀವಸಾಮಾಗ್ರಿಯಲಿ ।
ಕೊಳೆ ಶುಚಿಖ್ಯಾಪಕವೊ - ಮಂಕುತಿಮ್ಮ ॥ ೮೨೦ ॥

ತಳೆಯಲಾರನೆ ಬೊಮ್ಮ ಬೀಭತ್ಸರೂಪಗಳ? ।
ನಲಿಯಲಾರನೆ ತಿಪ್ಪೆರೊಚ್ಚು ನಾತದಲಿ? ॥
ಮಲವೇನೊ! ಹೊಲೆಯೇನೊ! ಜೀವಸಂಬಧವಲ ।
ಮಲಿನದಲಿ ನೆನೆ ಶುಚಿಯ - ಮಂಕುತಿಮ್ಮ ॥ ೮೨೧ ॥

ಗುಡಿಯ ಪೂಜೆಯೊ, ಕಥೆಯೊ, ಸೊಗಸುನೋಟವೊ, ಹಾಡೊ
ಬಡವರಿಂಗುಪಕೃತಿಯೊ, ಆವುದೋ ಮನದ ॥
ಬಡಿದಾಟವನು ನಿಲಿಸಿ ನೆಮ್ಮದಿಯನೀವೊಡದೆ ।
ಬಿಡುಗಡೆಯೊ ಜೀವಕ್ಕೆ - ಮಂಕುತಿಮ್ಮ ॥ ೮೨೨ ॥

ನಗುನಗುವ ಕಣ್ಗಳಿಗೆ ಹೊಗೆಯನೂದಲುಬೇಡ ।
ಜಗವ ಸುಡುಗಾಡೆನುವ ಕಟುತಪಸು ಬೇಡ ॥
ಮಗುವು ತಾಯ್ತುಂದೆಕಣ್ಮುಂದೆ ನಡೆವಂತೆ ನಡೆ ।
ಮಿಗೆಚಿಂತೆ ತಲೆಹರಟೆ - ಮಂಕುತಿಮ್ಮ ॥ ೮೨೩ ॥

ಹೀಗೋ ಹಾಗೋ ಹೇಗೋ ಜನುಮಕಥೆ ಮುಗಿಯುವುದು ।
ಈಗಲೋ ಆಗಲೋ ಎಂದೋ ಮುಗಿಯುವುದು ॥
ಸಾಗಿಮುಗಿವುದು; ಮುಗಿದು ಮರೆವುದದೆ ನರಸುಕೃತ ।
ಭೂಗತಸ್ಥಿತಿ ಮುಕುತಿ - ಮಂಕುತಿಮ್ಮ ॥ ೮೨೪ ॥

ಮೃತ್ಯುವಿಂ ಭಯವೇಕೆ? ದೇಶಾಂತರಕ್ಕೊಯ್ವ ।
ಮಿತ್ರನಾತಂ; ಚಿತ್ರ ಹೊಸದಿರ್ಪುದಲ್ಲಿ ॥
ಸಾತ್ತ್ವಿಕದಿ ಬಾಳ್ದವಂಗೆತ್ತಲೇಂ ಭಯವಿಹುದು? ।
ಸತ್ರ ಹೊಸದಿಹುದು ನಡೆ - ಮಂಕುತಿಮ್ಮ ॥ ೮೨೫ ॥

ಬಹುರಹಸ್ಯವೊ ಸೃಷ್ಟಿ, ಬ್ರಹ್ಮರಹಸ್ಯವೊ ಜೀವ ।
ಅಹುದದಲ್ಲವಿದೆಂಬ ವಾದ ಬರಿ ಹರಟೆ ॥
ಗುಹೆಯೊಳಿಹುದೆಲ್ಲ ತತ್ತ್ವಗಳ ತತ್ತ್ವದ ಮೂಲ ।
ಬಹಿರಂತರ ರಹಸ್ಯ - ಮಂಕುತಿಮ್ಮ ॥ ೮೨೬ ॥

ಎತ್ತೆತ್ತ ನೋಡಲುಂ ಗುಪ್ತ ಭೂತಗಳಯ್ಯ ।
ಕತ್ತಲೆಯೊಳಾಡುತಿಹ ದೆವ್ವಗಳ ಸುಳಿವು ॥
ಮುತ್ತಿ ಮುಸುಕಿಹುದು ಜೀವನದ ರಹಸ್ಯವೊಂದು ।
ಬೆತ್ತಲೆಯದಹುದೆಂತು? - ಮಂಕುತಿಮ್ಮ ॥ ೮೨೭ ॥

ಮುಸುಕಿಹುದು ಹುಟ್ಟಳಿವುಗಳ ಕಾರಣವ ಮಬ್ಬು ।
ಮಸಕಿನಲಿ ಹುದುಗಿಹುವು ಮೋಹಮೂಲಗಳು ॥
ನಿಶಿ ಮುಚ್ಚಿಹುದು ದಿನಪಚಂದಿರರ ಹುಟ್ಟೆಡೆಯ ।
ಮಿಸುಕುವ ರಹಸ್ಯ ನೀಂ - ಮಂಕುತಿಮ್ಮ ॥ ೮೨೮ ॥

ಆವ ಗಾಳಿಯದಾವ ಧೂಳ್ಕಣವ ಪೊತ್ತಿಹುದೊ! ।
ಆವ ಧೂಳಿನೊಳಾವ ಚೈತನ್ಯಕಣವೋ! ॥
ಜೀವವಿಂತಜ್ಞಾತ ಸೂತ್ರದಾಟದ ಬೊಂಬೆ ।
ಭಾವಿಸಾ ಸೂತ್ರಗಳ - ಮಂಕುತಿಮ್ಮ ॥ ೮೨೯ ॥

ಭುಕ್ತಿ ನಿನಗೆಲ್ಲಿಯದು? ಭತ್ತ ತಾನೆಲ್ಲಿಯದೊ! ।
ಎತ್ತಲಿನ ಗೊಬ್ಬರವೊ! ಎತ್ತಲಿನ ನೀರೋ! ॥
ಭಾಕ್ತವಾರಾರ ದುಡಿತದಿನೊ ನಿನಗಾಗಿಹುದು! ।
ಗುಪ್ತಗಾಮಿನಿಯೊ ಋಣ - ಮಂಕುತಿಮ್ಮ ॥ ೮೩೦ ॥

ನಿನ್ನಂಜಲಗುಳಾವ ಕಾಲುವೆಯ ಸೇರುವುದೊ! ।
ಮಣ್ಣಾವುದದರಿಂದೆ ಗರ್ಭವತಿಯಹುದೋ! ॥
ಅನ್ನವದರಿಂದಾರ್ಗೊ! ಲೋಕಕವರಿಂದೇನೊ! ।
ಬಣ್ಣಿಸುವರಾರದನು? - ಮಂಕುತಿಮ್ಮ ॥ ೮೩೧ ॥

ಆವ ನೆಲದಲಿ ಮೇದೊ, ಆವ ನೀರನು ಕುಡಿದೊ ।
ಆವು ಹಾಲ್ಗರೆವುದದನಾರು ಕುಡಿಯುವನೋ! ॥
ಆವ ಬಲವದರಿನೊಗೆದೇಂಗೆಯ್ಯುವುದೊ ಜಗಕೆ! ।
ಭಾವಿಸಾ ಋಣಗತಿಯ - ಮಂಕುತಿಮ್ಮ ॥ ೮೪೨ ॥

ಸೇರಿರ್ಪುವುಸಿರುಸಿರುಗಳೊಳೆಷ್ಟೊ ಜೀವಾಣು ।
ಹಾರುತಿಹುವೆಷ್ಟೊ ಚೇತನ ಧೂಳುಕಣದೊಳ್ ॥
ಪ್ರಾರಬ್ಧಗತಿಯ ನಿಶ್ಚಯದಿ ತಿಳಿದವರಿಲ್ಲ ।
ಆ ರಹಸ್ಯಕ್ಕೆರಗೊ! - ಮಂಕುತಿಮ್ಮ ॥ ೮೪೩ ॥

ಬೀಳಿಸದಿರೆಲೊ ನಿನ್ನ ನೆರಳನಿತರರ ಮೇಲೆ ।
ಬಾಳಿಕೊಳುಗವರು ತಂತಮ್ಮ ಬೆಳಕಿನಲಿ ॥
ಮೇಲುಬೀಳುಗಳಾರ್ಗದೆಂತೊ ನೀನೇನರಿವೆ? ।
ತಾಳದಿರು ಗುರುತನವ - ಮಂಕುತಿಮ್ಮ ॥ ೮೪೪ ॥

ಪೆರತೊಂದು ಬಾಳ ನೀನಾಳ್ವ ಸಾಹಸವೇಕೆ? ।
ಹೊರೆ ಸಾಲದೇ ನಿನಗೆ, ಪೆರರ್ಗೆ ಹೊಣೆವೋಗೆ? ॥
ಮರದಿ ನನೆ ನೈಜದಿಂದರಳೆ ಸೊಗವೆಲ್ಲರ್ಗೆ ।
ಸೆರೆಮನೆಯ ಸೇಮವೇಂ? - ಮಂಕುತಿಮ್ಮ ॥ ೮೪೫ ॥

ಮರಣದಿಂ ಮುಂದೇನು? ಪ್ರೇತವೋ? ಭೂತವೋ? ।
ಪರಲೋಕವೋ? ಪುನರ್ಜನ್ಮವೊ? ಅದೇನೋ! ॥
ತಿರುಗಿ ಬಂದವರಿಲ್ಲ, ವರದಿ ತಂದವರಿಲ್ಲ ।
ಧರೆಯ ಬಾಳ್ಗದರಿನೇಂ? - ಮಂಕುತಿಮ್ಮ ॥ ೮೪೬ ॥

ನೆಲದ ಬೇಸಾಯ ತಾನೊಳ್ಳಿತಾಗಿರೆ ನಿನಗೆ ।
ಫಲದೆಂತಹುದೆಂಬ ಶಂಕೆಗೆಡೆಯುಂಟೆ? ॥
ಒಳಿತರೊಳೆ ನೀಂ ಬಾಳು; ಪರವದೆಂತಿರ್ದೊಡೇಂ? ।
ಇಳೆಯೆ ಬಾಗಿಲು ಪರಕೆ - ಮಂಕುತಿಮ್ಮ ॥ ೮೪೭ ॥

ಸ್ಥಿರ ಹಿಮಾಚಲ ಬೊಮ್ಮ, ಚರ ಜಾಹ್ನವಿಯೆ ಮಾಯೆ ।
ಪರಸತ್ತ್ವ ಘನದ ವಿದ್ರವರೂಪ ವಿಶ್ವ ॥
ಪರಮಾರ್ಥಕೊಂದಕ್ಷಿ ವೆವಹಾರಕಿನ್ನೊಂದು ।
ಎರಡುಮೊಂದಾಂತರ್ಯ - ಮಂಕುತಿಮ್ಮ ॥ ೮೪೮ ॥

ಒಮ್ಮನಸಿನಿಂದ ನೀನೀ ತತ್ತ್ವವಂ ಗ್ರಹಿಸು ।
ಬ್ರಹ್ಮಲೀಲೆಗೆ ಗೊತ್ತುಗುರಿ ಲೆಕ್ಕವಿಲ್ಲ ॥
ಸುಮ್ಮನಿರು ನಿನ್ನ ಪಾಡನು ಪಡುತ ತುಟಿ ಬಿಗಿದು ।
ನೆಮ್ಮದಿಗೆ ದಾರಿಯದು - ಮಂಕುತಿಮ್ಮ ॥ ೮೪೯ ॥

ನೃತ್ಯವೋ ಬ್ರಹ್ಮನಟರಾಜನದು ಜಗವೆಲ್ಲ ।
ಪ್ರತ್ಯೇಕ ಜೀವದಶೆಯವನಂಗಭಂಗಿ ॥
ಸತ್ಯಸತ್ತ್ವಜ್ವಾಲೆ ವಿಶ್ವಮಾಯಾಲೀಲೆ ।
ಪ್ರತ್ಯಗಾತ್ಮನು ನೀನು - ಮಂಕುತಿಮ್ಮ ॥ ೮೫೦ ॥

ಕಣ್ದೆರೆದು ನೋಡು, ಚಿತ್ಸತ್ತ್ವಮೂರ್ತಿಯ ನೃತ್ಯ ।
ಕಣ್ಮುಚ್ಚಿ ನೋಡು, ನಿಶ್ಚಲ ಶುದ್ಧ ಸತ್ತ್ವ ॥
ಉನ್ಮುಖನು ನೀನೆರಡು ಜಗಕವಿರುತಿರಲಾಗ ।
ಹೃನ್ಮಧ್ಯದಲಿ ಶಾಂತಿ - ಮಂಕುತಿಮ್ಮ ॥ ೮೫೧ ॥

ನವನವ ಪ್ರಶ್ನೆಗಳು, ನವನವ ಪರೀಕ್ಷೆಗಳು ।
ದಿವಸಾಬ್ದಯುಗ ಚಕ್ರ ತಿರುತಿರುಗಿದಂತೆ ॥
ಪ್ರವಹಿಪ್ಪುವದರಂತೆ ಪೌರುಷ ಹಿತಪ್ರಜ್ಞೆ ।
ಅವಿರತದ ಚೈತನ್ಯ - ಮಂಕುತಿಮ್ಮ ॥ ೮೫೨ ॥

ಸಾರ್ವಲೌಕಿಕಸೌಖ್ಯ ನೆಲಸುವನ್ನೆಗಮಿಳೆಯೊ- ।
ಳೊರ್ವನುಂ ಸುಖಿಯಲ್ತು, ದಿಟದಿ. ಪೂರ್ಣದಲಿ ॥
ಒರ್ವನುಬ್ಬಸದ ಬಿಸಿ ವಿಷವಾಯುವಾಗಿ ತಾ ।
ನುರ್ವರೆಯ ಮುಸುಕೀತು - ಮಂಕುತಿಮ್ಮ ॥ ೮೫೩ ॥

ಸರ್ವಹಿತವೊಂದುಂಟೆ? ಅದಕೆ ಪಥ ನಮಗುಂಟೆ? ।
ನಿರ್ವಾಹಸಾಧನಗಳೆತ್ತ? ಗುರುವೆತ್ತ? ॥
ಪೂರ್ವವನು ನೆಟ್ಟಗಿಪ ನರಕೃತಿಯಿನಾಗದೇನ್ ।
ಅರ್ವಾಚಿಯಲಿ ಸೊಟ್ಟು? - ಮಂಕುತಿಮ್ಮ ॥ ೮೫೪ ॥

ಸುಲಭವೇನಲ್ಲ ನರಲೋಕಹಿತನಿರ್ಧಾರ ।
ಬಲಕೆ ನೋಳ್ಪರ್ ಕೆಲರು, ಕೆಲರೆಡಕೆ ನೋಳ್ಪರ್ ॥
ವಿಲವಿಲನೆ ಚಪಲಿಸುವ ಮನುಜಸ್ವಭಾವದಲಿ ।
ನೆಲೆಗೊತ್ತು ಹಿತಕೆಲ್ಲಿ? - ಮಂಕುತಿಮ್ಮ ॥ ೮೫೫ ॥

ರಾಮಕಾರ್ಮುಕ, ಕೃಷ್ಣಯುಕ್ತಿ, ಗೌತಮಕರುಣೆ ।
ಭೂಮಿಭಾರವನಿಳುಹೆ ಸಾಲದಾಗಿರಲು ॥
ಸಾಮಾನ್ಯರೆನಿತು ತಾಂ ಪೆಣಗಿದೊಡಮೇನಹುದು? ।
ಕ್ಷೇಮವೆಂದುಂ ಮೃಗ್ಯ - ಮಂಕುತಿಮ್ಮ ॥ ೮೫೬ ॥

ಸತತಮಾರ್ಗಣೆ, ಸಿದ್ಧಿಯಂತಿರಲಿ, ಮಾರ್ಗಣೆಯೆ ।
ಗತಿ ಮನುಜಲೋಕಕ್ಕೆ ; ಜಗದ ಜೀವವದು ॥
ಕೃತಕಾಮರೆಲ್ಲರಾದೊಡೆ ಕೃತ್ಯವುಳಿಯದೊಡೆ ।
ಕಥೆಮುಗಿವುದಲ ಜಗಕೆ? - ಮಂಕುತಿಮ್ಮ ॥ ೮೫೭ ॥

ಪ್ರಿಯಹಿತಗಳನ್ವೇಷೆಯಿಂ ಕರ್ಮಪರಿಪೋಷೆ ।
ಕ್ರಿಯೆಯ ಪಾರಂಪರ್ಯ ಜನ್ಮಾಂತರೀಯ ॥
ನಿಯತವಿಂತು ಜಗತ್ಪ್ರವರ್ಧನೆಗೆ ನರತೃಷ್ಣೆ ।
ಜಯ ಪೂರ್ಣವೆಂದದಕೆ? - ಮಂಕುತಿಮ್ಮ ॥ ೮೫೮ ॥

ಪ್ರಕೃತಿಯನವರತ ಮನುಜನ ತಿದ್ದುತಿರುವಂತೆ ।
ವಿಕೃತಿಗೊಳಿಸುವನವನುಮ್ ಆಕೆಯಂಗಗಳ ॥
ಭೂಕೃಷಿಕ ರಸತಂತ್ರಿ ಶಿಲ್ಪಿ ವಾಹನಯಂತ್ರಿ ।
ವ್ಯಾಕೃತಿಸರೇನವಳ? - ಮಂಕುತಿಮ್ಮ ॥ ೮೫೯ ॥

ಸೃಷ್ಟಿ ಚೋದನೆಗಳಿಂ ನರನೊಳಿಷ್ಟಗಳುದಯ- ।
ವಿಷ್ಟಸಿದ್ಧಿಗೆ ಯಂತ್ರತಂತ್ರಗಳ ಯುಕ್ತಿ ॥
ತ್ವಷ್ಟೃಕುಶಲದೆ ಸೃಷ್ಟಿ ವಿಕೃತಿ; ಇಂತನ್ಯೋನ್ಯ ।
ಸ್ಪೃಷ್ಟರ್ ಪ್ರಕೃತಿ ನರರು - ಮಂಕುತಿಮ್ಮ ॥ ೮೬೦ ॥

ದಿವ್ಯ ಚರಿತಂಗಳ ಪ್ರತ್ಯುಕ್ತಿ ನರಚರಿತೆ ।
ಕಾವ್ಯ ವಿಜ್ಞಾನಗಳ್ ನಿಗಮಾನುಸರಗಳ್ ॥
ನವ್ಯಸಂಪದವಾರ್ಷಸಂಪದುದ್ಧೃತವಿಂತು ।
ಸವ್ಯಪೇಕ್ಷಗಳುಭಯ - ಮಂಕುತಿಮ್ಮ ॥ ೮೬೧ ॥

ಇರುವುದರೊಳಾದನಿತು ಸೊಗವ ಪಡೆವೊಡೆ ಲೋಗರ್ ।
ಅರಿಗೆ ಮೊದಲ್ ಇಹಕೆ ಪರದಾವರಣವಿಹುದನ್ ॥
ಪರಮಾರ್ಥಗಣಿತದಿಂದಿಹದರ್ಥಗಳನೆಣಿಸೆ ।
ಸರಿ ಲೋಕಬಾಂಧವ್ಯ - ಮಂಕುತಿಮ್ಮ ॥ ೮೬೨ ॥

ಮುದಿಕುರುಡಿ ಹೊಂಗೆಯನು "ಬಾದಾಮಿ, ಕೋ" ಯೆನುತ ।
ಪದುಳದಿಂ ಮೊಮ್ಮಂಗೆ ಕೊಡಲು ಸಿಹಿಯಹುದೆ? ॥
ಹೃದಯವೊಳಿತಾದೊಡೇಂ? ತಿಳಿವಿಹುದೆ? ಜಾಣಿಹುದೆ? ।
ಸುಧೆ ಬಂತೆ ಸುಲಭದಲಿ? - ಮಂಕುತಿಮ್ಮ ॥ ೮೬೩ ॥

ಜಗದ ಸೊಗದರಸಿಕೆಯ ಫಲ, ನೋಡು, ಬರಿ ಕಲಹ ।
ಮೃಗಗಳಾವೇಶಗೊಳಲಿಪ್ಪುದಿನ್ನೇನು? ॥
ಮುಗಿಯುವುದು ಕಾಳ್ಗಿಚ್ಚು ವನ ಬೂದಿಯಾದಂದು ।
ಹಗೆತನವುಮಂತು - ಮಂಕುತಿಮ್ಮ ॥ ೮೬೪ ॥

ಉರಿಯಾರಿ ಮಳೆಗರೆಯೆ ಮರಳಿ ಸಸಿಯೇಳಿವುದು ।
ಮರುಗನೊಂದುವುದು ಪೊನ್ ಪುಟ ಕಾದ ಬಳಿಕ ॥
ನರಜೀವವಂತು ಶುಚಿಯಹುದು ದುಃಖಾಶ್ರುವಿಂ ।
ತರುವಾಯ ಪುನರುದಯ - ಮಂಕುತಿಮ್ಮ ॥ ೮೬೫ ॥

ಆತುಮದ ಸಂಸ್ಥಿತಿಗೆ ದೈಹಿಕಸಮಾಧಾನ; ।
ಭೌತವಿಜ್ಞಾನದಾ ರಾಷ್ಟ್ರ ಸಂಸ್ಥೆಗಳಾ ॥
ನೂತನ ವಿವೇಕಪ್ರಯೋಗಗಳಿನಾದೀತು ।
ಭೂತಿಸಂಪದ ಜಗಕೆ - ಮಂಕುತಿಮ್ಮ ॥ ೮೬೬ ॥

ಯತನ ಕರ್ತವ್ಯವದು, ನಮಗೆ ವಿದ್ಯಾಭ್ಯಾಸ ।
ಹಿತಪರಿಜ್ಞಾನ ಯತ್ನಾನುಭವ ಫಲಿತ ॥
ಸತತಯತ್ನದಿನಾತ್ಮ ಶಕ್ತಿ ಪರಿವರ್ಧಿಪುದು ।
ಯತನ ಜೀವನಶಿಕ್ಷೆ - ಮಂಕುತಿಮ್ಮ ॥ ೮೬೭ ॥

ಅರೆದಿನದ ನಮ್ಮ ಯತ್ನದಿನದೇನೆನ್ನದಿರು ।
ಕಿರಿದುಮೊಡಗೂಡಿರಲು ಸಿರಿಯಹುದುಬಾಳ್ಗೆ ॥
ಪರಿಪೋಷಿಸದೆ ನಿನ್ನೊಡಲ ದಾರಿಮರದ ಫಲ? ।
ಕಿರುಜಾಜಿ ಸೊಗಕುಡದೆ? - ಮಂಕುತಿಮ್ಮ ॥ ೮೬೮ ॥

ಮಾರ್ಗಣೆಯೆ ಮುಖ್ಯ; ಲಭ್ಯದ ಮಾತದಂತಿರಲಿ ।
ಸ್ವರ್ಗವನು ಭುವಿಗಿಳಿಸಬಲ್ಲವನದಾರು? ॥
ಅರ್ಗಲ ವಿಹೀನ ಸರ್ವಾರ್ಥ ಸಹಭಾಗಿತೆಯೆ ।
ಅರ್ಘಾರ್ಹತತ್ತ್ವವೆಲೊ - ಮಂಕುತಿಮ್ಮ ॥ ೮೬೯ ॥

ದಿವಿಜಸುಧೆ ಬರಿಮಧುವೊ; ಹುಳಿಯುಪ್ಪು ಮಿಶ್ರಿತವೊ? ।
ಅವನಿಯುಣಿಸಿನಲಿ ಷಡ್ರಸ ತಪ್ಪದಿಹುದು ॥
ಲವಲೇಶಮಾನುಮಿರದಿರೆ ಕಯ್ಪು ಜೀವನದಿ ।
ಪವಳಿಸಿರನೇ ನರನು? - ಮಂಕುತಿಮ್ಮ ॥ ೮೭೦ ॥

ಆರಿಗಾವುದು ತಕ್ಕುದಾರಿಗಾವುದು ದಕ್ಕ- ।
ದೀ ರಹಸ್ಯದಿನಾದ ಸಾಹ್ಯವುಪಕಾರ ॥
ತಾರತಮ್ಯವಿವೇಕವರಿಯದಾ ಸಂಸ್ಕಾರ ।
ಪ್ರೇರಕವೊ ಚೌರ್ಯಕ್ಕೆ - ಮಂಕುತಿಮ್ಮ ॥ ೮೭೧ ॥

ಗುಡಿಸಲೇನೊಣಹುಲ್ಲು ಕಡ್ಡಿ ಮಣ್ಣಿನ್ನುತಲಿ ।
ಬಡವನಲಿ ಕೊರತೆಗಳ ನೆಡುವುದರಿದಲ್ಲ ॥
ಕೆಡಿಸಿದಾ ಗುಡಿಸಿಲಿನ ನೆಮ್ಮದಿಯ ಮತ್ತೆಂತು ।
ಕೊಡಲಹುದವಂಗೆ ನೀಂ? - ಮಂಕುತಿಮ್ಮ ॥ ೮೭೨ ॥

ಬಳಲಿ ನೆಲದಲಿ ಮಲಗಿ ಮೈಮರೆತು ನಿದ್ರಿಪನ ।
ಕುಲುಕಿ ಹಾಸಿಗೆಯನರಸೆನುವುದುಪಕೃತಿಯೆ? ॥
ಒಳಿತನೆಸಗುವೆನೆಂದು ನೆಮ್ಮದಿಯ ನುಂಗದಿರು ।
ಸುಲಭವಲ್ಲೊಳಿತೆಸೆಗೆ - ಮಂಕುತಿಮ್ಮ ॥ ೮೭೩ ॥

ಮಡಕೆಯನು ಬಡಿದು ಹೊನ್ ಕೊಡವ ತೋರುವ ಸಖನೆ ।
ಪಡೆದಿಹೆಯ ರಹದಾರಿಯನು ಹೊನ್ನ ಗಣಿಗೆ? ॥
ಒಡಲಿಗೊಗ್ಗಿದ ನೀರ ಚೆಲ್ಲಿದೊಡದೇಂ ಪಾಲ ।
ಕುಡಿವ ಸಂತಸಕೆಣೆಯೆ? - ಮಂಕುತಿಮ್ಮ ॥ ೮೭೪ ॥

ಬಲುಹಳೆಯ ಲೋಕವಿದು, ಬಲುಪುರಾತನಲೋಕ ।
ಬೆಳೆದಿರ್ಪುದಿದು ಕೋಟಿರಸಗಳನು ಪೀರ್ದು ॥
ಸುಲಭವಲ್ಲದರ ಸ್ವಭಾವವನು ಮಾರ್ಪಡಿಸೆ ।
ಸಲದಾತುರೆಯದಕೆ - ಮಂಕುತಿಮ್ಮ ॥ ೮೭೫ ॥

ಸಿಂಧುವನು ಹಿಮಗಿರಿಗೆ ಹಿಂದಿರುಗಿ ಬೇರೊಂದು ।
ಚೆಂದದಲಿ ಪರಿದು ಬಾರೆಂದಾಣತಿಪೆಯಾ? ॥
ಸಂದರ್ಭವಿಡಿದು ಜನಚೈತನ್ಯ ಪರಿದಿಹುದು ।
ಅಂಧಗತಿಯಲ್ಲವದು - ಮಂಕುತಿಮ್ಮ ॥ ೮೭೬ ॥

ಮತಿವಂತರಿದ್ದರಲ ನಮ್ಮ ಹಿಂದೆಯುಮಿಲ್ಲಿ ।
ಹಿತಚಿಂತಕರು ಜನಕೆ, ಕೃತಪರಿಶ್ರಮರು? ॥
ಅತಿವೈದ್ಯದಿಂದ ಹೊಸರುಜಿನಕೆಡೆಯಾದೀತೊ ।
ಮಿತಿಯಿಂ ನವೀಕರಣ - ಮಂಕುತಿಮ್ಮ ॥ ೮೭೭ ॥

ಒಡೆಯದಿರು ತಳಹದಿಯ ಸರಿವಡಿಪೆನದನೆಂದು ।
ಸಡಲಿಸುವ ನೀಂ ಮರಳಿ ಕಟ್ಟಲರಿತವನೇಂ? ॥
ಗಿಡವ ಸರಿ ಬೆಳೆಯಿಸಲು ಬುಡವ ಕೀಳ್ವುದು ಸರಿಯೆ? ।
ದುಡುಕದಿರು ತಿದ್ದಿಕೆಗೆ - ಮಂಕುತಿಮ್ಮ ॥ ೮೭೮ ॥

ಮೃಗಶೇಷವಿರುವನಕ ಜಗಳ ತಪ್ಪದು ಜಗದಿ ।
ಹಗೆಗೆ ಕೊಲದವರು ಹಸಿವಿಂದ ಕೊಂದಾರು ॥
ಟಗರು ಜೂಜೋ ಸಭೆಯ ರಗಳೆಯೋ ಕುಸ್ತಿಯೋ ।
ಸೊಗ ಜನಕೆ ರಣರಂಗ - ಮಂಕುತಿಮ್ಮ ॥ ೮೭೯ ॥

ತನ್ನ ಮನೋರಥಂಗಳ ಚಕ್ರವೇಗದಿನೆ ।
ತನ್ನ ಮಣಿಹಾರಗಳ ಸಿಕ್ಕು ಬಿಗಿತದಿನೇ ॥
ತನ್ನ ಸಂಕಲ್ಪ ವಿಪರೀತದಿನೆ ಮಾನವನ ।
ಬೆನ್ನು ಮುರಿದೀತೇನೊ! - ಮಂಕುತಿಮ್ಮ ॥ ೮೮೦ ॥

ಮಿತಿಯನರಿತಾಶೆ, ಸಮುಚಿತವ ಮರೆಯದ ಯತ್ನ ।
ತೃತಿಕ್ತೆ ಕಷ್ಟಾಂಶದಪರಿಹಾರ್ಯತೆಗೆ ॥
ಮೃತಿಯೆ ಜೀವನಕಥೆಯ ಕೊನೆಯಲ್ಲವೆಂಬರಿವು ।
ಹಿತಗಳಿವು ನರಕುಲಕೆ - ಮಂಕುತಿಮ್ಮ ॥ ೮೮೧ ॥

ಸರ್ವಾರ್ಥ ಸಹಭಾಗಿತೆಗೆ ರಾಷ್ಟ್ರ ಕುಲ ವರ್ಗ ।
ಸರ್ವದಣು ತಾನೆನುತ್ತೋರೊರ್ವ ಮನುಜನ್ ॥
ಸರ್ವಜೀವ ಸಮೃದ್ಧಿಗನುಗೂಡಿ ದುಡಿಯುತಿರೆ ।
ಪರ್ವವಂದಿಳೆಗೆಲವೊ - ಮಂಕುತಿಮ್ಮ ॥ ೮೮೨ ॥

ಕಾಯಕಿಂತಾತ್ಮ ಪಿರಿತೆಂದು ಜನವರಿತಂದು ।
ಸ್ವೀಯೇಚ್ಛೆಯಿಂದ ಸಮಾಧಾನ ಕೆಡದಂದು ॥
ದಾಯ ಸಮ ಸಂಸೃಷ್ಟಿ ಭೂಭಾಗ್ಯವಾದಂದು ।
ಶ್ರೇಯ ನೆರೆವುದು ಜಗಕೆ - ಮಂಕುತಿಮ್ಮ ॥ ೮೮೩ ॥

ವಸ್ತು ವಿಜ್ಞಾನದಿಂ ಜೀವನಸಮೃದ್ಧಿ ಮಿಗೆ ।
ವಿಸ್ತರಿಸೆ ವಿಶ್ವೈಕ್ಯಭಾವ ಜನಮನದೊಳ್ ॥
ದೃಷ್ಟಲೋಕದ ಬೆಡಗದೃಷ್ಟವನು ಮರಸದಿರೆ ।
ಸ್ವಸ್ತಿ ಲೋಕಕ್ಕೆಲ್ಲ - ಮಂಕುತಿಮ್ಮ ॥ ೮೮೪ ॥

ಜಾನಪದ ಶಿಷ್ಟಿಯಲಿ, ಸಂಪತ್ಸಮಷ್ಟಿಯಲಿ ।
ಜ್ಞಾನಸಂಧಾನದಲಿ, ಮೌಲ್ಯ ಗಣನೆಯಲಿ ॥
ಮಾನವತೆ ಮಾನುಷ್ಯ ಧಾರ್ಮಿಕತೆಯೆದ್ದುನಿಲೆ ।
ಆನಂದ ಧರೆಗಂದು - ಮಂಕುತಿಮ್ಮ ॥ ೮೮೫ ॥

ಅಶ್ವತ್ಥವಿಲ್ಲಿ ಬಾಡಿದೊಡೇನು? ಚಿಗುರಲ್ಲಿ; ।
ನಶ್ವರತೆ ವಿಟಪ ಪರ್ಣಂಗಳಲಿ ಮಾತ್ರ; ॥
ಶಾಶ್ವತತೆ ರುಂಡಮೂಲದಲಿ; ಪರಿಚರಿಸದನು ।
ವಿಶ್ವಪ್ರಗತಿಯಂತು - ಮಂಕುತಿಮ್ಮ ॥ ೮೮೬ ॥

ಪರಿಪೂರ್ಣಸುಖವನೆಳಸುವನು ತನ್ನೊಳಗಡೆಗೆ ।
ತಿರುಗಿಸಲಿ ತನ್ನ ದೃಷ್ಟಿಯನು ನಿರ್ಮಲದಿಂ ॥
ನಿರತಿಶಯ ಸುಖವಲ್ಲಿ, ವಿಶ್ವಾತ್ಮ ವೀಕ್ಷೆಯಲಿ ।
ಪರಸತ್ತ್ವ ಶಾಂತಿಯಲಿ - ಮಂಕುತಿಮ್ಮ ॥ ೮೮೭ ॥

ವ್ಯಕ್ತಿಮಾತ್ರದ ವಿಭವ ವಿಶ್ವಾತ್ಮತಾನುಭವ ।
ಮುಕ್ತಿ ಸುಖವಾಂತರಿಕವದು ನಿರವಧಿಸುಖ ॥
ಭಾಕ್ತ ಪ್ರಪಂಚಸುಖವೆಂತಪರಿಮಿತವಹುದು? ।
ರಿಕ್ತ ಸುಖ ಭಾಹ್ಯ ಸುಖ - ಮಂಕುತಿಮ್ಮ ॥ ೮೮೮ ॥

ಭ್ರಾಂತಿಯೋ ಸಂಪೂರ್ಣ ಸುಖದಾಶೆ ಬಾಹ್ಯದಲಿ ।
ಸಾಂತ ಲೋಕದ ಸೌಖ್ಯ, ಖಂಡಖಂಡವದು ॥
ಸ್ವಾಂತಕೃಷಿಯಿಂ ಬ್ರಹ್ಮವೀಕ್ಷೆ ಲಭಿಸಿರ್ದೊಡೇ- ।
ಕಾಂತ ಪೂರ್ಣಾನಂದ - ಮಂಕುತಿಮ್ಮ ॥ ೮೮೯ ॥

ನಶ್ವರಾಕೃತಿ ನಾಮಮಯ ವಿಶ್ವಾರ್ಧಿಯಿದು ।
ಶಾಶ್ವತಬ್ರಹ್ಮದುಚ್ಛ್ವಾಸ ಘನ ಬಿಂದು ॥
ಪ್ರಶ್ವಸಿತದಲೆಗಳನೆ ಪಿಡಿದು ಗುರಿಯರಿತೀಜೆ ।
ವಿಶ್ವಮೂಲಾಪ್ತಿಯಲ - ಮಂಕುತಿಮ್ಮ ॥ ೮೯೦ ॥

ನಿನ್ನ ಕಹಿಸಿಹಿಯೆಲ್ಲ ಕಡಲೊಳುಪ್ಪಾಗುವುದು ।
ನಿನ್ನೆಲ್ಲ ಗುಣಗಳುಂ ಬ್ರಹ್ಮದೊಳಗಂತು ॥
ಪುಣ್ಯವೋ, ಪಾಪವೋ, ಅಹಿತವೋ, ಹಿತವೊ ಅದು ।
ಚೆನ್ನಹುದು ಬೊಮ್ಮನಲಿ - ಮಂಕುತಿಮ್ಮ ॥ ೮೯೧ ॥

ಹೊರಗೆ, ವಿಶ್ವದಿನಾಚೆ, ದೂರದಲಿ, ನೀಲದಲಿ ।
ಒಳಗೆ, ಹೃತ್ಕೂಪದಾಳದಲಿ, ಮಸಕಿನಲಿ ॥
ನೆಲೆಗಳಿಂತೆರಡು ಮೂಲ ರಹಸ್ಯಕವುಗಳುಲಿ ।
ಕಲೆತಂದು ನೀಂ ಜ್ಞಾನಿ - ಮಂಕುತಿಮ್ಮ ॥ ೮೯೨ ॥

ಸ್ವಪ್ನಲೋಕವ ಜಾಗೃತಂ ಸುಳ್ಳೆನುವನಲ್ತೆ? ।
ಸುಪ್ತಂಗೆ ಜಾಗೃತನ ಲೋಕಮುಂ ಸುಳ್ಳೇ ॥
ಸ್ವಪ್ನ ಜಾಗ್ರತ್ಸುಪ್ತಿಗಳ ಹಿಂದೆ ನಿರ್ಲಿಪ್ತ- ।
ಗುಪ್ತಾತ್ಮನಿಹುದು ದಿಟ - ಮಂಕುತಿಮ್ಮ ॥ ೮೯೩ ॥

ಭಾನೂದಯಾಸ್ತಗಳಿನಲ್ತೆ ದಿಕ್ಕಾಲಗಳ ।
ಮಾನಗಣಿತವು ನಮಗೆ? ಭಾನುವಿರದೊಡದೇಂ? ॥
ಅನಂತ್ಯ, ಶುದ್ಧಸತ್ತಾ ಮಾತ್ರ, ಬೊಮ್ಮನದು ।
ಲೀನನಾಗದರೊಳಗೆ - ಮಂಕುತಿಮ್ಮ ॥ ೮೯೪ ॥

ಸಂಕೇತಭಾವಮಯ ಲೋಕಜೀವನದ ನಯ ।
ಸಂಖ್ಯೆ ಗುಣ ಹೇತು ಕಾರ್ಯಗಳ ಲಕ್ಷಣದಿಂ- ॥
ದಂಕಿತಂಗಳು ಪದಪದಾರ್ಥ ಸಂಬಂಧಗಳು ।
ಅಂಕೆ ಮೀರ್ದುದು ಸತ್ತ್ವ - ಮಂಕುತಿಮ್ಮ ॥ ೮೯೫ ॥

ಭೌತವಿಜ್ಞಾನ ವಿವರಗಳಿನೇನಾತ್ಮಂಗೆ? ।
ಪ್ರೇತಪ್ರಯಾಣಕಥೆಯೆಂತಿರ್ದೊಡೇನು? ॥
ಜಾತಿ ನೀತಿ ಸಮಾಜ ವರ್ಗ ಭೇದದಿನೇನು? ।
ಘಾತಿಯಿಲ್ಲಾತ್ಮಂಗೆ - ಮಂಕುತಿಮ್ಮ ॥ ೮೯೬ ॥

ಶೂನ್ಯವೆಲ್ಲವುಮೆಂಬೊಡಂತೆನಿಸುವುದದೇನು? ।
ಅನ್ಯವಿಲ್ಲೆನುವರಿವದೊಂದಿರ್ಪುದಲ್ತೆ? ॥
ಚಿನ್ಮಯವನದನೆ ನೀಂ ಸತ್ಯವೆಂದಾಶ್ರಯಿಸು ।
ಶೂನ್ಯವಾದವೆ ಶೂನ್ಯ - ಮಂಕುತಿಮ್ಮ ॥ ೮೯೭ ॥

ನರನರೀ ಚಿತ್ರಗಳು, ನಾಟಕದ ಪಾತ್ರಗಳು ।
ಪರಿಪರಿಯ ವೇಷಗಳು, ವಿವಿಧ ಭಾಷೆಗಳು ॥
ಬರುತಿಹುವು, ಬೆರಗನರಸಿ ಮೆರೆಯುವುವು, ತೆರಳುವುವು ।
ಮೆರವಣಿಗೆಯೋ ಲೋಕ - ಮಂಕುತಿಮ್ಮ ॥ ೮೯೮ ॥

ಜಗದೀ ಜಗತ್ತ್ವವನು, ಮಾಯಾವಿಚಿತ್ರವನು ।
ಒಗೆದಾಚೆ ಬಿಸುಡೆಲ್ಲ ಕರಣವೇದ್ಯವನು ॥
ಮಿಗುವುದೇಂ? ರೂಪಾಖ್ಯೆಯೊಂದುಮಿಲ್ಲದ ವಸ್ತು ।
ಹೊಗಿಸಾ ಕಡೆಗೆ ಮತಿಯ - ಮಂಕುತಿಮ್ಮ ॥ ೮೯೯ ॥

ಸುತ್ತ ಮುತ್ತಣ ಗಾಳಿಯಾವಗಂ ನಮ್ಮೊಡಲ- ।
ನೊತ್ತಿದೊಡಮಾ ಹೊರೆಯ ಮನಸು ಕಾಣದವೋಲ್ ॥
ಬಿತ್ತರದ ಲೋಕಭಾರವನಾತ್ಮನರಿಯದಿರೆ ।
ಮುಕ್ತ ಲಕ್ಷಣವದುವೆ - ಮಂಕುತಿಮ್ಮ ॥ ೯೦೦ ॥

ನಾನು ನಾನೇ ನಾನೆನುತ್ತೆ ಕಿರಿಕೊಡದ ನೀರ್ ।
ಗಾನಗೆಯ್ವುದು ಹೆಮ್ಮೆಯಿಂ ಕಡಲ ಮರೆತು ॥
ನೂನದಿಂದೆಲ್ಲವನುವಬ್ಧಿಯೊಳಗದನಿರಿಸೆ ।
ಮೌನವದು ಮಣ್ಕರಗಿ - ಮಂಕುತಿಮ್ಮ ॥ ೯೦೧ ॥

ಮಲಗಿದೋದುಗನ ಕೈಹೊತ್ತಿಗೆಯು ನಿದ್ದೆಯಲಿ ।
ಕಳಚಿ ಬೀಳ್ವುದು; ಪಕ್ವಫಲವಂತು ತರುವಿಂ ॥
ಇಳೆಯ ಸಂಬಂಧಗಳು ಸಂಕಲ್ಪನಿಯಮಗಳು ।
ಸಡಿಲುವುವು ಬಾಳ್ ಮಾಗೆ - ಮಂಕುತಿಮ್ಮ ॥ ೯೦೨ ॥

ಮೋಕ್ಷದಾಶೆಯೊಳಮತ್ಯಾತುರತೆಯೊಳಿತಲ್ಲ ।
ಶಿಕ್ಷೆ ಬಹುಕಾಲ ನಡೆಯದೆ ಮೋಕ್ಷವಿಲ್ಲ ॥
ಲಕ್ಷ್ಯ ತಪ್ಪದೆ ಚರಿಸು ಸಾಮಾನ್ಯಧರ್ಮಗಳ ।
ಮೋಕ್ಷ ಸ್ವತಸ್ಸಿದ್ಧ- ಮಂಕುತಿಮ್ಮ ॥ ೯೦೩ ॥

ವಹಿಸು ಕೆಲ ಭಾರಗಳ; ಸಹಿಸು ಕೆಲ ನೋವುಗಳ ।
ಪ್ರಹರಿಸರಿಗಳನನಿತು ಯುಕ್ತಗಳನರಿತು ॥
ಮಹಿಯ ನಾಟಕದಿ ನೀಂ ಮನಸಿಟ್ಟು ಕುಣಿಕುಣಿದು ।
ವಿಹರಿಸಾತ್ಮಾಲಯದಿ- ಮಂಕುತಿಮ್ಮ ॥ ೯೦೪ ॥

ಶ್ವಾನ ತಿಪ್ಪೆಯ ಮೇಲೆ ಮಲಗಿರಲು ಪೂರ್ವಿಕ- ।
ಜ್ಞಾನ ಪಶ್ಚಾತ್ತಾಪ ಶುಭಚಿಂತೆಯಂತೆ ॥
ಏನೋ ವಾಸನೆ ಬೀಸಲದು ಹಾರಿ ದುಮುಕುವುದು ।
ಮಾನವನ ಮನಸಂತು - ಮಂಕುತಿಮ್ಮ ॥ ೯೦೫ ॥

ತತ್ತ್ವಸಾಕ್ಷಾತ್ಕಾರ ಚಿತ್ತಶುದ್ಧಿಯಿನಹುದು ।
ಚಿತ್ತಶೋಧನೆ ಮತಿಚಮತ್ಕಾರವಲ್ಲ ॥
ಬಿತ್ತರದ ಲೋಕಪರಿಪಾಕದಿಂ, ಸತ್ಕರ್ಮ ।
ಸಕ್ತಿಯಿಂ ಶುದ್ಧತೆಯೊ - ಮಂಕುತಿಮ್ಮ ॥ ೯೦೬ ॥

ತನುರುಜೆಗೆ ಪಥ್ಯಾನ್ನ, ಬಾಯ ಚಪಲಕ್ಕಲ್ಲ ।
ಮನದ ಶಿಕ್ಷೆ ಲೋಕ, ಮಮಕಾರಕಲ್ಲ ॥
ಗುಣಚರ್ಯೆ ವಿಶ್ವಸಮರಸಕೆ, ಕಾಮಿತಕಲ್ಲ ।
ಮುನಿವೃತ್ತಿ ಸೂತ್ರವಿದು - ಮಂಕುತಿಮ್ಮ ॥ ೯೦೭ ॥

ತ್ಯಜಿಸಿ ಭುಜಿಸಲ್ಕಲಿತವನೆ ಜಗಕೆ ಯಜಮಾನ ।
ನಿಜಕುಕ್ಷಿ ಚಿಂತೆಯೇಂ ಮೊದಲು ಮನೆತಾಯ್ಗೆ? ॥
ಭುಜಿಪ ಪತಿಸುತರೊಪ್ಪು ತುಪ್ಪವವಳೂಟಕ್ಕೆ ।
ಭಜಿಸು ನೀನಾ ವ್ರತವ- ಮಂಕುತಿಮ್ಮ ॥ ೯೦೮ ॥

ಮಗುವಾಗಿ ಬೊಂಬೆಗೆಂದತ್ತು ಪಿರಿಯರ ಕಾಡಿ ।
ಜಗದುಣಿಸುಗಳನುಂಡು ಬೆಳೆದವಂ ತಾನೆ ॥
ಮಗುಗಳನು ಬೆಳೆಸುತ್ತ ಮನೆಯನಾಳುವವೋಲು ।
ಜಗವನಾಳ್ವನು ಜಾಣ - ಮಂಕುತಿಮ್ಮ ॥ ೯೦೯ ॥

ಸಾಮಾನ್ಯರೊಳ್ ಪುಟ್ಟಿ, ಸಾಮಾನ್ಯರೊಳ್ ಬೆಳೆದು ।
ಭೂಮಿಪತಿಪಟ್ಟವನು ಜನ ತನಗೆ ಕಟ್ಟಲ್ ॥
ಸಾಮರ್ಥ್ಯದಿಂದವರನಾಳ್ದ ಲಿಂಕನನಂತೆ ।
ಸ್ವಾಮಿ ಲೋಕಕೆ ಯೋಗಿ - ಮಂಕುತಿಮ್ಮ ॥ ೯೧೦ ॥

ರಣದಿ ಬಿದ್ದಾ ಸೈನ್ಯಪತಿ ಸಿಡ್ನಿಯುತ್ತಮಣ- ।
ದೊಣಗುಬಾಯಿಗೆ ನೀರ್ನೊಡ್ಡಲ್ ಅದನವನು ॥
ತನಗಿಂತ ಕೆಲದ ಭಟಗದು ಸಲ್ಲುದೆಂದಿತ್ತು ।
ತಣಿವನಾಂತುದ ನೆನೆಯೊ - ಮಂಕುತಿಮ್ಮ ॥ ೯೧೧ ॥

ಇಂದ್ರಿಯಗಳೊಳು ಬಾಳಿ ಜೀವ ಪಕ್ವಂಗೊಳ್ಳ- ।
ಲಿಂದ್ರಿಯಂಗಳ ಮೀರಿ ಮೇಲೇರಿ ಜಾಣಿಂ- ॥
ದಿಂದ್ರಿಯಂಗಳನಾಳಿ ಲೋಕವಂ ಸಂತಯಿಪ ।
ಬಂಧು ಜೀವನ್ಮುಕ್ತ - ಮಂಕುತಿಮ್ಮ ॥ ೯೧೨ ॥

ವಿಸ್ತಾರದಲಿ ಬಾಳು, ವೈಶಾಲ್ಯದಿಂ ಬಾಳು ।
ಕತ್ತಲೆಯ ಮೊಡುಕು ಮೂಲೆಗಳ ಸೇರದಿರು ॥
ಭಾಸ್ಕರನನುಗ್ರಹವೆ ನೂತ್ನ ಜೀವನಸತ್ತ್ವ ।
ಮೃತ್ಯು ನಿನಗಲ್ಪತೆಯೊ - ಮಂಕುತಿಮ್ಮ ॥ ೯೧೩ ॥

ತೆರೆಯಾಗು ವಿಶ್ವಜೀವನದ ದಿವ್ಯಾಬ್ಧಿಯಲಿ ।
ಕರಗಿಸದರಲಿ ನಿನ್ನ ಬೇರೆತನದರಿವ ॥
ಮರುತನುರುಬನು ತಾಳುತೇಳುತೋಲಾಡುತ್ತ ।
ವಿರಮಿಸಾ ಲೀಲೆಯಲಿ - ಮಂಕುತಿಮ್ಮ ॥ ೯೧೪ ॥

ಬರಿಯ ಪೊಳ್ಳು ವಿಚಾರ ಮಾನುಷವ್ಯಾಪಾರ ।
ಪರಿಕಿಸಲು ಪುಣ್ಯವೆಂಬುದುಮಹಂಕಾರ ॥
ಅರಳಿ ಮೊಗವನಿತಿನಿತು, ನಕ್ಕು ನಗಿಸಿರೆ ಸಾರ ।
ಹೊರೆ ಮಿಕ್ಕ ಸಂಸಾರ - ಮಂಕುತಿಮ್ಮ ॥ ೯೧೫ ॥

ಜನ್ಮ ಸಾವಿರ ಬರಲಿ, ನಷ್ಟವದರಿಂದೇನು? ।
ಕರ್ಮ ಸಾವಿರವಿರಲಿ, ಕಷ್ಟ ನಿನಗೇನು? ॥
ಬ್ರಹ್ಮ ಹೃದಯದಿ ನಿಲ್ಲೆ ಮಾಯೆಯೇಂಗೈದೊಡೇಂ? ।
ಇಮ್ಮಿದಳ ಸರಸವದು - ಮಂಕುತಿಮ್ಮ ॥ ೯೧೬ ॥

ನಗುವು ಸಹಜದ ಧರ್ಮ; ನಗಿಸುವುದು ಪರಧರ್ಮ ।
ನಗುವ ಕೇಳುತ ನಗುವುದತಿಶಯದ ಧರ್ಮ ॥
ನಗುವ ನಗಿಸುವ ನಗಿಸಿ ನಗುತ ಬಾಳುವ ವರವ ।
ಮಿಗೆ ನೀನು ಬೇಡಿಕೊಳೊ - ಮಂಕುತಿಮ್ಮ ॥ ೯೧೭ ॥

ನೆನೆನೆನೆದು ಗಹನವನು, ಜೀವನರಹಸ್ಯವನು ।
ಮನವ ಬಳಲಿಸಿ ಸೋಲಿಸಿರುವ ತತ್ತ್ವವನು ॥
ಮನದೇಕಾಂತದಲಿ ಮೌನದ ಧ್ಯಾನದಲಿ ।
ಮಣಿಮಣಿದು ಕೈಮುಗಿಯೊ - ಮಂಕುತಿಮ್ಮ ॥ ೯೧೮ ॥

ಜೀವದುದಯ ರಹಸ್ಯ, ಜೀವವಿಲಯ ರಹಸ್ಯ ।
ಜೀವನದ ದೃಶ್ಯ ಮರುವಿನ ಬಿಸಿಲ್ಗುದುರೆ ॥
ಭಾವಿಸಲಿದೇ ತತ್ತ್ವ; ಬ್ರಹ್ಮಮಾಯೆಯೆ ವಿಶ್ವ ।
ಕೇವಲಾತ್ಮ ಬ್ರಹ್ಮ - ಮಂಕುತಿಮ್ಮ ॥ ೯೧೯ ॥

ಆರಲೆನ್ನಯ ಹೃದಯ ಕರಣಗಳ ಕಾವುಗಳು ।
ಸೇರಲೆನ್ನಯ ಜೀವ ವಿಶ್ವಜೀವದಲಿ ॥
ಧಾರುಣಿಯ ಮಡಿಲೆನ್ನ ಕೊಳಲಿ; ಜಗ ಮರೆತಿರಲಿ ।
ಹಾರಯಿಸು ನೀನಿಂತು - ಮಂಕುತಿಮ್ಮ ॥ ೯೨೦ ॥

ಇಳಿಯುವೆನು ಮುಳುಗುವೆನು ವಿಶ್ವಾತ್ಮಸಾಗರದಿ ।
ಮುಳುಮುಳುಗಿ ಕಳೆಯುವನು ಬೇರೆತನದರಿವ ॥
ಇಳೆಬಾನ್ಗಳಾಟದಲಿ ಕುಣಿಯುವೆನು ಮೈಮರೆತು ।
ಗಳಿಸೀ ಮನಃಸ್ಥಿತಿಯ - ಮಂಕುತಿಮ್ಮ ॥ ೯೨೧ ॥

ಎಲ್ಲರಿಗಮೀಗ ನಮೊ - ಬಂಧುಗಳೆ, ಭಾಗಿಗಳೆ ।
ಉಲ್ಲಾಸವಿತ್ತವರೆ, ಮನವ ತೊಳೆದವರೆ ॥
ಟೊಳ್ಳು ಜಗ, ಸಾಕು ಬಾಳ್ - ಎನಿಸಿ ಗುರುವಾದವರೆ ।
ಕೊಳ್ಳಿರೀ ನಮವನೆನು- ಮಂಕುತಿಮ್ಮ ॥ ೯೨೨ ॥

ನಿನಗಾರು ಗುರುವಹರು? ನೀನೊಬ್ಬ ತಬ್ಬಲಿಗ ।
ಉಣುತ ದಾರಿಯ ಕೆಲದಿ ಸಿಕ್ಕಿದೆಂಜಲನು ॥
ದಿನವ ಕಳೆ; ಗುರುಶಿಷ್ಯಪಟ್ಟಗಳು ನಿನಗೇಕೆ? ।
ನಿನಗೆ ನೀನೇ ಗುರುವೊ - ಮಂಕುತಿಮ್ಮ ॥ ೯೨೩ ॥

ಮನೆಯ ಮಾಳಿಗೆಗಲ್ಲ, ಮುಡಿಯ ಕೊಪ್ಪಿಗೆಗಲ್ಲ ।
ಇನಿವಣ್ಣು ತನಿಯ ಕಾಳೆಂಬುದೇನಿಲ್ಲ ॥
ಬಣಗು ಕುರಿಚಲು ಗಿಡದ ಬಾಳೇನು? ನೀನಂತು ।
ಒಣಗಿದೊಡೆ ಸವುದೆ ಸರಿ - ಮಂಕುತಿಮ್ಮ ॥ ೯೨೪ ॥

ಜೋಳಿಗೆಯ ಪಿಡಿದು ನೀನೂರಿನೂರಿಗೆ ನಡೆದು ।
ಹೇಳುತ್ತ ಹಾಡುಗಳ, ಭಾರಗಳ ಮರೆತು ॥
ಬೀಳು ಮೇಲುಗಳೆಣಿಕೆಯಿಂ ಮನವನಲುಗಿಸದೆ ।
ಬಾಳ ನಡಸುವುದೆಂದೊ?- ಮಂಕುತಿಮ್ಮ ॥ ೯೨೫ ॥

ತೊಲಗೆಲವೊ ಮನೆಯಿಂದ ಮನವು ಬರಡಾದಂದೆ ।
ಹೊಲಸ ತೊಳೆಯಲು ತೋಳ್ಗೆ ಬಲ ಕುಗ್ಗಿದಂದೆ ॥
ತೊಲಗು ಜಗದಿಂ ದೂರ, ಇಳೆಗಾಗದಿರು ಭಾರ ।
ತೊಲಗಿ ನೀಂ ಮರೆಯಾಗು - ಮಂಕುತಿಮ್ಮ ॥ ೯೧೬ ॥

ತೊಲಗು ನಿರ್ಜನದೆಡೆಗೆ; ತೊಲಗು ಮಸಣದ ಕಡೆಗೆ ।
ಒಲವ ಬೇಡಿಸದೆಡೆಗೆ; ಅಳುವು ಬರದೆಡೆಗೆ ॥
ವಿಲಯವಾಗಿಸಿ ಮನವನ್, ಅಲುಗಾಡಿಸದೆ ತುಟಿಯ ।
ತೊಲಗಿ ಮಲಗಲ್ಲಿ ನೀಂ - ಮಂಕುತಿಮ್ಮ ॥ ೯೧೭ ॥

ಕಡೆಗಾಲವನು ತಾನೆ ಮುನ್ನರಿತು ಕಾಡಾನೆ- ।
ಯಡವಿಯೊಳದೊಂದು ದೂರದ ಗವಿಯನೈದಿ ॥
ಬಿಡುವುದಾಯೆಡೆ ಮೌನದಿಂದಸುವನೆನ್ನುವರು ।
ಕಡೆಯ ಸಾರಂತು ನೀಂ- ಮಂಕುತಿಮ್ಮ ॥ ೯೧೮ ॥

ಸದ್ದುಮಾಡದೆ ನೀನು ಜಗಕೆ ಬಂದವನಲ್ಲ ।
ಒದ್ದಾಟ ಗುದ್ದಾಟ ಬಾಳೆಲ್ಲವಾಯ್ತು ॥
ಗದ್ದಲವ ಬಿಡಲು ಕಡೆದಿನವಾನುಮಾದೀತೆ? ।
ನಿದ್ದೆವೊಲು ಸಾವು ಪಡೆ - ಮಂಕುತಿಮ್ಮ ॥ ೯೧೯ ॥

ಆರ ಕೈತುತ್ತಿಗಂ ನಿನ್ನ ಕಾಯಿಸದೆ ವಿಧಿ ।
ಯಾರ ಭುಜಕಂ ನಿನ್ನ ಭಾರವಾಗಿಸದೆ ॥
ಆರ ಸೆಲೆ ಸುಳಿವುಮಂಟದವೊಲಾಗಿಸಿ ನಿನ್ನ ।
ಪಾರಗಾಣಿಸ ಬೇಡು - ಮಂಕುತಿಮ್ಮ ॥ ೯೨೦ ॥

ವೇದಾಂತವಾಕ್ಯಗಳ ನಮಕಾನುವಾಕಗಳ ।
ಕೇದಾರಗೌಳ ಮಣಿರಂಗಾರಭಿಗಳ ॥
ನಾದಂಗಳಲಿ ಮನವ ಬೆರಸಿ ನೀನುತ್ಕ್ರಮಿಸೆ ।
ಸಾಧನವೊ ಮುಕ್ತಿಗದು - ಮಂಕುತಿಮ್ಮ ॥ ೯೨೧ ॥

ಮೋಹನಾನಂದಭೈರವಿ ಶಂಕರಾಭರಣ ।
ಶಾಹನ ಕುರಂಜಿ ಕೇದಾರ ಕಾಪಿಗಳ ॥
ಮೋಹ ಸರ್ವಸ್ವಗಳ ರಾಗಾಬ್ಧಿಯೋ ಬ್ರಹ್ಮ ।
ಗಾಹಿಸದರೊಳಗೆ ನೀಂ - ಮಂಕುತಿಮ್ಮ ॥ ೯೨೧ ॥

ಕಷ್ಟ ಜೀವದ ಪಾಕ; ಕಷ್ಟ ಧರ್ಮವಿವೇಕ ।
ಎಷ್ಟೆಷ್ಟು ನೀತಿಯುಕ್ತಿಗಳ ಬಗೆದಡೆಯುಂ ॥
ಇಷ್ಟಷ್ಟು ನಿನ್ನೊಳ್ ಒಳಿತಿಳಿವಿಲ್ಲದಿರೆ ನಷ್ಟ ।
ದೃಷ್ಟಿಸೂಕ್ಷ್ಮವೆ ಗತಿಯೊ - ಮಂಕುತಿಮ್ಮ ॥ ೯೨೩ ॥

ನೂರಾರು ಮತವಿಹುದು ಲೋಕದುಗ್ರಾಣದಲಿ ।
ಆರಿಸಿಕೊ ನಿನ್ನ ರುಚಿಗೊಪ್ಪುವುದನದರೊಳ್ ॥
ಸಾರದದುಗೆಯನೊಳವಿಚಾರದೊಲೆಯಲಿ ಮಾಡು ।
ಬೇರೆ ಮತಿ ಬೇರೆ ಮತ - ಮಂಕುತಿಮ್ಮ ॥ ೯೨೪ ॥

ಮೆಣಸು ಹಿಪ್ಪಲಿ ಶುಂಠಿ ಜೀರಿಗೆಗಳೆಲ್ಲ ಸರಿ ।
ಅನುವಪ್ಪುದೊಂದೊಂದು ರೋಗಕೊಂದೊಂದು ॥
ನಿನಗಮಂತೆಯೆ ನೂರು ನೀತಿಸೂತ್ರಗಳಿರಲು ।
ಅನುವನರಿವುದೆ ಜಾಣು - ಮಂಕುತಿಮ್ಮ ॥ ೯೨೫ ॥

ವಿಶದಮಾದೊಂದು ಜೀವನಧರ್ಮದರ್ಶನವ- ।
ನುಸುರಿಕೊಳೆ ತನ್ನ ಮನಸಿಗೆ ತಾನೆ ಬಗೆದು ॥
ನಿಸದವಂ ಗ್ರಂಥಾನುಭವಗಳಿಂದಾರಿಸುತ ।
ಹೊಸೆದನೀ ಕಗ್ಗವನು - ಮಂಕುತಿಮ್ಮ ॥ ೯೨೬ ॥

ಹೃದ್ಯ ಹೃದಯೇಂಗಿತಕೆ ರಾಗ ತಾಳದ ಕಟ್ಟು ।
ಗದ್ಯ ಲೌಕಿಕ ತಾತ್ವಿಕಕ್ಕಚ್ಚುಕಟ್ಟು ॥
ಮಧ್ಯದಲಿ ಮಿಸುಕಿ, ನೆಲಬಿಟ್ಟು ಬಾನ್ ಮುಟ್ಟದಿಹ ।
ಪದ್ಯವಧಿಕಪ್ರಸಂಗಿ - ಮಂಕುತಿಮ್ಮ ॥ ೯೨೭ ॥

ಕವಿಯಲ್ಲ, ವಿಜ್ಞಾನಿಯಲ್ಲ, ಬರಿ ತಾರಾಡಿ ।
ಅವನರಿವಿಗೆಟುಕುವವೊಲೊಂದಾತ್ಮನಯವ ॥
ಹವಣಿಸಿದನಿದನು ಪಾಮರಜನದ ಮಾತಿನಲಿ ।
ಕವನ ನೆನಪಿಗೆ ಸುಲಭ - ಮಂಕುತಿಮ್ಮ ॥ ೯೨೮ ॥

ಸಂದೇಹವೀ ಕೃತಿಯೊಳಿನ್ನಿಲ್ಲವೆಂದಲ್ಲ ।
ಇಂದು ನಂಬಿಹುದೆ ಮುಂದೆಂದುಮೆಂದಲ್ಲ ॥
ಕುಂದು ತೋರ್ದಂದದನು ತಿದ್ದಿಕೊಳೆ ಮನಸುಂಟು ।
ಇಂದಿಗೀ ಮತವುಚಿತ - ಮಂಕುತಿಮ್ಮ ॥ ೯೨೯ ॥

ವ್ಯಾಕರಣ ಕಾವ್ಯ ಲಕ್ಷಣಗಳನು ಗಣಿಸದೆಯೆ ।
ಲೋಕತಾಪದಿ ಬೆಂದು ತಣಿಪನೆಳಸಿದವಂ ॥
ಈ ಕಂತೆಯಲಿ ತನ್ನ ನಂಬಿಕೆಯ ನೆಯ್ದಿಹನು ।
ಸ್ವೀಕರಿಕೆ ಬೇಳ್ಪವರು - ಮಂಕುತಿಮ್ಮ ॥ ೯೪೦ ॥

ಮಂಕುತಿಮ್ಮನ ಹೆಸರು ಬಿಂಕಕ್ಕೆ ಸಾಲದೆನೆ ।
ವೆಂಕನಿಗೊ ಕಂಕನಿಗೊ ಶಂಕರಾರ್ಯನಿಗೊ ॥
ಅಂಕಿತವ ಮಾಳ್ಕೆ ಜನರವರೋದಿದರೆ ಸಾಕು ।
ಶಂಕೆ ನಿನಗೇನಿಹುದೊ - ಮಂಕುತಿಮ್ಮ ॥ ೯೪೧ ॥

ಹರಸುವುದದೇನ ನೀಂ? ವರವದೇನೆಂದರಿವೆ? ।
ಸರಿಯಿಂದು ತೋರುವುದು ನಾಳೆ ಸರಿಯಿಹುದೆ? ॥
ನಿರುಕಿಸುವುದೆಂತು ಚಿರಕಾಲದೊಳ್ಹಿತನಿಂದು? ।
ಅರಿವ ದೈವವೆ ಪೊರೆಗೆ - ಮಂಕುತಿಮ್ಮ ॥ ೯೪೨ ॥

ಬೇಡಿದುದನೀವನೀಶ್ವರನೆಂಬ ನೆಚ್ಚಿಲ್ಲ ।
ಬೇಡಲೊಳಿತಾವುದೆಂಬುದರರಿವುಮಿಲ್ಲ ॥
ಕೂಡಿಬಂದುದನೆ ನೀನ್ ಅವನಿಚ್ಛೆಯೆಂದು ಕೊಳೆ ।
ನೀಡುಗೆದೆಗಟ್ಟಿಯನು - ಮಂಕುತಿಮ್ಮ ॥ ೯೪೩ ॥

ತಮೆಲ್ಲ ಹಸಿವುಗಳ ತಣಿಯಿಪನಿತನ್ಯೋನ್ಯ ।
ಹೊಮ್ಮುಗೌದಾರ್ಯ ಜನಜನಪದಂಗಳಲಿ ॥
ಬೊಮ್ಮನೆಲ್ಲರನಾಳ್ವನಿಹನೆನುವ ನೆನಪಿನಲಿ ।
ನೆಮ್ಮದಿಯ ಪಡೆಗೆ ಜಗ - ಮಂಕುತಿಮ್ಮ ॥ ೯೪೪ ॥

ಶರಣುವೊಗು ಜೀವನರಹಸ್ಯದಲಿ ಸತ್ತ್ವದಲಿ ।
ಶರಣು ಜೀವನವ ಸಮವೆನಿಪ ಯತ್ನದಲಿ ॥
ಶರಣಂತರಾತ್ಮ ಗಂಭೀರಪ್ರಶಾಂತಿಯಲಿ ।
ಶರಣು ವಿಶ್ವಾತ್ಮದಲಿ - ಮಂಕುತಿಮ್ಮ ॥ ೯೪೫ ॥

ಹಸ್ತಕ್ಕೆ ಬರೆ ನಕ್ಕೆ; ಓದುತ್ತ ಓದುತ್ತ ।
ಮಸ್ತಕಕ್ಕಿಟ್ಟು ಗಂಭೀರವಾದೆ ॥
ವಿಸ್ತರದ ದರ್ಶನಕೆ ತುತ್ತತುದಿಯಲಿ ನಿನ್ನ ।
ಪುಸ್ತಕಕೆ ಕೈಮುಗಿದೆ - ಮಂಕುತಿಮ್ಮ ॥

**ಮುಕ್ತಾಯ**

www.kannadadeevige.blogspot.com